22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 146 | ನವದೆಹಲಿ | ಬೆಲೆ ₹10 | ನವಂಬರ್ 26, 2024 ಮಂಗಳವಾರ

## ಒಳಪುಟಗಳಲ್ಲಿ

ವಕ್ಫ್‌ಜೆಪಿಸಿ ಅಧಿಕಾರಾವಧಿ ವಿಸ್ತರಣೆ: ಸ್ಪೀಕರ್ ಓಂ ಬಿರ್ಲಾಗೆ ಪ್ರತಿಪಕ್ಷಗಳ ಸಂಸದರಿಂದ ಪತ್ರ - ಪು.4

ಕಾಂಗ್ರೆಸ್ ಪಕ್ಷದ ಭ್ರಷ್ಟಾಚಾರಕ್ಕೆ ಜನರು ಕೊಟ್ಟ ಲೈಸೆನ್ಸ್ ಅಲ್ಲ - ಪು.5

ಬೌದ್ಧ ನೆಲೆ ಸನ್ನತಿ ಅಭಿವೃದ್ಧಿಗೆ ಹರ್ಷಕುಮಾರ ಆಗ್ರಹ -ಪು.6

## ಸಂವಿಧಾನಕ್ಕೆ 75 ವಸಂತ

### ಸಂಭ್ರಮಾಚರಣೆಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಮುಂದಾಳತ್ವ



**ನವದೆಹಲಿ, ನ.25:** ಭಾರತದ ಸಂವಿಧಾನಕ್ಕೆ 75 ವರ್ಷ ತುಂಬಿದ ಸಂಭ್ರಮಾಚರಣೆಯ ಮುಂದಾಳತ್ವವನ್ನು ರಾಷ್ಟ್ರಪತಿ ದೌಪದಿ ಮುರ್ಮು ಅವರು ವಹಿಸಿಕೊಳ್ಳಲಿದ್ದಾರೆ ಎಂದು ಕೇಂದ್ರ ಸರ್ಕಾರ ಸೋಮವಾರ ಹೇಳಿದೆ. ಸಂಭ್ರಮದಲ್ಲಿ ಉಪರಾಷ್ಟ್ರಪತಿ ಜಗದೀಪ್ ಧನಕರ್, ಪ್ರಧಾನಿ ನರೇಂದ್ರ ಮೋದಿ ಹಾಗೂ ಲೋಕಸಭೆ ಸ್ಪೀಕರ್ ಓಂ ಬಿರ್ಲಾ ಅವರು ಭಾಗವಹಿಸಲಿದ್ದಾರೆ. 'ಸಂವಿಧಾನಕ್ಕೆ 75 ವರ್ಷ ತುಂಬಿದ ಈ ಸಂದರ್ಭದಲ್ಲಿ ವರ್ಷವಿಡಿ ಸಂಭ್ರಮಾಚರಣೆ ನಡೆಸುವ ಸಲುವಾಗಿಯೇ ವಿಶೇಷ ವೆಬ್‌ಸೈಟ್ ರೂಪಿಸಲಾಗಿದೆ ಎಂದು ಕೇಂದ್ರ ಸಂಸ್ಕೃತಿ ಸಚಿವಾಲಯದ ಕಾರ್ಯದರ್ಶಿ ಅರುನಿಷ್ ಚಾವ್ಲಾ ಪತ್ರಕರ್ತರಿಗೆ ಮಾಹಿತಿ ನೀಡಿದರು. 'ಸಂವಿಧಾನದ ಪ್ರಸ್ತಾವನೆಯನ್ನು ಓದಿದ ವಿಡಿಯೊಗಳನ್ನು ಚಿತ್ರೀಕರಿಸಿಕೊಂಡು, ಅದನ್ನು ಈ ವೆಬ್‌ಸೈಟ್‌ನಲ್ಲಿ ಅಪ್ಲೋಡ್ ಮಾಡಬಹುದು. ಇದಕ್ಕೆ ಪ್ರಮಾಣಪತ್ರವನ್ನು ನೀಡಲಾಗುವುದು ಜೊತೆಗೆ, ದೇಶದಾದ್ಯಂತ ಶಾಲೆಗಳಲ್ಲಿ ಸಂವಿಧಾನದ ಪ್ರಸ್ತಾವನೆಯನ್ನು ವಿದ್ಯಾರ್ಥಿಗಳು ಸಾಮೂಹಿಕವಾಗಿ ವಾಚಿಸಲಿದ್ದಾರೆ ಎಂದರು. ಇದೇ ಸಂದರ್ಭದಲ್ಲಿ ವಿಶೇಷ ನಾಣ್ಯ ಹಾಗೂ ಅಂಚೆಚೀಟಿಯನ್ನು ಬಿಡುಗಡೆ ಮಾಡಲಾಗುವುದು' ಎಂದೂ ಹೇಳಿದರು.

## ಸಂಸತ್ ಅಧಿವೇಶನ: ಗದ್ದಲಕ್ಕೆ ಮೊದಲ ದಿನ ಕಲಾಪ ಬಲಿ: ಸದನ 2 ದಿನ ಮುಂದೂಡಿಕೆ



**ನವದೆಹಲಿ, ನ.25:** ಇಂದು ಆರಂಭವಾದ ಸಂಸತ್ತಿನ ಚಳಿಗಾಲದ ಅಧಿವೇಶನದಲ್ಲಿ ಆಡಳಿತ ಮತ್ತು ಪ್ರತಿಪಕ್ಷಗಳ ನಾಯಕರ ನಡುವೆ ತೀವ್ರ ವಾಕ್ಸಮರ ನಡೆದ ಹಿನ್ನೆಲೆ ಉಭಯ ಸದನಗಳ ಕಲಾಪವನ್ನೂ ನ.27ಕ್ಕೆ ಸಭಾಪತಿಗಳು ಮುಂದೂಡಿದರು. ಸದನ ಆರಂಭಗೊಂಡಾಗ ದೇಶಾದ್ಯಂತ ಸದ್ದು ಮಾಡುತ್ತಿರುವ ವಕ್ಸ್ ಮಂಡಳಿ ವಿವಾದ, ಮಣಿಪುರ ಗಲಭೆ ಕುರಿತು ವಿಪಕ್ಷಗಳು ಚರ್ಚೆಗ ಆಗ್ರಹಿಸಿದವು. ಈ ವಿಚಾರವಾಗಿ ವಾಗ್ವಾದ ಆರಂಭಗೊಂಡಿತು. ಸದ್ದು ಗದ್ದಲದಿಂದಾಗಿ ಲೋಕಸಭೆ ಮತ್ತು ರಾಜ್ಯಸಭೆಯ ಕಲಾಪಗಳನ್ನು ಮುಂದೂಡಲಾಯಿತು. ಇತ್ತೀಚೆಗೆ ನಿಧನರಾದ ಮಹಾರಾಷ್ಟ್ರದ ನಾಂದೇಡ್ ಕ್ಷೇತ್ರದಿಂದ ಸದನಕ್ಕೆ ಆಯ್ಕೆಯಾಗಿದ್ದ ವಸಂತರಾವ್ ಚವಾಣ್, ಪಶ್ಚಿಮ ಬಂಗಾಳದ ಬಸಿರ್ಹತ್ ಕ್ಷೇತ್ರದ ಚುನಾಯಿತರಾಗಿದ್ದ ಎಸ್.ಕೆ.ನೂರುಲ್ ಇಸ್ಲಾಂ ಅವರ ಕುರಿತು ಅಧಿವೇಶನದ ಮೊದಲ ದಿನ ಸದನದಲ್ಲಿ ಸಂತಾಪ ಸೂಚಿಸಲಾಯಿತು. ಇನ್ನು ಜನರು ತಿರಸ್ಕರಿಸಿದ ಪಕ್ಷಗಳು ಅಧಿವೇಶನದ ಕಲಾಪಕ್ಕೆ ಅಡ್ಡಿ ತರಲಿವೆ ಎಂದು ಅಧಿವೇಶನ ಆರಂಭಕ್ಕೂ ಮುನ್ನ ಪ್ರಧಾನಿ ನರೇಂದ್ರ ಮೋದಿ ಅವರು ಟೀಕಿಸಿದ್ದರು.

## ಸಂವಿಧಾನದ ಪೀಠಿಕೆಯ ಜಾತ್ಯತೀತ ಪದವನ್ನು ಎತ್ತಿಹಿಡಿದ ಸುಪ್ರೀಂ ಕೋರ್ಟ್; ಬಿಜೆಪಿ, ಆರೆಸ್ಸೆಸ್‌ಗೆ ಮುಖಭಂಗ



**ನವದೆಹಲಿ, ನ.25:** ಭಾರತದ ಸಂವಿಧಾನದ ಪೀಠಿಕೆಯಲ್ಲಿ ಇರುವ ಜಾತ್ಯತೀತ ಮತ್ತು ಸಮಾಜವಾದಿ ಪದಗಳನ್ನು ತೆಗೆದುಹಾಕುವಂತೆ ಕೋರಿ ಸಲ್ಲಿಸಲಾದ ಕನಿಷ್ಠ ಮೂರು ಅರ್ಜಿಗಳನ್ನು ಸುಪ್ರೀಂ ಕೋರ್ಟ್ ಸೋಮವಾರ ತಿರಸ್ಕರಿಸಿದೆ. ರಾಷ್ಟ್ರೀಯ ತುರ್ತುಪರಿಸ್ಥಿತಿ ಜಾರಿಯಲ್ಲಿದ್ದಾಗ 42ನೇ ತಿದ್ದುಪಡಿಯ ಮೂಲಕ 1976ರಲ್ಲಿ ಈ ಪದಗಳನ್ನು ಮುನ್ನುಡಿಗೆ ಸೇರಿಸಲಾಗಿತ್ತು. ಸಂವಿಧಾನವನ್ನು ತಿದ್ದುಪಡಿ ಮಾಡುವ ಸಂಸತ್ತಿನ ಅಧಿಕಾರ ಪೀಠಿಕೆಗೂ ಅನ್ವಯವಾಗುತ್ತದೆ ಎಂದು ಸುಪ್ರೀಂಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ ಮತ್ತು ನ್ಯಾಯಮೂರ್ತಿ ಪಿವಿ ಸಂಜಯ್ ಕುಮಾರ್ ಅವರ ಪೀಠ ಹೇಳಿದೆ. ಮಾಜಿ ರಾಜ್ಯಸಭಾ ಸದಸ್ಯ ಮತ್ತು ಬಿಜೆಪಿ ನಾಯಕ ಸುಬ್ರಮಣಿಯನ್ ಸ್ವಾಮಿ, ಬಿಜೆಪಿ ಮತ್ತು ಆರೆಸ್ಸೆಸ್ ಪರ ವಕೀಲ ಅಶ್ವಿನಿ ಉಪಾಧ್ಯಾಯ ಮತ್ತು ಬಲರಾಮ್ ಸಿಂಗ್ ಅವರು ಪದಗಳನ್ನು ಕಿತ್ತು ಹಾಕುವಂತೆ ಅರ್ಜಿಗಳನ್ನು ಸಲ್ಲಿಸಿದ್ದರು. ಈ ಅರ್ಜಿಗಳನ್ನು ಸಿಪಿಐ ನಾಯಕ ಮತ್ತು ರಾಜ್ಯಸಭಾ ಸದಸ್ಯ ಬಿನೋಯ್ ವಿಶ್ವಂ ಅವರು ವಕೀಲ ಶ್ರೀರಾಮ್ ಪರಕ್ಕಟ್ ಮೂಲಕ ವಿರೋಧಿಸಿದ್ದರು. ರಿಟ್ ಅರ್ಜಿಗಳಿಗೆ ಹೆಚ್ಚಿನ ಚರ್ಚೆ ಮತ್ತು ತೀರ್ಪು ಅಗತ್ಯವಿಲ್ಲ. ಸಂವಿಧಾನದ ಮೇಲೆ ಸಂಸತ್ತಿನ ತಿದ್ದುಪಡಿ ಅಧಿಕಾರವು ಪೀಠಿಕೆಗೆ ಅನ್ವಯವಾಗುತ್ತದೆ. ಹಲವು ವರ್ಷಗಳ ನಂತರ ಪ್ರಕ್ರಿಯೆಯನ್ನು ರದ್ದು ಮಾಡುವುದಿಲ್ಲ ಎಂದು ನಾವು ವಿವರಿಸಿದ್ದೇವೆ. ತಿದ್ದಪಡಿ ಮಾಡಲಾದ ದಿನಾಂಕವು 368 ನೇ ವಿಧಿಯ ಅಡಿಯಲ್ಲಿ ಸರ್ಕಾರದ ಅಧಿಕಾರವನ್ನು ಮೊಟಕುಗೊಳಿಸುವುದಿಲ್ಲಎಂದು ನ್ಯಾಯಾಲಯ ಹೇಳಿದೆ. ಭಾರತೀಯ ಸನ್ನಿವೇಶದಲ್ಲಿ ಸಮಾಜವಾದ ಮತ್ತು ಜಾತ್ಯತೀತತೆಯ ಅರ್ಥವೇನು ಮತ್ತು ಅದರ ಬಗ್ಗೆ ಸರ್ಕಾರವು ಹೇಗೆ ನೀತಿಯನ್ನು ರೂಪಿಸುತ್ತದೆ ಎಂಬುದನ್ನು ಇದು ಜಾಹೀರು ಮಾಡಿದೆ ಎಂದು ಪೀಠ ಹೇಳಿದೆ. ನಂತರ ನಾವು ಸಮಾಜವಾದ ಮತ್ತು ಜಾತ್ಯತೀತತೆ ಎಂದರೇನು ಮತ್ತು ಅದನ್ನು ಸರ್ಕಾರ ಹೇಗೆ ತೆಗೆದುಕೊಳ್ಳಬೇಕು ಎಂಬುವುದಕ್ಕೆ ಮುಕ್ತವಾಗಿದೆ, ಅದೇ ನೀತಿಯನ್ನು ಹೇಗೆ ಅನುಸರಿಸಬೇಕು ಎಂದು ನಾವು ಹೇಳಿದ್ದೇವೆ ಎಂದು ನ್ಯಾಯಾಲಯ ಹೇಳಿದೆ. ಭಾರತದ ಸಂವಿಧಾನದ ಪೀಠಿಕೆಗೆ ಸಮಾಜವಾದಿ ಮತ್ತು ಜಾತ್ಯತೀತ ಪದಗಳನ್ನು ಸೇರಿಸಿದ ಭಾರತದ ಸಂವಿಧಾನದ 42 ನೇ ತಿದ್ದುಪಡಿಯನ್ನು ಪ್ರಶ್ನಿಸಿ ಸಲ್ಲಿಸಲಾದ ಅರ್ಜಿಗಳನ್ನು ಸುಪ್ರೀಂ ಕೋರ್ಟ್ ವಿಚಾರಣೆ ನಡೆಸುತ್ತಿದೆ. ನವೆಂಬರ್ 22 ರಂದು, ಈ ಪ್ರಕರಣದಲ್ಲಿ ತನ್ನ ಆದೇಶವನ್ನು ಇಂದು ಪ್ರಕಟಿಸುವುದಾಗಿ ಅದು ಸೂಚಿಸಿತ್ತು. ಅದೇ ಸಮಯದಲ್ಲಿ, ಜಾತ್ಯತೀತತೆಯು ಸಂವಿಧಾನದ ಮೂಲರಚನೆಯ ಭಾಗವಾಗಿದ್ದು, ಈ 42ನೇ ತಿದ್ದುಪಡಿಯನ್ನು ಸುಪ್ರೀಂ ಕೋರ್ಟ್ ಈ ಹಿಂದೆಯೂ ಪರೀಕ್ಷಿಸಿ ಎತ್ತಿಹಿಡಿದಿದೆ ಎಂದು ಅರ್ಜಿದಾರರಿಗೆ ನೆನಪಿಸಿತ್ತು. ಜಾತ್ಯತೀತತೆಯು ಸಂವಿಧಾನದ ಪ್ರಮುಖ ಲಕ್ಷಣವಾಗಿದ್ದು, ಭಾರತೀಯ ಸಂವಿಧಾನದ ಪೀಠಿಕೆಯಲ್ಲಿನ ಸಮಾಜವಾದಿ ಮತ್ತು ಜಾತ್ಯತೀತ ಪದಗಳನ್ನು ಪಾಶ್ಚಿಮಾತ್ಯ ದೃಷ್ಟಿಕೋನದಿಂದ ನೋಡಬೇಕಾಗಿಲ್ಲ ಎಂದು ಸುಪ್ರೀಂ ಕೋರ್ಟ್ ಕಳೆದ ತಿಂಗಳು ಹೇಳಿತ್ತು.

## ಮಹಾ ಕಾಂಗ್ರೆಸ್ ಸೋಲಿಗೆ ಇವಿಎಂ ಕಾರಣ: ಪರಮೇಶ್ ಹೇಳಿಕೆಗೆ ಜೋಶಿ ಟೀಕೆ



**ಬೆಂಗಳೂರು, ನ,25:** ಮಹಾರಾಷ್ಟ್ರ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಸೋಲಿಗೆ ವಿದ್ಯುನ್ಮಾನ ಮತಯಂತ್ರ ದೋಷ ಕಾರಣ ಎನ್ನುವ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರ ಹೇಳಿಕೆ ಸರಿಯಲ್ಲ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ದೆಹಲಿಯಲ್ಲಿಂದು ಹೇಳಿದ್ದಾರೆ. ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಳೆದ ಬಾರಿಯ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ 135 ಸ್ಥಾನಗಳನ್ನು ಕರ್ನಾಟಕದಲ್ಲಿ ಗೆದ್ದಿದೆ. ಆಗ ಕೇಂದ್ರದಲ್ಲಿ ಬಿಜೆಪಿ ಅಧಿಕಾರದಲ್ಲಿತ್ತು. ಈ ಸಮಯದಲ್ಲಿ ವಿದ್ಯುನ್ಮಾನ ಮತಯಂತ್ರದ ಮೇಲೆ ಅನುಮಾನ ಇರಲಿಲ್ಲವೇ. ಪರಮೇಶ್ವರ್ ಅವರ ಹ ' ೀ ಳಿ ಕ ' ಅರ್ಥಹೀನವಾದದ್ದು ಎಂದರು. ಮಹಾರಾಷ್ಟ್ರ ವಿ ಧ ಾ ನ ಸ ಭ ೆ ಂ ು ು ಚುನಾವಣೆಯ ಸೋಲಿಗೆ ವಿದ್ಯುನ್ಮಾನ ಮತಯಂತ್ರದ ದೋಷ ಕಾರಣವಾದರೆ ಕಾಂಗ್ರೆಸ್ ನೇತೃತ್ವದ ಮೈತ್ರಿಕೂಟ ಜಾರ್ಖಂಡ್ ನಲ್ಲಿ ಹೇಗೆ ಗೆದ್ದಿದೆ. ಜವಾಬ್ದಾರಿ ಸ್ಥಾನದಲ್ಲಿದ್ದು, ಸುಮ್ಮನೆ ಆರೋಪ ಮಾಡಬಾರದು ಎಂದು ಹೇಳಿದರು.



**ನಿತ್ಯ ಪಂಚಾಂಗ 26.11.2024 ಮಂಗಳವಾರ**



ಶ್ರೀ ಕ್ರೋಧಿ ನಾಮ ಸಂವತ್ಸರ,
ದಕ್ಷಿಣಾಯನ–ಶರದ್ ಋತು,
ಚಾಂದ್ರಮಾನ,
ಆಶ್ವಯುಜ ಕಾರ್ತಿಕ ಬಹುಳ

ಏಕಾದಶಿ, ಹಸ್ತ ನಕ್ಷತ್ರ,
ಸರ್ವತ್ರ/ಉತ್ಪನ್ನ ಏಕಾದಶಿ,
ಕಾನೂನು ದಿನ,
ಕೂಡ್ಲಿ ಚತುರ್ಥ ಶಂಕರಭಾರತೀ ಆರಾದನೆ

| ದಿನ | ರಾಹುಕಾಲ | ಯಮಗಂಡ | ಗುಳಕಕಾಲ |
|---|---|---|---|
| | ರಾಹುಕಾಲ | ಯಮಗಂಡ | ಗುಳಿಕಕಾಲ |
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಸೋಮವಾರ ಗೃಹ ಸಚಿವ ಡಾ.ಜಿ.ಪರಮೇಶ್ವರ ಭೇಟಿಮಾಡಿ ಡಿ.2ರಂದು ತುಮಕೂರು ಜಿಲ್ಲೆಯಲ್ಲಿ ನಡೆಯುವ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ, ಉದ್ಘಾಟನೆ ಹಾಗೂ ವಿವಿಧ ಇಲಾಖೆಯ ಯೋಜನೆಗಳ ಫಲಾನುಭವಿಗಳಿಗೆ ಸವಲತ್ತು ವಿತರಿಸುವ ಕಾರ್ಯಕ್ರಮಕ್ಕೆ ಆಹ್ವಾನಿಸಿದರು.

# ಕಾಂಗ್ರೆಸ್‌ಗೆ ಮಾತ್ರ ಭವಿಷ್ಯ: ಬಿಜೆಪಿ–ಜೆಡಿಎಸ್‌ಗೆ ಅರಿವು

**ಬೆಂಗಳೂರು, ನ.25:** ಕಾಂಗ್ರೆಸ್ ಪಕ್ಷಕ್ಕೆ ಮಾತ್ರ ಭವಿಷ್ಯವಿದೆ ಎಂದು ಬಿಜೆಪಿ ಹಾಗೂ ಜೆಡಿಎಸ್ ಕಾರ್ಯಕರ್ತರಿಗೆ ಅರಿವಾಗಿದೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ತಿಳಿಸಿದರು. ವಿಧಾನಸೌಧದ ಆವರಣದಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಸೋಮವಾರ ಪ್ರತಿಕ್ರಿಯೆ ನೀಡಿದರು. ಉಪಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳಿಗೆ ಬಿಜೆಪಿ ಹಾಗೂ ಜೆಡಿಎಸ್ ಕಾರ್ಯಕರ್ತರು, ನಾಯಕರ ಸಹಕಾರ ಸಿಕ್ಕಿದೆ ಎಂದು ಹೇಳಿದ್ದು, ಎನ್ ಡಿಎ ಮೈತ್ರಿಕೂಟವನ್ನು ಜನ ತಿರಸ್ಕರಿಸಿದ್ದಾರಾ ಎಂಬ ಹೇಳಿಕೆ ಬಗ್ಗೆ ಕೇಳಿದಾಗ, ಕಳೆದ ವರ್ಷದ ವಿಧಾನಸಭೆ ಚುನಾವಣೆ ಫಲಿತಾಂಶಕ್ಕೂ ಈ ಉಪಚುನಾವಣೆಯಲ್ಲಿ ಈ ಕ್ಷೇತ್ರಗಳಲ್ಲಿನ ಮತಗಳ ಅಂತರವನ್ನು ಗಮನಿಸಿ. ಬಸವರಾಜ ಬೊಮ್ಮಾಯಿ ಅವರ ಕ್ಷೇತ್ರದಲ್ಲಿ 50 ಸಾವಿರ ಮತಗಳು ಬದಲಾಗಿವೆ. ಚನ್ನಪಟ್ಟಣದಲ್ಲಿ ವಿಧಾನಸಭೆ ಚುನಾವಣೆಯಲ್ಲಿ .ಕಾಂಗ್ರೆಸ್ ಅಭ್ಯರ್ಥಿ 16 ಸಾವಿರ ಮತಗಳನ್ನು ಪಡೆದಿದ್ದರು. ಈ ಉಪಚುನಾವಣೆಯಲ್ಲಿ 1.12 ಲಕ್ಷ ಮತಗಳನ್ನು ಪಡೆದಿದ್ದಾರೆ. ಬಿಜೆಪಿ ಹಾಗೂ ಜೆಡಿಎಸ್ ಕಾರ್ಯಕರ್ತರು ನಮಗೆ ಮತ ಹಾಕದಿದ್ದರೆ ಇಷ್ಟು ಪ್ರಮಾಣದಲ್ಲಿ ಮತಗಳು ವ್ಯತ್ಯಾಸವಾಗುತ್ತಿತ್ತೇ ಆಮೂಲಕ ಜನ ಬಿಜೆಪಿ ಹಾಗೂ ಜೆಡಿಎಸ್ ಮೈತ್ರಿಕೂಟವನ್ನು ತಿರಸ್ಕರಿಸಿದ್ದಾರೆ ಎಂದು ತಿಳಿಸಿದರು.

**ತಮ್ಮ ಹುಳುಕು ಮುಚ್ಚಿಕೊಳ್ಳಲು ಬಿಜೆಪಿ ಹೋರಾಟ:**

ಬಿಜೆಪಿ ಅವಧಿಯಲ್ಲಿ ವಕ್ಫ್ ಆಸ್ತಿ ವಿಚಾರವಾಗಿ ನೋಟೀಸ್ ನೀಡಿ ಈಗ ಅವರೇ ಹೋರಾಟ ಮಾಡುತ್ತಿರುವ ಬಗ್ಗೆ ಕೇಳಿದಾಗ, ಅವರಿಗೆ ಬೇಕಾಗಿರುವುದು ಕೇವಲ ಪ್ರಚಾರ. ಅವರು ಪ್ರತಿಭಟನೆ ಮಾಡಿದಷ್ಟು ನಮಗೆ ಒಳ್ಳೆಯದು. ಅವರು ತಮ್ಮ ಮುಖಗಳನ್ನು ಕನ್ನಡಿಯಲ್ಲಿ ನೋಡಿಕೊಳ್ಳಲಿ ಎಂದು ಹೇಳಿದ್ದೇನೆ. ಗೋಮುಖ ವ್ಯಾಘ್ರರ ಸತ್ಯಾಂಶವನ್ನು



ಉಪಚುನಾವಣೆಯಲ್ಲಿ ಪಕ್ಷದ ಅಭೂತಪೂರ್ವ ಯಶಸ್ಸಿನ ಬಗ್ಗೆ ಪ್ರತಿಕ್ರಿಯಿಸಿ ಬ್ಲಾಕ್ ಮಟ್ಟದಿಂದ ರಾಜ್ಯ ಮಟ್ಟದವರೆಗೆ ಎಲ್ಲರನ್ನೂ ಒಟ್ಟಾಗಿ ತೆಗೆದುಕೊಂಡು, ಅಭ್ಯರ್ಥಿ ಆಯ್ಕೆಯಲ್ಲಿ ನಮ್ಮ ಕಾರ್ಯತಂತ್ರ ಯಶಸ್ವಿಯಾಗಿದೆ. ಜನರಿಗೆ ನಮ್ಮ ಮೇಲೆ ವಿಶ್ವಾಸವಿದೆ. ನಾವು ಕೊಟ್ಟ ಭರವಸೆ ಈಡೇರಿಸಿದ್ದು, ಉತ್ತಮ ಆಡಳಿತ ನೀಡುವ ನಂಬಿಕೆ ಜನರಲ್ಲಿದೆ. ಹೀಗಾಗಿ ಅವರು 2028ರ ವಿಧಾನಸಭೆ ಚುನಾವಣೆಗೆ ಸ್ಪಷ್ಟ ಸಂದೇಶ ನೀಡಿದ್ದಾರೆ ಎಂದು ತಿಳಿಸಿದರು. ಮಹಾರಾಷ್ಟ್ರ ಚುನಾವಣೆಯಲ್ಲಿ ಮತಯಂತ್ರಗಳನ್ನು ಹ್ಯಾಕ್ ಮಾಡಲಾಗಿದೆ ಎಂಬ ಆರೋಪಗಳ ಬಗ್ಗೆ ಕೇಳಿದಾಗ, ಈ ವಿಚಾರವಾಗಿ ಪರಮೇಶ್ವರ್ ಅವರು ಪ್ರತಿಕ್ರಿಯೆ ನೀಡಿದ್ದಾರೆ. ಶಿವಸೇನಾ ನಾಯಕರು ಪ್ರತಿಕ್ರಿಯೆ ನೀಡುತ್ತಿದ್ದಾರೆ. ಕೆಲವೇ ದಿನಗಳಲ್ಲಿ ನಾನು ದೆಹಲಿಗೆ ಭೇಟಿ ನೀಡುತ್ತಿದ್ದು, ಅಲ್ಲಿ ಚರ್ಚೆ ಮಾಡುತ್ತೇವೆ. ಇದು ದೇಶದ ವಿಚಾರ ಎಂದು ತಿಳಿಸಿದರು.

ನಾವು ಬಿಚ್ಚಿಡುತ್ತೇವೆ. ಚನ್ನಪಟ್ಟಣ ಉಪಚುನಾವಣೆ ಸಂದರ್ಭದಲ್ಲಿ ಅಲ್ಲಿನ ಜನ ಪಹಣಿಯಲ್ಲಿ ವಕ್ಫ್ ನಮೂದಾಗಿರುವ ವಿಚಾರವಾಗಿ ಅರ್ಜಿ ತೆಗೆದುಕೊಂಡು ಹೋಗುತ್ತಿದ್ದರು. ನಾನು ಅದನ್ನು ಪರಿಶೀಲಿಸಿದಾಗ 2020ರಲ್ಲಿ ಅವರ ಪಹಣಿ ತಿದ್ದುಪಡಿಯಾಗಿದೆ. ಈಗ ಅದನ್ನು ಮನೆ ಮನೆಗೆ ತೋರಿಸುತ್ತಿದ್ದಾರೆ. ಬಿಜೆಪಿಯವರು ತಮ್ಮ ಆಂತರಿಕ ಹುಳುಕು ಮುಚ್ಚಿಕೊಳ್ಳಲು ಈ ವಿಚಾರವಾಗಿ ಹೋರಾಟ ಮಾಡುತ್ತಿದ್ದಾರೆ. ಜನ ಅವರಿಗೆ ತಕ್ಕ ಪಾಠ ಕಲಿಸಿದ್ದಾರೆ ಎಂದು ತಿಳಿಸಿದರು. ಬಿಜೆಪಿಯಲ್ಲಿ ಬಣ ರಾಜಕೀಯ ಹೆಚ್ಚಾಗಿದ್ದು, ಅವರವರೇ ಪರಸ್ಪರ ದೂರು ನೀಡುತ್ತಿದ್ದಾರೆ ಎಂದು ಕೇಳಿದಾಗ, ಅವರೇ ಈ ವಿಚಾರ ತೀರ್ಮಾನ ಮಾಡಿಕೊಳ್ಳಬೇಕು. ಅವರ ಪಕ್ಷದಲ್ಲಿ ಎಷ್ಟೇ ಗುಂಪಿದ್ದರೂ ನಮ್ಮ ಲೆಕ್ಕಕ್ಕೆ ಅವರು ಒಂದೇ ಗುಂಪು. ಜೆಡಿಎಸ್ ಚಿಹ್ನೆ ಬೇರೆಯಾದರೂ ಅವರೂ ಅದೇ ಗುಂಪು. ಜೆಡಿಎಸ್ ಅವರು ಕೂಡ ಅದೇ ಪ್ರಯತ್ನದಲ್ಲಿದ್ದಾರೆ. ಅವರು ಹೋರಾಟ ಮಾಡಿ ನಮಗೆ ಪ್ರಚಾರ ನೀಡುತ್ತಿದ್ದು, ಮಾಡಲಿ ಎಂದು ತಿಳಿಸಿದರು.

**ಮುಸ್ಲಿಂ ಮತ ಕೇಳುವ ನೈತಿಕತೆ ಇಲ್ಲ:**

ಮುಸಲ್ಮಾನರು ಕೈಕೊಟ್ಟಿದ್ದಕ್ಕೆ ನಮಗೆ ಹಿನ್ನಡೆಯಾಯಿತು ಎಂಬ ನಿಖಿಲ್ ಹೇಳಿಕೆ ಬಗ್ಗೆ ಕೇಳಿದಾಗ, ಕುಮಾರಸ್ವಾಮಿ ಬಿಜೆಪಿಯವರ ಜತೆ ಸೇರಿದರೆ ಮುಸಲ್ಮಾನರು ಹೇಗೆ ಮತ ಹಾಕುತ್ತಾರೆ. ಮುಸಲ್ಮಾನರನ್ನು ಎನ್ ಡಿಎ ಮೈತ್ರಿಕೂಟ ವಿಶ್ವಾಸಕ್ಕೆ ಪಡೆದಿಲ್ಲ. ಹೀಗಿರುವಾಗ ಅವರು ಯಾಕೆ ಮತ ಹಾಕುತ್ತಾರೆ. ನೀವು ಅವರಿಗೆ ನೆರವಾಗಿದ್ದರೆ, ಎನ್ ಡಿಎ ವತಿಯಿಂದ ಮುಸಲ್ಮಾನರಿಗೆ ಟಿಕೆಟ್ ನೀಡಿದ್ದಾರಾ ಮಂತ್ರಿ ಮಾಡಿದ್ದಾರಾ ಅವರಿಗಾಗಿ ಕಾರ್ಯಕ್ರಮ ಕೊಟ್ಟಿದ್ದಾರಾ ಅವರಿಗಿದ್ದ 4% ಮೀಸಲಾತಿ ಕಿತ್ತುಕೊಂಡಿದ್ದೀರಿ. ನಿಮಗೆ ಅವರ ಮತ ಕೇಳುವ ನೈತಿಕತೆಯೇ ಇಲ್ಲ. ನಿಖಿಲ್ ಪಾಪ ಚಿಕ್ಕ ಹುಡುಗ. ಅವನ ಅನುಭವದ ಬಗ್ಗೆ ನಾನು ಮಾತನಾಡುವುದಿಲ್ಲ. ಈ ವಿಚಾರವಾಗಿ ದೊಡ್ಡ ಗೌಡರು ಮಾತನಾಡಬೇಕು ಎಂದರು.

**ಚಕ್ರವರ್ತಿಗಳೇ ಬಿದ್ದಿದ್ದಾರೆ:**

ದೇಶದಲ್ಲಿ ಕಾಂಗ್ರೆಸ್ ಅವನತಿಯತ್ತ ಸಾಗುತ್ತಿದೆ ಎಂಬ ಜೆಡಿಎಸ್ ಟ್ವೀಟ್ ಬಗ್ಗೆ ಕೇಳಿದಾಗ, ಅವರು ತಮ್ಮ ಪರಿಸ್ಥಿತಿ ಬಗ್ಗೆ ನೋಡಿಕೊಳ್ಳಲಿ. ನಾನು ಇಲ್ಲವಾದರೂ ಕಾಂಗ್ರೆಸ್ ಗೆ ಏನೂ ಆಗುವುದಿಲ್ಲ. ಯಾರೇ ಹೋದರೂ ಕಾಂಗ್ರೆಸ್ ಪಕ್ಷಕ್ಕೆ ಏನೂ ಆಗುವುದಿಲ್ಲ. ಕಾಂಗ್ರೆಸ್ ಇತಿಹಾಸ, ದೇಶದ ಇತಿಹಾಸ, ಕಾಂಗ್ರೆಸ್ ಪಕ್ಷ ತ್ಯಾಗ ಮಾಡಿ ಈ ದೇಶವನ್ನು ಒಗ್ಗಟ್ಟಾಗಿಟ್ಟಿದೆ. ಪ್ರಪಂಚದಲ್ಲಿ ದೊಡ್ಡ ದೊಡ್ಡ ಚಕ್ರವರ್ತಿಗಳೇ ಬಿದ್ದಿದ್ದಾರೆ. ಸದ್ದಾಂ ಹುಸೇನ್, ಪಾಕಿಸ್ತಾನದ ಕತೆ ಏನಾಯ್ತು ಎಂದು ಎಲ್ಲರಿಗೂ ಗೊತ್ತು ಎಂದು ತಿಳಿಸಿದರು. ಅಶೋಕಣ್ಣ ನನ್ನ ಮೇಲೆ ಕುಸ್ತಿಗೆ ಬಂದು ಎಷ್ಟು ಡೆಪಾಸಿಟ್ ತಗೊಂಡೆ ತಮ್ಮನನ್ನು ಗೆಲ್ಲಿಸಿಕೊಳ್ಳಲು ಆಗಲಿಲ್ಲ, ಚನ್ನಪಟ್ಟಣ ಗೆದ್ದ ಮಾತ್ರಕ್ಕೆ ಡಿ.ಕೆ. ಶಿವಕುಮಾರ್ ಒಕ್ಕಲಿಗ ನಾಯಕರೇ ಎಂಬ ಆರ್.ಅಶೋಕ್ ಹೇಳಿಕೆ ಬಗ್ಗೆ ಕೇಳಿದಾಗ, ನಾನು ನಾಯಕ ಎಂದು ಯಾವತ್ತು ಹೇಳಿದ್ದೇನೆ ಅಶೋಕಣ್ಣ, ನೀನು ಕನಕಪುರಕ್ಕೆ ಬಂದು ಎಷ್ಟು ಡೆಪಾಸಿಟ್ ತೆಗೆದುಕೊಂಡೆ ಕಂದಾಯ ಸಚಿವರಾಗಿದ್ದು ಕೊಂಡು ನನ್ನ ಮೇಲೆ ಕುಸ್ತಿ ಮಾಡಲು, ಡಿಚ್ಚಿ ಹೊಡೆಯಲು ಬಂದಿದ್ಯಲ್ಲ, ನಿನಗೆ ಎಷ್ಟು ಮತ ಬಂತು ನನ್ನ ತಮ್ಮ ಸೋತಿರುವುದು ನಿಜ. ಅದಕ್ಕೆ ಕಾರಣವಾದ ಒಂದೊಂದೇ ಕೊಂಡಿಗಳು ಕಳಚಿಕೊಳ್ಳುತ್ತಿವೆಯಲ್ಲವೇ ಆರ್ ಆರ್ ನಗರ, ಚನ್ನಪಟ್ಟಣ ಏನಾಗಿದೆ ಎಂದು ನಾನು ಈಗ ಮಾತನಾಡುವುದಿಲ್ಲ ಎಂದು ತಿಳಿಸಿದರು. ಕಾಂಗ್ರೆಸ್ ಹೈಕಮಾಂಡ್ ಅನುಮತಿ ಕೊಟ್ಟರೆ ಒಂದು ತಿಂಗಳಲ್ಲಿ ಜೆಡಿಎಸ್ ಶಾಸಕರನ್ನು ಕರೆ ತರುತ್ತೇನೆ ಎಂಬ ಯೋಗೇಶ್ವರ್ ಅವರ ಹೇಳಿಕೆ ಬಗ್ಗೆ ಕೇಳಿದಾಗ, ನನಗೆ ಆ ವಿಚಾರ ಗೊತ್ತಿಲ್ಲ ಎಂದರು.

**ಮನನೊಂದು ಜಿಟಿಡಿ ಹೇಳಿಕೆ :**

ಜಿ.ಟಿ ದೇವೇಗೌಡರ ನೇತೃತ್ವದಲ್ಲಿ ಆಪರೇಷನ್ ಮಾಡಲಾಗುವುದೇ ಎಂದು ಕೇಳಿದಾಗ, ಜಿ.ಟಿ ದೇವೇಗೌಡ ಹಿರಿಯ ನಾಯಕರು. ಅವರ ಪಕ್ಷದ ಕೋರ್ ಕಮಿಟಿ ಅಧ್ಯಕ್ಷರಾದ್ದಾರೆ. ಅವರು ಜೆಡಿಎಸ್ ಪಕ್ಷಕ್ಕೆ ತಮ್ಮದೇ ಆದ ಕೊಡುಗೆ ನೀಡಿದ್ದಾರೆ. ನಾವು ಈ ಹಿಂದೆ ಕಾಂಗ್ರೆಸ್ ಪಕ್ಷಕ್ಕೆ ಬನ್ನಿ ಎಂದು ಆಹ್ವಾನ ನೀಡಿದ್ದೆವು. ಆದರೆ ಅವರು ಕುಮಾರಣ್ಣ ಅವರನ್ನು ಸಿಎಂ ಮಾಡುತ್ತೇವೆ ಎಂದು ನಮ್ಮ ಆಹ್ವಾನ ತಿರಸ್ಕರಿಸಿದರು. ಈಗ ಅವರನ್ನು ನಡೆಸಿಕೊಳ್ಳುತ್ತಿರುವ ರೀತಿಗೆ ಅವರು ನೊಂದಿದ್ದಾರೆ ಎಂದರು. ಜೆಡಿಎಸ್ ನೊಂದ ಶಾಸಕರು ಕಾಂಗ್ರೆಸ್ ಸೇರುತ್ತಾರಾ ಎಂದು ಕೇಳಿದಾಗ, ಈ ವಿಚಾರವಾಗಿ ನನ್ನ ಬಳಿ ಯಾರೂ ಚರ್ಚೆ ಮಾಡಿಲ್ಲ ಎಂದು ತಿಳಿಸಿದರು.

ಮುಡಾ ಪ್ರಕರಣದ 144 ಫೈಲ್‌ಗಳು ಪತ್ತೆಯಾಗಿಲ್ಲ ಎಂಬ ಲೋಕಾಯುಕ್ತ ವರದಿ ಬಗ್ಗೆ ಕೇಳಿದಾಗ, ನನಗೆ ಲೋಕಾಯುಕ್ತದ ಹೇಳಿಕೆ ವಿಚಾರ ಗೊತ್ತಿಲ್ಲ. ಆ ರೀತಿ ಫೈಲ್ ಗಳನ್ನು ಯಾರು ಎತ್ತಿಕೊಂಡು ಹೋಗಲು ಸಾಧ್ಯ ಕಚೇರಿಯಲ್ಲೇ ಇರುತ್ತದೆ, ಅಥವಾ ಯಾರಾದರೂ ಸರ್ಕಾರಕ್ಕೆ ಅದನ್ನು ತೋರಿಸಲು ತೆಗೆದುಕೊಂಡು ಹೋಗಿರುತ್ತಾರೆ. ನನ್ನ ಪ್ರಕಾರ ಪ್ರತಿ ಫೈಲ್ ಗಳನ್ನು ಚಲನಗಳ ಮೇಲೂ ನಿಗಾ ಇಡಲಾಗುವುದು. ಹೀಗಾಗಿ ಈ ರೀತಿ ನಡೆದಿರುವ ಸಾಧ್ಯತೆ ಇಲ್ಲ ಎಂದರು.

# ಬೆಳಗಾವಿ ಚಳಿಗಾಲದ ಅಧಿವೇಶನಕ್ಕೆ ಚ್ಯುತಿ ಬರದಂತೆ ಮುನ್ನೆಚ್ಚರಿಕೆ ವಹಿಸಲು ಸತೀಶ್ ಜಾರಕಿಹೊಳಿ ಸೂಚನೆ



**ಬೆಳಗಾವಿ, ನ.25:** ಡಿ.9 ರಿಂದ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಚಳಿಗಾಲ ಅಧಿವೇಶನ ಆರಂಭವಾಗಲಿದ್ದು, ಅಧಿವೇಶದಲ್ಲಿ ಯಾವುದೇ ಅನಾನುಕೂಲಗಳಾಗಂತೆ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಲೋಕೋಪಯೋಗಿ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರು ಸೂಚನೆ ನೀಡಿದರು. ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ ಪೂರ್ವಸಿದ್ಧತಾ ಸಭೆಯಲ್ಲಿ, ವಸತಿ, ಸಾರಿಗೆ, ಆಹಾರ ಮತ್ತು ಇತರ ಸೌಲಭ್ಯಗಳಲ್ಲಿ ಯಾವುದೇ ಅನಾನುಕೂಲಗಳಾದಂತೆ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಊಟೋಪಹಾರ ಕಲ್ಪಿಸುವವರಿಗೆ ಮುಂಚಿತವಾಗಿಯೇ ಆದೇಶ ನೀಡುವ ಮೂಲಕ ಉತ್ತಮ ವ್ಯವಸ್ಥೆಯನ್ನು ಖಚಿತಪಡಿಸಬೇಕು. ಇದರೊಂದಿಗೆ ತುರ್ತು ಚಿಕಿತ್ಸೆಗೆ ಅನುಕೂಲವಾಗುವಂತೆ ವೈದ್ಯಕೀಯ ತಂಡಗಳು ಮತ್ತು ಅಂಬುಲೆನ್ಸ್‌ಗಳನ್ನು ನಿಯೋಜಿಸಬೇಕು. ನಗರದ ರಸ್ತೆಗಳು ಸೇರಿದಂತೆ ನಗರ ಪ್ರವೇಶಿಸುವ ರಸ್ತೆಗಳ ದುರಸ್ತಿ ಕಾರ್ಯವನ್ನು ಕೂಡಲೇ ಕೈಗೆತ್ತಿಕೊಂಡು, ಆದಷ್ಟು ಬೇಗ ಪೂರ್ಣಗೊಳಿಸಬೇಕು ಎಂದು ಸೂಚನೆ ನೀಡಿದರು.

ಈ ವೇಳೆ ಮಾತನಾಡಿದ ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಅವರು, ವಸತಿ, ಸಾರಿಗೆ ಹಾಗೂ ಊಟೋಪಹಾರ ವ್ಯವಸ್ಥೆ ಸೇರಿದಂತೆ ಸುಗಮ ಅಧಿವೇಶನಕ್ಕಾಗಿ 10 ಸಮಿತಿಗಳನ್ನು ರಚಿಸಲಾಗಿದೆ. ಕಳೆದ ಬಾರಿಯಂತೆ ವಿವಿಧ ಸ್ಥಳಗಳಲ್ಲಿ ಊಟದ ವ್ಯವಸ್ಥೆಯನ್ನು ಮಾಡಲಾಗುತ್ತಿದೆ ಎಂದು ಹೇಳಿದರು. ಹೈಸ್ಪೀಡ್ ಸಾಮರ್ಥ್ಯದ ಅಂತರ್ಜಾಲ ಸಂಪರ್ಕ, ಕಂಪ್ಯೂಟರ್, ಲೇಖನ ಸಾಮಗ್ರಿಗಳು ಸೇರಿದಂತೆ ಎಲ್ಲಾ ವ್ಯವಸ್ಥೆಯನ್ನು ಮಾಡಿಕೊಳ್ಳಲಾಗಿದೆ. ಪ್ರತಿವರ್ಷದಂತೆ ಅಧಿವೇಶನದಲ್ಲಿ ಭಾಗವಹಿಸುವ ಅಧಿಕಾರಿಗಳು, ಸಿಬ್ಬಂದಿ ಮತ್ತು ಕಲಾಪ ವೀಕ್ಷಣೆಗೆ ಆಗಮಿಸುವ ಸಾರ್ವಜನಿಕರಿಗೆ ಪಾಸ್ ವ್ಯವಸ್ಥೆ ಮಾಡಲಾಗುತ್ತಿದೆ. ಸುವರ್ಣ ಸೌಧದ ಮುಖ್ಯ ಪ್ರವೇಶ ದ್ವಾರದಿಂದ ಒಳಗಡೆ ಆವರಣದವರೆಗೆ ಸಾರ್ವಜನಿಕರಿಗೆ ಕರೆದೊಯ್ಯಲು ಉಚಿತ ಬಸ್ ವ್ಯವಸ್ಥೆ ಕೂಡ ಈ ಬಾರಿ ಕಲ್ಪಿಸಲು ನಿರ್ಧರಿಸಲಾಗಿದೆ ಎಂದು ತಿಳಿಸಿದರು.ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಭೀಮಾಶಂಕರ ಗುಳೇದ ಮಾತನಾಡಿ, ಅಂದಾಜು 6 ಸಾವಿರ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸುವ ಮೂಲಕ ಪ್ರತಿವರ್ಷದಂತೆ ಬಿಗಿ ಭದ್ರತೆ ಕಲ್ಪಿಸಲಾಗುವುದು. ಸುವರ್ಣಸೌಧದ ಸುತ್ತಮುತ್ತಲಿನ ಪ್ರತಿಭಟನಾ ಸ್ಥಳಗಳಲ್ಲೂ ಅಗತ್ಯ ಬಂದೋಬಸ್ತ್ ಮಾಡಲಾಗುವುದು. ಇದಲ್ಲದೇ ಸಾರಿಗೆ ನಿರ್ವಹಣೆಗೂ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಲಾಗುವುದು ಎಂದರು.

# ರಂಗನತಿಟ್ಟಿನಲ್ಲಿ 3 ಹೊಸ ವಿಹಾರ ದೋಣಿಗಳ ಲೋಕಾರ್ಪಣೆ

- ☐ **ಗೆಂಡೆಹೊಸಹಳ್ಳಿ ದ್ವೀಪವನ್ನು ರಂಗನತಿಟ್ಟಿನ ರೀತಿ ಅಭಿವೃದ್ಧಿಗೆ ಪ್ರಸ್ತಾವನೆ ಸಲ್ಲಿಸಲು ಈಶ್ವರ ಖಂಡ್ರೆ ಸೂಚನೆ**
- ☐ **ರಂಗನತಿಟ್ಟು ಆವರಣದಲ್ಲಿ ಚಿಟ್ಟೆಪಾರ್ಕ್ ನಿರ್ಮಾಣ: ಈಶ್ವರಖಂಡ್ರೆ**



**ಮಂಡ್ಯ, ನ.25:** ವಿಶ್ವವಿಖ್ಯಾತ ರಂಗನತಿಟ್ಟು ಪಕ್ಷಿಧಾಮದಲ್ಲಿ ಬನ್ನೇರುಘಟ್ಟದಲ್ಲಿ ಇರುವ ರೀತಿಯಲ್ಲೇ ಚಿಟ್ಟೆಪಾರ್ಕ್ ನಿರ್ಮಾಣ ಮಾಡಿ ಪ್ರವಾಸಿಗರಿಗೆ ಹೊಸ ಆಕರ್ಷಣೆ ಕಲ್ಪಿಸುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಖಂಡ್ರೆ ಸೂಚನೆ ನೀಡಿದ್ದಾರೆ. ರಂಗನತಿಟ್ಟು ಪಕ್ಷಿಧಾಮದಲ್ಲಿ ಇಂದು 3 ಹೊಸ ವಿಹಾರ ದೋಣಿಗಳನ್ನು ಉದ್ಘಾಟಿಸಿದ ತರುವಾಯ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಪಕ್ಷಿಧಾಮಕ್ಕೆ ಬರುವ ಪ್ರವಾಸಿಗರಿಗೆ ಶೌಚಾಲಯ, ಪಾರ್ಕಿಂಗ್ ವ್ಯವಸ್ಥೆ, ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಸೇರಿದಂತೆ ಎಲ್ಲ ಅಗತ್ಯ ಮೂಲ ಸೌಕರ್ಯ ಒದಗಿಸಲು ಮತ್ತು ರಂಗನತಿಟ್ಟಿನ ಬಗ್ಗೆ ಹೆಚ್ಚಿನ ಪ್ರಚಾರ ಮಾಡಲು ಸೂಚನೆ ನೀಡಿದರು. ರಂಗನತಿಟ್ಟಿನಲ್ಲಿ ಈಗಾಗಲೇ ಇರುವ ದೋಣಿಗಳಿಗೆ ಹೇಮಾವತಿ, ಕಾವೇರಿ, ಲಕ್ಷ್ಮಣತೀರ್ಥ, ತುಂಗಾ, ಕೃಷ್ಣಾ ಎಂದು ಹೆಸರಿಟ್ಟಿರುವ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದ ಅವರು, ಇಂದು ಉದ್ಘಾಟಿಸಲಾದ ದೋಣಿಗಳಿಗೆ ಮಾಂಜ್ರಾ, ಗೋದಾವರಿ, ಕಾರಂಜಾ ನದಿಗಳ ಹೆಸರಿಡುವಂತೆ ಸಲಹೆ ನೀಡಿದರು. ಆನ್ ಲೈನ್ ಟಿಕೆಟ್ ಬುಕ್ಕಿಂಗ್ ವ್ಯವಸ್ಥೆ: ಅರಣ್ಯ ಇಲಾಖೆಯ ಚಾರಣ, ಸಫಾರಿ ಆನ್ ಲೈನ್ ಟಿಕೆಟ್ ಬುಕ್ಕಿಂಗ್ ತಾಣದಲ್ಲಿ ರಂಗನತಿಟ್ಟು ಪಕ್ಷಿಧಾಮಕ್ಕೆ ಬರುವ ಪ್ರವಾಸಿಗರಿಗೆ ಅನುಕೂಲ ಆಗುವಂತೆ ಪ್ರವೇಶದ ಟಿಕೆಟ್ ಮತ್ತು ದೋಣಿ ವಿಹಾರದ ಟಿಕೆಟ್ ಕಾಯ್ದಿರಿಸುವ ಅವಕಾಶ ಕಲ್ಪಿಸಲು ಸೂಚಿಸಿದರು.

ಗೆಂಡೆಹೊಸಹಳ್ಳಿ ದ್ವೀಪ ಅಭಿವೃದ್ಧಿಗೆ ಪ್ರಸ್ತಾವನೆ ಮಂಡಿಸಲು ಸೂಚನೆ : ರಂಗನತಿಟ್ಟು ಬಳಿಯ ಗೆಂಡೆ ಹೊಸಹಳ್ಳಿ ದ್ವೀಪದಲ್ಲಿ ಕೂಡ ನೂರಾರು ಬಗೆಯ ಪಕ್ಷಿಗಳು ಬಂದು ಗೂಡುಕಟ್ಟಿ, ಸಂತಾನೋತ್ಪತ್ತಿ ಮಾಡುತ್ತಿರುವ ಹಿನ್ನೆಲೆಯಲ್ಲಿ ಈ ದ್ವೀಪವನ್ನು ಕೂಡ ರಂಗನತಿಟ್ಟು ರೀತಿಯಲ್ಲೇ ಅಭಿವೃದ್ಧಿ ಪಡಿಸಿ, ಪ್ರವಾಸಿ ತಾಣವಾಗಿ ರೂಪಿಸಲು ಪ್ರಸ್ತಾವನೆ ಸಲ್ಲಿಸುವಂತೆ ಸೂಚನೆ ನೀಡಿದರು.

ದೋಣಿವಿಹಾರ ನಡೆಸಿದ ಅರಣ್ಯ ಸಚಿವರು: ಕಾವೇರಿ ನದಿಯಲ್ಲಿ ದೋಣಿವಿಹಾರ ನಡೆಸಿದ ಅರಣ್ಯ ಸಚಿವರು ಬಂಡೆಗಳ ಮೇಲೆ ಮಲಗಿದ್ದ ಬೃಹತ್ ಗಾತ್ರದ ಮೊಸಳೆಗಳು, ದೂರ ದೂರದಿಂದ ಸಂತಾನೋತ್ಪತ್ತಿಗಾಗಿ ಆಗಮಿಸಿರುವ ಪೆಲಿಕಾನ್, ರಿವರ್ ಟರ್ನ್, ಕಾರ್ಮೊರೆಂಟ್, ಪೈಡ್ ಕಿಂಗ್ ಫಿಷರ್ ಮೊದಲಾದ ಪಕ್ಷಿಗಳನ್ನು ವೀಕ್ಷಿಸಿದರು.

# ವಕ್ಫ್ ರಾದ್ಧಾಂತ: ಬೀದರ್‌ನಿಂದ ಯತ್ನಾಳ್ ಅಭಿಯಾನ ಆರಂಭ



**ಬೆಂಗಳೂರು, ನ.25:** ಗಡಿ ಜಿಲ್ಲೆ ಬೀದರ್‌ನಲ್ಲಿ ಬಿಜೆಪಿಯ ಶಾಸಕ ಬಸವನಗೌಡ ಪಾಟೀಲ್ ಯತ್ನಾಳ್ ನೇತೃತ್ವದ ಬಿಜೆಪಿ ಬಣ ಇಂದಿನಿಂದ 5 ಜಿಲ್ಲೆಗಳಲ್ಲಿ ವಕ್ಫ್ ವಿರುದ್ಧ ಜನಜಾಗೃತಿ ಅಭಿಯಾನಕ್ಕೆ ಚಾಲನೆ ನೀಡಿದೆ. ವಕ್ಫ್ ಹಠಾವೋ ದೇಶ ಬಚಾವೋ ಘೋಷವಾಕ್ಯದಡಿ ಅಭಿಯಾನ ಆರಂಭವಾಗಿದೆ ಬಿಜೆಪಿ ಭಿನ್ನ ಬಣ ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರಿಗೆ ಸಡ್ಡು ಹೊಡೆದಿದ್ದು, ವಕ್ಫ್ ವಿರುದ್ಧದ ಹೋರಾಟವನ್ನು ಚುರುಕುಗೊಳಿಸಿದ್ದಾರೆ.

ವಕ್ಫ್ ವಿರುದ್ಧದ ಹೋರಾಟಕ್ಕೆ ಕರೆ ನೀಡಿದ ಕೆಲ ಗಂಟೆಗಳಲ್ಲಿ ವಿಜಯೇಂದ್ರ ಅವರು ವಕ್ಫ್ ವಿರುದ್ಧ ಹೋರಾಟಕ್ಕೆ ಕರೆ ನೀಡಿ ಬಿಜೆಪಿಯ ತಂಡದಲ್ಲಿ ಯತ್ನಾಳ್ ಅವರ ಬಣವನ್ನು ಸೇರ್ಪಡೆ ಮಾಡಿದ್ದರು. ಆದರೆ ಯತ್ನಾಳ್ ಪಕ್ಷದ ನಾಯಕತ್ವದ ವಿರುದ್ಧ ತಿರುಗಿ ಬಿದ್ದಿದ್ದು, ಪ್ರತ್ಯೇಕ ಹೋರಾಟಕ್ಕೆ ಬೀದರ್‌ನಲ್ಲಿ ಚಾಲನೆ ನೀಡಿದ್ದಾರೆ. ಇತ್ತೀಚೆಗೆ ವಿಜಯೇಂದ್ರ ಅವರು ದೆಹಲಿಗೆ ಭೇಟಿ ನೀಡಿ ಭಿನ್ನ ನಾಯಕರ ವಿರುದ್ಧ ಕ್ರಮ ಕೈಗೊಳ್ಳುವಂತೆ ಪಕ್ಷದ ವರಿಷ್ಠರಿಗೆ ಮನವಿ ಮಾಡಿದ್ದರು. ಆದರೆ ಇದಕ್ಕೂ ಜಗ್ಗದ ಯತ್ನಾಳ್ ಬಣ ಪ್ರತ್ಯೇಕ ಹೋರಾಟ ಆರಂಭಿಸಿದೆ. ಡಿಸೆಂಬರ್ 1ರವರೆಗೆ 5 ಜಿಲ್ಲೆಗಳಲ್ಲಿ ವಕ್ಫ್ ವಿರುದ್ಧದ ಅಭಿಯಾನ ನಡೆಯಲಿದೆ. ಡಿ.9ರಿಂದ ಬೆಳಗಾವಿಯಲ್ಲಿ ಚಳಿಗಾಲದ ಅಧಿವೇಶ ಆರಂಭವಾಗಲಿದೆ. ಈ ಹಿನ್ನೆಲೆಯಲ್ಲಿ ವಕ್ಫ್‌ನಿಂದ ಉಂಟಾಗಿರುವ ಸಮಸ್ಯೆಗಳ ಬಗ್ಗೆ ಪ್ರಸ್ತಾಪಿಸಲು ಮುಂದಾಗಿದೆ. ಈ ಅಭಿಯಾನದಲ್ಲಿ ಮಾಜಿ ಸಚಿವರಾದ ರಮೇಶ್ ಜಾರಕಿ ಹೊಳಿ, ಅರವಿಂದ ಲಿಂಬಾವಳಿ, ಮುಖಂಡರಾದ ಕುಮಾರ್ ಬಂಗಾರಪ್ಪ, ಮಾಜಿ ಸಂಸದ ಪ್ರತಾಪ್‌ಸಿಂಹ, ಜಿ.ಎಂ. ಸಿದ್ಧೇಶ್ವರ್, ಹೊಳಲ್ಕೆರೆ ಚಂದ್ರಪ್ಪ, ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪನವರ ರಾಜಕೀಯ ಸಲಹೆಗಾರ ಸೇರಿದಂತೆ ಇತರ ನಾಯಕರು ಈ ಹೋರಾಟದಲ್ಲಿ ಪಾಲ್ಗೊಂಡಿದ್ದಾರೆ.

ಈ ಹೋರಾಟಕ್ಕೂ ಮುನ್ನ ಬೀದರ್ ನಗರದ ಉಗ್ರ ನರಸಿಂಹ ದೇವಸ್ಥಾನದಲ್ಲಿ ಯತ್ನಾಳ್ ವಿಶೇಷ ಪೂಜೆ ಸಲ್ಲಿಸಿ, ವಕ್ಫ್ ವಿರುದ್ಧದ ಅಭಿಯಾನಕ್ಕೆ ಚಾಲನೆ ಕೊಟ್ಟರು. ನಿಮಗೆ ವಕ್ಫ್ ಸಮಸ್ಯೆ ಇದ್ದರೆ ದಯವಿಟ್ಟು ತಿಳಿಸಿ. ಜನರು ಕೂಡಲೇ ಈ ಬಗ್ಗೆ ಎಚ್ಚೆತ್ತುಕೊಳ್ಳಬೇಕು ಎಂದು ಮಾಜಿ ಸಚಿವ ಅರವಿಂದ ಲಿಂಬಾವಳಿ ಹೇಳಿದರು. ಅವರಿಂದು ನಗರದ ನರಸಿಂಹ ಝರಣಾ ಆವರಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೀದರ್‌ನಿಂದ ನರಸಿಂಹ ಝರಣಾ ದೇವಸ್ಥಾನಕ್ಕೆ ಭೇಟಿ ನೀಡಿ ವಕ್ಫ್ ವಿರುದ್ಧ ಜನಜಾಗೃತಿ ಆರಂಭ ಮಾಡಿದ್ದೇವೆ ಎಂದರು.

ಈಗಾಗಲೇ ಯತ್ನಾಳ್ ಅವರು ಬಿಜಾಪುರ ಜಿಲ್ಲೆಯಲ್ಲಿ ಅವರ ಗಮನಕ್ಕೆ ಬಂದ ತಕ್ಷಣ ಹೋರಾಟ ಮಾಡಿದ್ದಾರೆ. ಹೋರಾಟದ ಭಾಗವಾಗಿ ದೊಡ್ಡ ಸಭೆಯಾಗಿದೆ. ಹಗಲು, ರಾತ್ರಿ ಎನ್ನದೇ ಹೋರಾಟ ಮಾಡಿದ್ದಾರೆ.ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಭಾಗಿಯಾಗಿದ್ದರು. ವಕ್ಫ್ ಜಂಟಿ ಪಾರ್ಲಿಮೆಂಟರಿ ಬೋರ್ಡ್ ಅಧ್ಯಕ್ಷರೂ ಕೂಡ ಬಂದು ಮನವಿ ತೆಗೆದುಕೊಂಡು ಹೋದರು. ನಾವು ಕೇವಲ ಮಾಹಿತಿ ಮಾತ್ರವಲ್ಲ, ಜನಜಾಗೃತಿ ಕೂಡ ಮಾಡ್ತಿದ್ದೇವೆ ಎಂದರು

## ಭಾರತ ಸಂವಿಧಾನದ 75ನೇ ವಾರ್ಷಿಕೋತ್ಸವ ಹಿನ್ನೆಲೆ

# ಗ್ರಾ.ಪಂ. ಗ್ರಂಥಾಲಯಗಳಲ್ಲಿ ಸಂವಿಧಾನ ಸಾಕ್ಷರತಾ ಕಾರ್ಯಕ್ರಮಕ್ಕೆ ಪ್ರಿಯಾಂಕ್ ಖರ್ಗೆ ಸೂಚನೆ



**ಬೆಂಗಳೂರು ನ.25:** ಭಾರತ ಸಂವಿಧಾನದ 75ನೇ ವಾರ್ಷಿಕೋತ್ಸವ ಆಚರಿಸುತ್ತಿರುವ ಸಂದರ್ಭದಲ್ಲಿ ಸಾಂವಿಧಾನಿಕ ಮೌಲ್ಯಗಳ ಬಗ್ಗೆ ಸಾರ್ವಜನಿಕರಿಗೆ ತಿಳುವಳಿಕೆ ನೀಡಲು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ರಾಜ್ಯಾದ್ಯಂತ ಅಭಿಯಾನವನ್ನು ಪ್ರಾರಂಭಿಸಲಾಗುತ್ತಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಸಂವಿಧಾನ ದಿನವಾದ ನವೆಂಬರ್ 26ರಿಂದ ಆರಂಭವಾಗಲಿರುವ ಮೂರು ದಿನಗಳ ಈ ಕಾರ್ಯಕ್ರಮದಲ್ಲಿ ಸಾಂವಿಧಾನಿಕ ಸಾಕ್ಷರತೆಯ ಬಗ್ಗೆ ಅರಿವು ಮೂಡಿಸಲಾಗುವದಲ್ಲದೆ, ಸ್ವಾತಂತ್ರ್ಯ, ಸಮಾನತೆ, ಭ್ರಾತೃತ್ವ ಮತ್ತು ನ್ಯಾಯದ ತತ್ವಗಳನ್ನು ಎತ್ತಿ ತೋರಿಸಲಾಗುತ್ತದೆ, ಜೊತೆಗೆ ಸಾರ್ವಜನಿಕ ಆಸ್ತಿ, ನೈಸರ್ಗಿಕ ಸಂಪನ್ಮೂಲಗಳು ಮತ್ತು ಸಾಂಸ್ಕೃತಿಕ ಪರಂಪರೆಯನ್ನು ರಕ್ಷಿಸಲು ಸಕ್ರಿಯ ಪೌರತ್ವಕ್ಕಾಗಿ ಸಾರ್ವಜನಕರಿಗೆ ಕರೆ ನೀಡುತ್ತದೆ.ಸಂವಿಧಾನ ದಿನವನ್ನು ಆಚರಿಸಲು ಮತ್ತು ಸಾಂವಿಧಾನಿಕ ಮೌಲ್ಯಗಳ ಜಾಗೃತಿಯನ್ನು ಉತ್ತೇಜಿಸಲು, ಕರ್ನಾಟಕದಾದ್ಯಂತ ಗ್ರಾಮ ಪಂಚಾಯತಿ ಗ್ರಂಥಾಲಯಗಳಲ್ಲಿ ಸಂವಿಧಾನ ಸಾಕ್ಷರತಾ ಕಾರ್ಯಕ್ರಮವನ್ನು ನಡೆಸಲಾಗುವುದು ಎಂದು ಸಚಿವರು ಹೇಳಿದ್ದಾರೆ.

ಸಂವಿಧಾನದ ಮೂಲ ಮೌಲ್ಯಗಳೊಂದಿಗೆ ಸಂಪರ್ಕ ಸಾಧಿಸಲು ನಾಗರಿಕರನ್ನು ಪ್ರೇರೇಪಿಸುವಂತೆ ಈ ಕಾರ್ಯಕ್ರಮವನ್ನು ವಿನ್ಯಾಸಗೊಳಿಸಲಾಗಿದ್ದು ಸಂವಿಧಾನದ ಸುಸ್ಥಿರತೆ, ಸಾಂಸ್ಕೃತಿಕ ಸಂರಕ್ಷಣೆ ಮತ್ತು ಸಮುದಾಯ ಯೋಗಕ್ಷೇಮವನ್ನು ಬೆಂಬಲಿಸುವ ಕ್ರಮಗಳಿಗೆ ಒತ್ತು ನೀಡಲಾಗುವುದು. ಸಂವಾದಾತ್ಮಕ ಚರ್ಚೆಗಳು, ಸೃಜನಶೀಲ ಚಟುವಟಿಕೆಗಳು ಮತ್ತು ಸಮುದಾಯದ ಘಟನೆಗಳ ಮೂಲಕ ಸಂವಿಧಾನವನ್ನು ಜನಜೀವನದ ಹತ್ತಿರ ತೆಗೆದುಕೊಂಡು ಹೋಗಲು ಪ್ರಯತ್ನಿಸಲಾಗುತ್ತದೆ ಎಂಬ ವಿವರಗಳನ್ನು ಸಚಿವ ಪ್ರಿಯಾಂಕ್ ಖರ್ಗೆ ನೀಡಿದ್ದಾರೆ. ಉದ್ಘಾಟನಾ ಸಮಾರಂಭದ ಅಂಗವಾಗಿ, ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿರುವ ಗ್ರಾಮೀಣ ಗ್ರಂಥಾಲಯಗಳಲ್ಲಿ ನಾಗರಿಕರಿಂದ ಏಕಕಾಲದಲ್ಲಿ ಸಂವಿಧಾನ ಪೀಠಿಕೆಯ ಪಠಣ ನಡೆಯಲಿದೆ. ಈ ಸಾಮೂಹಿಕ ಓದುವಿಕೆ ನ್ಯಾಯ, ಸ್ವಾತಂತ್ರ್ಯ, ಸಮಾನತೆ ಮತ್ತು ಭ್ರಾತೃತ್ವದ ಪ್ರಮುಖ ಮೌಲ್ಯಗಳಿಗೆ ಹಂಚಿಕೆಯ ಬದ್ಧತೆಯನ್ನು ಒತ್ತಿಹೇಳುತ್ತದೆ ಎಂದು ಸಚಿವರು ಮಾಹಿತಿ ನೀಡಿದ್ದಾರೆ.

ಕಾರ್ಯಕ್ರಮದ ಭಾಗವಾಗಿ, ಎಲ್ಲಾ ವಯೋಮಾನದ ನಾಗರಿಕರು ಸಾಂವಿಧಾನಿಕ ಮೌಲ್ಯಗಳಲ್ಲಿ ಬೇರೂರಿರುವ ಹಲವಾರು ಚಟುವಟಿಕೆಗಳಲ್ಲಿ ಭಾಗವಹಿಸುತ್ತಾರೆ. ನಾಗರಿಕರನ್ನು ತೊಡಗಿಸಿಕೊಳ್ಳಲು ರಸಪ್ರಶ್ನೆಗಳು, ಒಗಟುಗಳು ಮತ್ತು ಪ್ರಬಂಧ ಬರವಣಿಗೆ ಸೇರಿದಂತೆ ವಿವಿಧ ಸಂವಾದಾತ್ಮಕ ಕಾರ್ಯಗಳನ್ನು ಗ್ರಾಮೀಣ ಗ್ರಂಥಾಲಯಗಳು ಆಯೋಜಿಸುತ್ತವೆ. ಸುಸ್ಥಿರತೆ, ವೈವಿಧ್ಯತೆ, ವೈಜ್ಞಾನಿಕ ಅರಿವು ಮತ್ತು ನಾಗರಿಕ ಕರ್ತವ್ಯಗಳ ಮೇಲೆ ಕೇಂದ್ರೀಕರಿಸಿದ ತಜ್ಞರ ಮಾತುಕತೆಗಳು ಮತ್ತು ಸಂವಾದಾತ್ಮಕ ಚರ್ಚೆಗಳನ್ನು ಗ್ರಾಮ ಪಂಚಾಯತಿ ಗ್ರಂಥಾಲಯಗಳಲ್ಲಿ ನಡೆಸಲಾಗುವುದು.

ಅಜೀಂ ಪ್ರೇಮ್ಜಿ ಫೌಂಡೇಶನ್ (ಎಪಿಎಫ್), ಭಾರತ್ ಜ್ಞಾನ ವಿಜ್ಞಾನ ಸಮಿತಿ (ಬಿಜಿವಿಎಸ್), ಅಧ್ಯಾಯನ್ ಕ್ವಾಲಿಟಿ ಎಜುಕೇಶನ್ ಫೌಂಡೇಶನ್, ನೇಚರ್ ಕನ್ಸರ್ವೇಶನ್ ಫೌಂಡೇಶನ್ (ಎನ್ಸಿಎಫ್), ಮತ್ತು ಸಿವಿಕ್ ಅವೇರ್ನೆಸ್‌ಗಾಗಿ ಮಕ್ಕಳ ಚಳವಳಿ (ಸಿಎಂಸಿಎ)ಮುಂತಾದ ಎನ್ಜಿಓಗಳ ಬೆಂಬಲದೊಂದಿಗೆ ಗ್ರಂಥಾಲಯ ಮೇಲ್ವಿಚಾರಕರು ಕಾರ್ಯಕ್ರಮವನ್ನು ಸುಗಮಗೊಳಿಸುತ್ತಾರೆ ಎಂದೂ ಸಚಿವರು ಮಾಹಿತಿ ನೀಡಿದ್ದಾರೆ.

ಈ ಅಭಿಯಾನವು ಸಾಂವಿಧಾನಿಕ ಸಾಕ್ಷರತೆಯನ್ನು ಉತ್ತೇಜಿಸುವ, ನಾಗರಿಕ ಭಾಗವಹಿಸುವಿಕೆಯನ್ನು ಉತ್ತೇಜಿಸುವ ಮತ್ತು ವಿಮರ್ಶಾತ್ಮಕ ಚಿಂತನೆಯ ಸಂಸ್ಕೃತಿಯನ್ನು ಪೋಷಿಸುವ ಗುರಿಯನ್ನು ಹೊಂದಿದ್ದು, ಇಡೀ ವರ್ಷ ಜನಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು, ವರ್ಷದುದ್ದಕ್ಕೂ, ಅರಿವುಕೇಂದ್ರಗಳಲ್ಲಿ ಮಾಸಿಕ ಕಾರ್ಯಕ್ರಮಗಳ ಮೂಲಕ ನಾಗರಿಕರನ್ನು ಚರ್ಚೆಗಳು ಮತ್ತು ಸಂವಾದಾತ್ಮಕ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ತೊಡಗಿಸುತ್ತದೆ. ಸಂವಿಧಾನವನ್ನು ಜೀವಂತ ದಾಖಲೆಯನ್ನಾಗಿ ಮಾಡಲು, ಪ್ರಜಾಪ್ರಭುತ್ವದಲ್ಲಿ ಸಕ್ರಿಯ ಪಾಲ್ಗೊಳ್ಳುವಿಕೆಯನ್ನು ಉತ್ತೇಜಿಸಲು ಮತ್ತು ಅಂತರ್ಗತ ಮತ್ತು ಜಾಗೃತ ಸಮಾಜವನ್ನು ಬೆಳೆಸಲು ಕರ್ನಾಟಕ ಸರ್ಕಾರದ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಎಂದು ಪ್ರಿಯಾಂಕ್ ಖರ್ಗೆ ವಿವರಿಸಿದ್ದಾರೆ.

**ಮೂರು ದಿನಗಳ ಅಭಿಯಾನವು ನಾಲ್ಕು ಪ್ರಮುಖ ವಿಷಯಗಳ ಮೇಲೆ ಕೇಂದ್ರೀಕರಿಸುತ್ತದೆ. ಈ ನಾಲ್ಕೂ ವಿಷಯಗಳು ನಿರ್ದಿಷ್ಟ ಸಾಂವಿಧಾನಿಕ ತತ್ವಗಳೊಂದಿಗೆ ಸಂಯೋಜಿಸಲ್ಪಟ್ಟಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.**

- **ಸಾಂಸ್ಕೃತಿಕ ವೈವಿಧ್ಯತೆ ಮತ್ತು ಪರಂಪರೆಯ ರಕ್ಷಣೆ: ಸಂವಿಧಾನದ 29 ಮತ್ತು 51ಂ(ಜಿ) ವಿಧಿಗಳನ್ನು ಪ್ರತಿಬಿಂಬಿಸುವ ಈ ಥೀಮ್ ಭಾರತದ ಶ್ರೀಮಂತ ಸಾಂಸ್ಕೃತಿಕ ಪರಂಪರೆ ಮತ್ತು ವೈವಿಧ್ಯತೆಯನ್ನು ಆಚರಿಸುತ್ತದೆ.**
- **ಸಾರ್ವಜನಿಕ ಆಸ್ತಿ ರಕ್ಷಣೆ: ಆರ್ಟಿಕಲ್ 51A(i)ನಲ್ಲಿ ಹೇಳಿರವಂತೆ ಈ ಥೀಮ್ ಸರೋವರಗಳು, ಉದ್ಯಾನವನಗಳು ಮತ್ತು ಸ್ಮಾರಕಗಳಂತಹ ಸಾರ್ವಜನಿಕ ಸ್ಥಳಗಳನ್ನು ಸಂರಕ್ಷಿಸುವ ಪ್ರಾಮುಖ್ಯತೆಯನ್ನು ಒತ್ತಿಹೇಳುತ್ತದೆ.**
- **ನೈಸರ್ಗಿಕ ಸಂಪನ್ಮೂಲಗಳು ಮತ್ತು ಸುಸ್ಥಿರತೆ: ಆರ್ಟಿಕಲ್ 48ಂಯಿಂದ ಸ್ಫೂರ್ತಿ ಪಡೆದ ಈ ಥೀಮ್ ಪರಿಸರ ಸಂರಕ್ಷಣೆ, ಹವಾಮಾನ ಬದಲಾವಣೆ ಮತ್ತು ಸುಸ್ಥಿರ ಅಭ್ಯಾಸಗಳ ಮೇಲೆ ಕೇಂದ್ರೀಕರಿಸುತ್ತದೆ.**
- **ವೈಜ್ಞಾನಿಕ ಮನೋಧರ್ಮ ಮತ್ತು ತರ್ಕಬದ್ಧ ಚಿಂತನೆ: ಆರ್ಟಿಕಲ್ 51ಂ(ಏನಲ್ಲಿ ಲಭ್ಯವಾಗಿರುವ ಈ ವಿಷಯವು ವಿಚಾರಣೆ, ನಾವೀನ್ಯತೆ ಮತ್ತು ತರ್ಕಬದ್ಧ ಚಿಂತನೆಯ ಮನೋಭಾವವನ್ನು ಬೆಳೆಸಲು ನಾಗರಿಕರನ್ನು ಪ್ರೋತ್ಸಾಹಿಸುತ್ತದೆ.**

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಕಡಲೆಕಾಯಿ ಪರಿಷೆ ಅಂತಾರಾಷ್ಟ್ರೀಯ ಮಟ್ಟದಲ್ಲಿ ಜನಪ್ರಿಯಗೊಳಿಸಲು ಶ್ರಮಿಸಿ: ಡಿಕೆಶಿ ಕರೆ

**ಬೆಂಗಳೂರು, ನ.25:** ವೃಷಭಾವತಿ ನದಿ ಹುಟ್ಟುವ ಜಾಗಕ್ಕೆ ಮರುಜೀವ ನೀಡಿ, ಜೀವನದಿಯಾಗಿ ರೂಪಿಸಬೇಕು ಹಾಗೂ ಬಸವನಗುಡಿ ಭಾಗವನ್ನು ಬ್ರ್ಯಾಂಡ್ ಬೆಂಗಳೂರು ಅಡಿಯಲ್ಲಿ ಧಾರ್ಮಿಕ ಹಾಗೂ ಪಾರಂಪರಿಕ ಕಾರಿಡಾರ್ ಆಗಿ ಅಭಿವೃದ್ಧಿಪಡಿಸಬೇಕು ಎನ್ನುವ ಸ್ಥಳೀಯ ಮುಖಂಡರ ಮನವಿಗೆ ಸರ್ಕಾರ ಸ್ಪಂದಿಸುವುದು ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಹೇಳಿದರು.

ಬಸವನಗುಡಿ ಕಡಲೆಕಾಯಿ ಪರಿಷೆಯನ್ನು ಶಿವಕುಮಾರ್ ಅವರು ಸೋಮವಾರ ಉದ್ಘಾಟಿಸಿ ಮಾತನಾಡಿದರು. ಕಡಲೆಕಾಯಿ ಪರಿಷೆಯನ್ನು ಅಂತರರಾಷ್ಟ್ರೀಯ ಮಟ್ಟಕ್ಕೆ ತೆಗೆದುಕೊಂಡು ಹೋಗಲು ಎಲ್ಲರೂ ಶ್ರಮಿಸಬೇಕು. ರೈತರಿಗೆ, ವ್ಯಾಪಾರಸ್ಥರಿಗೆ ಅನುಕೂಲವಾಗಲಿ ಎಂದು ಈ ಬಾರಿ ಸುಂಕ ಸಂಗ್ರಹವನ್ನು ರದ್ದು ಮಾಡಿದ್ದೇವೆ. ಈ ವರ್ಷದಿಂದ ಸುಂಕವಿಲ್ಲದ ಕಡಲೆಕಾಯಿ ಪರಿಷೆ ಪ್ರಾರಂಭವಾಗಿದೆ ಎಂದರು.

ನಮ್ಮ ಅಜ್ಜನ ಕಾಲದಿಂದಲೂ ನಾವು ಕಡಲೆಕಾಯಿ ಬೆಳೆಯುತ್ತಿದ್ದೆವು. ಸುಮಾರು 30- 40 ಎಕರೆ ಪ್ರದೇಶದಲ್ಲಿ ಬೆಳೆ ಬೆಳೆಯುತ್ತಿದ್ದೆವು. ನಾನೂ ಸಹ ಕಡಲೆಕಾಯಿ ಕೃಷಿ ಮಾಡಿದ್ದೇನೆ. ಕಡಲೆಕಾಯಿ ಬಡವರ ಬಾದಾಮಿ. ಒಂದು ಕೆಜಿ ಬಾದಾಮಿಗೆ ಒಂದು ಸಾವಿರ ರೂಪಾಯಿ, ಅದೇ ಕಡಲೆಕಾಯಿಗೆ 50 ರೂಪಾಯಿ ಬೆಲೆಯಿದೆ ಎಂದರು. ಕಾಂಗ್ರೆಸ್ ಕಡಲೆಕಾಯಿ ಎಂದು ಕರೆಯಲಾಗುತ್ತದೆ.



### ಎಲ್ಲಾ ಬಡವರಿಗೂ ಬಿಪಿಎಲ್ ಕಾರ್ಡ್ ನೀಡಲಾಗುವುದು

ಕಡಲೆಕಾಯಿ ಪರಿಷೆ ಉದ್ಘಾಟನೆಯ ನಂತರ ಪಡಿತರ ಚೀಟಿ ರದ್ದತಿ ಬಗ್ಗೆ ಬಿಜೆಪಿ ಅಪಪ್ರಚಾರದ ಬಗ್ಗೆ ಮಾಧ್ಯಮಗಳ ಪ್ರಶ್ನೆಗಳಿಗೆ ಉತ್ತರಿಸಿದ ಡಿಸಿಎಂ ಅವರು ನಮ್ಮ ಸರ್ಕಾರ ಬಡವರ ಪರವಾಗಿದೆ.

ಎಲ್ಲಾ ಬಡವರಿಗೂ ಬಿಪಿಎಲ್ ಕಾರ್ಡ್ ನೀಡಲಾಗುವುದು. ಇದರ ಬಗ್ಗೆ ಆತಂಕ ಪಡುವ ಆಗತ್ಯವಿಲ್ಲ, ಯಾರಿಗೂ ತೊಂದರೆಯಾಗಲು ಬಿಡುವುದಿಲ್ಲ. ಸರ್ಕಾರ ಜಮೀನು ಕಬಳಿಸುತ್ತದೆ ಎನ್ನುವ ಬಿಜೆಪಿ ಅಪಪ್ರಚಾರವನ್ನು ಬಿಟ್ಟುಬಿಡಿ ಎಂದರು

ಯಾರು ಈ ಹೆಸರು ಇಟ್ಟರು ಎಂಬುದು ಮಾಹಿತಿಯಿಲ್ಲ. ಮಹಾತ್ಮ ಗಾಂಧಿ ಅವರು ಇಟ್ಟಿರಬಹುದು ಎನ್ನುವುದು ನನ್ನ ಅಭಿಪ್ರಾಯ. ಚಿಂತಾಮಣಿಯಲ್ಲಿ ಖಾರ ಹಾಕಿ ಕಡಲೆಕಾಯಿಗೆ ಹೊಸರೂಪ ನೀಡುತ್ತಾರೆ. ಕನಕಪುರದಲ್ಲಿ ಕಡಲೆ ಮಿಠಾಯಿ ಮಾಡುತ್ತಾರೆ. ತುಮಕೂರು ಭಾಗದಲ್ಲಿ ವಿವಿಧ ಜಾತಿಯ ಕಡಲೆಕಾಯಿ ತಳಿಗಳಿವೆ. ನಾನು ಒಮ್ಮೆ ವಿದೇಶಕ್ಕೆ ಹೋದಾಗ ಹೆಬ್ಬೆಟ್ಟು ಗಾತ್ರದ ಕಡಲೆಕಾಯಿ ನೋಡಿದ್ದೆ. ಅದನ್ನು ಭಾರತಕ್ಕೆ ಕಳುಹಿಸಿ, ನಾನು ಬೆಳೆಯಬೇಕು ಎಂದು ಸ್ನೇಹಿತರಿಗೆ ತಿಳಿಸಿದ್ದೆ ಅದು ಕಾರಣಾಂತರಗಳಿಂದ ಸಾಧ್ಯವಾಗಲಿಲ್ಲ ಎಂದು ಹೇಳಿದರು.

ಬೆಂಗಳೂರಿನ ಸುತ್ತಲಿನ ರೈತರು ಇಲ್ಲಿ ಬಂದು, ನಮ್ಮ ಶ್ರಮ ಸಂಸ್ಕೃತಿಯನ್ನು ಉಳಿಸುವ ಕೆಲಸ ಮಾಡುತ್ತಿದ್ದೀರಿ. ಕೆಂಪೇಗೌಡರು ರೈತರನ್ನು ಉಳಿಸಲು ಹಾಕಿಕೊಟ್ಟ ಹಾದಿಯಲ್ಲಿ ನಾವೆಲ್ಲರು ನಡೆಯೋಣ. ವೃಷಭಾವತಿ ನದಿ ಜನಿಸುವ ಸ್ಥಳದಲ್ಲಿ ನಿಂತು ನಮ್ಮ ಸಂಸ್ಕೃತಿಯನ್ನು ಉಳಿಸುವ ಕೆಲಸದಲ್ಲಿ ನಾವೆಲ್ಲರೂ ನಿರತರಾಗಿದ್ದೇವೆ. ಈ ದೇಶದ ಆಸ್ತಿ ನಮ್ಮ ಸಂಸ್ಕೃತಿ. ಮಲ್ಲಿಕಾರ್ಜುನ ಸ್ವಾಮಿ, ಗವಿ ಗಂಗಾಧರೇಶ್ವರ, ಆಂಜನೇಯ, ಬಸವೇಶ್ವರ, ಗಣಪತಿ ಸನ್ನಿಧಾನದಲ್ಲಿ ನಾವೆಲ್ಲರೂ ಸೇರಿರುವುದೇ ನಮ್ಮ ಭಾಗ್ಯ ಎಂದರು.

### ಬ್ರಾಂಡ್ ಬೆಂಗಳೂರಿಗೆ ಟೀಕೆ ಸೂಕ್ತ ಕಾಲದಲ್ಲಿ ಉತ್ತರ

ವಿರೋಧ ಪಕ್ಷದ ನಾಯಕರು ಬ್ರಾಂಡ್ ಬೆಂಗಳೂರು ಬಗ್ಗೆ ಟೀಕೆ ಮಾಡಿದ್ದರು. ಇದಕ್ಕೆ 2028ಕ್ಕೆ ಮುಂಚಿತವಾಗಿ ನಾನು ಉತ್ತರ ನೀಡುತ್ತೇನೆ. ಈ ಯೋಜನೆಯಡಿ ಯಾವ ಕೆಲಸಗಳನ್ನು ಮಾಡಿದ್ದೇನೆ, ಮಾಡಲಿದ್ದೇನೆ ಎಂದು ಮುಂದಿನ ದಿನಗಳಲ್ಲಿ ತಿಳಿಸುತ್ತೇನೆ ಎಂದರು. ದೇವರು ವರ, ಶಾಪ ಎರಡೂ ಕೊಡುವುದಿಲ್ಲ. ಆದರೆ ಕೊಟ್ಟಿರುವ ಅವಕಾಶವನ್ನು ಸರಿಯಾಗಿ ಬಳಸಿಕೊಳ್ಳಬೇಕು. ಮಾನವನ ಧರ್ಮಕ್ಕೆ ಜಯವಾಗಲಿ ಎಂದು ಹಿರಿಯರು ಸಂದೇಶ ಕೊಟ್ಟಿದ್ದಾರೆ ಎಂದು ಹೇಳಿದರು.

# ಲ್ಯಾಟರಲ್ ಎಂಟ್ರಿ ಪರಿಶೀಲಿಸಲಿರುವ ಸಂಸದೀಯ ಸ್ಥಾಯಿ ಸಮಿತಿ

**ನವದೆಹಲಿ, ನ.25:** 2024-25ರ ಅವಧಿಯಲ್ಲಿ ನಾಗರಿಕ ಸೇವೆಗಳಿಗೆ ಆಗುವ ಲ್ಯಾಟರಲ್ ಎಂಟ್ರಿ ಬಗ್ಗೆ ಸಂಸದೀಯ ಸ್ಥಾಯಿ ಸಮಿತಿ ಪರಿಶೀಲನೆ ನಡೆಸಲಿದೆ ಎಂದು ವರದಿ ಮಾಡಿದೆ. ಸಿಬ್ಬಂದಿ, ಸಾರ್ವಜನಿಕ ಕುಂದುಕೊರತೆಗಳು, ಕಾನೂನು ಮತ್ತು ನ್ಯಾಯಾಂಗ ಇಲಾಖೆಗೆ ಸಂಬಂಧಿಸಿದ ಸಂಸದೀಯ ಸ್ಥಾಯಿ ಸಮಿತಿ ಇದನ್ನು ಪರಿಶೀಲನೆ ನಡೆಸಲಿದೆ ಎಂದು ವರದಿಗಳು ಹೇಳಿವೆ.

ಗುತ್ತಿಗೆ ಆಧಾರದ ಮೇಲೆ ಲ್ಯಾಟರಲ್ ಎಂಟ್ರಿ ಮೂಲಕ 24 ಕೇಂದ್ರ ಸಚಿವಾಲಯಗಳ ಜಂಟಿ ಕಾರ್ಯದರ್ಶಿಗಳು, ನಿರ್ದೇಶಕರು ಮತ್ತು ಉಪ ಕಾರ್ಯದರ್ಶಿಗಳ 45 ಹುದ್ದೆಗಳಿಗೆ ಖಾಸಗಿ ವಲಯದಿಂದ ವ್ಯಕ್ತಿಗಳನ್ನು ನೇಮಕ ಮಾಡಿಕೊಳ್ಳಲು ಕೇಂದ್ರ ಲೋಕಸೇವಾ ಆಯೋಗ ಜಾಹೀರಾತು ನೀಡಿತ್ತು. ಕೇಂದ್ರ ಸರ್ಕಾರದ ಈ ನೀತಿಯು ಮೀಸಲಾತಿ ವಿರೋಧಿಯಾಗಿದ್ದು, ಮೀಸಲಾತಿ ನೀಡುವ ಬದಲು ಮತ್ತೆ ಬಲಿಷ್ಠ ಸಮುದಾಯಗಳಿಗೆ ಮಣೆ ಹಾಕಲು ಹೀಗೆ ಮಾಡುತ್ತಿದೆ ಎಂದು ವಿಪಕ್ಷಗಳು ಆರೋಪಿಸಿತ್ತು. ಆಗಸ್ಟ್ 17ರಂದು ಈ ಜಾಹೀರಾತು ಪ್ರಕಟವಾಗಿತ್ತು. ಈ ಜಾಹೀರಾತು ಭಾರಿ ವಿವಾದವಾಗಿ ವಿಪಕ್ಷಗಳು ಸೇರಿದಂತೆ ದೇಶದಾದ್ಯಂತ ಆಕ್ರೋಶ ವ್ಯಕ್ತವಾಗಿತ್ತು. ಅಷ್ಟೇ ಅಲ್ಲದೆ, ಆಡಳಿತರೂಢ ಎನ್‌ಡಿಎಯ ಮಿತ್ರಪಕ್ಷವಾದ ಲೋಕ ಜನಶಕ್ತಿ ಪಕ್ಷ (ರಾಮ್ ವಿಲಾಸ್) ಕೂಡಾ ಇದನ್ನು ವಿರೋಧಿಸಿತು. ಸರ್ಕಾರದ ಈ ನಿರ್ಧಾರವು ಸಂವಿಧಾನವು ಖಾತರಿಪಡಿಸುವ ಮೀಸಲಾತಿ ವ್ಯವಸ್ಥೆಯನ್ನು ದುರ್ಬಲಗೊಳಿಸುತ್ತದೆ ಎಂದು ಆರೋಪಿಸಿತ್ತು. ಲ್ಯಾಟರಲ್ ಎಂಟ್ರಿ ಮೂಲಕ ಸಾರ್ವಜನಿಕ ಸೇವಕರನ್ನು ನೇಮಿಸಿಕೊಳ್ಳುವ ನಿರ್ಧಾರವು ದೇಶ ವಿರೋಧಿ ಹೆಜ್ಜೆ ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಹೇಳಿದ್ದರು. ತಳಮಟ್ಟದ ಸಮುದಾಯಗಳ ಮೀಸಲಾತಿಗಳನ್ನು ಈ ಮೂಲಕ ಬಹಿರಂಗವಾಗಿ ಕಸಿದುಕೊಳ್ಳಲಾಗುತ್ತಿದೆ ಎಂದು ಎಂದು ಅವರು ಆಕ್ರೋಶ ವ್ಯಕ್ತಪಡಿಸಿದ್ದರು.

ಕೇಂದ್ರ ಲೋಕಸೇವಾ ಆಯೋಗ ಅಡಿಯಲ್ಲಿ ಕೇಂದ್ರ ಸರ್ಕಾರದ ಪ್ರಮುಖ ಹುದ್ದೆಗಳಿಗೆ ಲ್ಯಾಟರಲ್ ಎಂಟ್ರಿ ಮೂಲಕ ನೇಮಿಸುವುದು ಸಂಪೂರ್ಣವಾಗಿ ತಪ್ಪು ಹೆಜ್ಜೆಯಾಗಿದೆ ಎಂದು ಲೋಕ ಜನಶಕ್ತಿ ಪಕ್ಷ ಹೇಳಿದೆ. ಪಕ್ಷದ ಅಧ್ಯಕ್ಷ ಮತ್ತು ಕೇಂದ್ರ ಸಚಿವ ಚಿರಾಗ್ ಪಾಸ್ವಾನ್ ಈ ಬಗ್ಗೆ ಪ್ರತಿಕ್ರಿಯಿಸಿ ತಮ್ಮ ಪಕ್ಷವು ಅಂತಹ ನೇಮಕಾತಿಗಳ ಪರವಾಗಿಲ್ಲ ಎಂದು ಹೇಳಿದ್ದರು. ತೀವ್ರ ವಿವಾದದ ನಂತರ ಆಗಸ್ಟ್ 20 ರಂದು, ಕೇಂದ್ರ ಲೋಕಸೇವಾ ಆಯೋಗವು ತನ್ನ ಜಾಹೀರಾತನ್ನು ಹಿಂತೆಗೆದುಕೊಂಡಿತು. ಕೇಂದ್ರ ಸಚಿವ ಜಿತೇಂದ್ರ ಸಿಂಗ್ ಅವರು ಆಯೋಗದ ಅಧ್ಯಕ್ಷೆ ಪ್ರೀತಿ ಸುದನ್ ಅವರಿಗೆ ಪತ್ರ ಬರೆದ ಕೆಲವೇ ಗಂಟೆಗಳ ನಂತರ ನೇಮಕಾತಿ ರದ್ದುಗೊಳಿಸುವಂತೆ ಒತ್ತಾಯಿಸಿದ್ದರು.

ಲ್ಯಾಟರಲ್ ಎಂಟ್ರಿ ಪ್ರಕ್ರಿಯೆಯು ನಮ್ಮ ಸಂವಿಧಾನದಲ್ಲಿ ಪ್ರತಿಪಾದಿಸಿರುವ ಸಮಾನತೆ ಮತ್ತು ಸಾಮಾಜಿಕ ನ್ಯಾಯದ ತತ್ವಗಳೊಂದಿಗೆ, ವಿಶೇಷವಾಗಿ ಮೀಸಲಾತಿಯ ನಿಯಮಗಳಿಗೆ ಅನುಗುಣವಾಗಿರಬೇಕು ಎಂದು ಪ್ರಧಾನಿ ನಂಬುತ್ತಾರೆ ಎಂದು ಜೀತೇಂದ್ರ ಸಿಂಗ್ ಪತ್ರದಲ್ಲಿ ತಿಳಿಸಿದ್ದರು. ಸಿವಿಲ್ ಸರ್ವೀಸ್ ಪರೀಕ್ಷೆಯ ಮೂಲಕ ಅಧಿಕಾರಿಗಳನ್ನು ನೇಮಕ ಮಾಡಿಕೊಳ್ಳಲಾಗಿದ್ದರೂ, ನಿರ್ದಿಷ್ಟ ಹುದ್ದೆಗಳಿಗಾಗಿ 2018 ರಿಂದ ಕೇಂದ್ರ ಸರ್ಕಾರದಲ್ಲಿ ಲ್ಯಾಟರಲ್ ಎಂಟ್ರಿ ಮೂಲಕ ವಿಷಯ ತಜ್ಞರನ್ನು ಖಾಸಗಿ ಸೇರಿದಂತೆ ಇತರ ಮೂಲಗಳಿಂದ ನೇಮಿಸಿಕೊಳ್ಳಲಾಗಿದೆ.

ಇಲ್ಲಿಯವರೆಗೆ, 63 ಲ್ಯಾಟರಲ್ ನೇಮಕಾತಿಗಳನ್ನು ಮಾಡಲಾಗಿದ್ದು, ಅದರಲ್ಲಿ 35 ನೇಮಕವನ್ನು ಖಾಸಗಿ ವಲಯದಿಂದ ಮಾಡಲಾಗಿವೆ ಎಂದು ಪಿಟಿಐ ವರದಿ ಮಾಡಿದೆ. ಪ್ರಸ್ತುತ, ಲ್ಯಾಟರಲ್ ಎಂಟ್ರಿ ಮೂಲಕ ನೇಮಕಗೊಂಡ 57 ಅಧಿಕಾರಿಗಳು ವಿವಿಧ ಸಚಿವಾಲಯಗಳು ಮತ್ತು ಇಲಾಖೆಗಳಲ್ಲಿ ಹುದ್ದೆಗಳನ್ನು ಹೊಂದಿದ್ದಾರೆ ಎಂದು ವರದಿಗಳಿವೆ.

# ಮುಡಾ ಹಗರಣದ ತನಿಖೆ ಅಂತಿಮ ಹಂತಕ್ಕೆ

**ಮೈಸೂರು, ನ.25:** ಮುಡಾ ಹಗರಣದ ತನಿಖೆ ಅಂತಿಮ ಹಂತಕ್ಕೆ ಬಂದಿರುವಾಗಲೇ ಸ್ಫೋಟಕ ಸಂಗತಿಯೊಂದು ಹೊರಬಿದ್ದಿದೆ. ಲೋಕಾಯುಕ್ತಕ್ಕೆ ಮಧ್ಯಂತರ ತನಿಖಾ ವರದಿ ಸಲ್ಲಿಸುವಂತೆ ಹೈಕೋರ್ಟ್ ಸೂಚಿಸಿದ್ದು, ಮಂಗಳವಾರ ತನಿಖಾ ವರದಿ ಸಲ್ಲಿಕೆಯಾಗಲಿದೆ. ಬಳಿಕ ಪ್ರಕರಣವನ್ನು ಸಿಬಿಐಗೆ ನೀಡಬೇಕೇ ಬೇಡವೇ ಎಂಬ ಬಗ್ಗೆ ಆದೇಶ ಹೊರಬೀಳುವ ಸಾಧ್ಯತೆ ಇದೆ. ಇದೇ ವೇಳೆ, ಲೋಕಾಯುಕ್ತ ದಾಳಿಯ ಮಾಹಿತಿಯನ್ನ ಅಧಿಕಾರಿಗಳೇ ಸೋರಿಕೆ ಮಾಡಿದರಾ ಎಂಬ ಅನುಮಾನಕ್ಕೆ ಸೃಷ್ಟಿಯಾಗಿದೆ. ಸರ್ಚ್ ವಾರಂಟ್ ಜಾರಿಯಾದ್ರೂ, ದಾಳಿ ನಡೆಸದೇ ಇರುವುದು ಅನುಮಾನಕ್ಕೆ ಕಾರಣವಾಗಿದೆ. ಮುಡಾ ಕಚೇರಿ ಮೇಲೆ ದಾಳಿ ನಡೆಸಲು ಬೆಂಗಳೂರು ಲೋಕಾಯುಕ್ತದಿಂದ ವಾರಂಟ್ ರೆಡಿಯಾಗಿತ್ತು. ಜೂನ್ 28ರಂದು ದಾಳಿ ನಡೆಸಲು ಮೈಸೂರು ಲೋಕಾಯುಕ್ತ ಡಿವೈಎಸ್ಪಿ ಮಾಲ್ತೇಶ್ ಹೆಸರಿಗೆ ಸರ್ಚ್ ವಾರಂಟ್ ನೀಡಲಾಗಿತ್ತು. ಆದರೆ, ಜೂನ್ 29ರಂದು ಮುಡಾ ಕಚೇರಿಗೆ ಅಧಿಕಾರಿಗಳ ಎಂಟ್ರಿಯಾಗಿದೆ. ನಗಾರಭಿವೃದ್ಧಿ ಇಲಾಖೆಯ ಎಐಎಸ್ ಅಧಿಕಾರಿಗಳು ಬಂದು 140 ದಾಖಲೆಗಳನ್ನು ತೆಗೆದುಕೊಂಡು ಹೋಗಿದ್ದಾರೆ ಎಂಬ ಆರೋಪವಿದೆ. ಈ ಬಗ್ಗೆ ಬೆಂಗಳೂರು ಲೋಕಾಯುಕ್ತದ ಟಿಪ್ಪಣಿಯಲ್ಲಿ ಉಲ್ಲೇಖವಾಗಿದೆ.ಲೋಕಾಯುಕ್ತ ತನಿಖೆ ಬಗ್ಗೆ ಮೊದಲಿನಿಂದಲೂ ಅನುಮಾನದಲ್ಲಿರುವ ದೂರುದಾರ ಸ್ನೇಹಮಯಿ ಕೃಷ್ಣ, ಸರ್ಚ್ ವಾರಂಟ್ ಬಗ್ಗೆ ಪ್ರತಿಕ್ರಿಯಿಸಿದ್ದಾರೆ. ಮಾಲ್ತೇಶ್ ಹೆಸರಿಗೆ ಜಾರಿಯಾಗಿದ್ದ ಸರ್ಚ್ ವಾರಂಟ್ ಕಾಪಿಯನ್ನು ಅಂದಿನ ಎಸ್ಪಿ ಸಜಿತ್, ಮಾಲ್ತೇಶ್ಗೆ ಕೊಟ್ಟಿರಲಿಲ್ಲ ಎಂದಿದ್ದಾರೆ. ಹಾಗೆಯೇ ದಾಳಿಗೂ ಮುನ್ನ ಭೈರತಿ ಸುರೇಶ್‌ಗೆ ಮಾಹಿತಿ ನೀಡಿದ್ದಾರೆ. ಭೈರತಿ ಸುರೇಶ್ ದಾಖಲೆ ತೆಗೆದುಕೊಂಡು ಹೋಗಿದ್ದಾರೆ ಎಂದು ಗಂಭೀರ ಆರೋಪ ಮಾಡಿದ್ದಾರೆ.ಬಿಜೆಪಿ ಶಾಸಕ ಶ್ರೀವತ್ಸ ಕೂಡಾ ಏಕಾಏಕಿ ಭೈರತಿ ಸುರೇಶ್ ಯಾಕೆ ಬಂದಿದ್ದರು? ಇದು ಕಳ್ಳತನ ಅಲ್ಲವೇ ಎಂದು ಪ್ರಶ್ನಿಸಿದ್ದಾರೆ.ಈ ಕುರಿತು ಪ್ರತಿಕ್ರಿಯಿಸಿದ ಡಿಸಿಎಂ ಡಿ.ಕೆ ಶಿವಕುಮಾರ್, ಪ್ರತಿ ಫೈಲ್ಗಳ ಲೆಕ್ಕಾಚಾರ ಇರುತ್ತದೆ. ಅದ್ಹೇಗೆ ಫೈಲ್ ತೆಗೆದುಕೊಂಡು ಹೋಗಲು ಸಾಧ್ಯ ಎಂದು ಪ್ರಶ್ನಿಸಿದ್ದಾರೆ.ಸದ್ಯ ಲೋಕಾಯುಕ್ತ ಪೊಲೀಸರು ಮಧ್ಯಂತರ ತನಿಖಾ ವರದಿ ಸಲ್ಲಿಸಲು ಸಜ್ಜಾಗಿದ್ದಾರೆ. ಇದೇ ವೇಳೆಯಲ್ಲಿ ಲೋಕಾಯುಕ್ತ ತನಿಖೆ ಬಗ್ಗೆಯೇ ಅನುಮಾನ ಮೂಡುವಂತಹ ಬೆಳವಣಿಗೆಗಳು ನಡೆದಿದ್ದು, ನಾಳೆ ಪ್ರಕರಣವನ್ನ ಸಿಬಿಐ ತನಿಖೆಗೆ ನೀಡಲು ಇದುವೇ ಆಧಾರವಾಗುತ್ತದೆಯಾ ಎಂಬುದನ್ನು ಕಾದು ನೋಡಬೇಕಿದೆ.

# ನಾಳೆ ಶಿಂಧೆ ರಾಜೀನಾಮೆ- ಮಹಾ ಮುಂದಿನ ಸಿಎಂ ಯಾರು..?

**ಮುಂಬೈ,ನ.25:** ಮಹಾರಾಷ್ಟ್ರ ಮುಖ್ಯಮಂತ್ರಿ ಏಕನಾಥ್ ಶಿಂಧೆ ಅವರು ಮಂಗಳವಾರ ರಾಜೀನಾಮೆ ನೀಡಲಿದ್ದಾರೆ ಎಂದು ಹೇಳಲಾಗುತ್ತಿದೆ. ಮಹಾರಾಷ್ಟ್ರದಲ್ಲಿ ಇದೀಗ ಮುಂದಿನ ಮುಖ್ಯಮಂತ್ರಿ ಯಾರು ಎನ್ನುವ ಬಗ್ಗೆ ಚರ್ಚೆ ಜೋರಾಗಿದೆ. ಮಹಾರಾಷ್ಟ್ರದ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಹಾಗೂ ಮಹಾ ವಿಕಾಸ್ ಅಘಾಡಿ ಮೈತ್ರಿಕೂಟವು ಧೂಳಿಪಟವಾಗಿದ್ದು, ಮಹಾಯುತಿ ಮತ್ತೆ ಸರ್ಕಾರ ರಚನೆ ಮಾಡಲು ಸಿದ್ಧತೆ ಜೋರಾಗಿ ನಡೆಯುತ್ತದೆ. ಮಾಜಿ ಮುಖ್ಯಮಂತ್ರಿ ಹಾಗೂ ಹಾಲಿ ಉಪ ಮುಖ್ಯಮಂತ್ರಿ ದೇವೇಂದ್ರ ಫಡ್ನವಿಸ್ ಅವರೇ ಈ ಬಾರಿ ಮುಖ್ಯಮಂತ್ರಿಯಾಗಿ ಆಯ್ಕೆಯಾಗಲಿದ್ದಾರೆ ಎಂದು ಹೇಳಲಾಗುತ್ತಿದೆ. ಸದ್ಯ ಮುಖ್ಯಮಂತ್ರಿ ಕದನ ತೀವ್ರವಾಗುತ್ತಿದ್ದಂತೆಯೇ ದೇವೇಂದ್ರ ಫಡ್ನವೀಸ್ ದೆಹಲಿಗೆ ಪ್ರಯಾಣ ಬೆಳೆಸಿದ್ದಾರೆ ಎನ್ನುವ ಮಾಹಿತಿ ಕೂಡ ಲಭ್ಯವಾಗಿದೆ. ದೇವೇಂದ್ರ ಫಡ್ನವಿಸ್ ಅವರು ನಾವು ಮುಖ್ಯಮಂತ್ರಿ ಸಮಸ್ಯೆಯನ್ನು ಶೀಘ್ರ ಪರಿಹರಿಸಿಕೊಳ್ಳಲಿದ್ದೇವೆ ಎಂದು ಚುನಾವಣೆ ಫಲಿತಾಂಶದ ನಂತರ ಮಾತನಾಡಿದ್ದರು. ಇನ್ನು ಮಹಾರಾಷ್ಟ್ರದಲ್ಲಿ ಸಂಕಷ್ಟದ ಸಮಯದಲ್ಲೂ ಅವರು ಬಿಜೆಪಿಯನ್ನು ಮುನ್ನಡೆಸಿದ್ದಾರೆ.

# ಇಂದಿನಿಂದ ಧರ್ಮಸ್ಥಳದಲ್ಲಿ ಲಕ್ಷದೀಪೋತ್ಸವ ಸಂಭ್ರಮ

**ಉಜಿರೆ,ನ.25:** ಎಂಟು ಶತಮಾನಗಳ ಭವ್ಯ ಇತಿಹಾಸ ಮತ್ತು ಪರಂಪರೆಯನ್ನು ಹೊಂದಿರುವ ನಾಡಿನ ಪವಿತ್ರ ಕ್ಷೇತ್ರ ಧರ್ಮಸ್ಥಳದಲ್ಲಿ ಕಾರ್ತಿಕ ಮಾಸದಲ್ಲಿ ನಡೆಯುವ ಲಕ್ಷದೀಪೋತ್ಸವ ಕಾರ್ಯಕ್ರಮಗಳು ನ.26ರಿಂದ 30ರ ವರೆಗೆ ನಡೆಯುತ್ತವೆ.

ಧರ್ಮಸ್ಥಳವು ಸರ್ವಧರ್ಮಗಳ ನೆಲೆವೀಡು. ಸತ್ಯ, ಧರ್ಮ, ನ್ಯಾಯ, ನೀತಿ ನೆಲೆನಿಂತ ಪುಣ್ಯಭೂಮಿ. ಅನ್ನದಾನ, ವಿದ್ಯಾದಾನ, ಅಭಯದಾನ ಮತ್ತು ಔಷಧಿದಾನ ಇಲ್ಲಿ ನಿತ್ಯೋತ್ಸವ. ಇಲ್ಲಿನ ವಿಶಿಷ್ಟವಾದ ನ್ಯಾಯದಾನ, ಆಣೆಮಾತು ತೀರ್ಮಾನದಿಂದ ಅನೇಕ ಕುಟುಂಬಗಳ ಸಾಂಸಾರಿಕ, ವ್ಯವಹಾರ ಸಮಸ್ಯೆಗಳು ಸುಲಲಿತವಾಗಿ, ಸೌಹಾರ್ದಯುತವಾಗಿ ಪರಿಹಾರವಾಗಿ ಎಲರೂ ಪ್ರೀತಿ-ವಿಶ್ವಾಸದಿಂದ ಸುಖ-ಶಾಂತಿಯ ಜೀವನ ನಡೆಸುತ್ತಿದ್ದಾರೆ.



ಇಂದು ಮಂಗಳವಾರ ರಾತ್ರಿ ಹೊಸಕಟ್ಟೆ ಉತ್ಸವದೊಂದಿಗೆ ಲಕ್ಷದೀಪೋತ್ಸವ ಕಾರ್ಯಕ್ರಮಗಳು ಪ್ರಾರಂಭಗೊಳ್ಳುತ್ತವೆ.

ಮಂಗಳವಾರ ಅಪರಾಹ್ನ ಮೂರು ಗಂಟೆಗೆ ಇಪ್ಪತ್ತೈದು ಸಾವಿರಕ್ಕೂ ಮಿಕ್ಕಿ ಭಕ್ತರು, ಅಭಿಮಾನಿಗಳು ಉಜಿರೆಯಿಂದ ಹೊರಟು ಧರ್ಮಸ್ಥಳಕ್ಕೆ ಭಜನೆ, ದೇವರ ನಾಮಸ್ಮರಣೆಯೊಂದಿಗೆ ಪಾದಯಾತ್ರೆಯಲ್ಲಿ ಬರುವರು. ಶಾಸಕ ಹರೀಶ್ ಪೂಂಜ ಮತ್ತು ವಿಧಾನಪರಿಷತ್ ಸದಸ್ಯ ಕೆ. ಪ್ರತಾಪಸಿಂಹ ನಾಯಕ್ ಪಾದಯಾತ್ರೆಯಲ್ಲಿ ಭಾಗವಹಿಸುವರು. ಬಳಿಕ ಸಂಜೆ 7 ಗಂಟೆಗೆ ಹೆಗ್ಗಡೆಯವರು ಅಮೃತವರ್ಷಿಣಿ ಸಭಾಭವನದಲ್ಲಿ ಭಕ್ತರಿಗೆ ಮಾರ್ಗದರ್ಶನ ನೀಡುವರು.

ಧರ್ಮಸ್ಥಳದಲ್ಲಿ ದೇವಸ್ಥಾನ, ಬಸದಿ, ವಸತಿಛತ್ರಗಳು, ಪ್ರವೇಶದ್ವಾರ, ಉದ್ಯಾನ ಹಾಗೂ ಎಲ್ಲಾ ಕಟ್ಟಡಗಳನ್ನು ಆಕರ್ಷಕ ವಿನ್ಯಾಸದ ವಿದ್ಯುದ್ದೀಪಗಳಿಂದ ಅಲಂಕರಿಸಲಾಗಿದೆ.

ನೇತ್ರಾವತಿ ಸ್ನಾನಘಟ್ಟದಿಂದ ಧರ್ಮಸ್ಥಳದ ವರೆಗೆ ರಸ್ತೆಯ ಇಕ್ಕೆಲಗಳಲ್ಲಿ ಆಕರ್ಷಕ ವಿದ್ಯುದ್ದೀಪಗಳು ಹಾಗೂ ಸ್ವಾಗತ ಫಲಕಗಳನ್ನು ಹಾಕಲಾಗಿದೆ.

ನ.26ರಿಂದ 30ರ ವರೆಗೆ ಪ್ರೌಢಶಾಲಾ ಆವರಣದಲ್ಲಿ ಮುನ್ನೂರಕ್ಕೂ ಮಿಕ್ಕಿ ಮಳಿಗೆಗಳಿರುವ ರಾಜ್ಯಮಟ್ಟದ ಆಕರ್ಷಕ ವಸ್ತುಪ್ರದರ್ಶನ ಆಯೋಜಿಸಿದ್ದು, ಎಲ್ಲರಿಗೂ ಪ್ರವೇಶ ಉಚಿತವಾಗಿದೆ.

ಪ್ರತಿದಿನ ಸಂಜೆ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಮಂಗಳವಾರ ರಾತ್ರಿ ಹೊಸಕಟ್ಟೆ ಉತ್ಸವ, ಬುಧವಾರ ರಾತ್ರಿ ಕೆರೆಕಟ್ಟೆ ಉತ್ಸವ, ಗುರುವಾರ ರಾತ್ರಿ ಕಂಚಿಮಾರುಕಟ್ಟೆ ಉತ್ಸವ ಮತ್ತು ಶನಿವಾರ ರಾತ್ರಿ ಗೌರಿಮಾರುಕಟ್ಟೆ ಉತ್ಸವ (ಲಕ್ಷದೀಪೋತ್ಸವ) ನಡೆಯುತ್ತದೆ. ಪ್ರತಿ ವರ್ಷದಂತೆ ಲಕ್ಷದೀಪೋತ್ಸವದ ದಿನ ಶನಿವಾರ ಲಕ್ಷಕ್ಕೂ ಅಧಿಕ ಮಂದಿ ಭಕ್ತರು ಧರ್ಮಸ್ಥಳಕ್ಕೆ ಬರುತ್ತಾರೆ.

ಕೆ.ಎಸ್‌ಆರ್‌ಟಿಸಿ ನಾಡಿನ ವಿವಿಧ ಊರುಗಳಿಂದ ವಿಶೇಷ ಬಸ್ ಸೌಲಭ್ಯ ಕಲ್ಪಿಸಿದೆ. ಹಲವು ಮಂದಿ ಭಕ್ತರು ಪಾದಯಾತ್ರೆಯಲ್ಲಿ ಬರುತ್ತಾರೆ.

# ಹೆಗ್ಗಡೆಯವರ ತ್ರಿವಿಧ ದಾಸೋಹ ಶ್ರೇಷ್ಠ ಡಾ.ಸದಾನಂದ ಪೆರ್ಲ ಬಣ್ಣನೆ



**ಕಲಬುರಗಿ,ನ.25:** ಧರ್ಮಸ್ಥಳದ ಧರ್ಮಾಧಿಕಾರಿ ಡಾ. ಡಿ.ವೀರೇಂದ್ರ ಹೆಗ್ಗಡೆಯವರು ಶರಣ ಪರಂಪರೆಯ ಮಾದರಿಯ ತ್ರಿವಿಧ ದಾಸೋಹವನ್ನು ಅನುಷ್ಠಾನಗೊಳಿಸಿ ಆದರ್ಶ ಪ್ರಾಯರಾಗಿದ್ದಾರೆ ಎಂದು ಆಕಾಶವಾಣಿಯ ವಿಶ್ರಾಂತ ಕಾರ್ಯಕ್ರಮ ನಿರ್ವಹಣಾಧಿಕಾರಿ ಡಾ. ಸದಾನಂದ ಪೆರ್ಲ ಅಭಿಪ್ರಾಯಪಟ್ಟರು.

ಕಲಬುರಗಿಯಲ್ಲಿ ನ.25 ರಂದು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ ಟ್ರಸ್ಟ್ ನ ಕಮಲಾಪುರ ಮತ್ತು ಕಲಬುರಗಿ ವತಿಯಿಂದ ಧರ್ಮಾಧಿಕಾರಿ ಡಾ.ಡಿ ವೀರೇಂದ್ರ ಹೆಗ್ಗಡೆಯವರ 76ನೇ ಜನ್ಮದಿನ ಪ್ರಯುಕ್ತ ಕಮಲಾಪುರ ಯೋಜನಾ ಕಚೇರಿಯಲ್ಲಿ ಹಮ್ಮಿಕೊಂಡ ರಕ್ತದಾನ ಶಿಬಿರವನ್ನು ದೀಪ ಬೆಳಗಿಸಿ ಉದ್ಘಾಟನೆ ಮಾಡಿ ಮಾತನಾಡುತ್ತ ಆರೋಗ್ಯ, ಶಿಕ್ಷಣ ಮತ್ತು ಧಾರ್ಮಿಕ ಈ ತ್ರಿವಿಧ ದಾಸೋಹಗಳನ್ನು ಕೈಗೊಂಡು ಸಮಾಜದಲ್ಲಿ ಕ್ರಾಂತಿಕಾರಿ ಪರಿವರ್ತನೆಗೆ ಕಾರಣರಾದ ಹೆಗಡೆಯವರ ಸಮಾಜಮುಖಿ ಬದುಕು ಅತ್ಯಂತ ಶ್ರೇಷ್ಠವಾದದ್ದು. ನಾಡಿನ ಉದ್ದಗಲಕ್ಕೂ ಗ್ರಾಮಾಭಿವೃದ್ಧಿ ಯೋಜನೆಯು ವಿವಿಧ ಸಮಾಜ ಪರ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವುದರ ಮೂಲಕ ಸರಕಾರಕ್ಕೆ ಸಮಾನಾಂತರವಾಗಿ ಪ್ರಗತಿಗೆ ಕೈ ಜೋಡಿಸಿರುವುದು ಪ್ರಶಂಸನಾ ವಿಚಾರ ವಾಗಿದೆ. ಮಾನವ ಕಲ್ಯಾಣದ ಏಳ್ಗೆಯೆ ಮುಖ್ಯ ಧ್ಯೇಯವಾಗಿ ಇರಿಸಿಕೊಂಡು ಹೆಗ್ಗಡೆಯವರು ಅನುಷ್ಠಾನಗೊಳಿಸಿದ ಕಾರ್ಯಕ್ರಮಗಳನ್ನು ಉತ್ತರ ಕರ್ನಾಟಕದಲ್ಲಿ ಮತ್ತು ಕಲ್ಯಾಣ ಕರ್ನಾಟಕ ಭಾಗದಲ್ಲಿ ಜಾರಿ ಮಾಡುವುದರ ಮೂಲಕ ಡಾ. ಡಿ ವೀರೇಂದ್ರ ಹೆಗಡೆಯವರು ಈ ಭಾಗದ ಅಭ್ಯುದಯಕ್ಕೆ ಕೂಡಾ ದೊಡ್ಡ ಕೊಡುಗೆ ನೀಡಿದ್ದಾರೆ. ಜನ್ಮದಿನವನ್ನು ಹೆಗ್ಗಡೆಯವರ ಅಭಿಮಾನಿಗಳು ಮತ್ತು ಯೋಜನೆಯ ಕಾರ್ಯಕರ್ತರು ರಕ್ತದಾನ ಮಾಡುವ ವಿಧಾಯಕ ಕಾರ್ಯಕ್ರಮದ ಮೂಲಕ ಹೆಗ್ಗಡೆಯವರ 76 ನೇ ಜನ್ಮ ದಿನವನ್ನು ಅರ್ಥಪೂರ್ಣವಾಗಿ ಆಚರಿಸಿದ್ದಕ್ಕೆ ಎಲ್ಲರಿಗೂ ಅಭಿನಂದನೆ ಎಂದು ಡಾ. ಪೆರ್ಲ ಹೇಳಿದರು.

ಗ್ರಾಮಾಭಿವೃದ್ಧಿ ಯೋಜನೆಯ ಜಿಲ್ಲಾ ನಿರ್ದೇಶಕರರಾದ ಗಣಪತಿ ಮಾಳಂಜಿ ಮಾತನಾಡಿ ಹೆಗ್ಗಡೆಯವರ ಸಮಾಜಮುಖಿ ಕಾರ್ಯಗಳಿಂದ ನಾಡಿನಲ್ಲಿ ಪ್ರಗತಿ ಸಾಧಿಸಲಾಗುತ್ತಿದೆ ಆರ್ಥಿಕ ಸಾಮಾಜಿಕ ಸ್ವಾವಲಂಬನೆಯ ಬದುಕನ್ನು ಕಟ್ಟಿಕೊಡಲು ಶ್ರೀ ಕ್ಷೇತ್ರದ ಕಾರ್ಯಕ್ರಮಗಳು ಸಮಾಜಕ್ಕೆ ಪೂರಕವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಜನಜಾಗೃತಿ ವೇದಿಕೆಯ ಜಿಲ್ಲಾ ಉಪಾಧ್ಯಕ್ಷ ಅನಿಲ್ ಕುಮಾರ ಡಾಂಗೆ, ರವಿ ಕುಮಾರ ನೀಲೂರ ಜಿಲ್ಲಾ ಜನಜಾಗೃತಿ ಸದಸ್ಯರು ಜಿಮ್ಸ್ ಆಸ್ಪತ್ರೆಯ ರಕ್ತ ನಿಧಿ ಕೇಂದ್ರದ ಕೌನ್ಸಿಲರ್ ಮಲ್ಲಿಕಾರ್ಜುನ, ಶಬ್ಬಿರ್ ಕಮಲಾಪುರ, ತಾಲೂಕು ಯೋಜನಾಧಿಕಾರಿಗಳಾದ ಕಲ್ಲನಗೌಡ ಎಸ್, ರಿಯಾಜ್ ಅತ್ತಾರ್ , ಮೇಲ್ವಿಚಾರಕ ಶ್ರೇಣಿ ಸಿಬ್ಬಂದಿಗಳು, ಸೇವಾಪ್ರತಿನಿಧಿಗಳು ಉಪಸ್ಥಿತರಿದ್ದರು.

### ೩೦ ಯುನಿಟ್ ರಕ್ತ ಸಂಗ್ರಹ

ಕಲಬುರಗಿಯ ಜಿಮ್ಸ್ ಆಸ್ಪತ್ರೆಯ ರಕ್ತ ನಿಧಿ ಕೇಂದ್ರಕ್ಕೆ ಗ್ರಾಮಾಭಿವೃದ್ಧಿ ಯೋಜನೆಯ ಕಾರ್ಯಕರ್ತರು 30 ಯೂನಿಟ್ ರಕ್ತದಾನ ಮಾಡಿ ಧರ್ಮಸ್ಥಳ ಧರ್ಮಾಧಿಕಾರಿ ಡಾ. ಡಿ. ವೀರೇಂದ್ರ ಹೆಗಡೆಯವರ ಜನುಮ ದಿನವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

# ಕಾಂಗ್ರೆಸ್ ನಾಯಕರು ವಕ್ಫ್ ಜಾಗ ಮಾರಾಟ ಮಾಡಿದ್ದು ವರದಿಯಲ್ಲಿ ಬೆಳಕಿಗೆ: ಅಶೋಕ್ ತಿರುಗೇಟು

**ಬೆಂಗಳೂರು,ನ.25:** ಬಿಜೆಪಿ ಸರ್ಕಾರದ ಅವಧಿಯಲ್ಲಿ ರೈತರಿಗೆ ನೋಟೀಸ್ ನೀಡಿದ್ದ ಅಧಿಕಾರಿಗಳ ವಿರುದ್ಧವು ಕ್ರಮ ಕೈಗೊಳ್ಳಲಿ ಎಂದು ಪ್ರತಿಪಕ್ಷದ ನಾಯಕ ಆರ್.ಅಶೋಕ್ ಆಗ್ರಹಿಸಿದ್ದಾರೆ. ನಗರದಲ್ಲಿ ಸೋಮವಾರ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಕಾಂಗ್ರೆಸ್ ನಾಯಕರು ವಕ್ಫ್ ಮಂಡಳಿಯ ನಡೆದಿರುವ ಅಕ್ರಮವನ್ನು ಒಪ್ಪಿಕೊಳ್ಳಲು ಸಿದ್ಧರಿಲ್ಲ. ಈಗ ಕಾಂಗ್ರೆಸ್ ರೈತರಿಗೆ ನೋಟಿಸ್ ಕೊಟ್ಟಿದೆ ಎಂದು ಕಿಡಿಕಾರಿದರು. ನಮ್ಮ ಅವಧಿಯಲ್ಲಿ ತಪ್ಪಾಗಿದ್ದರೂ ಕ್ರಮ ಕೈಗೊಳ್ಳಲಿ. ಕಾಂಗ್ರೆಸ್ ಅವಧಿಯಲ್ಲಿ ತಪ್ಪಾಗಿದ್ದರೂ ಕ್ರಮ ತೆಗೆದುಕೊಳ್ಳಲಿ. ನಾವೇನು ಅಧಿಕಾರಿಗಳ ರಕ್ಷಣೆ ಮಾಡುತ್ತಿಲ್ಲ. ನಮ್ಮ ಅವಧಿಯಲ್ಲಿ ಅಥವಾ ಕಾಂಗ್ರೆಸ್ ಅವಧಿಯಲ್ಲಿ ಅಧಿಕಾರಿಗಳು ತಪ್ಪಾಗಿ ವಕ್ಫ್ ನೋಟಿಸ್ ಕೊಟ್ಟಿದ್ದರೆ ಕ್ರಮ ಆಗಲಿ. ಈಗ ಪ್ರಶ್ನೆಯಾಗಿರುವುದು ರೈತರನ್ನು ಒಕ್ಕಲೆಬ್ಬಿಸುವ ಪ್ರಯತ್ನ ನಡೆಯುತ್ತಿದೆ. ಇದು ತಪ್ಪು. ಕಾಂಗ್ರೆಸ್ ಅವಧಿಯಲ್ಲಿ ರೈತರಿಗೆ ನೋಟಿಸ್ ಕೊಡುತ್ತಿರುವುದು ಒಳ್ಳೆಯ ಬೆಳವಣಿಗೆ ಅಲ್ಲ. ಮಾನ್ಪಾಡಿ ವರದಿಯಲ್ಲಿ ಕಾಂಗ್ರೆಸ್ ನಾಯಕರು ಒತ್ತುವರಿ ಮಾಡಿಕೊಂಡಿದ್ದರು. ಅದಕ್ಕೆ ನೋಟಿಸ್ ಕೊಟ್ಟಿದ್ದೇವೆ. ನಮ್ಮ ಕಾಲದಲ್ಲಿ ರೈತರಿಗೆ ನೋಟಿಸ್ ಕೊಟ್ಟಿದ್ದರೆ ಅದೂ ತಪ್ಪು ಎಂದರು. ಮುಡಾ ಕಚೇರಿಯಿಂದ ಐಎಎಸ್ ಅಧಿಕಾರಿ 144 ಕಡತಗಳನ್ನು ತೆಗೆದುಕೊಂಡು ಹೋಗಿರುವ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು, ಈ ವಿಚಾರ ನಮಗೆ ದಿಗ್ಭ್ರಮೆ ಮೂಡಿಸಿದೆ. ಸಚಿವ ಭೈರತಿ ಸುರೇಶ್ ಅವರು ಎಷ್ಟು ಫೈಲ್ಗಳನ್ನು ತೆಗೆದುಕೊಂಡು ಹೋಗಿದ್ದಾರೆ ಗೊತ್ತಿಲ್ಲ. ಅದಕ್ಕೂ ಮುಂಚೆ ಐಎಎಸ್ ಅಧಿಕಾರಿಯೊಬ್ಬರು ಮುಡಾ ಕಡತಗಳನ್ನು ತೆಗೆದುಕೊಂಡು ಹೋಗಿದ್ದಾರೆ ಅಂದರೆ ರಾಜ್ಯದಲ್ಲಿ ಆಡಳಿತ ಯಾವ ಮಟ್ಟಕ್ಕೆ ಬಂದಿದೆ, ಅಧಿಕಾರಿಗಳೇ ಮುಡಾ ಅಕ್ರಮದಲ್ಲಿ ರಕ್ಷಣೆಗೆ ಮುಂದಾಗಿರುವುದು ಸರಿಯಲ್ಲ. ಈ ಪ್ರಕರಣ ಸಿಬಿಐಗೆ ತನಿಖೆಗೆ ಕೊಡಬೇಕು ಎಂದು ಒತ್ತಾಯಿಸಿದರು. ಮುಡಾ ಅಕ್ರಮ ಈ ರಾಜ್ಯ ಕಂಡ ದೊಡ್ಡ ಹಗರಣ. ಸಿಎಂ ಸಿದ್ದರಾಮಯ್ಯ, ಮತ್ತವರ ಕುಟುಂಬ ಶಾಮೀಲಾಗಿದ್ದಾರೆ. 14 ಸೈಟುಗಳಷ್ಟೇ ಅಲ್ಲ ಬಡವರ ಸೈಟುಗಳನ್ನು ಕೂಡ ಲೂಟಿ ಮಾಡಲಾಗಿದೆ. ಮುಡಾದಲ್ಲಿ 3-4 ಸಾವಿರ ಕೋಟಿ ರೂ. ಅಕ್ರಮ ಆಗಿದೆ. ಇದನ್ನು ಸಿಬಿಐ ತನಿಖೆಗೆ ಒಳಪಡಿಸಿದರೆ ಆದರೆ ಇನ್ನಷ್ಟು ಹಗರಣಗಳು ಹೊರಗೆ ಬರುತ್ತದೆ ಎಂದರು. ಇನ್ನೂ ಉಪಚುನಾವಣಾ ಫಲಿತಾಂಶ ವಿಚಾರದ ಬಗ್ಗೆ ಕೇಳಿದ ಪ್ರಶ್ನೆಗೆ, ಫಲಿತಾಂಶದಿಂದ ನಮ್ಮ ಮೇಲೆ, ಪಕ್ಷದ ಮೇಲೆ ಯಾವುದೇ ಪರಿಣಾಮ ಬೀರಲ್ಲ. ಹಿಂದೆ ನಮ್ಮ ಸರ್ಕಾರ ಇದ್ದಾಗ 18 ಉಪಚುನಾವಣೆ ಗೆದ್ದಿದ್ದೆವು. ನಂತರ ಸಾರ್ವತ್ರಿಕ ಚುನಾವಣೆ ಸೋತಿದ್ದೆವು. ಈ ಫಲಿತಾಂಶ ಕಾಂಗ್ರೆಸ್ ಅಕ್ರಮಗಳಿಗೆ ಕ್ಲೀನ್‌ಚಿಟ್ ಅಲ್ಲ. ಅದೇ ಬೇರೆ ಇದೇ ಬೇರೆ, ಉಪಚುನಾವಣೆ ಸ್ಥಳೀಯ ವಿಚಾರಗಳ ಮೇಲೆ ನಡೆದಿದೆ. ಇದು ರಾಜ್ಯದ ತೀರ್ಪಲ್ಲ. ಸರ್ಕಾರದ ವಿರುದ್ಧ ನಮ್ಮ ಹೋರಾಟ ನಿಲ್ಲಲ್ಲ ಎಂದು ಹೇಳಿದರು. ಮುಸ್ಲಿಂ ಮತಗಳು ಬರದೇ ಸೋಲಾಯ್ತು ಎಂಬ ನಿಖಿಲ್ ಹೇಳಿಕೆ ವಿಚಾರವಾಗಿ, ನಿಖಿಲ್ ಸತ್ಯವನ್ನೇ ಹೇಳಿದ್ದಾರೆ. ಬೂತ್‌ಗಳಲ್ಲಿ ಬೆರಳೆಣಿಕೆಯಷ್ಟು ಮುಸ್ಲಿಂ ಮತಗಳು ಜೆಡಿಎಸ್‌ಗೆ ಬಂದಿದೆ. ಆ ಸಮುದಾಯ ನಿಖಿಲ್ ಅವರನ್ನು ಸೋಲಿಸಲು ಮತ ಹಾಕಿಲ್ಲ. ಉಳಿದ ಸಮುದಾಯಗಳೂ ಒಟ್ಟಾಗಿ ಮತ ಚಲಾಯಿಸಿಲ್ಲ. ಮಹಾರಾಷ್ಟ್ರದಲ್ಲಿ ಆದಂತೆ ಒಟ್ಟಾಗಿ ಆಗಲಿಲ್ಲ. ಇಲ್ಲಿ ಮುಸ್ಲಿಂ ಸಮುದಾಯ ಒಟ್ಟಾಗಿ ಉಳಿದ ಸಮುದಾಯ ಒಟ್ಟಾಗಲಿಲ್ಲ ಎಂದು ಹೇಳಿದರು.



ಅನ್ವರ್ ಮಾಣಿಪ್ಪಾಡಿ ಸಮಿತಿಯ ವರದಿಯ ಆಧಾರದ ಮೇಲೆ ವಕ್ಫ್ ಜಮೀನು ಕಬಳಿಸಿದವರಿಗೆ ಬಿಜೆಪಿ ಸರ್ಕಾರ ನೋಟಿಸ್ ನೀಡಿತ್ತು. ಒಂದು ವೇಳೆ ತಪ್ಪಾಗಿ ರೈತರಿಗೆ ನೋಟಿಸ್ ನೀಡಿದ್ದರೆ ಅಂತಹ ಅಧಿಕಾರಿಗಳ ವಿರುದ್ಧ ಈಗಿನ ಕಾಂಗ್ರೆಸ್ ಸರ್ಕಾರ ಕ್ರಮ ಕೈಗೊಳ್ಳಲಿ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಹೇಳಿದರು.


**ದಿಕ್ಕು ತಪ್ಪಿಸುವ ಸರ್ಕಾರ:** ವಕ್ಫ್ ವಿಚಾರದಲ್ಲಿ ಕಾಂಗ್ರೆಸ್ ಸರ್ಕಾರ ಜನರ ದಿಕ್ಕು ತಪ್ಪಿಸುತ್ತಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆಕ್ರೋಶ ಹೊರಹಾಕಿದ್ದಾರೆ. ಈ ಕುರಿತು ಅವರು ಟ್ವೀಟ್ ಮಾಡಿದ್ದಾರೆ. ವಕ್ಫ್ ವಿಚಾರ ಮೊದಲ ಪ್ರಸ್ತಾಪವಾದಾಗ ಸರ್ಕಾರ ಯಾರಿಗೂ ನೋಟೀಸು ಕಳಿಸಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸುಳ್ಳು ಹೇಳಿದ್ದರು. ನಂತರ ವಿಜಯಪುರ ಜಿಲ್ಲೆಯಲ್ಲಿ ರೈತರು ಸಿಡಿದ್ದೆದ್ದಾಗ, ನೋಟಿಸು ವಾಪಸ್ಸು ಪಡೆದು, ಈ ಪ್ರಕ್ರಿಯೆ ನಿಲ್ಲಿಸುತ್ತೇವೆ ಎಂದು ಮತ್ತೊಂದು ಸುಳ್ಳು ಹೇಳಿದ್ದರು. ಆದರೆ ರೈತರಿಗೆ, ಮಠ-ಮಂದಿರಗಳಿಗೆ ನೋಟಿಸ್ ಕಳಿಸುವುದು, ರಾತ್ರೋರಾತ್ರಿ ತರಾತುರಿಯಲ್ಲಿ ದಾಖಲೆಗಳನ್ನು ತಿದ್ದುವುದು ಮಾತ್ರ ನಿಲ್ಲಲೇ ಇಲ್ಲ. ಜೊತೆಗೆ ಸಚಿವ ಜಮೀರ್ ಅಹ್ಮದ್ ಖಾನ್ ಅವರು ಇದೆಲ್ಲಾ ಮುಖ್ಯಮಂತ್ರಿಗಳ ಸೂಚನೆಯ ಮೇರೆಗೆ ನಡೆಯುತ್ತಿದೆ ಎಂದು ಹೇಳುವ ವಿಡಿಯೋ ಬಹಿರಂಗ ಆದಮೇಲೆ ಸುಳ್ಳು ಸಂಪೂರ್ಣ ಬಯಲಾಯಿತು. ಗುತ್ತಿಗೆ ಕಾಮಗಾರಿಗಳಲ್ಲಿ ಮುಸ್ಲಿಮರಿಗೆ ಮೀಸಲಾತಿ ನೀಡುವ ಪ್ರಸ್ತಾವನೆಯೇ ಸರ್ಕಾರದ ಮುಂದಿಲ್ಲ ಎಂದು ಸತ್ಯದ ತಲೆಯ ಮೇಲೆ ಹೊಡೆದ ಹಾಗೆ ಮತ್ತೊಂದು ಸುಳ್ಳನ್ನು ಸಿಎಂ ಸಿದ್ದರಾಮಯ್ಯ ಹೇಳಿದರು. ಗುತ್ತಿಗೆ ಕಾಮಗಾರಿಗಳಲ್ಲಿ ಮುಸ್ಲಿಮರಿಗೆ 4% ಮೀಸಲಾತಿ ಕೊಡಬೇಕು ಎಂದು ಸಿಎಂ ರಾಜಕೀಯ ಕಾರ್ಯದರ್ಶಿ ನಾಸೀರ್ ಅಹ್ಮದ್, ಸಚಿವ ಜಮೀರ್ ಅಹ್ಮದ್ ಖಾನ್ ಸೇರಿದಂತೆ ಮುಸ್ಲಿಂ ಶಾಸಕರು ಆ.24, 2024ರಂದು ಸಿಎಂಗೆ ಪತ್ರ ಬರೆದಿದ್ದರು.

ಅದೇ ದಿನ ಈ ಪತ್ರವನ್ನು ಪರಿಶೀಲಿಸಿ ಮಂಡಿಸಿ ಎಂದು ಆರ್ಥಿಕ ಇಲಾಖೆಗೆ ನಿರ್ದೇಶನ ನೀಡಲಾಗಿತ್ತು. ಈ ಸಂಬಂಧ ಕೆಟಿಪಿಪಿ ಕಾಯ್ದೆಗೆ ತಿದ್ದುಪಡಿ ತರಲೂ ಸಹ ಅನುಮೋದನೆ ನೀಡಲಾಗಿದೆ ಎಂದು ಟ್ವೀಟ್‌ನಲ್ಲಿ ಹೇಳಿದ್ದಾರೆ. ವಕ್ಫ್ ವಿಚಾರದಲ್ಲಿ ಬಿಜೆಪಿ ಸರ್ಕಾರದ ಅವಧಿಯಲ್ಲೇ ಅತಿಹೆಚ್ಚು ನೋಟಿಸ್ ನೀಡಲಾಗಿದೆ ಎಂದು ಮತ್ತೊಂದು ದಿಕ್ಕು ತಪ್ಪಿಸುವ ಪ್ರಯತ್ನ ಮಾಡಲಾಗಿದೆ. ಓಲೈಕೆ ರಾಜಕಾರಣಕ್ಕೆ ಇನ್ನೆಷ್ಟು ಸುಳ್ಳು ಹೇಳುತ್ತೀರಿ? ಕಾಂಗ್ರೆಸ್ ಪಕ್ಷದ ಅನೇಕ ರಾಜ್ಯ ಮತ್ತು ರಾಷ್ಟ್ರಮಟ್ಟದ ಪ್ರಭಾವಿ ಮುಖಂಡರು ಬಡವರಿಗೆ ಸೇರಿದ ಸಾವಿರಾರು ಎಕರೆ ವಕ್ಫ್ ಭೂಮಿ ಕಬಳಿಸಿದ್ದಾರೆ ಎಂಬ ವರದಿ ನಮ್ಮ ಸರ್ಕಾರಕ್ಕೆ ಬಂದಿತ್ತು. ಆಗ ಆ ವರದಿಯ ಆಧಾರದ ಮೇಲೆ ತನಿಖೆ ಮಾಡಲು ಸಂಬಂಧಪಟ್ಟವರಿಗೆ ನೋಟಿಸ್ ನೀಡಲಾಗಿತ್ತೇ ಹೊರತು ಇದರ ಹಿಂದೆ ಯಾವುದೇ ಕುತಂತ್ರ, ಷಡ್ಯಂತ್ರ ಇರಲಿಲ್ಲ.

ಇಷ್ಟಕ್ಕೂ ಬಿಜೆಪಿ ಸರ್ಕಾರ ಬಡ ರೈತರು ತಲೆತಲಾಂತರಗಳಿಂದ ಉಳುಮೆ ಮಾಡಿಕೊಂಡು ಬಂದಿರುವ ಕೃಷಿ ಜಮೀನುಗಳಿಗೆ, ಗೋಮಾಳಗಳಿಗೆ, ಸ್ಮಶಾನಗಳಿಗೆ, ನೂರಾರು ವರ್ಷ ಇತಿಹಾಸ ಇರುವ ಸರ್ಕಾರಿ ಶಾಲೆಗಳಿಗೆ, ದೇವಸ್ಥಾನಗಳಿಗೆ, ಮಠ-ಮಾನ್ಯಗಳಿಗೆ, ಪಾರಂಪರಿಕ ತಾಣಗಳಿಗೆ, ಜನಸಾಮಾನ್ಯರ ಆಸ್ತಿ-ಪಾಸ್ತಿಗಳಿಗೆ, ಮಾಜಿ ಶಾಸಕರ ಮನೆಗಳಿಗೆ ನೋಟಿಸು ಕಳಿಸಿಲ್ಲ. ಬಡವರ ಭೂಮಿ ನುಂಗಿರುವ ದೊಡ್ಡ ದೊಡ್ಡ ತಿಮಿಂಗಿಲಗಳನ್ನು ಹಿಡಿಯುವ ಉದ್ದೇಶದಿಂದ ನೋಟಿಸು ಕೊಟ್ಟಿತ್ತು. ಇಷ್ಟಕ್ಕೂ ಈಗ ಕಾಂಗ್ರೆಸ್ ಸರ್ಕಾರ ಇದೆ, ಬಿಜೆಪಿ ಅವಧಿಯಲ್ಲಿ ಕೊಟ್ಟ ನೋಟಿಸ್‌ಗಳಲ್ಲಿ ಏನಾದರೂ ತಪ್ಪಿದ್ದರೆ ಮುಲಾಜಿಲ್ಲದೆ ಕ್ರಮ ಕೈಗೊಳ್ಳಲಿ ಎಂದು ಅವರು ಆಗ್ರಹಿಸಿದ್ದಾರೆ.

# ವಕ್ಫ್‌ಜೆಪಿಸಿ ಅಧಿಕಾರಾವಧಿ ವಿಸ್ತರಣೆ: ಸ್ಪೀಕರ್ ಓಂ ಬಿರ್ಲಾಗೆ ಪ್ರತಿಪಕ್ಷಗಳ ಸಂಸದರಿಂದ ಪತ್ರ

**ನವದೆಹಲಿ, ನ.25 :** ವಕ್ಸ್ (ತಿದ್ದುಪಡಿ) ಮಸೂದೆ 2024ರ ಮೇಲಿನ ಜಂಟಿ ಸಂಸದೀಯ ಸಮಿತಿಯ (ಜೆಪಿಸಿ) ಅವಧಿಯನ್ನು ವಿಸ್ತರಿಸುವಂತೆ ಲೋಕಸಭೆಯ ಸ್ಪೀಕರ್ ಓಂ ಬಿರ್ಲಾ ಅವರಿಗೆ ವಿರೋಧ ಪಕ್ಷದ ಸಂಸದರು ಪತ್ರ ಬರೆದು ಮನವಿ ಮಾಡಿದ್ದಾರೆ. ವಕ್ಸ್ ತಿದ್ದುಪಡಿ ಮಸೂದೆಯು ಅಸ್ತಿತ್ವದಲ್ಲಿರುವ ಕಾನೂನಿಗೆ ಅನೇಕ ಪ್ರಮುಖ ಬದಲಾವಣೆಗಳನ್ನು ಒಳಗೊಂಡಿರುವ ವಿಸ್ತಾರವಾದ ಶಾಸನವಾಗಿದೆ ಎಂಬುದನ್ನು ಗಮನಿಸಬೇಕು.



ಈ ಬದಲಾವಣೆಗಳು ಭಾರತದ ಜನಸಂಖ್ಯೆಯ ದೊಡ್ಡ ವರ್ಗದ ಮೇಲೆ ಪರಿಣಾಮ ಬೀರುತ್ತವೆ. ಆದ್ದರಿಂದ ವರದಿಯನ್ನು ಅಂತಿಮ ಗೊಳಿಸುವ ಮೊದಲು ಕೇವಲ ಮೂರು ತಿಂಗಳ ಸಮಯವು ಅಸಮರ್ಪಕವಾಗಿದೆ ಮಾತ್ರವಲ್ಲದೆ ಅನುಚಿತ ಶಿಫಾರಸುಗಳಿಗೆ ಕಾರಣವಾಗಬಹುದು ಎಂದು ವಿರೋಧ ಪಕ್ಷದ ಸಂಸದರು ಪತ್ರದಲ್ಲಿ ಉಲ್ಲೇಖಿಸಿದ್ದಾರೆ. ಈ ಬಗ್ಗೆ ಮಾತನಾಡಿದ ತೃಣಮೂಲ ಕಾಂಗ್ರೆಸ್ (ಟಿಎಂಸಿ) ಸಂಸದ ಕಲ್ಯಾಣ್ ಬ್ಯಾನರ್ಜಿ, ನಾವು ಲೋಕಸಭೆ ಸ್ಪೀಕರ್ ಅವರನ್ನು ಭೇಟಿ ಮಾಡಿದ್ದೇವೆ. ಜೆಪಿಸಿ ಅಧ್ಯಕ್ಷರು ನಮ್ಮ ಮಾತು ಕೇಳುತ್ತಿಲ್ಲ. ತರಾತುರಿಯಲ್ಲಿ ವರದಿ ನೀಡಲು ಸಾಧ್ಯವಿಲ್ಲ. ಸ್ಪೀಕರ್ ಅವರು ನಮ್ಮ ಭಾವನೆಗಳನ್ನು ಗೌರವಿಸುತ್ತಾರೆ ಮತ್ತು ಸಮಯವನ್ನು ವಿಸ್ತರಿಸುತ್ತಾರೆ ಎಂದು ಹೇಳಿದರು. ಆದ್ದರಿಂದ ಎಲ್ಲಾ ಮಧ್ಯಸ್ಥಗಾರರ ಮಾತುಗಳನ್ನು ಕೇಳಲಾಗುತ್ತದೆ ಎಂದರು. ಈ ವೇಳೆ ಬಿಹಾರ, ನವದೆಹಲಿ ಮತ್ತು ಉತ್ತರ ಪ್ರದೇಶ ಸೇರಿದಂತೆ ವಿವಿಧ ರಾಜ್ಯ ಸರ್ಕಾರಗಳು ಇನ್ನೂ ಸಮಿತಿಯ ಮುಂದೆ ಹಾಜರಾಗಿಲ್ಲ ವಿವಿಧ ಮಧ್ಯಸ್ಥಗಾರರು ಸಮಿತಿಯ ಮುಂದೆ ತಮ್ಮ ಅಭಿಪ್ರಾಯವನ್ನು ಪ್ರಸ್ತುತಪಡಿಸಲು ಇನ್ನೂ ಸಮಯ ಬೇಕು ಎಂದು ಕೋರಲಾಗಿದೆ.




ರಾಜಸ್ಥಾನದ ಜೋಧ್‌ಪುರದ AIIMS ನಲ್ಲಿ ನ್ಯಾಷನಲ್ ಅಕಾಡೆಮಿ ಆಫ್ ಮೆಡಿಕಲ್ ಸೈನ್ಸಸ್ ನ 64 ನೇ ಘಟಿಕೋತ್ಸವದಲ್ಲಿ ಉಪರಾಷ್ಟ್ರಪತಿ ಜಗದೀಪ್ ಧನಕರ್ ಪಾಲ್ಗೊಂಡಿದ್ದರು.

# ಮೋಹಿನಿ ಆರ್.ಪೂಜಾರಿ ಅವರಿಗೆ ಮಣಿಕರ್ಣಿಕಾ ಸ್ಟಾರ್ಟಪ್ ಮಹಿಳಾ ಉದ್ಯಮಿ ಪ್ರಶಸ್ತಿ

**ಮುಂಬಯಿ, ನ.24 :** ಥಾಣೆ ಇಲ್ಲಿನ ವಿ ಕೇರ್ ವೆಲ್ಫೇರ್ ಅಸೋಸಿಯೇಶನ್ (ಎನ್‌ಜಿಒ) ಮಹಾರಾಷ್ಟ್ರದ ಪ್ರತಿಷ್ಠಿತ ಮ್ಯಾಜಿಕಲ್ ಚಾರ್ಮ್‌ಂಟ್ ಜೊತೆಗೆ ಮುದ್ರಣ ಮಾಧ್ಯಮ ಪಾಲುದಾರ ಲೋಕಮತ್ ಮತ್ತು ಸಮುದಾಯ ಪಾಲುದಾರ ಲೋಕಮತ್ ಸಖಿ ಮಂಚ್ ಜೊತೆಗೆ ಪ್ರಮಾಣೀಕೃತ ಈವೆಂಟ್ ಮ್ಯಾನೇಜ್‌ಮೆಂಟ್ ಕಂಪನಿ ಮಣಿಕರ್ಣಿಕಾ 2024 ಜೊತೆಗೆ ಇತ್ತೀಚೆಗೆ (ನ.19) ವೈ.ಬಿ ಚವ್ಹಾಣ್ ಕೇಂದ್ರ ಮುಂಬಯಿ ಇಲ್ಲಿ ಆಯೋಜಿಸಿದ್ದ ವಾರ್ಷಿಕ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಈ ಪ್ರಶಸ್ತಿಯನ್ನು ಮೋಹಿನಿ ಪೂಜಾರಿ ಅವರಿಗೆ ಸ್ಟಾರ್ಟ್ ಅಪ್ ಮಹಿಳಾ ಉದ್ಯಮಿ–ಮಣಿಕರ್ಣಿಕಾ ಪ್ರಶಸ್ತಿ 2024 ಪ್ರದಾನಿಸಿ ಅಭಿನಂದಿಸಿತು.




ವಿ ಕೇರ್ ವೆಲ್ಫೇರ್ ಅಸೋಸಿಯೇಶನ್ ಸಾಮಾಜಿಕ ಸಂಸ್ಥೆಯಾಗಿದ್ದು, ಶಿಕ್ಷಣ, ಕ್ರೀಡೆ, ನಿರುದ್ಯೋಗ, ವೈದ್ಯಕೀಯ, ಅಂಗವಿಕಲತೆ ಮತ್ತು ಇತರ ಕ್ಷೇತ್ರಗಳಲ್ಲಿ ಸಮಾಜದ ವಿವಿಧ ವರ್ಗಗಳಿಗೆ ನ್ಯಾಯ ಒದಗಿಸಲು ಕಳೆದ 13 ವರ್ಷಗಳಿಂದ ಕಾರ್ಯನಿರ್ವಹಿಸುತ್ತಿದೆ. ಕಳೆದ 13 ವರ್ಷಗಳಲ್ಲಿ, ರೋಗಿಗಳಿಗೆ ವೈದ್ಯಕೀಯ ನೆರವು ನೀಡಿದೆ. ನಿರುದ್ಯೋಗಿಗಳು ತಮ್ಮ ಸ್ವಂತ ಕಾಲಿನ ಮೇಲೆ ನಿಲ್ಲಲು ಉದ್ಯಮವನ್ನು ಪ್ರಾರಂಭಿಸಲು ಮತ್ತು ಈ ಸಂಸ್ಥೆಯ ಮೂಲಕ ಸ್ಟಾರ್ಟ್ ಅಪ್ ಮಹಿಳಾ ಉದ್ಯಮಿ ಶ್ರೀಮತಿ ಮೋಹಿನಿ ಪೂಜಾರಿ ಅವರನ್ನು ಸನ್ಮಾನಿಸಲಾಯಿತು.

# ಗೋಕುಲದಲ್ಲಿ ಅತ್ಯಂತ ವಿಜೃಂಭಣೆಯಿಂದ ನಡೆದ ಕಾರ್ತಿಕ ದೀಪೋತ್ಸವ

**ಮುಂಬಯಿ, ನ.25:** ಹರಿ ಹರರಿಗೆ ಅತ್ಯಂತ ಪ್ರಿಯವಾದ ಮಾಸ ಕಾರ್ತಿಕ ಮಾಸದಲ್ಲಿ ದೀಪೋತ್ಸವ ಸೇವೆ ವಿಶೇಷ ಪೌರಾಣಿಕ ಮಹತ್ವವುಳ್ಳದ್ದು. ಗೋಕುಲ ಶ್ರೀ ಗೋಪಾಲಕೃಷ್ಣ ದೇವರ ಸನ್ನಿಧಾನದಲ್ಲಿ ಕಳೆದ ವರ್ಷದಂತೆ ಈ ಬಾರಿಯೂ ಈ ಪರ್ವಕಾಲದಲ್ಲಿ ವರ್ಣರಂಜಿತ ಕಾರ್ತಿಕ ದೀಪೋತ್ಸವವು ಭಾನುವಾರ (ನ. 24.) ಗೋಪಾಲಕೃಷ್ಣ ಪಬ್ಲಿಕ್ ಟ್ರಸ್ಟ್ ಮತ್ತು ಬಿ.ಎಸ್.ಕೆ. ಎಸೋಸಿಯೇಶನ್ ಜಂಟಿ ಆಯೋಜನೆಯಲ್ಲಿ ವೈಭವೋಪೇತ ವಾಗಿ ಜರಗಿತು.



ಗೋಕುಲ ಶ್ರೀ ಗೋಪಾಲಕೃಷ್ಣನ ದಿವ್ಯ ಮೂರ್ತಿಯನ್ನು ಅರ್ಚಕರಾದ ವೇದಮೂರ್ತಿ ಗಣೇಶ್ ಭಟ್ ಅವರು ವಿಶೇಷ ಪುಷ್ಪಾಹಾರಗಳಿಂದ ಅತ್ಯಂತ ಸುಂದರವಾಗಿ ಶೃಂಗರಿಸಿದ್ದರು. ಸಂಜೆ 6 ಗಂಟೆಯಿಂದ ಪ್ರಾರಂಭವಾದ ದೀಪೋತ್ಸವ ಸಂಭ್ರಮವು ದೇಗುಲದಲ್ಲಿ ನಿತ್ಯ ಪೂಜೆಯಾದ ನಂತರ ಅರ್ಚಕರು ಸಾಂಪ್ರದಾಯಿಕವಾಗಿ ದೀಪ ಪ್ರಜ್ವಲನೆ ಗೈಯುವುದರೊಂದಿಗೆ ದೀಪೋತ್ಸವಕ್ಕೆ ಶುಭಾರಂಭ ಗೈದರು. ಅಧ್ಯಕ್ಷ ಸುರೇಶ್ ರಾವ್ ಮತ್ತು ಪದಾಧಿಕಾರಿಗಳು ದೀಪ ಬೆಳಗಿಸಿದ ನಂತರ ನೆರೆದ ನೂರಾರು ಸೇವಾರ್ಥಿಗಳು ದೇವಾಲಯದ ಒಳ ಹಾಗೂ ಹೊರಾಂಗಣದಲ್ಲಿ ವ್ಯವಸ್ಥಿತವಾಗಿ ಸಿದ್ಧಪಡಿಸಿಟ್ಟ ಹಣತೆಗಳಲ್ಲಿ ಸಹಸ್ರಾರು ದೀಪ ಬೆಳಗಿಸಿ ಸೇವೆ ಗೈದರು. ಶ್ರೀ ದೇವರಿಗೆ ರಂಗ ಪೂಜಾ ಸೇವೆಯಾದ ನಂತರ ಅರ್ಚಕರು ಅಲಂಕೃತ ಉತ್ಸವ ಮೂರ್ತಿಯನ್ನು ಮಂತ್ರ ಘೋಷ, ಚೆಂಡೆ, ವಾದ್ಯಗಳೊಂದಿಗೆ ಮೆರವಣಿಗೆಯಲ್ಲಿ ತಂದು ವಿವಿಧ ತರಕಾರಿ, ಫಲ, ಪುಷ್ಪಗಳಿಂದ ವಿಶೇಷವಾಗಿ ನಿರ್ಮಿಸಿದ ಅಲಂಕೃತ ಮಂಟಪದಲ್ಲಿ ಪ್ರತಿಷ್ಠಾಪಿಸಿ, ಧಾರ್ಮಿಕ ವಿಧಿ ವಿಧಾನಗಳೊಂದಿಗೆ ಮಹಾ ಮಂಗಳಾರತಿ, ಅಷ್ಟಾವಧಾನ ಸೇವೆ ಜರಗಿತು. ನಂತರ ಉತ್ಸವ ಮೂರ್ತಿಯನ್ನು ಗರ್ಭಗೃಹದಲ್ಲಿರಿಸಿ ಭಕ್ತಾದಿಗಳಿಗೆ ತೀರ್ಥ ಪ್ರಸಾದ ವಿತರಿಸಲಾಯಿತು.

ಗೋಕುಲ ಮಹಾದ್ವಾರ, ತೀರ್ಥ ಮಂಟಪ, ಗರ್ಭ ಗೃಹ, ಗೋಕುಲ ಸಭಾಗೃಹ ಮತ್ತು ವಿಶೇಷ ಮಂಟಪವು ವೈವಿಧ್ಯಮಯ ಪುಷ್ಪಗಳಿಂದ ಅಲಂಕೃತಗೊಂಡು ಕಂಗೊಳಿಸುತ್ತಿತ್ತು. ಗೋಕುಲ ಸಭಾಗೃಹ ಹಲವಾರು ಗಣ್ಯಾತಿಗಣ್ಯರ ಸಹಿತ ಕಿಕ್ಕಿರಿದು ನೆರೆದ ಅಪಾರ ಭಕ್ತಾದಿಗಳಿಂದ ತುಂಬಿ ತುಳುಕುತ್ತಿತ್ತು. ಸುಮಾರು 500 ಕ್ಕೂ ಮಿಕ್ಕಿ ನೆರೆದ ಭಕ್ತಾದಿಗಳಿಗೆ, ಪ್ರಸಾದ ಭೋಜನದೊಂದಿಗೆ ಚಿರಸ್ಮರಣೀಯ ಕಾರ್ತಿಕ ದೀಪೋತ್ಸವ ಸಂಪನ್ನಗೊಂಡಿತು.

# ಬಿಜೆಪಿ ಸೋಲಿಸಲು ದಲಿತ–ಅಲ್ಪಸಂಖ್ಯಾತ ಮತಗಳನ್ನು ಒಗ್ಗೂಡಿಸಿ: ತಿರುಮಾವಲವನ್

**ಚೆನ್ನೈ, ನ.25 :** ಮಹಾರಾಷ್ಟ್ರ ವಿಧಾನಸಭಾ ಚುನಾವಣೆಯಲ್ಲಿ ಇಂಡಿಯಾ ಬಣದ ಸೋಲಿಗೆ ಕಾರಣಗಳನ್ನು ವಿವರಿಸಿದ ವಿದುತಲೈ ಚಿರುತೈಗಲ್ ಕಚ್ಚಿ (ವಿಸಿಕೆ) ಪಕ್ಷದ ಮುಖ್ಯಸ್ಥ ತೊಳ್ ತಿರುಮಾವಲವನ್, ದಲಿತ ಮತ್ತು ಅಲ್ಪ ಸಂಖ್ಯಾತ ಮತಗಳು ಚದುರಿಹೋಗಿರುವುದು ಸೋಲಿಗೆ ಪ್ರಮುಖ ಕಾರಣಗಳಲ್ಲಿ ಒಂದಾಗಿದೆ ಎಂದು ಹೇಳಿದರು. ಮಹಾರಾಷ್ಟ್ರದ ವಿಧಾನಸಭಾ ಚುನಾವಣೆಯ ಫಲಿತಾಂಶವನ್ನು ನಿರ್ಧರಿಸುವಲ್ಲಿ ದಲಿತರ ಮತಗಳು ನಿರ್ಣಾಯಕ ಪಾತ್ರ ವಹಿಸುತ್ತವೆ.




ದಲಿತ ಮತಗಳು ಇಂಡಿಯಾ ಬ್ಲಾಕ್‌ಗೆ ಹೋಗದಂತೆ ತಡೆಯುವ ಉದ್ದೇಶದಿಂದ ಮಾಯಾವತಿ ನೇತೃತ್ವದ ಬಿಎಸ್‌ಪಿ ಮತ್ತು ಪ್ರಕಾಶ್ ಅಂಬೇಡ್ಕರ್ ನೇತೃತ್ವದ ವಂಚಿತ್ ಬಹುಜನ ಆಗಾಡಿ (ವಿಬಿಎ) ಎಲ್ಲ ವಿಧಾನಸಭಾ ಕ್ಷೇತ್ರಗಳಲ್ಲಿ ಅಭ್ಯರ್ಥಿಗಳನ್ನು ಕಣಕ್ಕಿಳಿಸಿದೆ ಎಂದು ತಿರುಮಾವಲವನ್ ಆರೋಪಿಸಿದರು.

**ಬಿಜೆಪಿ ಮೈತ್ರಿಗೆ ಅನುಕೂಲವಾಗುವಂತೆ ದಲಿತ ಮತಗಳನ್ನು ವಿಭಜಿಸಲು:** ಎನ್‌ಡಿಎ ಮತ್ತು ಇಂಡಿಯಾ ಬ್ಲಾಕ್ ಎರಡರ ವಿರುದ್ಧವೂ ಅಭ್ಯರ್ಥಿಗಳನ್ನು ಕಣಕ್ಕಿಳಿಸಿದ್ದಾರೆ ಎಂಬ ವ್ಯಾಪಕ ಟೀಕೆ ವ್ಯಕ್ತವಾಗಿತ್ತು. ದಲಿತರು ಮತ್ತು ಅಲ್ಪಸಂಖ್ಯಾತರಂತಹ ಬಿಜೆಪಿ ವಿರೋಧಿ ಮತಗಳನ್ನು ಕ್ರೋಢೀಕರಿಸಲು ವಿರೋಧ ಪಕ್ಷಗಳಿಗೆ ಇದು ಸಕಾಲ ಎಂಬುದನ್ನು ಮಹಾರಾಷ್ಟ್ರ ಚುನಾವಣಾ ಫಲಿತಾಂಶ ತೋರಿಸುತ್ತದೆ ಎಂದು ತಿರುಮಾವಲವನ್ ಹೇಳಿದ್ದಾರೆ.

ನಾಂದೇಡ್ ಲೋಕಸಭಾ ಕ್ಷೇತ್ರದ ಎಲ್ಲ ಆರು ವಿಧಾನಸಭಾ ಕ್ಷೇತ್ರಗಳಲ್ಲಿ ಬಿಜೆಪಿ ಗೆಲುವು ಸಾಧಿಸಲು ಚುನಾವಣಾ ಅಕ್ರಮಗಳಿವೆ ಎಂಬ ಆರೋಪಕ್ಕೆ ತಿರುಮಾವಲವನ್ ಇಂಡಿಯಾ ಚುನಾವಣಾ ಆಯೋಗ ವಿವರಣೆ ನೀಡಬೇಕೆಂದು ಒತ್ತಾಯಿಸಿದರು. ಈ ಕ್ಷೇತ್ರದಲ್ಲಿ ಲ ೋ ಕ ಸ ಭ ೦ ೨ ೧ ಉಪಚುನಾವಣೆಯಲ್ಲಿ ಇಂಡಿಯಾ ಬ್ಲಾಕ್ ಅಭ್ಯರ್ಥಿ ಗೆದ್ದಿದ್ದಾರೆ.

# ಅದಾನಿ ಗ್ರೂಪ್‌ನ 100 ಕೋಟಿ ರೂ. ದೇಣಿಗೆ ವಾಪಸ್: ತೆಲಂಗಾಣ ಸಿಎಂ

**ಹೈದರಾಬಾದ್, ನ.25 :** ಉದ್ಯಮಿ ಗೌತಮ್ ಅದಾನಿ ಗ್ರೂಪ್ ಮೇಲೆ ಅಮೆರಿಕ ಮಾಡಿರುವ ಆರೋಪದ ಬೆನ್ನಲ್ಲೇ ದೇಶದಲ್ಲಿ ಸಂಚಲನ ಸೃಷ್ಟಿಯಾಗಿದ್ದು, ಇದೇ ವಿಚಾರದಲ್ಲಿ ರಾಜಕೀಯವೂ ನಡೆಯುತ್ತಿದೆ. ಈ ನಡುವೆ ತೆಲಂಗಾಣ ಮುಖ್ಯಮಂತ್ರಿ ರೇವಂತ್ ರೆಡ್ಡಿ ಅವರು ಅದಾನಿ ಗ್ರೂಪ್‌ನಿಂದ 100 ಕೋಟಿ ರೂಪಾಯಿ ದೇಣಿಗೆ ಸ್ವೀಕರಿಸಲು ನಿರಾಕರಿಸಿದ್ದಾರೆ.



ಈ ಕುರಿತು ಭಾನುವಾರ ಅದಾನಿ ಸಂಸ್ಥೆಗೆ ತೆಲಂಗಾಣ ಸರ್ಕಾರದ ಪರವಾಗಿ ಪತ್ರ ಬರೆಯಲಾಗಿದೆ. ಅದಾನಿ ಗ್ರೂಪ್ ನೀಡಿದ 100 ಕೋಟಿ ರೂ.ಗಳನ್ನು ಸ್ವೀಕರಿಸಲು ನಾನು ಸಿದ್ಧನಿಲ್ಲ. ಹೀಗಾಗಿ ಅದಾನಿ ಗ್ರೂಪ್‌ನಿಂದ ಹಣ ಸ್ವೀಕರಿಸುವುದಿಲ್ಲ ಎಂಬ ರಾಜ್ಯ ಸರ್ಕಾರದ ನಿರ್ಧಾರವನ್ನು ನಾನು ಪುನರುಚ್ಚರಿಸಲು ಬಯಸುತ್ತೇನೆ ಎಂದು ಸಿಎಂ ತಿಳಿಸಿದ್ದಾರೆ.

**ಪತ್ರದಲ್ಲಿ ತೆಲಂಗಾಣ ಸರ್ಕಾರ ಹೇಳಿದ್ದೇನು :** ವಿಶೇಷ ಮುಖ್ಯ ಕಾರ್ಯದರ್ಶಿ ಹಾಗೂ ಕೈಗಾರಿಕಾ ಉತ್ತೇಜನ, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಆಯುಕ್ತ ಜಯೇಶ್ ರಂಜನ್ ಪರವಾಗಿ ಡಾ. ಪ್ರೀತಿ ಅದಾನಿ ಅವರಿಗೆ ಬರೆದ ಪತ್ರದಲ್ಲಿ, ಯಂಗ್ ಇಂಡಿಯಾ ಸ್ಕಿಲ್ಸ್ ಯೂನಿವರ್ಸಿಟಿಗೆ 100 ಕೋಟಿ ರೂ.ಗಳನ್ನು ನೀಡಿದ್ದಕ್ಕಾಗಿ ನಾವು ನಿಮಗೆ ಆಭಾರಿಯಾಗಿದ್ದೇವೆ. ನಿಮ್ಮ ಪ್ರತಿಷ್ಠಾನದ ಪರವಾಗಿ ನೀವು 2024 ರ ಅಕ್ಟೋಬರ್ 18 ರಂದು ಪತ್ರವನ್ನು ಬರೆದಿದ್ದೀರಿ.

ಏಕೆಂದರೆ ನಾವು ಯಾವುದೇ ದಾನಿಗಳಿಂದ ಹಣದ ಭೌತಿಕ ವರ್ಗಾವಣೆಯನ್ನು ಕೇಳಿಲ್ಲ, ಏಕೆಂದರೆ 80G ವಿಭಾಗ ಈ ವಿನಾಯಿತಿ ಆದೇಶವು ಇತ್ತೀಚೆಗೆ ಬಂದಿದ್ದರೂ, ಪ್ರಸ್ತುತ ಸಂದರ್ಭಗಳು ಮತ್ತು ಉದ್ಭವಿಸುವ ವಿವಾದಗಳನ್ನು ಗಮನದಲ್ಲಿಟ್ಟುಕೊಂಡು ಹಣ ವರ್ಗಾವಣೆಗೆ ಒತ್ತಾಯಿಸದಂತೆ ಮಾನ್ಯ ಮುಖ್ಯಮಂತ್ರಿಗಳು ನನಗೆ ಸೂಚನೆ ನೀಡಿದ್ದಾರೆ.

# ಸಂಭಲ್ ಹಿಂಸಾಚಾರ ನಡೆದಾಗ ನಾನು ಬೆಂಗಳೂರಿನಲ್ಲಿದ್ದೆ: ಎಸ್‌ಪಿ ಸಂಸದನ ಸ್ಪಷ್ಟನೆ

**ಲಕ್ನೋ, ನ.25 :** ಉತ್ತರ ಪ್ರದೇಶದ ಸಂಭಲ್‌ನಲ್ಲಿ ಮೊಘಲರ ಕಾಲದ ಶಾಹಿ ಜಾಮಾ ಮಸೀದಿ ಸಮೀಕ್ಷೆ ವೇಳೆ ನಡೆದ ಹಿಂಸಾಚಾರಕ್ಕೆ ಸಂಬಂಧಿಸಿದಂತೆ ಸಮಾಜವಾದಿ ಪಕ್ಷದ ಸಂಸದ ಸೇರಿ 400 ಜನರ ವಿರುದ್ಧ 7 ಪ್ರಕರಣಗಳನ್ನು ದಾಖಲಿಸಲಾಗಿದೆ. ಈ ಸಂಬಂಧ ಕನಿಷ್ಠ 25 ಜನರನ್ನು ಬಂಧಿಸಲಾಗಿದೆ. ಹಿಂಸಾಚಾರದಲ್ಲಿ ಸತ್ತವರ ಸಂಖ್ಯೆ ಐದಕ್ಕೆ ಏರಿದೆ. ಈ ಸಂಬಂಧ ಸಮಾಜವಾದಿ ಪಕ್ಷದ ಸಂಸದ ಜಿಯಾವುರ್ ರೆಹಮಾನ್ ಬಾರ್ಕ್ ಮತ್ತು ಅವರ ಪಕ್ಷದ ಇಕ್ಬಾಲ್ ಮಹಮೂದ್ ಅವರ ಪುತ್ರ ನವಾಬ್ ಸುಹೇಲ್ ಇಕ್ಬಾಲ್ ಅವರ ವಿರುದ್ಧ ಆರೋಪ ಹೊರಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.



ಮೊಘಲರ ಕಾಲದ ಶಾಹಿ ಜಾಮಾ ಮಸೀದಿಯಲ್ಲಿ ಭಾನುವಾರ ಬೆಳಗ್ಗೆ ನ್ಯಾಯಾಲಯದ ಆದೇಶದ ಮೇರೆಗೆ ಸಮೀಕ್ಷೆಗೆ ಅಧಿಕಾರಿಗಳ ತಂಡ ತೆರಳಿತ್ತು. ಈ ವೇಳೆ ಸ್ಥಳೀಯರು ಮತ್ತು ಪೊಲೀಸರ ನಡುವೆ ಘರ್ಷಣೆ ನಡೆದಿತ್ತು. ಈ ವೇಳೆ ಪ್ರತಿಭಟನಾಕಾರರು ಕೆಲವು ವಾಹನಗಳಿಗೆ ಬೆಂಕಿ ಹಚ್ಚಿದ್ದರು.

ಅಲ್ಲದೇ ಪೊಲೀಸರ ಮೇಲೆ ಕಲ್ಲು ತೂರಾಟ ನಡೆಸಿದ್ದರು. ಗುಂಪನ್ನು ಚದುರಿಸಲು ಪೊಲೀಸರು ಅಶ್ರುವಾಯು ಸಿಡಿಸಿ ಮತ್ತು ಲಾಠಿಚಾರ್ಜ್ ಮಾಡಿದ್ದರು. ಈ ಬಗ್ಗೆ ಪ್ರತಿಕ್ರಿಯಿಸರುವ ಪೊಲೀಸ್ ವರಿಷ್ಠಾಧಿಕಾರಿ ಕ್ರಿಶನ್ ಕುಮಾರ್, ಸುಮಾರು 20 ಪೊಲೀಸ್ ಸಿಬ್ಬಂದಿಗೂ ಗಾಯಗಳಾಗಿವೆ. ತಲೆಗೆ ಪೆಟ್ಟಾಗಿರುವ ಕಾನ್ಸ್ಟೆಬಲ್ ಸ್ಥಿತಿ ಚಿಂತಾಜನಕವಾಗಿದೆ. ಈ ಹಿಂದೆ ಬಾರ್ಕ್ ನೀಡಿದ್ದ ಹೇಳಿಕೆಯಿಂದಾಗಿ ಪರಿಸ್ಥಿತಿ ಹದಗೆಟ್ಟಿದೆ ಎಂದು ಹೇಳಿದ್ದಾರೆ. ಪೊಲೀಸರು ಡ್ರೋನ್ ದೃಶ್ಯಗಳನ್ನು ಬಳಸಿಕೊಂಡು ಹಿಂಸಾಚಾರ ನಡೆಸಿದವರನ್ನು ಗುರುತಿಸುತ್ತಿದ್ದಾರೆ.

ಆರೋಪಿಗಳ ವಿರುದ್ಧ ಕಠಿಣ ರಾಷ್ಟ್ರೀಯ ಭದ್ರತಾ ಕಾಯಿದೆ (ಎನ್‌ಎಸ್‌ಎ) ಅಡಿಯಲ್ಲಿ ಆರೋಪ ಹೊರಿಸಲಾಗುವುದು ಎಂದು ಎಚ್ಚರಿಸಿದ್ದಾರೆ. ಶಾಹಿ ಜಾಮಾ ಮಸೀದಿ ಮೂಲತಃ ಹರಿ ಹರ್ ಮಂದಿರ ಎಂದು ವಕೀಲ ವಿಷ್ಣು ಶಂಕರ್ ಜೈನ್ ಎಂಬವರು ಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು.

ಅರ್ಜಿಯಲ್ಲಿ ಮೊಘಲರ ದೊರೆ ಬಾಬರ್ ಮಸೀದಿ ನಿರ್ಮಿಸಲು ದೇವಾಲಯವನ್ನು ಕೆಡವಿದ್ದ ಎಂದು ಉಲ್ಲೇಖಿಸಲಾಗಿದೆ. ಈ ಅರ್ಜಿಯನ್ನು ಪರಿಗಣಿಸಿದ್ದ ನ್ಯಾಯಾಲಯ ವಿಡಿಯೋ ಹಾಗೂ ಫೋಟೋ ತೆಗೆದು ಸಮೀಕ್ಷೆ ನಡೆಸುವಂತೆ ಆದೇಶಿಸಿತ್ತು.

# ಬಿಹಾರ ವಿಫಲ ರಾಜ್ಯ: ಪ್ರಶಾಂತ್ ಕಿಶೋರ್

**ಪಟನಾ, ನ. 25:** ರಾಜಕೀಯ ತಜ್ಞ, ಜನಸುರಾಜ್ ನಾಯಕ ಪ್ರಶಾಂತ್ ಕಿಶೋರ್, ಬಿಹಾರವು ಅಕ್ಷರಶಃ ವಿಫಲ ರಾಜ್ಯವಾಗಿದೆ, ಇದು ಆಳವಾದ ಗುಂಡಿಯಲ್ಲಿದೆ, ಅದರ ಸರ್ವತೋಮುಖ ಅಭಿವೃದ್ಧಿಗೆ ಪ್ರಚಂಡ ಪ್ರಯತ್ನಗಳ ಅಗತ್ಯವಿದೆ ಎಂದು ಹೇಳಿದ್ದಾರೆ.




ಜನಸುರಾಜ್‌ನ ಅಮೆರಕದ ಶಾಖೆಯನ್ನು ಪ್ರಾರಂಭಿಸಿದ ನಂತರ ಅಮೆರಿಕ ಬಿಹಾರಿ ಸಮುದಾಯದೊಂದಿಗೆ ಸಂವಾದದಲ್ಲಿ ಮಾತನಾಡಿದ ಮಾಜಿ ಚುನಾವಣಾ ತಂತ್ರಜ್ಞ, ತಮ್ಮ ಪಕ್ಷವು 2025 ರ ಬಿಹಾರ ವಿಧಾನಸಭಾ ಚುನಾವಣೆಯಲ್ಲಿ ಗೆಲ್ಲುತ್ತದೆ. ನಾವು ಅಧಿಕಾರಕ್ಕೆ ಬಂದರೆ ಮದ್ಯಪಾನ ನಿಷೇಧವನ್ನು ತೆಗೆದುಹಾಕಲಾಗುವುದು, ಶಾಲಾ ಶಿಕ್ಷಣವನ್ನು ಸುಧಾರಿಸಲು ಆದಾಯ ಬಳಕೆ ಮಾಡಿಕೊಳ್ಳಲಾಗುವುದು ಎಂದರು.

ಬಿಹಾರ ಆಳದಲ್ಲಿರುವ ರಾಜ್ಯ ಎಂಬುದನ್ನು ನಾವು ಅರಿತುಕೊಳ್ಳಬೇಕು. ಬಿಹಾರ ಒಂದು ದೇಶವಾಗಿದ್ದರೆ, ಇದು ವಿಶ್ವದ ಜನಸಂಖ್ಯೆಯ ದೃಷ್ಟಿಯಿಂದ 11 ನೇ ಅತಿದೊಡ್ಡ ದೇಶವಾಗಿದೆ. ನಾವು ಜನಸಂಖ್ಯೆಯಲ್ಲಿ ಈಗಷ್ಟೇ ಜಪಾನ್ ಅನ್ನು ಹಿಂದಿಕ್ಕಿದ್ದೇವೆ ಎಂದು ಕಿಶೋರ್ ಸಭೆಗೆ ತಿಳಿಸಿದರು. ಬಿಹಾರದ ಪರಿಸ್ಥಿತಿಯನ್ನು ಸುಧಾರಿಸುವ ಬಗ್ಗೆ ಸಮಾಜವು ಹತಾಶಗೊಂಡಿರುವುದು ದೊಡ್ಡ ಸವಾಲಾಗಿದೆ. ನೀವು ಹತಾಶರಾದಾಗ, ತಕ್ಷಣದ ಬದುಕುಳಿಯುವ ಅಗತ್ಯಗಳು ಹೆಚ್ಚು ಶಕ್ತಿಯುತವಾಗುತ್ತವೆ, ಯಾವುದೂ (ಬೇರೆ) ಮುಖ್ಯವಲ್ಲ. ಆದರೆ ಎಲ್ಲವೂ ಕಳೆದುಹೋಗಿಲ್ಲ ಎಂದು ಕಿಶೋರ್ ಹೇಳಿದರು.

ಕಳೆದ ಎರಡೂವರೆ ವರ್ಷಗಳಲ್ಲಿ ನಾವು ಏನು ಮಾಡುತ್ತಿದ್ದೇವೆ ಎಂಬುದಕ್ಕೆ ಕೆಲವು ಭರವಸೆ ಖಂಡಿತವಾಗಿಯೂ ಇದೆ. ಆದರೆ, ಇದನ್ನು ಸ್ಪಷ್ಟವಾದ ಚುನಾವಣಾ ಫಲಿತಾಂಶವಾಗಿ ಮತ್ತು ಮುಂದೆ ಆಡಳಿತದ ಫಲಿತಾಂಶವಾಗಿ ಪರಿವರ್ತಿಸಲು (ಸಮಯ ತೆಗೆದುಕೊಳ್ಳುತ್ತದೆ) ಭಾಗವಾಗಲು ಬಯಸುವ ಯಾರಾದರೂ ಕನಿಷ್ಠ ಐದು–ಆರು ವರ್ಷಗಳ ಕಾಲ ಅದನ್ನು ಬದ್ಧವಾಗಿರಬೇಕು. 2025 ರಲ್ಲಿ (ಜನಸುರಾಜ್‌ನ) ಸರ್ಕಾರ ರಚನೆಯಾದರೂ ಮತ್ತು ನಾವು ಈ ತೀವ್ರತೆಯೊಂದಿಗೆ ಶ್ರಮಿಸುವುದನ್ನು ಮುಂದುವರಿಸಿದರೂ, 2029–2030 ರ ವೇಳೆಗೆ ಬಿಹಾರ ಮಧ್ಯಮ ಆದಾಯದ ರಾಜ್ಯವಾದರೆ ಅದು ದೊಡ್ಡ ವಿಷಯ. ಇದು ಅಕ್ಷರಶಃ ವಿಫಲ ರಾಜ್ಯವಾಗಿದೆ. ಇದು ಎಲ್ಲ ಅಭಿವೃದ್ಧಿಯ ನಿಯತಾಂಕಗಳಲ್ಲಿ ನಿಂತಿದೆ ಎಂದರು. ಇಲ್ಲಿನ ಜನಸಂಖ್ಯೆಯಲ್ಲಿ ವಿಫಲ ರಾಜ್ಯಗಳ ಗುಣಲಕ್ಷಣಗಳು ಗೋಚರಿಸುತ್ತವೆ. ಉದಾಹರಣೆಗೆ.. ಕೆಲವೊಮ್ಮೆ ನಾವು ಯೋಚಿಸುತ್ತೇವೆ. ಸುಡಾನ್‌ನಲ್ಲಿ ಜನರು 20 ವರ್ಷಗಳಿಂದ ಅಂತರ್ಯುದ್ಧದಲ್ಲಿ ಏಕೆ ಹೋರಾಡುತ್ತಿದ್ದಾರೆ. ಏಕೆಂದರೆ, ನೀವು ಆ ವಿಫಲ ಸ್ಥಿತಿಯಲ್ಲಿದ್ದಾಗ, ಜನರು ನಮ್ಮ ಮಕ್ಕಳು ಸುಡಾನ್‌ನಲ್ಲಿ ಹೇಗೆ ಓದುತ್ತಾರೆ ಮತ್ತು ಯಾರನ್ನು ಎಲ್ಲಿ ಸೆರೆಹಿಡಿಯಬೇಕು ಎಂಬ ಚಿಂತೆಯಲ್ಲಿದ್ದಾರೆ, ನಾವು ಅದರ ಬಗ್ಗೆ ತಿಳಿದಿರಬೇಕು. 2025ರಲ್ಲಿ (ಬಿಹಾರ ವಿಧಾನಸಭೆ ಚುನಾವಣೆ) ಜನಸುರಾಜ್ ಗೆಲ್ಲುತ್ತಾರೆ. ಅದರಲ್ಲಿ ಯಾವುದೇ ಸಂದೇಹವಿಲ್ಲ. (ನನ್ನ) ಚುನಾವಣಾ ತಿಳುವಳಿಕೆಯನ್ನು ಆಧರಿಸಿ, ನಾವು ಗೆಲ್ಲುತ್ತೇವೆ ಎಂದು ನಾನು ಸ್ಪಷ್ಟವಾಗಿ ನೋಡುತ್ತೇನೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಜನಸುರಾಜ್ ಅಧಿಕಾರಕ್ಕೆ ಬಂದರೆ, ಶಾಲಾ ಶಿಕ್ಷಣವನ್ನು ಸುಧಾರಿಸುವುದು ಅವರ ಪ್ರಮುಖ ಆದ್ಯತೆಯಾಗಿದೆ. ರಾಜ್ಯಾದ್ಯಂತ ಮದ್ಯಪಾನ ನಿಷೇಧವನ್ನು ತೆಗೆದುಹಾಕಿದ ನಂತರ ಬರುವ ಆದಾಯದಿಂದ ಹಣವನ್ನು ಶಿಕ್ಷಣಕ್ಕೆ ನೀಡಲಾಗುತ್ತದೆ. ಅವರು ಯುಎಸ್‌ನಲ್ಲಿರುವ ಬಿಹಾರಿ ಡಯಾಸ್ಪೊರಾ ಸದಸ್ಯರು ತಮ್ಮ ಸ್ನೇಹಿತರು ಮತ್ತು ಸಂಬಂಧಿಕರನ್ನು ಜನಸುರಾಜ್‌ಗೆ ಬೆಂಬಲಿಸಲು, ಮತ ಚಲಾಯಿಸಲು ಕರೆ ನೀಡುವಂತೆ ಒತ್ತಾಯಿಸಿದರು.

ಅಕ್ಟೋಬರ್‌ನಲ್ಲಿ ಹೆಚ್ಚು ಸಂಭ್ರಮದಿಂದ ತೇಲಿ ಬಂದಿದ್ದ ಜನಸುರಾಜ್ ಇತ್ತೀಚಿನ ಬಿಹಾರ ವಿಧಾನಸಭಾ ಉಪಚುನಾವಣೆಯಲ್ಲಿ ಪ್ರಭಾವ ಬೀರಲು ವಿಫಲವಾಗಿದೆ. ಪಕ್ಷದ ಅಭ್ಯರ್ಥಿಗಳು ಒಂದು ಸ್ಥಾನ ಹೊರತುಪಡಿಸಿ ಉಳಿದೆಲ್ಲ ಕ್ಷೇತ್ರಗಳಲ್ಲಿ ಠೇವಣಿ ಕಳೆದುಕೊಂಡಿದ್ದಾರೆ. ಉಪಚುನಾವಣೆಯಲ್ಲಿ ಆಡಳಿತಾರೂಢ ಎನ್‌ಡಿಎ ಎಲ್ಲ ನಾಲ್ಕು ಸ್ಥಾನಗಳನ್ನು ಗೆದ್ದುಕೊಂಡಿದೆ.

# ಮುಸ್ಲಿಂ ಹುಡುಗನನ್ನು ಮಾತ್ರ ಮದುವೆಯಾಗಬೇಡಿ: ಸಾನಿಯಾ ಮಿರ್ಜಾಗೆ ಸಲಹೆ

**ನವದೆಹಲಿ, ನ.25 :** ಮಾಜಿ ಟೆನಿಸ್ ಆಟಗಾರ್ತಿ ಸಾನಿಯಾ ಮಿರ್ಜಾ ಇತ್ತೀಚೆಗೆ ತಮ್ಮ ಖಾಸಗಿ ಜೀವನದಿಂದ ಸುದ್ದಿಯಾಗಿದ್ದಾರೆ. ಪಾಕಿಸ್ತಾನದ ಮಾಜಿ ಕ್ರಿಕೆಟಿಗ ಶೋಯೆಬ್ ಮಲಿಕ್ ಮತ್ತು ಸಾನಿಯಾ ಮಿರ್ಜಾ ವಿಚ್ಛೇದನ ಪಡೆದ ನಂತರ ತಮ್ಮ ವೈಯಕ್ತಿಕ ಮತ್ತು ವೃತ್ತಿಪರ ಅನ್ವೇಷಣೆಗಳಿಗಾಗಿ ಸುದ್ದಿಯಲ್ಲಿದ್ದಾರೆ.



ವಿಚ್ಛೇದನದ ನಂತರ ಸಾನಿಯಾ ಮತ್ತು ಅವರ ಮಗು ಆರಾಮದಾಯಕ ಜೀವನವನ್ನು ನಡೆಸುತ್ತಿದ್ದಾರೆ. ವರದಿಗಳ ಪ್ರಕಾರ, ಸಾನಿಯಾಗೆ ವಿಚ್ಛೇದನ ನೀಡಿದ ನಂತರ ಶೋಯೆಬ್ ಮಲಿಕ್ ಪಾಕಿಸ್ತಾನದ ನಟಿ ಸನಾ ಜಾವೇದ್‌ರನ್ನ ಮೂರನೇ ಬಾರಿಗೆ ವಿವಾಹವಾದರು. ಹೀಗಾಗಿ ಸಾನಿಯಾ ಮತ್ತೆ ಮದುವೆಯಾಗುತ್ತಾರೆಯೇ ಎಂದು ಅನೇಕರು ಈಗ ಆಶ್ಚರ್ಯ ಪಡುತ್ತಿದ್ದಾರೆ. ಭಾರತದ ಖ್ಯಾತ ಮಾಜಿ ಟೆನಿಸ್ ಆಟಗಾರ್ತಿ ಸದ್ಯ ವಿಚ್ಛೇದನ ಪಡೆದು ಹೈದರಾಬಾದಲ್ಲಿ ವಾಸಿಸುತ್ತಿದ್ದಾರೆ.

ಒಂಟಿ ತಾಯಿಯಾಗಿ ತನ್ನ ಮಗುವನ್ನು ಪೋಷಿಸುವ ಪಾತ್ರವನ್ನ ವಹಿಸಿಕೊಂಡಿದ್ದು ಸಾನಿಯಾ ತನ್ನ ಎರಡನೇ ಮದುವೆಯ ಬಗ್ಗೆ, ಅಭಿಮಾನಿಯಿಂದ ಸಲಹೆ ಪಡೆದ್ದಾರೆ.

ಸಾನಿಯಾ, ಹೊಸ ಜೀವನವನ್ನ ಪ್ರಾರಂಭಿಸಿ. ಹೇಳಿದ್ದು.

ನೆಟ್ಟಿಗರೊಬ್ಬರು ಸಾನಿಯಾರನ್ನ ಮುಂದುವರಿ ಯುವಂತೆ ಹೇಳಿದ್ದಾರೆ. ಸಾನಿಯಾ ಮಿರ್ಜಾ ಅವರ ಪೋಸ್ಟ್, ಕಾಮೆಂಟ್ ಮಾಡಿದ ನೆಟ್ಟಿಗರು, ಸಾನಿಯಾ, ಹೊಸ ಜೀವನವನ್ನ ಪ್ರಾರಂಭಿಸಿ, ಆದರೆ ಮುಸ್ಲಿಂ ಹುಡುಗನನ್ನು ಮದುವೆಯಾಗಬೇಡಿ. ಎಂದು ಬರೆದಿದ್ದಾರೆ. ಈ ಸಲಹೆಯು ಪ್ರತಿಕ್ರಿಯೆಗಳನ್ನ ಹುಟ್ಟುಹಾಕಿದೆ, ಏಕೆಂದರೆ ಸಾನಿಯಾ ಆಗಾಗ್ಗೆ ತಮ್ಮ ವೈಯಕ್ತಿಕ ಜೀವನಕ್ಕಾಗಿ ಬೆಳಕಿಗೆ ಬರುತ್ತಾರೆ.

ಸಾನಿಯಾ ಮಿರ್ಜಾ ಮತ್ತು ಮೊಹಮ್ಮದ್ ಶಮಿ ಮದುವೆಯಾಗಬಹುದು ಎಂದು ಇತ್ತೀಚಿನ ವರದಿಗಳು ಹರಿದಾಡಿವೆ. ಆದಾಗ್ಯೂ, ಆಕೆಯ ತಂದೆ ಈ ವದಂತಿಗಳನ್ನ ಆಧಾರರಹಿತವೆಂದು ತಳ್ಳಿಹಾಕಿದರು. ವಿಚ್ಛೇದನದ ನಂತರ, ಶೋಯೆಬ್ ತಮ್ಮ ಜೀವನದಲ್ಲಿ ಹೊಸ ಅಧ್ಯಾಯವನ್ನು ಪ್ರಾರಂಭಿಸಿದರು ಎಂದು ವರದಿಯಾಗಿದೆ.

ಸಾನಿಯಾ ವಿಚ್ಛೇದನದ ನಂತರ ಅವರು ಹೊಸ ಆರಂಭವನ್ನ ಸ್ವೀಕರಿಸಿದ್ದಾರೆ ಮತ್ತು ಆಗಾಗ್ಗೆ ಚಿತ್ರಗಳು ಮತ್ತು ವೀಡಿಯೊಗಳನ್ನು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡುತ್ತಾರೆ. ಅವರ ಪೋಸ್ಟ್‌ಗಳು ಅಭಿಮಾನಿಗಳಿಂದ ಟನ್ ಲೈಕ್‌ಗಳು ಮತ್ತು ಕಾಮೆಂಟ್‌ಗಳನ್ನು ಪಡೆಯುತ್ತವೆ.

# ಇವಿಎಂ ತಿರುಚಲಾಗಿದೆ ಎಂಬುದಕ್ಕೆ ಸಾಕ್ಷ್ಯಗಳಿಲ್ಲ ಕಾಂಗ್ರೆಸ್ ಸಂಸದ ಕಾರ್ತಿ ಚಿದಂಬರಂ ಸ್ಪಷ್ಟನೆ

**ನವದೆಹಲಿ, ನ.25 :** ಇವಿಎಂ ಮ್ಯಾನಿಪ್ಯುಲೇಟ್ ಅಥವಾ ಟ್ಯಾಂಪರಿಂಗ್ ಆಗಿದೇ ಅನ್ನೋದನ್ನ ಸಾಬೀತುಪಡಿಸಲು ನನ್ನ ಬಳಿ ಯಾವುದೇ ಸಾಕ್ಷಿಗಳಿಲ್ಲ. ಹಾಗಾಗಿ ನನಗೆ ವೈಯಕ್ತಿಕವಾಗಿ ಯಾವುದೇ ರೀತಿಯ ಸಂಶಗಳೂ ಇಲ್ಲ ಎಂದು ಕಾಂಗ್ರೆಸ್ ಸಂಸದ ಕಾರ್ತಿ ಚಿದಂಬರಂ ಹೇಳಿದ್ದಾರೆ. ಒಂದು ದಿನದ ಹಿಂದೆಯಷ್ಟೇ ಕರ್ನಾಟಕ ಗೃಹ ಸಚಿವ ಜಿ. ಪರಮೇಶ್ವರ್ ಮಹಾರಾಷ್ಟ್ರ ಚುನಾವಣಾ ಫಲಿತಾಂಶದ ಕುರಿತು ಪ್ರತಿಕ್ರಿಯಿಸುವಾಗ ಇವಿಎಂ ಬಗ್ಗೆ ಕಳವಳ ವ್ಯಕ್ತಪಡಿಸಿದ್ದರು. ಈ ಬೆನ್ನಲ್ಲೇ ಕಾಂಗ್ರೆಸ್ ಸಂಸದರೂ ಆಗಿರುವ ಕಾರ್ತಿ ಚಿದಂಬರಂ ಇದಕ್ಕೆ ವ್ಯತಿರಿಕ್ತವಾಗಿ ಪ್ರತಿಕ್ರಿಯೆ ನೀಡಿದ್ದಾರೆ. ಇವಿಎಂ ಹ್ಯಾಕ್ ಆರೋಪದ ಕುರಿತು ದೆಹಲಿಯಲ್ಲಿ ಮಾತನಾಡಿದ ಕಾರ್ತಿ ಚಿದಂಬರಂ ಅವರು, ನಾನು 2004 ರಿಂದ ಇವಿಎಂಗಳನ್ನು ಬಳಸಿಕೊಂಡು ಚುನಾವಣೆಯಲ್ಲಿ ಭಾಗವಹಿಸುತ್ತಿದ್ದೇನೆ. ನನಗೆ ವೈಯಕ್ತಿಕವಾಗಿ ಯಾವುದೇ ಕೆಟ್ಟ ಅನುಭವವಾಗಿಲ್ಲ ಎಂದು ಹೇಳಿದ್ದಾರೆ. ಇವಿಎಂ ಮ್ಯಾನಿಪ್ಯುಲೇಟ್ ಅಥವಾ ಟ್ಯಾಂಪರಿಂಗ್ ಆಗಿದೆ ಅನ್ನೋದನ್ನ ಸಾಬೀತುಪಡಿಸಲು ನನ್ನ ಬಳಿ ಯಾವುದೇ ಸಾಕ್ಷಿಗಳಿಲ್ಲ. ಹಾಗಾಗಿ ನನಗೆ ವೈಯಕ್ತಿಕವಾಗಿ ಯಾವುದೇ ರೀತಿಯ ಸಂಶಗಳಿಲ್ಲ. ಇವಿಎಂಗಳ ಬಗ್ಗೆ ಅಂತಹ ಸಂದೇಹವಿದ್ದರೆ, ಅದನ್ನ ಅವರೇ ಹೇಳಬೇಕು. ಏಕೆಂದರೆ ಇವಿಎಂನಿಂದಲೇ ಚುನಾವಣೆ ಗೆದ್ದಿದ್ದೇವೆ. ಇವಿಎಂನಿಂದಲೇ ಚುನಾವಣೆ ಸೋತಿದ್ದೇವೆ. ಇವಿಎಂ ಮ್ಯಾನಿಪ್ಯುಲೇಟ್ ಆಗಿದೆ ಅನ್ನೋದನ್ನ ವೈಜ್ಞಾನಿಕ ಡೇಟಾದೊಂದಿಗೆ ಸಾಬೀತುಪಡಿಸಿದ ಹೊರತು, ನನ್ನ ದೃಷ್ಟಿಕೋನವನ್ನು ನಾನು ಬದಲಾಯಿಸಿಕೊಳ್ಳಲು ಸಿದ್ಧನಿಲ್ಲ ಎಂದಿದ್ದಾರೆ.

# ಸಿಎಂ ಸಿದ್ದರಾಮಯ್ಯ ನಾಯಕತ್ವಕ್ಕೆ ಮತ್ತಷ್ಟು ಬಲ

**ಬೆಂಗಳೂರು, ನ. 25 :** ಉಪಸಮರದಲ್ಲಿ ಮೂರೂ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಜಯಭೇರಿ ಬಾರಿಸುವ ಮೂಲಕ ಸಿಎಂ ಮತ್ತು ಸಂಪುಟ ಸದಸ್ಯರ ವಿಶ್ವಾಸ ಇಮ್ಮಡಿಯಾಗಿದೆ. ಈ ಫಲಿತಾಂಶ ಕಾಂಗ್ರೆಸ್ ಆಡಳಿತಕ್ಕೆ ನೀಡಿದ ಜನ ಬೆಂಬಲ ಎಂದೇ ವ್ಯಾಖ್ಯಾನಿಸಲಾಗುತ್ತಿದೆ. ಜೊತೆಗೆ, ಸಿಎಂ ನಾಯಕತ್ವಕ್ಕೂ ಮತ್ತಷ್ಟು ಬಲ ನೀಡಿದೆ ಎಂದು ವಿಶ್ಲೇಷಿಸಲಾಗುತ್ತಿದೆ.

ಈಗಾಗಲೇ ಮುಡಾ, ವಾಲ್ಮೀಕಿ ಹಗರಣಗಳಲ್ಲಿ ಸಿಲುಕಿರುವ ಆರೋಪ ಹೊತ್ತಿರುವ ಕಾಂಗ್ರೆಸ್ ಸರ್ಕಾರ ಹಾಗೂ ಸಿಎಂ ಸಿದ್ದರಾಮಯ್ಯಗೆ ತಮ್ಮ ಶಕ್ತಿ ಪ್ರದರ್ಶನ ಮಾಡಲು ಈ ಉಪಕದನ ದೊಡ್ಡ ವೇದಿಕೆಯಾಗಿತ್ತು. ಅದರಂತೆ, ಉಪಚುನಾವಣೆಯ ಫಲಿತಾಂಶ ಕಾಂಗ್ರೆಸ್ಗೆ ದೊಡ್ಡ ಶಕ್ತಿ ನೀಡಿದೆ. ಸಿಎಂ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಪಂಚ ಗ್ಯಾರಂಟಿಕೇಂದ್ರಿತ ಆಡಳಿತವನ್ನು ಮುಂದುವರಿಸಿಕೊಂಡು ಹೋಗಲು ಈ ಉಪಸಮರ ಫಲಿತಾಂಶ ಮತ್ತಷ್ಟು ಪುಷ್ಠಿ ನೀಡಿದಂತಾಗಿದೆ.

ಹೀಗಾಗಿ ಸಿಎಂ ಸಿದ್ದರಾಮಯ್ಯಗೆ ಇದೇ ಆಡಳಿತ ವೈಖರಿಯನ್ನು ಮುಂದುವರಿಸಿಕೊಂಡು ಹೋಗಲು ಸಹಕಾರಿಯಾಗಲಿದೆ. ತಾವು ಕಾಂಗ್ರೆಸ್ನ ಪ್ರಬಲ ಅಹಿಂದ ನಾಯಕ ಎಂಬ ಸಂದೇಶವನ್ನು ಹೈಕಮಾಂಡ್ ಹಾಗೂ ತಮ್ಮ ವಿರೋಧಿ ಬಣಕ್ಕೆ ರವಾನಿಸಿದಂತಾಗಿದೆ. ಮೂರೂ ಕ್ಷೇತ್ರಗಳಲ್ಲಿ ಅಹಿಂದ ಮತ ಕ್ರೋಢೀಕರಣವಾಗುವ ಮೂಲಕ ಸಿದ್ದರಾಮಯ್ಯರ ನಾಯಕತ್ವದ ಬಗೆಗಿನ ಅನುಮಾನವನ್ನು ಬಹುತೇಕ ಮಟ್ಟಿಗೆ ನಿವಾರಿಸಿದಂತಾಗಿದೆ ಎಂದು ವಾಖ್ಯಾನಿಸಲಾಗುತ್ತಿದೆ.

ಸಿದ್ದರಾಮಯ್ಯ ಮೂರೂ ಕ್ಷೇತ್ರಗಳಲ್ಲಿ ಸಕ್ರಿಯರಾಗಿ ಪ್ರಚಾರ ನಡೆಸಿದ್ದರು. ಹೀಗಾಗಿ ಅವರ ನಾಯಕತ್ವದಲ್ಲೇ ಉಪಸಮರ ಎದುರಿಸಲಾಗಿತ್ತು. ಹೀಗಾಗಿ ನಾಯಕತ್ವ ಬದಲಾವಣೆ, ಹಗರಣ ಆರೋಪ ಸಂಬಂಧ ಸಿಎಂ ರಾಜೀನಾಮೆ ಕೂಗಿಗೂ ಬಹುತೇಕ ಬ್ರೇಕ್ ಬೀಳುವ ಸಾಧ್ಯತೆ ಇದೆ. ಈಗಾಗಲೇ ಕೆಲ ಸಚಿವರು ಸಿದ್ದರಾಮಯ್ಯ ನಾಯಕತ್ವಕ್ಕೆ ಈ ಫಲಿತಾಂಶ ಬಲ ನೀಡಿದೆ ಎಂದು ವ್ಯಾಖ್ಯಾನಿಸಿದ್ದಾರೆ. ಸಚಿವ ಬೈರತಿ ಸುರೇಶ್ ಮಾತನಾಡಿ, ಸಿಎಂ ಸ್ಥಾನ ಅಭಾದಿತ ಎಂದು ತಿಳಿಸಿದ್ದಾರೆ.

ಸದ್ಯಕ್ಕೆ ಪ್ರಬಲರಾಗಿರುವ ಸಿದ್ದರಾಮಯ್ಯ ಅವರನ್ನು ಬದಲಾಯಿಸಬೇಕು ಎಂಬ ಕೂಗು ಸಹಜವಾಗಿ ಕ್ಷೀಣವಾಗಲಿದೆ. ಮಹರಾಷ್ಟ್ರ ಫಲಿತಾಂಶದಿಂದ ಕಾಂಗ್ರೆಸ್ ಹೈಕಮಾಂಡ್ಗೆ ಹಿನ್ನಡೆಯಾಗಿದ್ದು, ಈ ವೇಳೆ ಕರ್ನಾಟಕದಲ್ಲಿ ನಾಯಕತ್ವ ಬದಲಾವಣೆಯ ಗೋಜಿಗೆ ಹೋಗುವ ಸಾಧ್ಯತೆ ಕಡಿಮೆ ಇದೆ. ಒಂದು ವೇಳೆ ಆ ಒತ್ತಾಯ ಕೇಳಿಬಂದರೂ ಹೈಕಮಾಂಡ್ ತಕ್ಷಣಕ್ಕೆ ಸೊಪ್ಪು ಹಾಕುವುದು ಅನುಮಾನವಾಗಿದೆ.



ಸೋಮವಾರ ಬೆಂಗಳೂರಿನ ಬಸವನಗುಡಿಯಲ್ಲಿ 2 ದಿನಗಳ ಕಡ್ಲೆಕಾಯಿ ಪರಿಷೆಯನ್ನು ಡಿಸಿಎಂ ಡಿ.ಕೆ. ಶಿವಕುಮಾರ್ ಉದ್ಘಾಟಿಸಿದರು.

# ಕಾಂಗ್ರೆಸ್ ಪಕ್ಷದ ಭ್ರಷ್ಟಾಚಾರಕ್ಕೆ ಜನರು ಕೊಟ್ಟ ಲೈಸನ್ಸ್ ಅಲ್ಲ

**ಬೆಂಗಳೂರು, ನ. 25 :** ಮಹಾರಾಷ್ಟ್ರ ರಾಜ್ಯದಲ್ಲಿ ಕಾಂಗ್ರೆಸ್ಸಿಗರೆಲ್ಲರೂ ಈ ಸಾರಿ ಬಿಜೆಪಿಯನ್ನು ಬೆಂಬಲಿಸಿದ್ದು, ಅದರಿಂದ ನಾವು ಗೆದ್ದೆವು ಎಂದರೆ ಡಿ.ಕೆ.ಶಿವಕುಮಾರರು ಒಪ್ಪುತ್ತಾರಾ? ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಪ್ರಶ್ನಿಸಿದ್ದಾರೆ. ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯದಲ್ಲಿ ಇಂದು ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಉಪ ಚುನಾವಣೆಯಲ್ಲಿ 3 ಕ್ಷೇತ್ರಗಳನ್ನು ಗೆದ್ದ ಕಾಂಗ್ರೆಸ್ ಪಕ್ಷ 3 ಲೋಕ–3 ರಾಜ್ಯಗಳನ್ನು ಗೆದ್ದಂತೆ ವಿಜೃಂಭಿಸುತ್ತಿದೆ. ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು, ಜೆಡಿಎಸ್–ಬಿಜೆಪಿ ನಾಯಕರು ತಮ್ಮನ್ನು ಬೆಂಬಲಿಸಿದ್ದಾಗಿ ಹೇಳಿದ್ದು, ಇದೊಂದು ಶುದ್ಧ ಸುಳ್ಳು ಮತ್ತು ದಾರಿ ತಪ್ಪಿಸುವ ಕೆಲಸ ಎಂದು ಖಂಡಿಸಿದರು.

3 ಕ್ಷೇತ್ರಗಳ ಗೆಲುವು ಕಾಂಗ್ರೆಸ್ ಪಕ್ಷದ ಭ್ರಷ್ಟಾಚಾರಕ್ಕೆ ಜನರು ಕೊಟ್ಟ ಲೈಸನ್ಸ್ ಅಲ್ಲ ಎಂದು ಸಿದ್ದರಾಮಯ್ಯ ಮತ್ತು ಡಿ. ಕೆ.ಶಿವಕುಮಾರರು ತಿಳಿದುಕೊಳ್ಳಲಿ ಎಂದು ತಿರಿಗೇಟು ಕೊಟ್ಟರು. ಸೋತಲ್ಲೆಲ್ಲ ಇವಿಎಂ



ತಿರುಚಿದ್ದಾರೆ ಎನ್ನುವ ಕಾಂಗ್ರೆಸ್ಸಿಗರಿಗೆ ಇಲ್ಲಿ 3 ಸ್ಥಾನ ಗೆದ್ದ ಮೇಲೆ ಇವಿಎಂ ತಿರುಚಿಲ್ಲ ಎಂಬ ನಂಬಿಕೆ ಬಂದಿರಬಹುದು ಎಂದು ವ್ಯಂಗ್ಯವಾಡಿದರು. ಮಹಾರಾಷ್ಟ್ರದಲ್ಲಿ ಇವಿಎಂ ತಿರುಚಿದ್ದರೆ, ಜಾರ್ಖಂಡ್, ವಯನಾಡಿನಲ್ಲಿ ಬಿಜೆಪಿಯವರಿಗೆ ಯಾಕೆ ಇವಿಎಂ ತಿರುಚಲು ಸಾಧ್ಯವಾಗಿಲ್ಲ ಎಂದು ಕೇಳಿದರು. ಕಾಂಗ್ರೆಸ್ಸಿನವರು ವಯನಾಡ್ ಬಿಟ್ಟು ಇನ್ಯಾವುದನ್ನೂ ಗೆಲ್ಲದಿದ್ದರೆ ಪರವಾಗಿಲ್ಲ ಎಂಬಂತೆ ಇದ್ದರು. ಅವರಿಗೆ ಆ ಕುಟುಂಬ ಮುಖ್ಯವೇ ಹೊರತು ಬೇರೆ ರಾಜಕಾರಣ ಪ್ರಮುಖವಲ್ಲ ಎಂದು ತೋರಿಸಿದ್ದಾರೆ ಎಂದ ಅವರು, ವಕ್ಫ್ ಬೋರ್ಡ್ ವಿಚಾರದಲ್ಲಿ ಡಿ.4ರಿಂದ ಜಿಲ್ಲೆಗಳಿಗೆ ತಂಡಗಳ ಭೇಟಿ ಇದೆ ಎಂದರು.

**ಸಂವಿಧಾನದಲ್ಲಿ ವಕ್ಫ್ ಬೋರ್ಡಿನ ಪ್ರಸ್ತಾಪವೇ ಇಲ್ಲ;** ಆ ಕುರಿತು ಸುಳ್ಳು ಹೇಳುತ್ತಿದ್ದಾರೆ ಎಂದು ಸ್ಪಷ್ಟಪಡಿಸಿದರು. ಬಿಜೆಪಿ–ಆರೆಸ್ಸೆಸ್ ವಿಷಸರ್ಪವಿದ್ದಂತೆ; ಅದನ್ನು ಕೊಲ್ಲಬೇಕೆಂದು ಖರ್ಗೆಯವರು ಹೇಳಿದ್ದಾರೆ. ಆದರೆ, ವಿಷ ಸರ್ಪಗಳು ಯಾವುದು ದೇಶಭಕ್ತರನ್ನು ವಿಷ ಸರ್ಪಕ್ಕೆ ಹೋಲಿಸುವ ನೀವು, ದೇಶದ್ರೋಹಿಗಳು, ಭಯೋತ್ಪಾದಕರನ್ನು ನಿಗ್ರಹಿಸುವ ಮತ್ತು ಕೊಲ್ಲುವ ಮಾತನಾಡುವುದಿಲ್ಲ ಯಾಕೆ ಎಂದು ಪ್ರಶ್ನೆಯನ್ನು ಮುಂದಿಟ್ಟರು. ನೀವು ಅವರ ಪರವೇ ಇದು ಕಾಂಗ್ರೆಸ್ ನೀತಿಯೇ ಎಂದು ಕೇಳಿದರು. ಕಾಂಗ್ರೆಸ್ ನಶಿಸಿ ಹೋಗುತ್ತಿದೆ. ಮಾತನಾಡುವುದಿದ್ದರೆ ದೇಶದ್ರೋಹಿಗಳ ಬಗ್ಗೆ, ಭಯೋತ್ಪಾದಕರ ಕುರಿತು ಮಾತನಾಡಿ ಎಂದು ಆಗ್ರಹಿಸಿದರು. ಈ ಸರಕಾರದ ಅಡಿಯಲ್ಲಿ ವಕ್ಫ್ ಬೋರ್ಡಿನ ಸರ್ವಾಧಿಕಾರದ ರೀತಿಯಲ್ಲಿ ಅರಣ್ಯಾಧಿಕಾರಿಗಳೂ ಸರ್ವಾಧಿಕಾರ ತೋರುತ್ತಿದ್ದಾರೆ. ಕೋಲಾರದಲ್ಲಿ ರಮೇಶ್ ಕುಮಾರ್ ಅವರು ಅರಣ್ಯ ಜಮೀನು ಒತ್ತುವರಿ ಮಾಡಿದ್ದನ್ನು ತೆರವು ಮಾಡಿಲ್ಲ. ಒಂದೆರಡು ಎಕರೆ ಪ್ರದೇಶದಲ್ಲಿ ದೀರ್ಘ ಕಾಲದಿಂದ ಬೆಳೆ ಬೆಳೆಯುವ ರೈತರನ್ನು ಒಕ್ಕಲೆಬ್ಬಿಸುತ್ತಿದ್ದಾರೆ. ಈಡುಕೊಂಡಲು ಎಂಬ ಡಿಎಫ್ಒ ಸಚಿವರೂ ಲೆಕ್ಕಕ್ಕೆ ಇಲ್ಲದಂತೆ ಮೆರೆಯುತ್ತಿದ್ದಾರೆ ಎಂದು ಆಕ್ಷೇಪಿಸಿದರು.

700 ಎಕರೆ ಮಾವಿನ ತೋಪನ್ನು ಕತ್ತರಿಸಿ ಹಾಕಿದ್ದಾರೆ ಎಂದು ಟೀಕಿಸಿದರು. ಯತ್ನಾಳ್ ಅವರು ಪಕ್ಷದ ಹೆಸರಿನಲ್ಲಿ ಹೋರಾಟ ಮಾಡುವುದಾದರೆ ಜಿಲ್ಲಾಧ್ಯಕ್ಷರ ಗಮನಕ್ಕೆ ತರಬೇಕಿತ್ತು.

ಅವರನ್ನು ವಿಶ್ವಾಸಕ್ಕೆ ಪಡೆಯಬೇಕಿತ್ತು ಎಂದು ಪ್ರಶ್ನೆಗೆ ಉತ್ತರಿಸಿದ ಅವರು, ನಮ್ಮದು ಶಿಸ್ತಿನ ಪಕ್ಷವೇ ಆಗಿದೆ. ಕೆಲವರು ಶಿಸ್ತು ಮೀರಿ ಹೋದಾದ ಅದನ್ನು ಸರಿದಾರಿಗೆ ತರುವುದು ಮುಖಂಡರ ಆದ್ಯ ಕರ್ತವ್ಯ. ಅಶಿಸ್ತಿನ ಕುರಿತು ಹೈಕಮಾಂಡ್ ಗಮನ ಸೆಳೆಯುವ ಕೆಲಸವನ್ನು ರಾಜ್ಯಾಧ್ಯಕ್ಷರು ಮತ್ತು ಉಳಿದವರು ಮಾಡಿದ್ದಾರೆ ಎಂದು ಪ್ರಶ್ನೆಗೆ ಉತ್ತರ ನೀಡಿದರು.

# ಚುನಾವಣೆಯಲ್ಲಿ ಸೋತಿದ್ದಾನೆಯೇ ಹೊರತು ಮನುಷ್ಯನಾಗಿ ಸೋತಿಲ್ಲ

**ಬೆಂಗಳೂರು, ನ. 25 :** ನನ್ನ ಮಗ ಮೂರನೇ ಸಲ ಸೋತಿದ್ದಾನೆ. ಅವನು ಚುನಾವಣೆಯಲ್ಲಿ ಮಾತ್ರ ಸೋತಿದ್ದಾನೆಯೇ ಹೊರತು ಮನುಷ್ಯನಾಗಿ ಸೋತಿಲ್ಲ, ಅವನ ಮಾನವೀಯತೆ, ಸಹೃದಯತೆ ಸೋತಿಲ್ಲ ಎಂದು ನಿಖಿಲ್ಗೆ ತಾಯಿ ಅನಿತಾ ಕುಮಾರಸ್ವಾಮಿ ಧೈರ್ಯದ ಮಾತುಗಳನ್ನಾಡಿದ್ದಾರೆ. ಚನ್ನಪಟ್ಟಣ ಕ್ಷೇತ್ರದ ಫಲಿತಾಂಶದ ನಂತರ ಇದೇ ಮೊದಲ ಬಾರಿಗೆ ಎಕ್ಸ್ ಜಾಲತಾಣದಲ್ಲಿ ಭಾವನಾತ್ಮಕ ಪೋಸ್ಟ್ ಹಾಕಿರುವ ಅವರು, ತಮ್ಮ ಭಾವನೆಗಳನ್ನು ಹಂಚಿಕೊಂಡಿದ್ದಾರೆ.

ನನ್ನ ಪುತ್ರ ನಿಖಿಲ್ ಕುಮಾರಸ್ವಾಮಿ, ಚನ್ನಪಟ್ಟಣ ವಿಧಾನಸಭೆ ಕ್ಷೇತ್ರದ ಉಪ ಚುನಾವಣೆಯಲ್ಲಿ ಪರಾಜಯ ಹೊಂದಿದ್ದಾನೆ, ಒಪ್ಪುತ್ತೇನೆ. ಚುನಾವಣೆ ವ್ಯವಸ್ಥೆಯಲ್ಲಿ ಸೋಲು ಗೆಲುವು ಇದ್ದೇ ಇರುತ್ತದೆ ಹಾಗೂ ಒಬ್ಬರು ಗೆಲ್ಲಬೇಕಾದರೆ ಇನ್ನೊಬ್ಬರು ಸೋಲಲೇಬೇಕಾಗುತ್ತದೆ. ಆದರೆ, ಸೋಲಿಗೆ ಅನೇಕ ಕಾರಣಗಳಿರುತ್ತವೆ. ಹಾಗೆಂದು ನಿಖಿಲ್ ಸೋಲಿನ ಕಾರಣಗಳ ಬಗ್ಗೆ ಚರ್ಚಿಸುವುದು ನನ್ನ ಉದ್ದೇಶವಲ್ಲ ಎಂದಿದ್ದಾರೆ.



ರಾಜಕಾರಣದಲ್ಲಿ ನನಗಾಗಲಿ, ನನ್ನ ಪತಿಗಾಗಲಿ ಅಥವಾ ನನ್ನ ಮಾವನವರಿಗೇ ಆಗಲಿ ಗೆಲುವು, ಸೋಲು ಹೊಸದೇನಲ್ಲ. ಎರಡನ್ನೂ ಸಮಚಿತ್ತದಿಂದ ಸ್ವೀಕರಿಸಿದ್ದೇವೆ. ಗೆದ್ದಾಗ ಬೀಗಿಲ್ಲ, ಸೋತಾಗ ಕುಗ್ಗಿಲ್ಲ. ಸೋತ ಹತಾಶೆಯಲ್ಲಿ ಅನ್ಯರನ್ನು ಹೀಗಳೆದಿಲ್ಲ. ನನ್ನ ಮಗನಿಗೂ ಇದೇ ಅನ್ವಯ ಆಗುತ್ತದೆ ಎಂದು ಹೇಳಿದ್ದಾರೆ. ನನ್ನ ಮಗನ ಬಗ್ಗೆ ರಾಜ್ಯದ ಜನತೆಗೆ ಹೆಚ್ಚೇನೂ ಹೇಳುವ ಅಗತ್ಯವಿಲ್ಲ. ಅವನು ಒಳ್ಳೆಯ ಮಗ, ಒಳ್ಳೆಯ ಪತಿ, ಒಳ್ಳೆಯ ತಂದೆ. ರಾಜಕಾರಣಕ್ಕೆ ಬರುವ ಮುನ್ನ ಒಳ್ಳೆಯ ನಾಯಕ ನಟ. ಅವನಂಥ ಒಳ್ಳೆಯ ಮಗನನ್ನು ಪಡೆದಿದ್ದಕ್ಕಾಗಿ ನಾನೂ ನನ್ನ ಪತಿ ಹೆಮ್ಮೆಪಡುತ್ತೇವೆ.

ತಾಯಿಯಾಗಿ ಅವನ ಯಶಸ್ಸನ್ನು ಸಂಭ್ರಮಿಸುತ್ತೇನೆ. ಅವನಿಗೆ ಕಷ್ಟ ಎದುರಾದಾಗ ಕಣ್ಣೀರಿಟ್ಟಿದ್ದೇನೆ. ನನ್ನ ಕರುಳಬಳ್ಳಿಯ ಮೇಲೆ ನನಗಷ್ಟು ಮಮಕಾರ ಇರುತ್ತದಲ್ಲವೇ ನನ್ನಂತಹ ಎಲ್ಲಾ ತಾಯಂದಿರಿಗೂ ನನ್ನ ಭಾವನೆಗಳು ಅರ್ಥವಾಗುತ್ತವೆ ಎನ್ನುವ ವಿಶ್ವಾಸ ನನ್ನದು ಎಂದು ಆತ್ಮವಿಶ್ವಾಸದಿಂದ ಹೇಳಿದ್ದಾರೆ.

ನನ್ನ ಮಗ 3ನೇ ಸಲ ಸೋತಿದ್ದಾನೆ. ಅವನು ಚುನಾವಣೆಯಲ್ಲಿ ಮಾತ್ರ ಸೋತಿದ್ದಾನೆಯೇ ಹೊರತು ಮನುಷ್ಯನಾಗಿ ಸೋತಿಲ್ಲ, ಅವನ ಮಾನವೀಯತೆ, ಸಹೃದಯತೆ ಸೋತಿಲ್ಲ. ಅವನ ಮನಸ್ಸು, ಹೃದಯ ವೈಶಾಲ್ಯತೆ ಏನೆಂದು ತಾಯಿಯಾಗಿ ನನಗೆ ಚನ್ನಾಗಿ ಗೊತ್ತು. ನಾನು ಸದಾ ಆ ಭಗವಂತನಲ್ಲಿ ನಂಬಿಕೆ ಇಟ್ಟಿದ್ದೇನೆ. ನನ್ನ ಮಗನ ಮೇಲೆ ಆ ದೈವದ ಕರುಣೆ, ಅನುಗ್ರಹವಿದೆ ಹಾಗೂ ಚನ್ನಪಟ್ಟಣ ಜನತೆಯ ಪ್ರೀತಿ–ವಿಶ್ವಾಸವೂ ಸದಾ ಅವನ ಮೇಲಿರುತ್ತದೆ. ಇಂದಲ್ಲ, ನಾಳೆ ಜನಸೇವೆ ಮಾಡುವ ಅವಕಾಶ ಅವನಿಗೆ ಸಿಕ್ಕೇ ಸಿಗುತ್ತದೆ ಎನ್ನುವ ಅಚಲ ನಂಬಿಕೆ ನನ್ನದು ಎಂದು ಅನಿತಾ ಕುಮಾರಸ್ವಾಮಿ ತಿಳಿಸಿದ್ದಾರೆ.

# ಸುಳ್ಳಿನ ಮೆರವಣಿಗೆಗಾಗಿ ಸತ್ಯದ ಕೊಲೆ ಮಾಡಿ ಸಮಾಧಿ ಮಾಡುವ ಯತ್ನ: ಪ್ರಿಯಾಂಕ್ ಟೀಕೆ

**ಬೆಂಗಳೂರು, ನ. 25 :** ಸುಳ್ಳಿನ ಮೆರವಣಿಗೆಗಾಗಿ ಸತ್ಯದ ಕೊಲೆ ಮಾಡಿ ಸಮಾಧಿ ಮಾಡುವ ಪ್ರಯತ್ನ ಭ್ರಷ್ಟ ಜನತಾ ಪಾರ್ಟಿಯವರದ್ದು. ಆದರೆ ಸತ್ಯಕ್ಕೆ ಸಾವಿಲ್ಲ ಎಂಬ ಅರಿವು ಅವರಿಗೆ ಇದ್ದಂತಿಲ್ಲ. ಕೂಸನ್ನು ಚಿವುಟುವುದೂ ಬಿಜೆಪಿಯವರೇ, ತೊಟ್ಟಿಲು ತೂಗುವುದೂ ಬಿಜೆಪಿಯವರೇ, ಬಿಜೆಪಿಯವರ ಈ ಕಳ್ಳಾಟ ವಕ್ಫ್ ವಿಚಾರದಲ್ಲಿ ಬಟಾಬಯಲಾಗಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಈ ಬಗ್ಗೆ ತಮ್ಮ ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿರುವ ಅವರು, ಬಿಜೆಪಿಗರು ನಡೆಸುತ್ತಿರುವುದು ರೈತರ ಪರವಾದ ಹೋರಾಟವಲ್ಲ, ವಿಜಯೇಂದ್ರ ಹಠಾವೋ ಹೋರಾಟ. ಈ ಸತ್ಯ ಜಗನ್ನಾಥ ಭವನದ ಪ್ರತಿ ಕಿಟಕಿ ಬಾಗಿಲುಗಳಿಗೂ ತಿಳಿದಿದೆ ಎಂದು ಕೆಲವು ಅಂಶಗಳನ್ನು ಉಲ್ಲೇಖಿಸಿದ್ದಾರೆ.



2018–2023ರ ನಡುವೆ ಬಿಜೆಪಿ ಸರ್ಕಾರದ ಅವಧಿಯಲ್ಲಿ ಶಾಸಕ ಕುಮಾರ್ ಬಂಗಾರಪ್ಪ ಅವರ ಅಧ್ಯಕ್ಷತೆಯಲ್ಲಿ ಕರ್ನಾಟಕ ವಿಧಾನ ಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತ ಕಲ್ಯಾಣ ಸಮಿತಿಯು ಜಿಲ್ಲಾಧಿಕಾರಿಗಳೊಂದಿಗೆ ಹಲವಾರು ಸಭೆ ನಡೆಸಿ ವಕ್ಫ್ ಆಸ್ತಿ ಗುರುತಿಸಿ, ತೆರವುಗೊಳಿಸಲು ಸೂಚನೆ ನೀಡಿದ್ದು ಏಕೆ. 2019ರಿಂದ 2020ರ ಅವಧಿಯಲ್ಲಿ ಬಿಜೆಪಿ ಸರ್ಕಾರ 2,865 ಎಕರೆ ವಿಸ್ತೀರ್ಣದ ಜಮೀನಿಗೆ ವಕ್ಫ್ ಆಸ್ತಿ ಎಂದು ಅಧಿಸೂಚನೆ ಹೊರಡಿಸಿದ್ದು ಏಕೆ ಹಿಂದಿನ ಬಿಜೆಪಿ ಸರ್ಕಾರ 1,735 ರೈತರಿಗೆ ವಕ್ಫ್ ಅಸ್ತಿಗೆ ಸಂಬಂಧಿಸಿದಂತೆ ನೋಟಿಸ್ ನೀಡಿದ್ದು.

ಏಕೆ ಹಿಂದಿನ ಬಿಜೆಪಿ ಸರ್ಕಾರ 4,720 ಎಕರೆಯಷ್ಟು ಜಮೀನನ್ನು ಪರಬಾರೆಯಾಗದಂತೆ ವಕ್ಫ್ ಆಸ್ತಿ ಎಂದು ಫ್ಲಾಗ್ ಆಫ್ ಮಾಡಿದ್ದು ಏಕೆ ರೈತರ ಹೆಸರಲ್ಲಿರುವ ಆಸ್ತಿಗಳ ಪಹಣಿಗಳಲ್ಲಿ ವಕ್ಫ್ ಆಸ್ತಿ ಎಂದು ನಮೋದಿಸಬೇಕು ಎಂದು ಕುಮಾರ್ ಬಂಗಾರಪ್ಪ ಸಮಿತಿ ಸೂಚಿಸಿದ್ದು ಏಕೆ ರಾಜ್ಯದಾದ್ಯಂತ ತಾಲೂಕುವಾರು ವಕ್ಫ್ ಆಸ್ತಿಗಳನ್ನು ಪರಿಶೀಲಿಸಿ ಭೂಮಿ ಸಾಫ್ಟ್ ವೇರ್ ನಲ್ಲಿ ವಕ್ಫ್ ಆಸ್ತಿ ಎಂದು ನಮೋದಿಸಬೇಕು ಎಂದು ಸೂಚಿಸಿದ್ದು ಏಕೆ ಇದು ಬಿಜೆಪಿಯ 40% ಹಗರಣಕ್ಕೆ ಸಿಕ್ಕಿರುವ ಕ್ಲೀನ್ ಚಿಟ್ ಅಲ್ಲ ಪ್ರಿಯಾಂಕ್ ಖರ್ಗೆ ಬಿಜೆಪಿ ಸರ್ಕಾರದ ಅವಧಿಯ ಕುಮಾರ್ ಬಂಗಾರಪ್ಪ ಸಮಿತಿ ಬೆಂಗಳೂರಿನ ಕೆ.ಆರ್ ಮಾರುಕಟ್ಟೆಯನ್ನು ವಕ್ಫ್ ಆಸ್ತಿ ಎಂದು ನೀಡಿದ್ದ ವರದಿಯನ್ನು ಸದನದಲ್ಲಿ ಅಂಗೀಕರಿಸಲಾಗಿತ್ತು,

ಆಗ ಬಿಜೆಪಿಯವರ ಪ್ರಜ್ಞೆ ಎಲ್ಲಿ ಉದುರಿ ಬಿದ್ದಿತ್ತು ಎಂದು ಪ್ರಶ್ನಿಸಿರುವ ಸಚಿವರು, ಈ ಎಲ್ಲಾ ಪ್ರಶ್ನೆಗಳಿಗೆ ವಕ್ಫ್ ಆಸ್ತಿ ಅಲ್ಲಾನ ಆಸ್ತಿ ಎಂದಿದ್ದ ಬೊಮ್ಮಾಯಿಯವರು ಉತ್ತರಿಸುತ್ತಾರೋ ಟಿಪ್ಪು ಟೋಪಿ ಧರಿಸಿ ಖಡ್ಗ ಹಿಡಿದಿದ್ದ ಯಡಿಯೂರಪ್ಪನವರು ಉತ್ತರಿಸುತ್ತಾರೋ ಅಥವಾ ವಕ್ಫ್ ವಿಚಾರಕ್ಕಾಗಿ ರಾಜ್ಯ ಪ್ರವಾಸಕ್ಕೆ ಹೊರಡುತ್ತಿರುವ ಬಿಜೆಪಿಯ ಎ ಟೀಮ್, ಬಿ ಟೀಮ್ ನಾಯಕರು ಜನತೆಗೆ ಈ ಸತ್ಯಗಳನ್ನು ತಿಳಿಸಿ ಬರುತ್ತಾರೆಯೇ ಎಂದು ಬಿಜೆಪಿ ನಾಯಕರಿಗೆ ವ್ಯಂಗ್ಯವಾಗಿ ಪ್ರಶ್ನಿಸಿದ್ದಾರೆ.

# ಎಚ್ಎಎಲ್ ವಿಮಾನ ನಿಲ್ದಾಣದ ನವೀಕರಣ

**ಬೆಂಗಳೂರು, ನ. 25 :** ನಗರದ ಎಚ್ಎಎಲ್ ವಿಮಾನ ನಿಲ್ದಾಣದ ನವೀಕರಣಕ್ಕೆ ಸಂಬಂಧಿಸಿದ ಮಾಸ್ಟರ್ ಪ್ಲಾನ್'ಗೆ ಭಾರತೀಯ ವಿಮಾನ ನಿಲ್ದಾಣಗಳ ಪ್ರಾಧಿಕಾರ ಒಪ್ಪಿಗೆ ನೀಡಿದೆ. ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಕಾರ್ಯಾಚರಣೆ ಆರಂಭ ಮಾಡುವವರೆಗೂ ಈ ವಿಮಾನ ನಿಲ್ದಾಣ ನಗರದ ವಾಯು ಸಂಚಾರ ಅಗತ್ಯಗಳನ್ನು ಪೂರೈಸುತ್ತಿತ್ತು. ಇದೀಗ ರಕ್ಷಣಾ ಪಡೆಗಳು, ವಿಐಪಿಗಳು ಮತ್ತು ವಿವಿಐಪಿಗಳು ಮತ್ತು ಖಾಸಗಿ ಸಂಸ್ಥೆಗಳು ಬಳಸುವಂತಹ ಸರಾಸರಿ 12 ಸಣ್ಣ ವಿಮಾನಗಳು ಪ್ರತಿದಿನ ಎಚ್ಎಎಲ್ ವಿಮಾನ ನಿಲ್ದಾಣವನ್ನು ಬಳಸುತ್ತಿವೆ.

ಈ ವಿಮಾನ ನಿಲ್ದಾಣದಲ್ಲಿ 30 ಪಾರ್ಕಿಂಗ್ ಸ್ಥಳಗಳನ್ನು ಹೊಂದಿದ್ದು, 24–7 ತೆರೆದಿರುತ್ತದೆ. ಪ್ರಸ್ತುತ ಸಿದ್ಧಪಡಿಸಿರುವ ಮಾಸ್ಟರ್ ಪ್ಲಾನ್ 2047 ರವರೆಗೂ ಉತ್ತಮವಾಗಿ ಕಾರ್ಯನಿರ್ವಹಿಸುವಂತೆ ಮಾಡಲಿದೆ. ವರ್ಷಕ್ಕೆ 40 ಲಕ್ಷ ಪ್ರಯಾಣಿಕರನ್ನು ಹೊತ್ತೊಯ್ಯುವ ಗುರಿಯನ್ನು ಹೊಂದಿದೆ. ಪೀಕ್ ಅವರ್ಗಳಲ್ಲಿ ಗರಿಷ್ಠ 2,500 ಪ್ರಯಾಣಿಕರನ್ನು ನಿಭಾಯಿಸಬಲ್ಲದು. 2007–08 ರ ಆರ್ಥಿಕ ವರ್ಷದಲ್ಲಿ ಪ್ರಯಾಣಿಕರ ಸಂಚಾರಕ್ಕೆ ಬಂದ್ ಆಗುವುದಕ್ಕೂ ಮುನ್ನೂ 10 ಲಕ್ಷಕ್ಕೂ ಹೆಚ್ಚು ಪ್ರಯಾಣಿಕರನ್ನು ನಿರ್ವಹಿಸಿದೆ. ಯೋಜನೆಯ ಹಂತ–I ರಲ್ಲಿ, ವಿಮಾನ ನಿಲ್ದಾಣದ ಪ್ರದೇಶವನ್ನು 21,885 ಚದರ ಮೀಟರ್‌ನಿಂದ 32,000 ಚದರ ಮೀಟರ್‌ಗೆ




ವಿಸ್ತರಿಸಲಾಗುವುದು.

ಟರ್ಮಿನಲ್ ಕಟ್ಟಡವನ್ನು ಕೆಡವಿ ಹೊಸ ಕಟ್ಟಡ ನಿರ್ಮಿಸಲಾಗುವುದು. ಒಂದು ಹಂತದಲ್ಲಿ ಆಗಮನ, ಮತ್ತೊಂದು ಹಂತದಲ್ಲಿ ನಿರ್ಗಮನಗಳ ಇರಲಿದೆ. ಪ್ರಸ್ತುತ ಇರುವ ನಿಲ್ದಾಣದಲ್ಲಿ ಆಗಮನ ಹಾಗೂ ನಿರ್ಗಮನ ಎರಡೂ ಒಂದೇ ಸ್ಥಳದಲ್ಲಿದೆ. ಇದಲ್ಲದೆ, ಮಲ್ಟಿ–ಲೆವೆಲ್ ಕಾರ್ ಪಾರ್ಕಿಂಗ್ ಸೌಲಭ್ಯ ಇರಲಿದ್ದು, 500 ಕಾರುಗಳನ್ನು ನಿಲುಗಡೆ ಮಾಡಬಹುದು. ಟರ್ಮಿನಲ್ ಮುಂಭಾಗದ ದ್ವಿಪಥ ರಸ್ತೆಯನ್ನು ಚತುಷ್ಪಥವಾಗಿ ವಿಸ್ತರಿಸಲಾಗುವುದು ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ವಿಮಾನ ನಿಲ್ದಾಣದ ರನ್ ವೇ ಯಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ. ಇಲ್ಲಿನ ರನ್‌ವೇ 3,306 ಮೀಟರ್ ಉದ್ದ ಮತ್ತು 61 ಮೀಟರ್ ಅಗಲವನ್ನು ಹೊಂದಿದ್ದು, ಆಯಾಮದ ಪ್ರಕಾರ ಇದು ದೇಶದ ಅತ್ಯುತ್ತಮ ರನ್ವೇಗಳಲ್ಲಿ ಒಂದಾಗಿದೆ ಎಂದು ವಿಮಾನ ನಿಲ್ದಾಣದ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಕೇಂದ್ರ ಸರ್ಕಾರದೊಂದಿಗೆ ಆಗಿರುವ ಒಪ್ಪಂದದ ಪ್ರಕಾರ ನಮ್ಮ ವಿಮಾನ ನಿಲ್ದಾಣವು ಮೇ 2033 ರೊಳಗೆ ನಾಗರಿಕ ಕಾರ್ಯಾಚರಣೆಯನ್ನು ಆರಂಭಿಸಲಿದೆ. ಆ ಹೊತ್ತಿಗೆ ನಗರದಲ್ಲಿ ಎರಡು ವಿಮಾನ ನಿಲ್ದಾಣಗಳಿರಲಿವೆ. ನಗರದಲ್ಲಿ ಜನಸಂಖ್ಯೆ ಹೆಚ್ಚಾಗುತ್ತಿದ್ದು, ಮತ್ತೊಂದು ವಿಮಾನ ನಿಲ್ದಾಣಕ್ಕೆ ಬೇಡಿಕೆ ಹೆಚ್ಚಾಗಿರುತ್ತದೆ. ಹೀಗಾಗಿ ಭವಿಷ್ಯಕ್ಕೆ ಸಜ್ಜಾಗುತ್ತಿದ್ದೇವೆಂದು ಹೇಳಿದ್ದಾರೆ.

ಎಚ್ಎಎಲ್ ವಿಮಾನ ನಿಲ್ದಾಣವನ್ನು ಜನವರಿ 1941 ರಲ್ಲಿ ತೆರೆಯಲಾಗಿತ್ತು. ಆದರೆ ವಾಣಿಜ್ಯ ಕಾರ್ಯಾಚರಣೆಗಳು ಐದು ವರ್ಷಗಳ ನಂತರ ಪ್ರಾರಂಭವಾಯಿತು. ಎಚ್ಎಎಲ್ ವಿಮಾನ ನಿಲ್ದಾಣವು ನೆರೆ ನಗರಗಳಿಗೆ ಪ್ರಾದೇಶಿಕ ಸಂಪರ್ಕ ಯೋಜನೆ (UDAAN) ಕಾರ್ಯಾಚರಣೆಗಳನ್ನು ಒದಗಿಸುವಲ್ಲಿ ನಿರ್ಣಾಯಕ ಪಾತ್ರವನ್ನು ವಹಿಸುತ್ತದೆ ಎಂದು ಉನ್ನತ ಅಧಿಕಾರಿಯೊಬ್ಬರು ಹೇಳಿದ್ದಾರೆ.

# ಕಾಂಗ್ರೆಸ್‌ಗೆ ಜೆಡಿಎಸ್ ಶಾಸಕರ ಸೇರ್ಪಡೆಗೆ ಯತ್ನ: ಯೋಗಿ ಹೇಳಿಕೆಗೆ ಸಾ.ರಾ. ತಿರುಗೇಟು

**ಮೈಸೂರು, ನ.25 :** ಜೆಡಿಎಸ್ ಶಾಸಕರನ್ನ ಕಾಂಗ್ರೆಸ್‌ಗೆ ಕರೆತರುತ್ತೇನೆ ಎಂಬ ಶಾಸಕ ಸಿ. ಪಿ ಯೋಗೇಶ್ವರ್ ಹೇಳಿಕೆಗೆ ಜೆಡಿಎಸ್‌ನ ಮಾಜಿ ಶಾಸಕ ಸಾ.ರಾ. ಮಹೇಶ್ ಅವರು ಪ್ರತಿಕ್ರಿಯಿಸಿದ್ದು, ಮೊದಲು ಕಾಂಗ್ರೆಸ್ನಲ್ಲಿರುವ ಅಸಮಾಧಾನಗೊಂಡ ಶಾಸಕರ ಬಗ್ಗೆ ಗಮನ ಹರಿಸಲಿ. ಆ ನಂತರ ಜೆಡಿಎಸ್ ಬಗ್ಗೆ ಗಮನ ನೀಡಿದರೆ ಒಳ್ಳೆಯದು ಎಂದು ತಿರುಗೇಟು ನೀಡಿದ್ದಾರೆ.

ಈ ಕುರಿತು ನಗರದಲ್ಲಿ ಮಾಧ್ಯಮದವರ ಜೊತೆ ಮಾತನಾಡಿದ ಅವರು, ಸಿ.ಪಿ. ಯೋಗೇಶ್ವರ್ ಅವರು ನನಗೂ ಸ್ನೇಹಿತರು, ಕುಮಾರಣ್ಣ ಮಾರ್ಗದರ್ಶನದಲ್ಲಿ ಜೆಡಿಎಸ್‌ನಿಂದ ಅಭ್ಯರ್ಥಿ ಮಾಡಬೇಕು, ಅವರನ್ನ ನಮ್ಮಲ್ಲೇ ಉಳಿಸಿಕೊಳ್ಳಬೇಕು ಎಂದು ಹೇಳಿ ಹಲವಾರು ಬಾರಿ ದೆಹಲಿಯಲ್ಲಿ ಹಾಗೂ ಬೆಂಗಳೂರಿನಲ್ಲಿಯೂ ಚರ್ಚೆ ಮಾಡಿದ್ದೇವೆ. ಇವತ್ತು ಅವರು ಕಾಂಗ್ರೆಸ್ಗೆ ಹೋಗಿದ್ದಾರೆ ಶಾಸಕರಾಗಿದ್ದಾರೆ ಜನ ಆಶೀರ್ವಾದ ಮಾಡಿದ್ದಾರೆ. ಮೂರು ವರ್ಷ ಒಳ್ಳೆಯ ಕೆಲಸ ಮಾಡಲಿ ಎಂದು ಸಲಹೆ ನೀಡಿದರು.

ನಮ್ಮವರನ್ನ ಕರೆಯುವುದು ಇರಲಿ, ಕಾಂಗ್ರೆಸ್‌ನಿಂದ




30–35 ಜನ ಬರಲಿಕ್ಕೆ ರೆಡಿ ಇದ್ದಾರೆ, ಸರ್ಕಾರ ಬಹಳಷ್ಟು ದಿನ ಉಳಿಯಲ್ಲ ಎಂದು ಹೇಳಿ ನನ್ನೊಂದಿಗೆ ಚರ್ಚೆ ಮಾಡಿದ್ದಾರೆ. ಮೊದಲು ಮಾನ್ಯ ಮುಖ್ಯಮಂತ್ರಿಗಳಿಗೆ, ಉಪಮುಖ್ಯಮಂತ್ರಿಗಳಿಗೆ ಅವರು ಯಾರ್ಯಾರು ಅಸಮಾಧಾನಿತರು ಇದ್ದಾರೆ, ಅವರೆಲ್ಲರ ಪಟ್ಟಿಯನ್ನ ಕೊಟ್ಟು ಅವರನ್ನೆಲ್ಲಾ ಸಮಾಧಾನಪಡಿಸಿಕೊಂಡು, ಮೂರು ವರ್ಷ ಸರ್ಕಾರ ಉಳಿಸಿಕೊಳ್ಳಲಿ ಎಂದು ಸಲಹೆ ಕೊಡಲಿ ಎಂದರು.

ನಮ್ಮ ಪಕ್ಷದ ಮೇಲೆ ನಮಗೆ ನಂಬಿಕೆ ಇದೆ. ಪ್ರಾದೇಶಿಕ ಪಕ್ಷವಾದರೂ ನಾವು ಗೆಲ್ಲಲಿ–ಸೋಲಲಿ ಬದುಕಿರುವ ತನಕ ದೇವೇಗೌಡರು, ಕುಮಾರಸ್ವಾಮಿ ಅವರ ಜೊತೆಯಲ್ಲಿ ಇರುತ್ತೇವೆ ಎಂದು ಹೇಳಿದರು.

# ಪ್ರತಿಯೊಬ್ಬರೂ ಸ್ವಾಭಿಮಾನದಿಂದ ಬದುಕಲು ಸಂವಿಧಾನ ಅವಕಾಶ ಕೊಟ್ಟಿದೆ



**ಬೆಂಗಳೂರು, ನ. 25 :** ಸಂವಿಧಾನ ಬದಲಾಯಿಸಬೇಕು ಎಂದು ಪೇಜಾವರಶ್ರೀ ಹಾಗೂ ಸಂಘ ಪರಿವಾರ ನಿಷ್ಠೆಯ ಸ್ವಾಮೀಜಿಗಳು ರಾಜ್ಯಪಾಲರಿಗೆ ಮನವಿ ಸಲ್ಲಿಸಿರುವುದು ಆತಂಕಕಾರಿ ಹಾಗೂ ಕಳವಳಕಾರಿ ಮಾತ್ರವಲ್ಲ, ಸಂವಿಧಾನಕ್ಕೆ ಬೆದರಿಕೆ ಎಂದು ಕಾಂಗ್ರೆಸ್ ಮುಖಂಡ ಬಿ.ಕೆ.ಹರಿಪ್ರಸಾದ್ ಹೇಳಿದ್ದಾರೆ. ಸಂವಿಧಾನ ವಿರೋಧಿ ಸಂಘಟನೆ ಆರ್‌ಎಸ್‌ಎಸ್ ನೂರು ವರ್ಷಕ್ಕೆ ಕಾಲಿಡುತ್ತಿರುವ ಸಂದರ್ಭದಲ್ಲಿ ಸಂವಿಧಾನ ಬದಲಾಯಿಸಬೇಕು ಎಂದು ಪರಿವಾರ ನಿಷ್ಠೆಯ ಯತಿಗಳು ಬೀದಿಗಿಳಿದು ಮಾತಾಡುತ್ತಿರುವುದಕ್ಕೂ ಸಂಬಂಧವಿದೆ. ಇದರಲ್ಲಿ ಸಂಘ ಪರಿವಾರದ ನೂರು ವರ್ಷಗಳ ಸಂಭ್ರಮಾಚಾರಣೆಯ ಕಾರ್ಯಕ್ರಮದ ಗುಪ್ತಸೂಚಿ ಇರುವುದು ಸ್ಪಷ್ಟ ಎಂದಿದ್ದಾರೆ. ಸಮಾಜ ಸುಧಾರಕರ ಆಶಯಗಳು ಹಾಗೂ ಸ್ವಾತಂತ್ರ್ಯ ಹೋರಾಟಗಾರರ ಪರಿಶ್ರಮದಿಂದ ರಚಿತವಾಗಿರುವ ಸರ್ವ ಧರ್ಮ, ಸಹಬಾಳ್ವೆ ತಿರುಳಿರುವ ಸಂವಿಧಾನವನ್ನು ಬದಲಾವಣೆಗೆ ಪೇಜಾವರ ಶ್ರೀಗಳು ಒತ್ತಾಯಿಸಿದ್ದಾರೆ. ನೂರಾರು ಕೋಟಿ ಜನಸಂಖ್ಯೆಯ ಭಾರತದಲ್ಲಿ ಪ್ರತಿಯೊಬ್ಬರು ಸ್ವಾಭಿಮಾನದಿಂದ ಬದುಕಲು ಸಂವಿಧಾನ ಅವಕಾಶ ನೀಡಿದೆ. ಇದರ ಬದಲಾಗಿ ಪೇಜಾವರರು ಯಾವ ವ್ಯವಸ್ಥೆಯನ್ನು ಬಯಸುತ್ತಿದ್ದಾರೆ. ದಲಿತರು–ಶೂದ್ರರು ಶ್ರೇಷ್ಠತೆಯ ವ್ಯಸನಕ್ಕೆ ತಲೆಬಾಗಬೇಕೇ ಮಹಿಳೆಯರು ಅತ್ಯಾಚಾರಿಗಳನ್ನು ಆರಾಧಿಸಬೇಕೆನ್ನುವ ವ್ಯವಸ್ಥೆ ಇರಬೇಕೆ ಜೀತದಾರರು, ಶ್ರಮಿಕ ವರ್ಗ ಮಾಲೀಕರ ಅಡಿಯಾಳಾಗಿರಬೇಕೇ ಎಂದು ಶ್ರೀಗಳಿಗೆ ಪ್ರಶ್ನಿಸಿದ್ದಾರೆ.

# ಮೂರು ಕ್ಷೇತ್ರ ಗೆದ್ದ ಮಾತ್ರಕ್ಕೆ ಕಾಂಗ್ರೆಸ್ ಸರ್ಕಾರ ಹಗರಣಮುಕ್ತ ಹಣೆಪಟ್ಟಿ ಕಟ್ಟಿಕೊಳ್ಳಲಾಗದು

**ಬೆಂಗಳೂರು, ನ. 25 :** ಕಾಂಗ್ರೆಸ್ಸಿನ ಸರಕಾರದ ಅಕ್ರಮಗಳ ದೃಢೀಕರಣಕ್ಕೆ ಮತದಾರರನ್ನು ಮುಖ್ಯಮಂತ್ರಿಗಳು ಮತ್ತು ಸಚಿವರು ಬಳಸಿಕೊಳ್ಳುವುದು ಪ್ರಜಾಪ್ರಭುತ್ವಕ್ಕೆ ಮಾಡುವ ಅಪಮಾನ; ಸಂವಿಧಾನಕ್ಕೆ ಮಾಡುವ ಅಪಮಾನ ಎಂದು ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ, ಮಾಜಿ ಶಾಸಕ ಪಿ. ರಾಜೀವ್ ಅವರು ಹೇಳಿದರು. ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಉಪ ಚುನಾವಣೆಯಲ್ಲಿ 3 ಕ್ಷೇತ್ರಗಳನ್ನು ಗೆದ್ದ ಮಾತ್ರಕ್ಕೆ ಕಾಂಗ್ರೆಸ್ ಸರಕಾರ ಹಗರಣಮುಕ್ತ ಎಂಬ ಹಣೆಪಟ್ಟಿ ಕಟ್ಟಿಕೊಳ್ಳಲು ಸಾಧ್ಯವಿಲ್ಲ; ಸಿದ್ದರಾಮಯ್ಯನವರು ತಮ್ಮ ಮೇಲಿನ ಆರೋಪಗಳು ಸುಳ್ಳು ಎಂಬಂತೆ ಬಿಂಬಿಸಿಕೊಳ್ಳುತ್ತಿದ್ದಾರೆ. ಆದರೆ, ನೀವು ಮಾಡಿರುವ ಹಗರಣಗಳು, ಅಕ್ರಮಗಳು ಅಕ್ಷಮ್ಯ ಅಪರಾಧಗಳು. ಇದರ ಬಗ್ಗೆ ಬಿಜೆಪಿ ಇನ್ನಷ್ಟು ಉಗ್ರವಾಗಿ ಹೋರಾಟ ಮಾಡಲಿದೆ ಎಂದು ಎಚ್ಚರಿಸಿದರು. ಜನರು ಈ



ಸರಕಾರದ ಅಕ್ರಮಗಳು, ಹಗರಣಗಳನ್ನು ಒಪ್ಪಿಕೊಳ್ಳಲು ಹಾಗೂ ಕ್ಷಮಿಸಲು ಸಾಧ್ಯವೇ ಇಲ್ಲ ಎಂದು ತಿಳಿಸಿದರು. ಆಡಳಿತ ಪಕ್ಷದಿಂದ ಆಡಳಿತ ಯಂತ್ರದ ಬಳಕೆ, ಜನರ ಮನಸ್ಥಿತಿ, ಜನರ ಓಲೈಕೆಗೆ ಜಾಸ್ತಿ ಅವಕಾಶವಿದ್ದು, ಅಭಿವೃದ್ಧಿ ಆಗಲೆಂದು ಜನರು ಮತ ಕೊಡಬಹುದೇ ಹೊರತು, ನಿಮ್ಮ ಅಕ್ರಮಗಳ ದೃಢೀಕರಣಕ್ಕೆ ಮತದಾರರನ್ನು ಮಾನ್ಯ ಮುಖ್ಯಮಂತ್ರಿಗಳು ಮತ್ತು ಸಚಿವರು ಬಳಸಿಕೊಳ್ಳುವುದು ಪ್ರಜಾಪ್ರಭುತ್ವಕ್ಕೆ ಮಾಡುವ ಅಪಮಾನ; ಸಂವಿಧಾನಕ್ಕೆ ಮಾಡುವ ಅಪಮಾನ ಎಂದರು.

**ನ್ಯಾಯಾಲಯಗಳ ಪ್ರಕರಣಗಳ ರದ್ದತಿಗೆ ಅಫಿಡವಿಟ್ ಹಾಕಲು ಸವಾಲು :** 3 ಕ್ಷೇತ್ರಗಳ ಗೆಲುವಿನ ಹಿನ್ನೆಲೆಯಲ್ಲಿ ನ್ಯಾಯಾಲಯದಲ್ಲಿರುವ ಎಲ್ಲ ಪ್ರಕರಣಗಳ ರದ್ದತಿಗೆ ಸ್ವತಃ ವಕೀಲರಾದ ಸಿದ್ದರಾಮಯ್ಯನವರು ಅಫಿಡವಿಟ್ ಹಾಕಲಿ ಎಂದು ಪಿ.ರಾಜೀವ್ ಅವರು ಸವಾಲೆಸೆದರು. ಹಣ, ಹೆಂಡ, ಅಧಿಕಾರದ ದುರ್ಬಳಕೆ– ಇವೆಲ್ಲ ಮಾಡಿ ಗೆದ್ದಿದ್ದಾರೆ. ಚುನಾವಣಾ ಗೆಲುವನ್ನು ನ್ಯಾಯಾಂಗ ವ್ಯವಸ್ಥೆಗೆ ನೆರಳಾಗಿ ಬಳಸುವುದು ಅಕ್ಷಮ್ಯ ಅಪರಾಧ ಎಂದು ಹೇಳಿದರು. ಬಿಜೆಪಿ ಹೋರಾಟದ ಫಲವಾಗಿ ವಾಲ್ಮೀಕಿ ನಿಗಮದ ಅಕ್ರಮ ಸಂಬಂಧ ಸಚಿವರ ರಾಜೀನಾಮೆ, ಬಂಧನ ಆಗಿದೆ. ಸಿಎಂಗೆ ಹಿನ್ನಡೆ ಆಗಿದೆ. ಹೈಕೋರ್ಟ್ ಕೂಡ ತನಿಖೆ ಆಗಬೇಕೆಂದು ತಿಳಿಸಿದೆ ಎಂದು ವಿವರಿಸಿದರು. ಬಿಜೆಪಿ ರಾಜ್ಯಾಧ್ಯಕ್ಷರು ಪಾದಯಾತ್ರೆ ಮಾಡಿದ್ದರಿಂದ 14 ನಿವೇಶನಗಳನ್ನು ವಾಪಸ್ ಮಾಡುವ ಅನಿವಾರ್ಯ ಸ್ಥಿತಿಗೆ ಮುಖ್ಯಮಂತ್ರಿಗಳು ಬಂದು ನಿಂತದ್ದಾಗಿ ತಿಳಿಸಿದರು. ಇದು ತಪ್ಪು ಒಪ್ಪಿಕೊಂಡಂತಲ್ಲವೇ ಎಂದು ಪ್ರಶ್ನಿಸಿದರು. ಮುಂದಿನ ಸಾರ್ವತ್ರಿಕ ಚುನಾವಣೆಯಲ್ಲಿ ಈ ಕಾಂಗ್ರೆಸ್ಸಿಗೆ ಜನತೆ ತಕ್ಕ ಉತ್ತರವನ್ನು ನೀಡಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ರಾಜ್ಯದಲ್ಲಿ ವಕ್ಫ್ ವಿವಾದ ಭುಗಿಲೆದ್ದಿತ್ತು. ಬಿಜೆಪಿ ಅದನ್ನು ಸಮರ್ಥವಾಗಿ ಎದುರಿಸಿ ರಾಜ್ಯದಲ್ಲಿ ಕಾಂಗ್ರೆಸ್ ನೇತೃತ್ವದ ಆಡಳಿತ ತುಷ್ಟೀಕರಣದ ಪರಾಕಾಷ್ಠೆಯನ್ನು ಯಾವ ರೀತಿ ಮುಟ್ಟುತ್ತಿದೆ, ತುಷ್ಟೀಕರಣದ ನೀತಿಯ ಮೂಲಕ ಅಮಾಯಕ ರೈತರನ್ನು ಕೂಡ ಯಾವ ರೀತಿ ಬಲಿ ಕೊಡುತ್ತಿದೆ ಎಂಬ ಬಗ್ಗೆ ರಾಜ್ಯಾದ್ಯಂತ ಯಶಸ್ವಿ ಹೋರಾಟ ಕೈಗೊಂಡಿದ್ದೇವೆ. ನಮ್ಮ ಹೋರಾಟದ ಫಲವಾಗಿ ರೈತರು, ಕಾಂಗ್ರೆಸ್ಸಿನ ಈ ನೀತಿಯನ್ನು ಅತ್ಯುಗ್ರವಾಗಿ ಖಂಡಿಸುತ್ತಿದ್ದಾರೆ ಎಂದರು. ಡಿ.9ರಂದು ಅಧಿವೇಶನ ಪ್ರಾರಂಭವಾಗಲಿದ್ದು, ಸದನದೊಳಗೆ ರೈತರ ಪರವಾಗಿ ಬಿಜೆಪಿ ತನ್ನ ಹೋರಾಟವನ್ನು ಉಗ್ರವಾಗಿ ಮುಂದುವರೆಸಲಿದೆ. ಸದನಕ್ಕೆ ಪ್ರವೇಶ ಆಗುವುದಕ್ಕೆ ಮೊದಲು ರಾಜ್ಯಾದ್ಯಂತ 3 ತಂಡಗಳನ್ನು ರಚಿಸಿ ಸಂಬಂಧಿತ ಜಿಲ್ಲೆಗಳಲ್ಲಿ ಡಿ.4ರಿಂದ 6ರವರೆಗೆ ಪ್ರವಾಸ ಮಾಡಿ ಸದನಕ್ಕೆ ಬರಲಿವೆ. ನಮ್ಮ ಭೂಮಿ ನಮ್ಮ ಹಕ್ಕು? ಎಂಬ ಹೋರಾಟದ ಅಡಿಯಲ್ಲಿ ರಾಜ್ಯಾಧ್ಯಕ್ಷ ವಿಜಯೇಂದ್ರ, ವಿಧಾನಸಭೆ ಪ್ರತಿಪಕ್ಷದ ನಾಯಕ ಆರ್.ಅಶೋಕ್, ವಿಧಾನಪರಿಷತ್ತಿನ ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಅವರ ನೇತೃತ್ವದಲ್ಲಿ ಈ ತಂಡಗಳನ್ನು ರಚಿಸಲಾಗಿದೆ. ವಕ್ಫ್ ತುಘಲಕ್ ನೀತಿಯನ್ನು ಖಂಡಿಸಲಿದ್ದೇವೆ ಎಂದು ಹೇಳಿದರು.

**ಯತ್ನಾಳ್ ಅವರದ್ದು ಅನುಮತಿ ರಹಿತ ಹೋರಾಟ :** ಬಿಜೆಪಿ ಶಿಸ್ತಿನ ಪಕ್ಷ. ರಾಜ್ಯಾಧ್ಯಕ್ಷರು ರಾಜ್ಯ ಕೋರ್ ಕಮಿಟಿ ಜೊತೆ ಚರ್ಚಿಸಿ ನಿರ್ಧಾರಗಳನ್ನು ತೆಗೆದುಕೊಳ್ಳುತ್ತಾರೆ. ವೈಯಕ್ತಿಕ ಹಿತಾಸಕ್ತಿ ಇಟ್ಟುಕೊಂಡು, ಪಕ್ಷದ ನಿಯಮ–ಶಿಸ್ತನ್ನು ಉಲ್ಲಂಘಿಸಿ ಹೇಳಿಕೆ ಕೊಟ್ಟರೆ, ಹೋರಾಟ ಮಾಡಿದರೆ ಅದಕ್ಕೂ ಪಕ್ಷಕ್ಕೂ ಸಂಬಂಧ ಇಲ್ಲ ಎಂದು ಪಿ.ರಾಜೀವ್ ಅವರು ಪ್ರಶ್ನೆಗೆ ಉತ್ತರ ನೀಡಿದರು. ಯತ್ನಾಳ್ ಅವರು ಮಾಡುವ ಹೋರಾಟಕ್ಕೆ ರಾಷ್ಟ್ರೀಯ ನಾಯಕರ ಅನುಮತಿ ಪಡೆದಿಲ್ಲ. ರಾಜ್ಯ ನಾಯಕರಿಂದ, ಜಿಲ್ಲಾ ನಾಯಕರಿಂದ ಅನುಮತಿ ಪಡೆದಿಲ್ಲ. ಹಾಗಾಗಿ ಅದು ಪಕ್ಷದ ಹೋರಾಟ ಆಗುವುದಿಲ್ಲ. ಅದು ಪಕ್ಷದ ಅಶಿಸ್ತು ಕೂಡ ಆಗುತ್ತದೆ ಎಂದು ತಿಳಿಸಿದರು. ಇಲ್ಲಿನವರೆಗೆ ರಾಜ್ಯದ ಹಂತದಲ್ಲೇ ಸಮಸ್ಯೆ ಸರಿಪಡಿಸುವ ಪ್ರಯತ್ನ ಮಾಡಿದ್ದೆವು. ಅದನ್ನು ಅವರು ಒಪ್ಪಿಕೊಳ್ಳಲಿಲ್ಲ ಎಂದ ಅವರು, ಯತ್ನಾಳರ ಈ ಕ್ರಮದ ಕುರಿತು ರಾಷ್ಟ್ರನಾಯಕರ ಗಮನಕ್ಕೆ ತರುತ್ತೇವೆ. ಅವರ ವಿರುದ್ಧ ರಾಷ್ಟ್ರೀಯ ನಾಯಕರಿಗೆ ವರದಿ ಕೊಡುತ್ತೇವೆ ಎಂದು ಸ್ಪಷ್ಟಪಡಿಸಿದರು.

# ಬೌದ್ಧ ನೆಲೆ ಸನ್ನತಿ ಅಭಿವೃದ್ಧಿಗೆ ಹರ್ಷಕುಮಾರ ಆಗ್ರಹ

**ಕಲಬುರಗಿ, ನ. 25 :** ಜಿಲ್ಲೆಯಲ್ಲಿರುವ ಐತಿಹಾಸಿಕ ಸನ್ನತಿ ಅಭಿವೃದ್ಧಿಗೆ ಸರ್ಕಾರ ಮುಂದಾಗಬೇಕು. ಸನ್ನತಿ ಬೌದ್ಧ ಸ್ತೂಪವು ಕ್ರಿಸ್ತಪೂರ್ವ ಅಶೋಕನ ಕಾಲದ ಸ್ಮಾರಕಗಳಾಗಿದ್ದು, ಈ ಸ್ಮಾರಕಗಳ ಇತಿಹಾಸ ಜಗತ್ತಿಗೆ ತಿಳಿಸಲು ಈ ಸ್ಮಾರಕಕ್ಕೆ ಹೋಗಲು ಸರಿಯಾದ ರಸ್ತೆ ಮತ್ತು ಯಾತ್ರಿಗಳಿಗೆ ಅಲ್ಲಿ ಉಳಿದುಕೊಳ್ಳಲು ಸೂಕ್ತ ವಸತಿ ಸೌಕರ್ಯ ಮುಂತಾದವುಗಳನ್ನು ಕಲ್ಪಿಸಬೆಕೆಂದು ಸಂಶೋಧಕ ಮತ್ತು ಪತ್ರಕರ್ತ ಹರ್ಷ ಕುಮಾರ ಕುಗ್ವೆ ಒತ್ತಾಯಿಸಿದರು.



ನಗರದಲ್ಲಿ ಕರ್ನಾಟಕ ದಲಿತ ಸಂಘರ್ಷ ಸಮಿತಿ (ಕ್ರಾಂತಿಕಾರಿ) ಜಿಲ್ಲಾ ಘಟಕದಿಂದ ಸನ್ನತಿಯ ಬೌದ್ಧ ನೆಲೆ ಮತ್ತು ಸಾಮ್ರಾಟ ಅಶೋಕನ ಧಮ್ಮಯಾನ ಕುರಿತು ಹಮ್ಮಿಕೊಂಡಿದ್ದ ವಿಚಾರ ಸಂಕಿರಣ ಕಾರ್ಯಕ್ರಮದಲ್ಲಿ ವಿಚಾರ ಮಂಡನೆ ಮಾಡಿದ ಅವರು, ಬೌದ್ಧ ಸ್ತೂಪಿ ಮತ್ತು ಅಶೋಕ ಶಾಸನಗಳನ್ನು ಪತ್ತೆಯಾಗಿರುವ ಸನ್ನತಿ ಅಭಿವೃದ್ಧಿಯಾಗಿ ಮೊದಲಿನ ಐತಿಹಾಸಿಕ ವೈಭವ ಮರು ಸ್ಥಾಪನೆ ಮಾಡಬೇಕಾಗಿದೆ. ಈ ನಿಟ್ಟಿನಲ್ಲಿ ನಾವೆಲ್ಲ ಆಡಳಿತರೂಢ ಸರ್ಕಾರಗಳಿಗೆ ಒತ್ತಡ ಹೇರಬೇಕು ಎಂದು ಸಲಹೆ ನೀಡಿದರು.

ಸರ್ಕಾರ ಸನ್ನತಿ ಅಭಿವೃದ್ಧಿಗೆ 10 ಕೋಟಿ ರೂ. ಘೋಷಣೆ ಮಾಡಿದ್ದು, ಅದರಲ್ಲಿ ಮೂರುವರೆ ಕೋಟಿ ಬಿಡುಗಡೆ ಮಾಡಿ ಮ್ಯೂಜಿಯಂ ಇತರ ಅಭಿವೃದ್ಧಿ ಕೆಲಸ ಮಾಡಲಾಗುತ್ತಿದೆ ಎಂದು ಹೇಳಲಾಗುತ್ತಿದೆ. ಆದರೆ, ಮ್ಯೂಜಿಯಂ 20 ವರ್ಷಗಳಿಂದ ಭೂತ ಬಂಗಲೆಯಂತಾಗಿ ಪಾಳು ಬಿದ್ದಿದೆ. ಬೌದ್ಧ ಸ್ತೂಪ ಮತ್ತು ಅಶೋಕನ ಶಾಸನಗಳು ಅಭಿವೃದ್ಧಿಗೊಳಿಸಬೇಕು. ಇಲ್ಲವೇ ಕೇಂದ್ರ ಸರ್ಕಾರಕ್ಕೆ ಸನ್ನತಿ ಒಪ್ಪಿಸಬೇಕು. ಎರಡು ಸರ್ಕಾರಗಳ ಮದ್ಯದಲ್ಲಿ ಸನ್ನತಿ ನಿರ್ಲಕ್ಷ್ಯಕ್ಕೊಳಗಾಗಿ ಹಾಳಾಗುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಭೀಮಾ ನದಿ ದಂಡೆಯ ಮೇಲಿರುವ ಕಲ್ಯಾಣ ಕರ್ನಾಟಕದ ಸಣ್ಣ ಹಳ್ಳಿ ಸನ್ನತಿ. ಸಾವಿರಾರು ವರ್ಷಗಳ ಹಿಂದಿನ ಮೌರ್ಯ, ಶಾತವಾಹನರ ಕಾಲದ ಬೌದ್ಧ ಸ್ಮಾರಕಗಳು, ಅಶೋಕ ಶಾಸನಗಳು ಇಲ್ಲಿ ದೊರೆತಿರುವುದರಿಂದ ದೇಶದ ಸಾಂಸ್ಕೃತಿಕ ನಕಾಶೆಯಲ್ಲಿ ಹಿರಿದಾದ ಸ್ಥಾನವನ್ನೆ ಪಡೆದುಕೊಂಡಿದೆ. ಸುಮಾರು ಎರಡು ಸಾವಿರ ವರ್ಷಗಳ ಹಿಂದೆ ಭೀಮಾನದಿಯ ಎಡದಂಡೆಯಲ್ಲಿರುವ ಸನ್ನತಿ, ಕನಗನಹಳ್ಳಿ, ರಣಮಂಡಲ ಮತ್ತು ಬಲದಂಡೆಯ ಶಿರವಾಳ, ಅಣಬಿ, ಜೇವರಗಿ, ಹಸರಗುಂಡಗಿ ಎಲ್ಲವೂ ಮೌರ್ಯ ಸಾಮ್ರಾಟ ಅಶೋಕನ ಕಾಲದಲ್ಲಿ ಬೌದ್ಧ ನೆಲೆಗಳಾಗಿದ್ದವು ಎನ್ನುವುದಕ್ಕೆ ಅಲ್ಲಿನ ಸ್ಮಾರಕಗಳು ಹಾಗೂ ಶಾಸನಗಳು ಸಾಕ್ಷಿ ನುಡಿಯುತ್ತಿವೆ ಎಂದರು.

ಚಿಂತಕ ಪ್ರೊ.ಆರ್.ಕೆ.ಹುಡಗಿ ಉದ್ಘಾಟಿಸಿ ಮಾತನಾಡಿ, ಬೌದ್ಧ ಸ್ತೂಪ, ಅಶೋಕನ ಶಾಸನಗಳು ಹೊಂದಿರುವ ಸನ್ನತಿ ಅಭಿವೃದ್ಧಿಗೆ ಸರ್ಕಾರ ಆದ್ಯತೆ ನೀಡಬೇಕು. ನಾವೆಲ್ಲ ಜಾಗೃತರಾಗಿ ಸನ್ನತಿ ಸಂರಕ್ಷಣೆ ಮಾಡಲು ಸರ್ಕಾರಕ್ಕೆ ಒತ್ತಾಯಿಸಬೇಕಾಗಿದೆ ಎಂದರು.

ಬೌದ್ಧ ಸಾಹಿತಿ ಡಾ.ಜಗದೇವಿ ಗಾಯಕವಾಡ ಉಪನ್ಯಾಸ ನೀಡಿದರು.

> ಸನ್ನತಿ ಅಶೋಕನ ದಕ್ಷಿಣದ ರಾಜಧಾನಿಯಾಗಿತ್ತು ಮತ್ತು ವ್ಯಾಪಾರಿ ಕೇಂದ್ರವಾಗಿತ್ತು. ಸನ್ನತಿಯಲ್ಲಿ ಬೌದ್ಧ ಸ್ತೂಪ, ಅಶೋಕನ ಶಾಸನಗಳು, ಮೂರು ಅಶೋಕನ ಶಿಲ್ಪಕಲೆಗಳು ಲಭ್ಯ ಇರುವುದು ಇತಿಹಾಸದಲ್ಲಿ ಉಲ್ಲೇಖವಿದೆ. ಈ ಸನ್ನತಿ ಅಭಿವೃದ್ಧಿ ಮಾಡಿದರೆ ವಿಶ್ವದ ಗಮನ ಸೆಳೆಯಬಹುದಾಗಿದೆ.
>
> – ಹರ್ಷ ಕುಮಾರ್


ಕಾರ್ಯಕ್ರಮದಲ್ಲಿ ಸಿದ್ಧಾರ್ಥ ವಿಹಾರದ ಬಂತೇಜಿ ಪೂಜ್ಯ ಸಂಗಾನಂದ ಸಾನ್ನಿಧ್ಯ ವಹಿಸಿದ್ದರು. ರಾಜ್ಯ ಸಂಚಾಲಕ ಮಲ್ಲಿಕಾರ್ಜುನ ಕ್ರಾಂತಿ ಅಧ್ಯಕ್ಷತೆ ವಹಿಸಿದ್ದರು. ಡಾ. ಸುರೇಶ ಶರ್ಮಾ, ಬಿ.ಆರ್.ಬುದ್ಧಾ,, ಶಿವಕುಮಾರ ಕೊರಳ್ಳಿ ಸೇರಿ ಜಿಲ್ಲಾ ಮತ್ತು ತಾಲೂಕು ಸಮಿತಿಗಳ ಮುಖಂಡರು ಇದ್ದರು. ರಾಜ್ಯ ಸಂಚಾಲಕ ಅರ್ಜುನ ಭದ್ರೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಮಹಾಂತೇಶ ಬಡದಾಳ ಸ್ವಾಗತಿಸಿದರು. ಮಲ್ಲಿಕಾರ್ಜುನ ಖನ್ನಾ ನಿರೂಪಿಸಿದರು. ರಾಜಕುಮಾರ ನಿಂಬಾಳ ವಂದಿಸಿದರು.



ಬೆಂಗಳೂರಿನ ಸಂಪಂಗಿರಾಮನಗರ ಕಲ್ಯಾಣಿ ದೇವಸ್ಥಾನದಲ್ಲಿ ಸೋಮವಾರ ಕೊನೆಯ ಕಾರ್ತಿಕ ಸೋಮವಾರದ ಅಂಗವಾಗಿ ಲಕ್ಷ ದೀಪೋತ್ಸವವನ್ನು ಆಚರಿಸಲು ಭಕ್ತರು ಮಣ್ಣಿನ ದೀಪಗಳನ್ನು ಬೆಳಗಿಸಿದರು.

# ಶ್ರೇಯಸ್ ಪಟೇಲ್ ಬಳಿ ಹೊಳೆನರಸೀಪುರ ಶ್ರೇಯಸ್ಸು: ಬಹಿರಂಗವಾಗಿ ಕಾಂಗ್ರೆಸ್ ಸಂಸದನ ಹಾಡಿ ಹೊಗಳಿದ ಪ್ರೀತಂ ಗೌಡ

**ಹಾಸನ, ನ. 25 :** ಹಾಸನದಲ್ಲಿ ಬಿಜೆಪಿ ಜೆಡಿಎಸ್ ದೋಸ್ತಿಗಳ ನಡುವಣ ವೈಮನಸ್ಸು ಇನ್ನೂ ನಿಂತಿಲ್ಲವೇ ಎಂಬ ಅನುಮಾನ ಮತ್ತಷ್ಟು ಬಲವಾಗಿದೆ. ಇದಕ್ಕೆ ಪ್ರಬಲ ಕಾರಣ, ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರೀತಂಗೌಡ ನೀಡಿರುವ ಹೇಳಿಕೆ. ಹೊಳೆನರಸೀಪುರದಲ್ಲಿ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮಿತ್ರ ಪಕ್ಷ ಜೆಡಿಎಸ್ ನಾಯಕ ಎಚ್.ಡಿ. ರೇವಣ್ಣ ವಿರುದ್ಧ ವಾಗ್ದಾಳಿ ನಡೆಸಿದ್ದಲ್ಲದೆ, ಎದುರಾಳಿ ಕಾಂಗ್ರೆಸ್ ಪಕ್ಷದ ಸಂಸದ ಶ್ರೇಯಸ್ ಪಟೇಲ್‌ನ್ನು ಹಾಡಿಹೊಗಳಿದ್ದಾರೆ. ರೇವಣ್ಣ ವಿರುದ್ಧ ವಾಗ್ದಾಳಿ ನಡೆಸಿದ ಪ್ರೀತಂ ಗೌಡ, 2024ರ ನಂತರ ವಾಸ್ತು, ದಿಕ್ಕು, ದಿಸೆ ಎಲ್ಲಾ ಬದಲಾಗಿದೆ.



ಅದರ ಶ್ರೇಯಸ್ಸು ಹಾಸನ ಸಂಸದ ಶ್ರೇಯಸ್ ಪಟೇಲ್ಗೆ ಸಲ್ಲುತ್ತದೆ. ಶ್ರೇಯಸ್ ಅವರೊಂದಿಗೆ ಹೊಳೆನರಸೀಪುರದ ಶ್ರೇಯಸ್ಸು ಕೂಡ ಅಡಗಿದೆ. ನಿಮ್ಮನ್ನೆಲ್ಲಾ ನೋಡಿದ ಮೇಲೆ ಹೊಳೆನರಸೀಪುರಕ್ಕೆ ಸ್ವಾತಂತ್ರ್ಯ ಸಿಕ್ಕಿದೆ ಅನ್ನಿಸಿತು ಎಂದರು.

ಇಷ್ಟುದಿನ ಈ ಭಾಗದಲ್ಲಿ ಯಾವುದೇ ಕಾರ್ಯಕ್ರಮಕ್ಕೆ ನಡೆಯುತ್ತದೆ ಎಂದರೆ, ಯಾವುದೋ ಒಂದು ಮನೆಗೆ, ಒಂದು ತೋಟದಲ್ಲಿ ಲೈಟ್ ಇರುತ್ತಿತ್ತು. ಇಡೀ ಹೊಳೆನರಸೀಪುರದಲ್ಲಿ ಲೈಟ್ ಇರುವುದನ್ನು ನಾನು ನೋಡಿರಲಿಲ್ಲ. ಈಗ ಹೊಳೆನರಸೀಪುರ ಪಟೇಲ್ರ ತಾತನ ಕಾಲಕ್ಕೆ ಕೊಂಡೊಯ್ದಿದೆ. ಈ ಸಂದರ್ಭದಲ್ಲಿ ಪುಟ್ಟಸ್ವಾಮಿ ಗೌಡರನ್ನು ಸ್ಮರಿಸುತ್ತೇನೆ ಎಂದು ಪ್ರೀತಂ ಗೌಡ ಹೇಳಿದರು. ರಾಜಕಾರಣದಲ್ಲಿ ಅಧಿಕಾರ ಬರುತ್ತದೆ ಹೋಗುತ್ತದೆ, ಒಂದು ಪಕ್ಷದ ಪ್ರಮುಖ ಹುದ್ದೆಯಲ್ಲಿದ್ದೇನೆ. ಶ್ರೇಯಸ್ ಪಟೇಲ್ ಬೇರೆ ಪಕ್ಷದಿಂದ ಹಾಸನ ಸಂಸದರಾಗಿದ್ದಾರೆ. ಮಾನವೀಯತೆ ಅನ್ನೋದು ಬಹಳ ಮುಖ್ಯ. ಹೊಳೆನರಸೀಪುರ ವಿಧಾನಸಭಾ ಕ್ಷೇತ್ರವನ್ನು ಮಾದರಿಯನ್ನಾಗಿ ಮಾಡೋಣ. ಎಲ್ಲಿಯತನಕ ಶ್ರೇಯಸ್ ಪಟೇಲ್ಗೆ ಅಧಿಕಾರ ಕೊಡುತ್ತೀರೋ. ನಾನು ಯಾವುದೇ ಪಕ್ಷದಲ್ಲಿರಲಿ, ಇದೇ ತರಹ ಪ್ರತಿ ವರ್ಷ ಬರುತ್ತೇನೆ ಎಂದರು.

ಲೋಕಸಭೆ ಚುನಾವಣೆ ಸಂದರ್ಭದಲ್ಲಿಯೂ ಇಡೀ ರಾಜ್ಯದಲ್ಲಿ ಬಿಜೆಪಿ ಜೆಡಿಎಸ್ ಒಟ್ಟಾಗಿ ಹೋಗಿದ್ದರೆ ಹಾಸನದಲ್ಲಿ ಮಾತ್ರ ಒಡಕು ಪೂರ್ಣ ಮಾಸಿರಲಿಲ್ಲ. ಜೆಡಿಎಸ್ ಅಭ್ಯರ್ಥಿ ಪರ ಕೆಲಸ ಮಾಡುವುದಾಗಿ ಪ್ರೀತಂ ಗೌಡ ಹೇಳಿಕೆ ನೀಡಿದ್ದರೂ ತೆರೆಯ ಮರೆಯಲ್ಲಿ ಬೇರೆಯೇ ನಡೆದಿತ್ತು. ಮುಡಾ ಹಗರಣ ವಿರೋಧಿಸಿ ಬಿಜೆಪಿ, ಜೆಡಿಎಸ್ ನಡೆಸಿದ ಪಾದಯಾತ್ರೆ ಸಂದರ್ಭದಲ್ಲಿಯೂ ಕೇಂದ್ರ ಸಚಿವ ಹೆಚ್ಡಿ ಕುಮಾರಸ್ವಾಮಿ ಹಾಗೂ ಪ್ರೀತಂ ಗೌಡ ನಡುವಣ ಮುನಿಸು ಬಹಿರಂಗವಾಗಿತ್ತು. ನಂತರ ಬಿಜೆಪಿ ವರಿಷ್ಠರು ಅದಕ್ಕೆ ತೇಪೆ ಹಚ್ಚಿದ್ದರು. ಇದೀಗ ಮತ್ತೆ ಪ್ರೀತಂ ಗೌಡ ಮೈತ್ರಿ ಪಕ್ಷದ ನಾಯಕರ ವಿರುದ್ಧ ವಾಗ್ದಾಳಿ ನಡೆಸಿ, ಎದುರಾಳಿ ಪಕ್ಷದ ಸಂಸದನನ್ನು ಬಹಿರಂಗವಾಗಿ ಹಾಡಿ ಹೊಗಳಿರುವುದು ಕುತೂಹಲ ಮೂಡಿಸಿದೆ.

# ಉಪಚುನಾವಣೆ ಫಲಿತಾಂಶ 2028ರ ಚುನಾವಣೆಗೆ ದಿಕ್ಸೂಚಿ: ಸಚಿವ ಶರಣಪ್ರಕಾಶ್ ಪಾಟೀಲ್

**ಕಲಬುರಗಿ, ನ. 25:** ರಾಜ್ಯದಲ್ಲಿ ಇತೀಚೆಗೆ ನಡೆದ ಉಪಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಗೆಲ್ಲಿಸುವ ಮೂಲಕ ಮತದಾರರು ಮತ್ತೊಮ್ಮೆ ಕಾಂಗ್ರೆಸ್ ಮೇಲಿನ ವಿಶ್ವಾಸವನ್ನು ವ್ಯಕ್ತಪಡಿಸಲಿದ್ದು, ಈ ಫಲಿತಾಂಶ ಮುಂಬರುವ 2028ರ ವಿಧಾನಸಭೆ ಚುನಾವಣೆಗೆ ದಿಕ್ಸೂಚಿಯಾಗಿದೆ ಎಂದು ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಅವರು ಹೇಳಿದರು.



ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಫಲಿತಾಂಶ 2028ರ ವಿಧಾನಸಭೆ ಚುನಾವಣೆಗೆ ದಿಕ್ಸೂಚಿಯಾಗಿದೆ. ಕಲ್ಯಾಣ ಕರ್ನಾಟಕದ ಸಂಡೂರು, ಕಿತ್ತೂರು ಕರ್ನಾಟಕದ ಶಿಗ್ಗಾವಿ ಮತ್ತು ಮೈಸೂರು ಭಾಗದ ಚನ್ನಪಟ್ಟಣದ ಮತದಾರರು ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಿರುವುದರಿಂದ ಮತದಾನ್ನೋತ್ತರ ಸಮೀಕ್ಷೆಗಳು ಸುಳ್ಳು ಎಂದು ಸಾಬೀತಾಗಿದೆ ಎಂದು ಹೇಳಿದರು. ಇದೇ ವೇಳೆ ಬಿಜೆಪಿ ಹಾಗೂ ಜೆಡಿಎಸ್ ವಿರುದ್ಧ ಕಿಡಿಕಾರಿದ ಅವರು, ಮುಡಾ ಮತ್ತು ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣಗಳು ಮತ್ತು ವಕ್ಫ್ ಆಸ್ತಿ ವಿಚಾರದಲ್ಲಿ ಸಾರ್ವಜನಿಕರನ್ನು ಚುನಾವಣೆಯ ಸಂದರ್ಭದಲ್ಲಿ ದಾರಿತಪ್ಪಿಸುವ ಪ್ರಯತ್ನ ಮಾಡಿದ್ದರು. ಆದರೆ, ಜನರು ಇವರಿಗೆ ತಕ್ಕ ಉತ್ತರ ನೀಡಿದ್ದಾರೆ. ಇದು ಬಿಜೆಪಿ–ಜೆಡಿಎಸ್ ಮೈತ್ರಿ ಪಕ್ಷಗಳಿಗೆ ಮುಜುಗರವನ್ನು ತಂದಿದೆ ಎಂದು ತಿಳಿಸಿದರು. ಕಾಂಗ್ರೆಸ್ ಸರ್ಕಾರ ರಾಜ್ಯದಾದ್ಯಂತ ಗ್ಯಾರಂಟಿ ಯೋಜನೆಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಿದೆ. ಒಂದೂವರೆ ವರ್ಷದೊಳಗೆ ನಮ್ಮ ಸರಕಾರದ ಗ್ಯಾರಂಟಿ ಯೋಜನೆಗಳು ಸಮಾಜದ ಎಲ್ಲ ವರ್ಗದ ಜನರನ್ನು ತಲುಪುವಂತೆ ಮಾಡಿದೆ. ಇದರ ಫಲಿತಾಂಶ ಉಪಚುನಾವಣೆ ಫಲಿತಾಂಶದಿಂದ ಸ್ಪಷ್ಟವಾಗಿದೆ. ಬಿಜೆಪಿ–ಜೆಡಿಎಸ್ ನಾಯಕರು ಜನರನ್ನು ವಂಚಿಸಲು ಹಲವು ತಿಂಗಳುಗಳಿಂದ ಸುಳ್ಳು ನಾಟಕಗಳನ್ನು ಮಾಡಿದರು. ಆದರೆ, ಮತದಾರರು ಪ್ರತಿಕ್ಷಣವೂ ತಮ್ಮ ಬೆಂಬಲಕ್ಕೆ ನಿಂತಿರುವ ಕಾಂಗ್ರೆಸ್‌ಗೆ ಮತ ಹಾಕಿ ಗೆಲ್ಲಿಸಿ, ಬಿಜೆಪಿ–ಜೆಡಿಎಸ್‌ಗೆ ಬುದ್ಧಿ ಕಲಿಸಿದ್ದಾರೆಂದು ಹೇಳಿದರು.

# ಸುರಕ್ಷಿತ ಕೆಲಸದ ವಾತಾವರಣ: ಮಹಿಳೆಯರ ಮೂಲಭೂತ ಹಕ್ಕು

**ಬಳ್ಳಾರಿ, ನ.25 :** ಮಹಿಳೆಯರು ತಾವು ಕೆಲಸ ನಿರ್ವಹಿಸುವ ಸ್ಥಳದಲ್ಲಿ ಸುರಕ್ಷಿತ ಕೆಲಸದ ವಾತಾವರಣ ಹೊಂದುವುದು ಮಹಿಳೆಯರ ಮೂಲಭೂತ ಹಕ್ಕಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಧ್ಯಕ್ಷರೂ ಆದ ಕೆ.ಜಿ.ಶಾಂತಿ ಅವರು ಹೇಳಿದರು.




ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಜಿಲ್ಲಾ ವಕೀಲರ ಸಂಘ ಇವರ ಸಂಯುಕ್ತಾಶ್ರಯದಲ್ಲಿ ಅಂತರಾಷ್ಟ್ರೀಯ ಮಹಿಳಾ ಹಿಂಸಾಚಾರ ವಿರೋಧಿ ದಿನಾಚರಣೆ ಅಂಗವಾಗಿ ನಗರದ ಹೊಸ ಜಿಲ್ಲಾ ನ್ಯಾಯಾಲಯದ ವಿಸಿ ಸಭಾಂಗಣದಲ್ಲಿ ಕೆಲಸದ ಸ್ಥಳದಲ್ಲಿ ಲೈಂಗಿಕ ಕಿರುಕುಳ ತಡೆಗಟ್ಟುವ ಅಧಿನಿಯಮದ ಕುರಿತು ಸೋಮವಾರ ಆಯೋಜಿಸಿದ್ದ ಕಾನೂನು ಅರಿವು ನೆರವು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಕೆಲಸದ ಸ್ಥಳದಲ್ಲಿ ಪುರುಷರು ಮತ್ತು ಮಹಿಳೆಯರಿಗೆ ಸಮಾನ ಅವಕಾಶವಿದೆ. ಆಡು ಮುಟ್ಟದ ಸೊಪ್ಪಿಲ್ಲ, ಮಹಿಳೆಯರಿಲ್ಲದ ಕ್ಷೇತ್ರವಿಲ್ಲ. ಹಾಗಾಗಿ ಮಹಿಳೆಯರನ್ನು ಮೌಲ್ಯಯುತ ಸಹೋದ್ಯೋಗಿಗಳಂತೆ ಕಾಣಬೇಕು ಎಂದರು.

ಮಹಿಳೆಯರಿಗೆ ಸುರಕ್ಷಿತ ಕೆಲಸದ ಸ್ಥಳಗಳನ್ನು ರಚಿಸುವ ಉದ್ದೇಶದಿಂದ ರೂಪಿಸಲಾದ ಕೆಲಸದ ಸ್ಥಳದಲ್ಲಿ ಮಹಿಳೆಯರ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧ ಮತ್ತು ಪರಿಹಾರ) ಕಾಯ್ದೆ (ಕಔಖಊ ಕಾಯಿದೆ, 2013) ಎಂಬ ವಿಶೇಷ ಶಾಸನ ನೀಡಿದೆ. ಇದರ ಅರಿವು ಮಹಿಳೆಯರು ಹೊಂದಬೇಕಿದೆ ಎಂದು ಅವರು ತಿಳಿಸಿದರು.

ಲೈಂಗಿಕ ಕಿರುಕುಳವು ನೊಂದವರ ದೈಹಿಕ ಮತ್ತು ಮಾನಸಿಕ ಆರೋಗ್ಯ, ಒಟ್ಟಾರೆ ಯೋಗಕ್ಷೇಮದ ಮೇಲೆ ತೀವ್ರ ಪರಿಣಾಮ ಬೀರುತ್ತದೆ. ಅವರು ಆತಂಕ, ಖಿನ್ನತೆ, ಒತ್ತಡ ಮತ್ತು ಆಘಾತದಿಂದ ಬಳಲುತ್ತಾರೆ. ಹಾಗಾಗಿ ಮಹಿಳೆಯರು ಮುಖ್ಯವಾಗಿ ಲೈಂಗಿಕ ಕಿರುಕುಳದ ಬಗ್ಗೆ ಅರಿವು ಹೊಂಬೇಕು. ಲೈಂಗಿಕ ಕಿರುಕುಳ ಎಂದರೇನು ಅಥವಾ ಅದನ್ನು ಹೇಗೆ ವರದಿ ಮಾಡಬೇಕು ಎಂಬುದರ ಬಗ್ಗೆ ಮಾಹಿತಿ ಹೊಂದಬೇಕು ಎಂದು ಅವರು ಹೇಳಿದರು.

ಕೆಲಸದ ಸ್ಥಳದಲ್ಲಿ ಲೈಂಗಿಕ ಕಿರುಕುಳದ ದೂರುಗಳನ್ನು ಪರಿಹರಿಸುವ ಜವಾಬ್ದಾರಿಯನ್ನು ಆಂತರಿಕ ದೂರುಗಳ ಸಮಿತಿಗೆ ಇರುತ್ತದೆ. ಸರ್ಕಾರಿ, ಅರೆ ಸರ್ಕಾರಿ ಹಾಗೂ ಇತರೆ ಎಲ್ಲಾ ಸಂಸ್ಥೆಗಳಲ್ಲಿ ಸಮಿತಿ ಸ್ಥಾಪಿಸಲು ಕಾನೂನಿನ ಮೂಲಕ ಅಗತ್ಯವಿದೆ ಎಂದರು. ಕಾರ್ಯಕ್ರಮದಲ್ಲಿ ವಕೀಲರಾದ ಶಿವಲೀಲ ಅವರು, ಕೆಲಸದ ಸ್ಥಳದಲ್ಲಿ ಲೈಂಗಿಕ ಕಿರುಕುಳ ತಡೆಗಟ್ಟುವ ಅಧಿನಿಯಮದ ಕುರಿತು ವಿವರವಾಗಿ ತಿಳಿಸಿಕೊಟ್ಟರು.

# ಪ್ರತಿಪಕ್ಷಗಳ ಸುಳ್ಳು ಆರೋಪಕ್ಕೆ ಜನಾದೇಶದ ಉತ್ತರ: ಖಂಡ್ರೆ

**ಬೀದರ್, ನ. 25:** ಚನ್ನಪಟ್ಟಣ, ಶಿಂಗ್ಗಾವಿ, ಸಂಡೂರು ಈ ಮೂರೂ ಕ್ಷೇತ್ರದ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳನ್ನು ಗೆಲ್ಲಿಸುವ ಮೂಲಕ ರಾಜ್ಯದ ಜನತೆ ಪ್ರತಿಪಕ್ಷಗಳ ಸುಳ್ಳು ಆರೋಪಗಳಿಗೆ ತಕ್ಕ ಉತ್ತರ ನೀಡಿದ್ದಾರೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ.ಬಿ. ಖಂಡ್ರೆ ವ್ಯಾಖ್ಯಾನಿಸಿದರು.



ನಗರದಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಹಳೆ ಮೈಸೂರು, ಕಲ್ಯಾಣ ಕರ್ನಾಟಕ ಮತ್ತು ಉತ್ತರ ಕರ್ನಾಟಕದಲ್ಲಿ ನಡೆದ ಈ ಉಪ ಚುನಾವಣೆಯಲ್ಲಿ ಅಭಿವೃದ್ಧಿಗೆ ಒಲವು, ಗ್ಯಾರಂಟಿಗಳಿಗೆ ಗೆಲುವು ನೀಡಿರುವ ಮತದಾರರಿಗೆ ಧನ್ಯವಾದ ಅರ್ಪಿಸಿದರು.

ಶಿಂಗ್ಗಾವಿಯಲ್ಲಿ ವಚನಭ್ರಷ್ಟರಿಗೆ ಮತದಾರರು ತಕ್ಕ ಉತ್ತರ ನೀಡಿದ್ದಾರೆ. ಆ ಕ್ಷೇತ್ರದ ಉಸ್ತುವಾರಿಯಾಗಿದ್ದ ತಾವು ಮತದಾರರಿಗೆ ವಿಶೇಷವಾಗಿ ಧನ್ಯವಾದ ಅರ್ಪಿಸುವುದಾಗಿ ಈಶ್ವರ ಖಂಡ್ರೆ ಹೇಳಿದರು.

ಕಾಂಗ್ರೆಸ್ ಪಕ್ಷದ ನಾಯಕರು, ಸ್ಥಳೀಯ ಮುಖಂಡರು ಹಾಗೂ ಪಕ್ಷದ ಕಾರ್ಯಕರ್ತರು ಮೂರೂ ಉಪ ಚುನಾವಣೆಗಳ ಗೆಲುವಿಗೆ ಹಗಲಿರುಳು ಶ್ರಮಿಸಿದ್ದಾರೆ. ಎಲ್ಲರ ಸಂಘಟಿತ ಪ್ರಯತ್ನಕ್ಕೆ ಈ ಗೆಲುವಿನ ಹಾರ ಸಂದಿದೆ. ಉತ್ತಮ ನಾಯಕತ್ವ ನೀಡಿ ಮಾರ್ಗದರ್ಶನ ಮಾಡಿದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಸಿಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಶಿವಕುಮಾರ್ ಹಾಗೂ ಎಲ್ಲ ಕಾಂಗ್ರೆಸ್ ಸಚಿವರು, ಶಾಸಕರಿಗೆ ಈ ಗೆಲುವಿಗೆ ಅಭಿನಂದನೆ ಸಲ್ಲಿಸುವುದಾಗಿ ಅವರು ತಿಳಿಸಿದರು.

ಇದು ರಾಜ್ಯ ಕಾಂಗ್ರೆಸ್ ಸರ್ಕಾರದ ಉತ್ತಮ ಆಡಳಿತಕ್ಕೆ ಸಂದ ಜಯವಾಗಿದೆ. ಗ್ಯಾರಂಟಿಗಳ ಯಶಸ್ವಿ ಅನುಷ್ಠಾನ, ನಮ್ಮ ಜನಪರ ಕಾರ್ಯಕ್ರಮ ಮುಂದಿಟ್ಟು ಚುನಾವಣೆಗೆ ಹೋದೆವು, ಜನ ಬೆಂಬಲ ನೀಡಿದ್ದಾರೆ. ಈಗಲಾದರೂ ಪ್ರತಿಪಕ್ಷಗಳು ಎಚ್ಚೆತ್ತು, ರಾಜಕೀಯ ಮತ್ತು ಅಪಪ್ರಚಾರ ಬಿಟ್ಟು, ರಾಜ್ಯದ ಅಭಿವೃದ್ಧಿಗೆ ಸರ್ಕಾರದೊಂದಿಗೆ ಕೈಜೋಡಿಸಬೇಕು ಎಂದರು.

ಜಾರ್ಖಂಡ್ ನಲ್ಲಿ ಕಾಂಗ್ರೆಸ್ ಮೈತ್ರಿಕೂಟಕ್ಕೆ ಅಲ್ಲಿನ ಮತದಾರರು ಒಲವು ತೋರಿದ್ದಾರೆ. ಆದರೆ ಮಹಾರಾಷ್ಟ್ರದ ಫಲಿತಾಂಶ ಅನಿರೀಕ್ಷಿತ ಮತ್ತು ಆಘಾತಕಾರಿಯಾಗಿದೆ. ಬಿಜೆಪಿ ಮತ್ತು ಮಹಾಯುತಿ ಹಣದ ಹೊಳೆಯನ್ನೇ ಹರಿಸಿತು, ಅಧಿಕಾರದ ದುರ್ಬಳಕೆ ಮಾಡಿಕೊಂಡು ಈ ಚುನಾವಣೆ ಗೆದ್ದಿದೆ ಎಂದೂ ಈಶ್ವರ ಖಂಡ್ರೆ ಹೇಳಿದರು.

# ವಿಕಸಿತ ಭಾರತಕ್ಕೆ ಕೈಜೋಡಿಸಿ: ತುಳಸಿಮಾಲಾ

**ಕಲಬುರಗಿ, ನ. 25 :** ಮುಂಬರುವ 2047ರವರೆಗೆ ವಿಕಸಿತ ಭಾರತ ನಿರ್ಮಾಣವಾಗಬೇಕಿದ್ದು, ಈ ದಿಸೆಯಲ್ಲಿ ಮಹಿಳಾ ನಾಯಕತ್ವದ ನೇತೃತ್ವದಲ್ಲಿ ದೇಶ ಕಟ್ಟಬೇಕಿದೆ ಎಂದು ವಿಜಯಪುರದ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ತುಳಸಿಮಾಲಾ ನುಡಿದರು.



ಭಾರತೀಯ ಶಿಕ್ಷಣ ಮಂಡಲ, ಕರ್ನಾಟಕ ಉತ್ತರ ಪ್ರಾಂತ ಹಾಗೂ ಶರಣಬಸವ ವಿಶ್ವವಿದ್ಯಾಲಯದ ಆಶ್ರಯದಲ್ಲಿ ನಗರದ ಅಪ್ಪಾ ಪಬ್ಲಿಕ್ ಶಾಲೆಯ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಸಶಕ್ತ ಮಹಿಳೆ ಸದೃಢ ಭಾರತ ವಿಷಯದ ಪ್ರಾಂತ ಮಟ್ಟದ ಮಹಿಳಾ ಸಮಾವೇಶ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರತಿಯೊಂದು ಕ್ಷೇತ್ರಗಳಲ್ಲಿ ಮಹಿಳೆಯರ ನಾಯಕತ್ವ ಗುಣ ಬೆಳೆಯಬೇಕು. ಮಹಿಳೆಯರಲ್ಲಿನ ಸಾಮರ್ಥ್ಯಕ್ಕೆ ಪುರುಷರ ಉತ್ತೇಜನ, ಬೆಂಬಲ, ಪ್ರೋತ್ಸಾಹ ಕೂಡ ಅಷ್ಟೇ ಸಿಗಬೇಕಿದೆ. ಆದರೆ ಮಹಿಳೆಯರು ಕಂಪಾರ್ಟ್ ಝೋನ್‌ನಿಂದ ಹೊರಬರಬೇಕಿದೆ. ವರ್ತಮಾನದ ಬದುಕಿನಲ್ಲಿ ಲಿಂಗ ಅಸಮಾನತೆ, ಮಹಿಳೆಯರ ಹಕ್ಕುಗಳ ಉಲ್ಲಂಘನೆ ಹೆಚ್ಚುತ್ತಿದ್ದು, ಸಮಾನತೆ ಕಾಣುವ ವಾತಾವರಣ ನಿರ್ಮಾಣವಾಗಬೇಕಿದೆ ಎಂದರು. ಹಿಂದಿನ ಪರಿಸ್ಥಿತಿ ಅವಲೋಕಿಸಿದರೆ ಮಹಿಳೆಯರ ಸ್ಥಿತಿಗತಿ ಈಗ ಪ್ರಗತಿದಾಯಕವಾಗಿದೆ. ಆದರೆ ಅಸ್ಮಿತೆ, ಅಸ್ತಿತ್ವದ ಪ್ರಶ್ನೆ ಕಾಡಲಾರಂಭಿಸಿದೆ. ಮಹಿಳೆಯರನ್ನು ಮದುವೆ, ಕುಟುಂಬ, ಬಾಡಿಗೆ ತಾಯ್ತನದಿಂದಾಗಿ ಮಾರುಕಟ್ಟೆಯ ಸರಕು ಆಗಿ ಬಳಸುತ್ತಿರುವುದು ಸರಿಯಲ್ಲ ಎಂದು ಕಳವಳ ವ್ಯಕ್ತಪಡಿಸಿದರು.

ಡಾ. ಅಂಬೇಡ್ಕರ್ ಗುಜರಾತ ಮುಕ್ತ ವಿವಿ ಪ್ರೊ. ಅಮಿ ಉಪಾಧ್ಯಾಯ ಮಾತನಾಡಿ, ಸಮೃದ್ಧ ಭಾರತಕ್ಕೆ ಸಶಕ್ತ ಮಹಿಳೆಯರ ಪಾತ್ರ ಅಗತ್ಯವಾಗಿದೆ. ಆದರೆ ಗುಲಾಮಗಿರಿ, ಅಂಧಾಕಾರದಿಂದ ವಿಮುಕ್ತಗೊಳಿಸುವುದೇ ಶಿಕ್ಷಣ ಕಲಿಯಬೇಕು ಹೊರತು ನೌಕರಿಗಾಗಿ ಶಿಕ್ಷಣ ಅಲ್ಲ. ಹೀಗಾಗಿ, ನಾಗರಿಕ ಸಮಾಜದಲ್ಲಿ ಮೇಲ್ವರ್ಗ, ಕೆಳವರ್ಗ, ಶ್ರೇಷ್ಠ, ಕನಿಷ್ಟ ಶ್ರೇಣಿಕೃತ ವ್ಯವಸ್ಥೆ ನಿರ್ಮೂಲನೆ ಆಗಬೇಕಿದೆ ಎಂದರು.

ಸಾಧಕಿಯರಿಗೆ ಪ್ರಶಸ್ತಿ ಪ್ರದಾನ: ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ವಿಶಾಲಾಕ್ಷಿ ಕರೆಡ್ಡಿ(ಸಾಹಿತ್ಯ), ವೀಣಾ ಅಂದೋಲಿ (ರಂಗಭೂಮಿ), ಶಮಂತಕ ಮಣಿ (ಶಿಕ್ಷಣ), ಕರಿಯಮ್ಮ (ರಾಜಕೀಯ), ಅಮರೇಶ್ವರಿ (ಮಹಿಳಾ ಉದ್ಯಮಿ), ಅನ್ನಪೂರ್ಣ ಸಂಗೊಳಗಿ (ಸ್ವ–ಉದ್ಯೋಗ), ಮಹಾಲಕ್ಷ್ಮಿ ಸಜ್ಜನ್ (ಸಾಮಾಜಿಕ), ಶ್ರೇಯಾಂಕಾ ಪಾಟೀಲ್(ಕ್ರೀಡಾ), ಆಸ್ಮಾ ಇನಾಂದಾರ (ಮಾಧ್ಯಮ), ಡಾ.ವಿಜಯಲಕ್ಷ್ಮೀ ದೇಶಮಾನೆ (ವೈದ್ಯಕೀಯ), ಇಂದುಮತಿ ನಾಗೂರೆ (ಕೃಷಿ ಕ್ಷೇತ್ರ), ಕಾವ್ಯಾ ಕಂಡಲ್(ಕಾನೂನು), ವಿಲಾಸವತಿ ಖೂಬಾ (ಆಧ್ಯಾತ್ಮಿಕ), ಗೌರಮ್ಮ ಪಾಟೀಲ್( ಪೊಲೀಸ್ ಮತ್ತು ರಕ್ಷಣೆ), ಚಿತ್ಕಲಾ ಬಿರಾದಾರ (ಚಲನಚಿತ್ರ), ಡಾ.ಶುಭಾಂಗಿ (ಸಂಶೋಧನೆ), ಅವಂತಿಕಾ (ನೃತ್ಯ), ಡಾ.ಗೀತಾ ಪಾಟೀಲ್ (ವಿಜ್ಞಾನ), ಕಾವೇರಿ ಕೋರಿ (ತಂತ್ರಜ್ಞಾನ), ಸುನಿತಾ ದೊಡ್ಡಮನಿ(ಕರಾಟೆ) ಅವರಿಗೆ' ಮಾತೋಶ್ರೀ ಡಾ.ದಾಕ್ಷಾಯಿಣಿ ಅವ್ವ ಅವರ ಹೆಸರಿನಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಯಿತು.

> ಶ್ರೀ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದಡಿ ಶಾಲಾ ಕಾಲೇಜುಗಳಲ್ಲಿ ಸುಮಾರು ಶೇ.60 ಮಹಿಳೆಯರು ಕಾಯಕ ಮಾಡುತ್ತಿದ್ದು, ಶಿಕ್ಷಣ ಪಡೆದು ಆರ್ಥಿಕ ಸಬಲರಾಗಬೇಕು. ಕೆಜಿಯಿಂದ ಪಿಜಿವರೆಗೆ 30 ಸಾವಿರ ವಿದ್ಯಾರ್ಥಿಗಳು ವಿದ್ಯಾಭ್ಯಾಸದಲ್ಲಿ ತೊಡಗಿದ್ದಾರೆ. ಇಂದಿನ ಮಕ್ಕಳೇ ನಾಳಿನ ಪ್ರಜೆಗಳಾಗಿದ್ದರಿಂದ ಸಶಕ್ತ ಭಾರತ ನಿರ್ಮಾಣಕ್ಕೆ ಇವರ ಪಾತ್ರ ಇರುತ್ತದೆ ಎಂಬ ಭಾವನೆ ನನ್ನದು. ಕಲೆ, ಸಾಹಿತ್ಯ, ಶಿಕ್ಷಣ, ತಂತ್ರಜ್ಞಾನ, ವಿಜ್ಞಾನ ಹೀಗೆ ಎಲ್ಲ ಕ್ಷೇತ್ರಗಳಲ್ಲಿ ಮಹಿಳೆಯರ ಪಾತ್ರ ಹಿರಿದಾಗಿದೆ.
>
> – ಡಾ. ದಾಕ್ಷಾಯಿಣಿ ಅವ್ವಾಜಿ, ಚೇರ್‌ಪರ್ಸನ್, ಶ್ರೀ ಶರಣಬಸವೇಶ್ವರ ವಿದ್ಯಾವರ್ಧಕ ಸಂಘ.

ವೇದಿಕೆಯಲ್ಲಿ ಭಾರತೀಯ ಶಿಕ್ಷಣ ಮಂಡಲ ಜಿಲ್ಲಾಧ್ಯಕ್ಷ ಬಸವರಾಜ ದೇಶಮುಖ, ಡಾ. ಪಲ್ಲವಿ ಪಾಟೀಲ್ ಸೇಡಂ ಮತ್ತಿತರರಿದ್ದರು. ಶರಣಬಸವ ವಿವಿ ಡೀನ್ ಡಾ. ಲಕ್ಷ್ಮೀ ಪಾಟೀಲ್ ಮಾಕಾ, ರುಕ್ಮಿಣಿ ದೇವಿದಾಸ, ಸಂಘಟಕರಾದ ಶಿವಶರಣ ಉದನೂರ, ಡಾ. ಗಿರೀಶ ತೆಗ್ಗಿನಮಠ, ಮಾಲಾ ಕಣ್ಣಿ, ಮಾಲಾ ದಣ್ಣೂರ್, ಶಿವಾನಂದ ಖಜೂರಗಿ, ಸುಮಂಗಲಾ ಚಕ್ರವರ್ತಿ, ಮೇಘಾ ದೇಶಮುಖ, ಇಂದಿರಾ ರಾಠೋಡ, ಸುಧಾ ಹಾಲಕಾಯಿ, ಆರತಿ ತಿವಾರಿ, ಕಾವೇರಿ ಜಿಡಗಿಕರ್, ವಿಜಯಲಕ್ಷ್ಮೀ ಸಿಂಗೋಡಿ, ಶರಣಮ್ಮ ಅರಳಿ, ಚೈತ್ರಾ ಗುತ್ತೇದಾರ್, ಶ್ರೀದೇವಿ ರೆಡ್ಡಿ, ರೋಹಿಣಿ ಯಳಸಂಗಿಕರ್, ನಿರ್ಮಲಾ ಕೆಳಮನಿ, ಮಲ್ಲಮ್ಮ ಕಡ್ಲಾ, ಶಶಿಕಲಾ ಸುಣಗಾರ, ಸಾವಿತ್ರಿ ಪಟ್ಟಣ, ವೀಣಾ ಹೊನಗುಂಟಿ, ಅನಿತಾ ಸುಬೇದಾರ್, ಜ್ಯೋತಿ ಪಾಟೀಲ್, ವಿಜಯಲಕ್ಷ್ಮೀ ಹಿರೇಮಠ, ಉಮಾ ಗಚ್ಚಿನಮನಿ, ಶೀಲಾ ಕಲಬುರಗಿ, ಜಯಶ್ರೀ ಜೈನ, ಅಂಬಿಕಾ ಪಾಟೀಲ್, ಸುಷ್ಮಾ ದೇಶಮುಖ, ಲತಾ ಬಿಲಗುಂದಿ, ನಾಗಬಸವಣ್ಣ ಗುರುಗಳ, ಡಾ. ಶರಬಯ್ಯ ಸ್ವಾಮಿ, ವೀರಯ್ಯ ಮುತ್ತಿನಮಠ, ಮಾಲತಿ ರೇಷ್ಮಿ ಲಕ್ಷ್ಮೀ ವಸ್ತ್ರದ ಮತ್ತಿತರರು ಭಾಗವಹಿಸಿದ್ದರು.

ಉತ್ತರ ಪ್ರಾಂತದ ಅಧ್ಯಕ್ಷ ಪ್ರೊ. ಬಸವರಾಜ ಅನಾಮಿ ಸ್ವಾಗತಿಸಿದರು. ಸಿದ್ದು ಮದರಖಂಡಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಬೆಂಗಳೂರಿನ ಬಾಲ ಕಲಾವಿದೆ ಆವಂತಿಕಾ ಭರತನಾಟ್ಯ ಪ್ರದರ್ಶಿಸಿದಳು. ಶಿಕ್ಷಣ, ಸಂಸ್ಕೃತಿ ಮತ್ತು ಭಾರತೀಯತೆ ವಿಷಯದ ಮೇಲೆ ಸಿಯುಕೆ ಪ್ರಾಧ್ಯಾಪಕ ಪ್ರೊ. ಬಸವರಾಜ ಡೋಣೂರ ವಿಷಯ ಮಂಡಿಸಿದರೆ, ಎರಡನೇ ಗೋಷ್ಠಿಯಲ್ಲಿ ಕಾರ್ಕಳದ ಅಕ್ಷಯಾ ಗೋಖಲೆ 'ಕೌಟುಂಬಿಕ ಸಂಸ್ಕಾರ ಮತ್ತು ವ್ಯಕ್ತಿತ್ವ ವಿಕಸನ ಕುರಿತ ಮಾತೆಯರಿಗೆ ಮನದಟ್ಟು ಮಾಡಿದರು.

# ದೇವರಿಗಿಂತ ದೊಡ್ಡ ಕರುಣಾಮಯಿ ತಾಯಿ: ಸಿ.ಟಿ.ರವಿ



**ಕಲಬುರಗಿ, ನ. 25:** ತಾಯಿ ಮಾತ್ರ ತನ್ನ ಮಗುವನ್ನು 9 ತಿಂಗಳು ಗರ್ಭದಲ್ಲಿ ಹೊತ್ತು, ಹೆತ್ತು ದೊಡ್ಡದು ಮಾಡತ್ತಾಳೆ. ಎಂಥ ಕಷ್ಟ ಎದುರಾದರೂ ತನ್ನ ಕರುಳ ಕುಡಿಯನ್ನು ರಕ್ಷಿಸುತ್ತಾಳೆ. ಹೀಗಾಗಿ ಎಲ್ಲೆಡೆ, ಎಲ್ಲರನ್ನು ಸಂರಕ್ಷಿಸಲು ದೇವರಿಂದಲೂ ಆಗುವುದಿಲ್ಲ. ದೇವರಿಗಿಂತ ದೊಡ್ಡ ಕರುಣಾಮಯಿ ಅವ್ವ ಎಂದು ವಿಧಾನ ಪರಿಷತ್ ಸದಸ್ಯ, ಮಾಜಿ ಸಚಿವ ಸಿ.ಟಿ.ರವಿ ತಿಳಿಸಿದರು.

ನಗರದ ರಂಗಾಯಣ ಸಭಾಂಗಣದಲ್ಲಿ ನಡೆದ ಅವ್ವ ಪ್ರಶಸ್ತಿ ಪ್ರದಾನ ಪುಸ್ತಕ ಬಿಡುಗಡೆ ಸಮಾರಂಭದಲ್ಲಿ ಅವರು ಮಾತನಾಡಿ, ವಿಶ್ವದ ಯಾವ ದೇಶದ, ಯಾವ ಸಂಸ್ಕೃತಿಯಲ್ಲಿಯೂ ಲಭಿಸದ ಸ್ಥಾನ ಮಾನ ಸ್ತ್ರೀಯರಿಗೆ, ಅದರಲ್ಲೂ ತಾಯಿಗೆ ದೊರಕಿದೆ. ಪ್ರೀತಿ, ಕ್ಷಮೆ, ಸಹನೆ, ತ್ಯಾಗ, ಸೇವೆ, ಕಷ್ಟಸಹಿಷ್ಣುತೆ, ಜೀವನಶ್ರದ್ಧೆ, ಶೀಲ, ಚಾರಿತ್ರ್ಯ, ಪಾತಿ, ವಿಧೇಯತೆ, ಉದಾರತೆ, ಸಹಾನುಭೂತಿ, ಪ್ರೇಮ ವ್ರತ, ಪ್ರಮಾಣಿಕತೆ, ಔದಾರ್ಯ, ನಿಸ್ವಾರ್ಥತೆ, ಪರೋಪಕಾರ, ಕೃತಜ್ಞತೆ... ಎಲ್ಲಕ್ಕೂ ಅವಳೇ ಮೊದಲಿಗಳು. ಈ ಕಾರಣಕ್ಕಾಗಿಯೇ ಕುಟುಂಬದಲ್ಲಿ ಅವಳಿಗೆ ಅಧಿಕಾರ ದೊರಕಿದ್ದು ಕೂಡ ಅವಳ ಮಾತೃತ್ವದಿಂದಲೇ ಎಂದು ಅವರು ತಿಳಿಸಿದರು.

ಶಾಸಕ ಬಸವರಾಜ ಮತ್ತಿಮಡು ಮಾತನಾಡಿ, ಭಾರತೀಯ ಪರಂಪರೆಯಲ್ಲಿ ಸ್ತ್ರೀಯರಿಗೆ ವಿಶೇಷವಾದ ಗೌರವ ಆದರಗಳುಂಟು. ನಮ್ಮ ಸಂಸ್ಕೃತಿಯುದ್ದಕ್ಕೂ ಹಲವಾರು ನಾರಿಯರು ಜೀವನದ ಮೌಲ್ಯ ಆದರ್ಶಗಳಿಗೆ ಮೂರ್ತ ರೂಪವಾಗಿದ್ದಾರೆ ಎಂದು ವಿವರಿಸಿದರು. ಡಾ. ಶರಣಬಸಪ್ಪ ವಡ್ಡನಕೇರಿ ರಚಿಸಿದ ಸಿದ್ದಯ್ಯ ಪುರಾಣಿಕ ಹಾಗೂ ಮಾರ್ಗ ಪುಸ್ತಕ ಬಿಡುಗಡೆ ಮಾಡಲಾಯಿತು.

ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಚೇರ್‌ಪರ್ಸನ್ ಮಾತೋಶ್ರೀ ಡಾ. ದಾಕ್ಷಾಯಿಣಿ ಅಪ್ಪ, ಪ್ರಮುಖರಾದ ಅಪ್ಪಾರಾವ ಅಕ್ಕೋಣಿ, ಬಸವರಾಜ ಕೊನೆಕ, ಅಂಬಾರಾವ ವಡ್ಡನಕೇರಿ, ಪ್ರತಿಷ್ಠಾನದ ಅಧ್ಯಕ್ಷ ಡಾ. ಶರಣಬಸಪ್ಪ ವಡ್ಡನಕೇರಿ, ಡಾ. ವೀರಶೆಟ್ಟಿ ಗಾರಂಪಳ್ಳಿ, ಡಾ.ತೀರ್ಥಕುಮಾರ ಬೆಳಕೋಟಾ, ಡಾ. ನಾಗಪ್ಪ ಗೋಗಿ, ಚನ್ನು ಮುನ್ನಳ್ಳಿ, ಬಾಬುರಾವ ಜಾಲಳ್ಳಿ, ಶಶಿ ಓಕಳಿ, ಅಂಬಾರಾಯ ಮಡ್ಡೆ, ಕಾಶಿಬಾಯಿ ಹರಕಂಚಿ, ಕಾಶಿನಾಥ ಪಾಟೀಲ ಹಾಜರಿದ್ದರು.

ಸಿದ್ದರಾಮ ಹೊನಕಲ್, ಡಾ. ಚಂದ್ರಕಲಾ ಬಿದರಿ (ಸಾಹಿತ್ಯ ಅಕಾಡೆಮಿ), ಬಿ. ಎಚ್. ನಿರಗುಡಿ (ಪುಸ್ತಕ ಪ್ರಾಧಿಕಾರ), ವಿಜಯಕುಮಾರ ಸೋನಾರೆ (ಜಾನಪದ ಅಕಾಡೆಮಿ) ಅವರನ್ನು ಸತ್ಕರಿಸಲಾಯಿತು.


### ಅವ್ವ ಪ್ರಶಸ್ತಿ ಪುರಸ್ಕೃತರು

ಬಬಲಾದನ ಗುರುಪಾದಲಿಂಗ ಶಿವಯೋಗಿಗಳು (ಕೃಷಿ ಹಾಗೂ ಧಾರ್ಮಿಕ ಕ್ಷೇತ್ರ), ಜಯಶ್ರೀ ಮತ್ತಿಮಡು(ಸಮಾಜ ಸೇವೆ ಕ್ಷೇತ್ರ), ಹೋರಾಟಗಾರ ಡಾ. ಲಕ್ಷ್ಮಣ ದಸ್ತಿ (ಹೋರಾಟ ಕ್ಷೇತ್ರ), ಡಾ. ಸಂತೋಷ ಹಾನಗಲ್ಲ ಅವರ "ವೀರ ಸೌಧಾಮಿನಿ ಕಿತ್ತೂರ ರಾಣಿ ಚನ್ನಮ್ಮ" (ಸಂಶೋಧನ ಕೃತಿ ), ಪಾರ್ವತಿ ಸೋನಾರೆ ಅವರ "ಓಡಿ ಹೋದಾಕಿ. ಹಾಗೂ ಜ್ಯೋತಿ ಬೊಮ್ಮಾ ಎಲ್ಲರೊಳಗೊಂದಾಗಿ ಅವರಿಗೆ ಅವ್ವ ಪ್ರಶಸ್ತಿ ನೀಡಿ ಗೌರವಿಸಲಾಯಿತು.



ಸೋಮವಾರ ಬೆಂಗಳೂರಿನ ಬಸವನಗುಡಿಯಲ್ಲಿ 2 ದಿನಗಳ ಕಡ್ಲೆಕಾಯಿ ಪರಿಷೆ ವೇಳೆ ಜನರು ದೊಡ್ಡಗಣಪತಿ ದೇವಸ್ಥಾನಕ್ಕೆ ಭೇಟಿ ನೀಡಿದರು.

# ವರ್ಷದಲ್ಲಿ ಬೀದರ್ ಸೈನಿಕ ಶಾಲೆ ಲೋಕಾರ್ಪಣೆ: ಡಾ.ವಾಲಿ




**ಬೀದರ್, ನ. 25 :** ನಗರದ ಬಿ.ವಿ.ಭೂಮರೆಡ್ಡಿ ಕಾಲೇಜ್ ಆವರಣದಲ್ಲಿ ಸೈನಿಕ ಶಾಲೆ ತರಗತಿಗಳು ಪ್ರಾರಂಭವಾಗಿದ್ದು, ಮುಂದಿನ ವರ್ಷದ ಒಳಗೆ ಸೈನಿಕ ಶಾಲೆಯ ನೂತನ ಕಟ್ಟಡದ ಉದ್ಘಾಟನೆ ನೆರವೇರಿಸುತ್ತೇವೆ ಎಂದು ಹೈ-ಕ ಶಿಕ್ಷಣ ಸಂಸ್ಥೆಗಳ ಆಡಳಿತ ಮಂಡಳಿಯ ಸದಸ್ಯ ಹಾಗೂ ಬಿ.ವಿ.ಬಿ ಆವರಣದ ಶಾಲಾ ಕಾಲೇಜುಗಳ ಸಂಚಾಲಕ ಡಾ.ರಜನೀಶ್ ವಾಲಿ ತಿಳಿಸಿದರು.

ಇಲ್ಲಿಯ ಬಿ.ವಿ.ಭೂಮರೆಡ್ಡಿ ಕಾಲೇಜಿನ ಆವರಣದಲ್ಲಿ ಹೈ.ಕ ಶಿಕ್ಷಣ ಸಂಸ್ಥೆಯ 2024-2027ರ ಅವಧಿಗಾಗಿ ಆಯ್ಕೆಗೊಂಡ ನೂತನ ಆಡಳಿತ ಮಂಡಳಿ ಸದಸ್ಯರು ಮತ್ತು ಪದಾಧಿಕಾರಿಗಳಿಗೆ ಆಯೋಜಿಸಿದ ಸನ್ಮಾನ ಕಾರ್ಯಕ್ರಮದಲ್ಲಿ ಪ್ರಾಸ್ತಾವಿಕ ಮಾತನಾಡಿದ ಅವರು, ಮುಂದಿನ ದಿನಗಳಲ್ಲಿ ನಮ್ಮ ಕಾಲೇಜಿನಲ್ಲಿ ಎಂ.ಎಡ್ ಕೋರ್ಸ್ ಪ್ರಾರಂಭ ಮಾಡುವ ಗುರಿ ಹೊಂದಿದ್ದೇನೆ ಎಂದರು. 3 ವರ್ಷಗಳ ಹಿಂದೆ ಕೇವಲ 10 ಅಡ್ಮಿಷನ್ ಇದ್ದ ಕಾರಣ ಬಿ.ವಿ.ಬಿ ಸಂಸ್ಥೆಯಲ್ಲಿನ ಬಿ.ಸಿ.ಎ ಕೋರ್ಸ್ ಮುಚ್ಚುವ ಹಂತಕ್ಕೆ ಬಂದಿತ್ತು. ಆದರೆ, ಇಂದು ಬಿ.ಸಿ.ಎ ಕೋರ್ಸ್‌ಗೆ ಇಂದು 110 ಜನ ವಿದ್ಯಾರ್ಥಿಗಳು ಪ್ರವೇಶಾತಿ ಪಡೆದಿದ್ದಾರೆ ಎಂದು ಹೇಳಿದರು.

ಸಂಸ್ಥೆಯ ಅಧ್ಯಕ್ಷ ಶಶೀಲ್ ನಮೋಶಿ ಮಾತನಾಡಿದ ಅವರು, ಕಲ್ಯಾಣ ಕರ್ನಾಟಕ ಭಾಗದಲ್ಲಿ ಹೈ-ಕ ಶಿಕ್ಷಣ ಸಂಸ್ಥೆಯು ಸಾಕಷ್ಟು ಉನ್ನತ ಕಾರ್ಯಗಳನ್ನು ಮಾಡಿದೆ. ನಮ್ಮ ಸಂಸ್ಥೆಯ ಭಾಗವಾಗಿರುವ ಬಿ.ವಿ.ಬಿ ಸಂಸ್ಥೆಯಲ್ಲಿಯು ಸಹ ರಜನೀಶ್ ವಾಲಿಯವರ ನೇತೃತ್ವದಲ್ಲಿ ಅನೇಕ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿವೆ ಎಂದರು.

ಬುಡಾ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ . ಮಾತನಾಡಿದರು. ಉಪಾಧ್ಯಕ್ಷ ರಾಜಾ ಬಿಮಳ್ಳಿ, ಕಾರ್ಯದರ್ಶಿ ಉದಯಕುಮಾರ್ ಚಿಂಚೋಳ್ಳಿ, ಜಂಟಿ ಕಾರ್ಯದರ್ಶಿ ಡಾ. ಕೈಲಾಸ್ ಬಿ ಪಾಟೀಲ್, ಸದಸ್ಯರಾದ ಡಾ.ನಾಗೇಂದ್ರ ಮಂತಾಳೆ, ಡಾ.ಮಹದೇವಪ್ಪ ವಿ ರಾಂಪುರೆ, ಡಾ.ಶರಣಬಸಪ್ಪ ಆರ್ ಹರ್ವಲ್, ಸಾಯಿನಾಥ್ ಎನ್ ಪಾಟೀಲ್, ಡಾ.ಅನಿಲ್ ಕುಮಾರ್ ಪಟ್ಟಣ, ಅನಿಲ್ ಕುಮಾರ್ ಸೋಮಶೇಖರ್ ಮರಗೋಳ, ಡಾ.ಕಿರಣ್ ದೇಶಮುಖ್, ನಾಗಣ್ಣ ಗಂಟಿ, ನಿಶಾಂತ್ ಎಲಿ, ಡಾ.ಶಿವಾನಂದ್ ಮೇಲಕುಂಡಿ ಹಾಗೂ ಆಡಳಿತ ಅಧಿಕಾರಿಯ ಡಾ.ಸಿ. ಸಿ ಪಾಟೀಲ್ ಅವರನ್ನು ಸನ್ಮಾನಿಸಲಾಯಿತು.

# ಬೆಳಗಾವಿ ಅಧಿವೇಶನದಲ್ಲಿ ಶಿಕ್ಷಕರ ಬೇಡಿಕೆ ಚರ್ಚೆಗೆ ಅವಕಾಶ: ಹೊರಟ್ಟಿ ಭರವಸೆ




**ಹುಬ್ಬಳ್ಳಿ, ನ. 25:** ಕನ್ನಡ ಶಾಲೆಗಳಿಗೆ ಅನುದಾನ ನೀಡಬೇಕೆಂದು ಮುಖ್ಯಮಂತ್ರಿಗೂ ಮನವರಿಕೆ ಮಾಡುವೆ. ಸುಮಾರು 170 ಕೋಟಿ ರೂ. ಎಂದು ಅಂದಾಜಿಸಲಾಗಿದೆ. ಸರ್ಕಾರಕ್ಕೆ ಇದು ದೊಡ್ಡದಲ್ಲ. ಈ ಕುರಿತು ಬೆಳಗಾವಿ ಅಧಿವೇಶನ ಸಂದರ್ಭದಲ್ಲಿ ಚರ್ಚೆಗೆ ಅವಕಾಶ ನೀಡಿ ಇದಕ್ಕೆ ಪರಿಹಾರ ನೀಡುವ ವಿಶ್ವಾಸವನ್ನು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ವ್ಯಕ್ತಪಡಿಸಿದರು.

ಕರ್ನಾಟಕ ರಾಜ್ಯ ಅನುದಾನರಹಿತ ಶಾಲಾ ಕಾಲೇಜುಗಳ ಆಡಳಿತ ಮಂಡಳಿಗಳು ಹಾಗೂ ನೌಕರರ ಒಕ್ಕೂಟದ ವತಿಯಿಂದ "ನಮ್ಮ ಕನ್ನಡ ಶಾಲೆ ಉಳಿಸಿ ಅಭಿಯಾನ' ಹಾಗೂ 1995ರ ನಂತರ ಪ್ರಾರಂಭವಾದ ಅನುದಾನ ರಹಿತ ಶಾಲೆ ಕಾಲೇಜುಗಳಿಗೆ ಅನುದಾನ ಪಡೆಯುವ ಉದ್ದೇಶದಿಂದ ಇಲ್ಲಿಯ ಬಿವಿಬಿ ಆವರಣದ ಬಯೋಟೆಕ್ ಹಾಲ್ ನಲ್ಲಿ ಏರ್ಪಡಿಸಿದ್ದ ರಾಜ್ಯ ಮಟ್ಟದ ಬೃಹತ್ ಸಮಾವೇಶ ಉದ್ಘಾಟಿಸಿ ಅವರು ಮಾತನಾಡಿದರು.

ಶಿಕ್ಷಕರೆಲ್ಲ ಸಂಘಟಿತರಾಗಿ ಹೋರಾಟ ಮಾಡಿದರೆ ಖಂಡಿತ ಫಲ ಸಿಗುತ್ತದೆ.

ಇದಕ್ಕೆ ನಾನು ಎರಡು ದಶಕದ ಹಿಂದೆ ಶಿಕ್ಷಕರಿಗಾಗಿ ಹೋರಾಡಿ ಸಾಧಿಸಿದ ಜಯವೇ ಸಾಕ್ಷಿ. ಸಾಂವಿಧಾನಿಕ ಹುದ್ದೆಯಲ್ಲಿ ಇರುವುದರಿಂದ ಹೋರಾಟದ ಬದಲು ಸಿಎಂಗೆ ಮನವಿ ಮಾಡುತ್ತೇನೆ. 29 ವರ್ಷದಿಂದ ಅನುದಾನಕ್ಕಾಗಿ ಹೋರಾಟ ನಡೆಯುತ್ತಿದೆ. ಸರ್ಕಾರಗಳು ಕಣ್ಣು ತೆರೆಯುತ್ತಿಲ್ಲ. ಶಿಕ್ಷಕರೆಲ್ಲ ಒಗ್ಗಟ್ಟಾಗಿ ಹೋರಾಟ ಮಾಡಬೇಕು.

ತಮ್ಮೊಂದಿಗೆ ಸ್ವಾಮೀಜಿಗಳನ್ನು ಸೇರಿಸಿಕೊಳ್ಳಿ, ಆಯಾ ತಾಲೂಕಿನ ಪದಾಧಿಕಾರಿಗಳು ಸಂಘಟನೆ ಬಲಪಡಿಸಬೇಕು ಎಂದ ಹೊರಟ್ಟಿ ಅವರು, ಸಭಾಪತಿ ಸ್ಥಾನಕ್ಕೆ ರಾಜೀನಾಮೆ ಕೊಟ್ಟು ನಿಮ್ಮೊಂದಿಗೆ ಹೋರಾಟಕ್ಕೆ ಬಂದು ಬಿಡಬೇಕು ಅನಿಸುತ್ತಿದೆ ಎಂದು ಶಿಕ್ಷಕರ ಬಳಿ ಮನದಾಳ ಹೇಳಿಕೊಂಡರು.

ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರು ಮಾತನಾಡಿ, ರಾಜ್ಯದಲ್ಲಿ ಅನುದಾನ ಇಲ್ಲದೇ ನಡೆಯುತ್ತಿರುವ ಕನ್ನಡ ಶಾಲೆಗಳ ಫಲಿತಾಂಶ ಉತ್ತಮವಾಗಿದೆ. ಇದಕ್ಕೆ ಅಲ್ಲಿನ ಶಿಕ್ಷಕರ ಅಭಿಮಾನ ಕಾರಣ. ಆದರೆ, ಅವರೆಲ್ಲ ಅನುದಾನ ಇಲ್ಲದೇ ಒಪ್ಪತ್ತಿನ ಊಟಕ್ಕೆ ಪರದಾಡುತ್ತಿದ್ದಾರೆ. ಈ ಬಗ್ಗೆ ಬೆಳಗಾವಿ ಅಧಿವೇಶನದಲ್ಲಿ ಎಲ್ಲ ಪರಿಷತ್ ಸದಸ್ಯರನ್ನು ಸೇರಿಸಿಕೊಂಡು ಧ್ವನಿ ಎತ್ತುವ ಕೆಲಸ ಮಾಡಲಾಗುವುದು. ಶಿಕ್ಷಕರ ಪರಿಸ್ಥಿತಿಯನ್ನು ಸರ್ಕಾರದ ಗಮನಕ್ಕೆ ತರುತ್ತೇವೆ ಎಂದರು.

ಕಳೆದ ಹಲವು ವರ್ಷಗಳಿಂದ ಯಾವುದೇ ನೇಮಕಾತಿ ನಡೆಯುತ್ತಿಲ್ಲ. ಪ್ರಾಥಮಿಕ ಹಾಗೂ ಪ್ರೌಢಶಾಲೆ ಸೇರಿ ಸುಮಾರು 60 ಸಾವಿರ ಶಿಕ್ಷಕರ ಕೊರತೆ ಇದೆ. ಕಾಲೇಜುಗಳಲ್ಲಿಯೂ ಅತಿಥಿ ಉಪನ್ಯಾಸಕರೇ ಮುನ್ನಡೆಸುವಂತಾಗಿದೆ. ಈ ಬಗ್ಗೆಯೂ ಸರ್ಕಾರ ಗಮನ ಹರಿಸಬೇಕಾಗಿದೆ ಎಂದರು.

ಸಾನ್ನಿಧ್ಯ ವಹಿಸಿದ್ದ ಬೊಮ್ಮನಹಳ್ಳಿ ಶಿವಯೋಗೀಶ್ವರ ಸ್ವಾಮೀಜಿ. ಹೊರಟ್ಟಿ ಅವರು ಶಿಕ್ಷಕರ ಜತೆ ಇದ್ದಾರೆ ಎಂದರೆ ಕೆಲಸ ಆಗಲಿದೆ ಎಂಬ ಭರವಸೆ ಮೂಡುತ್ತದೆ. ಕನ್ನಡ ಉಳಿಯಬೇಕಾದರೆ ಸಿಎಂ, ಶಿಕ್ಷಣ ಸಚಿವರು ಸಮಸ್ಯೆಗಳನ್ನು ಕಣ್ಣು ತೆರೆದು ನೋಡಬೇಕು ಎಂದು ಸಲಹೆ ನೀಡಿದರು.

ಒಕ್ಕೂಟದ ಅಧ್ಯಕ್ಷ ಜಿ.ಸಿ. ಶಿವಪ್ಪ ಮಾತನಾಡಿ, ಅನುದಾನರಹಿತ ಶಾಲೆ ಕಾಲೇಜುಗಳಲ್ಲಿ 29 ವರ್ಷದಿಂದ ಸೇವೆ ಸಲ್ಲಿಸುತ್ತ ವೃತ್ತಿಗೆ ಲೋಪ ಆಗದಂತೆ ಕೆಲಸ ಮಾಡಿದ್ದೇವೆ. ಕೆಲವರಿಗೆ ಏಳನೇ ವೇತನ ಸಿಗುತ್ತಿದ್ದರೆ ನಮಗೆ ಒಂದನೇ ವೇತನವೂ ಇಲ್ಲ. ಸಾಹಿತ್ಯ ಸಮ್ಮೇಳನಕ್ಕೆ ನೂರು ಕೋಟಿ ಖರ್ಚು ಮಾಡುವವರು ನಮಗೆ ಒಂದು ಹೊತ್ತಿನ ಊಟ ಹಾಕಲು ತಯಾರಿಲ್ಲ. ಹೊರಟ್ಟಿ ಅವರು ತಮ್ಮ ಸ್ಥಾನದಲ್ಲಿಯೇ ಇದ್ದು, ನಮಗೆ ನ್ಯಾಯ ಕೊಡಿಸುವ ಕೆಲಸ ಮಾಡಬೇಕು ಎಂದು ಮನವಿ ಮಾಡಿದರು.

ಶ್ರೀಚನ್ನವಿರ ಸ್ವಾಮೀಜಿ, ಶ್ರೀ ಪ್ರಭು ಸ್ವಾಮೀಜಿ, ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಲಕ್ಷ್ಮಣರಾವ ಚಿಂಗಳೆ, ಎಸ್.ಎಸ್. ಮಠದ, ಮಾಧ್ಯಮಿಕ ಶಾಲಾ ಶಿಕ್ಷಕರ ಸಂಘದ ಜಿ.ಎನ್. ಭಟ್ಟ, ಎಂ.ಜಿ. ಕೋರಿಶೆಟ್ಟಿ, ಸಲೀಂ ಕಿತ್ತೂರ, ಸೇರಿ ವಿವಿಧ ಜಿಲ್ಲೆಗಳಿಂದ ಆಗಮಿಸಿದ್ದ ನೂರಾರು ಶಿಕ್ಷಕರು, ಆಡಳಿತ ಮಂಡಳಿ ಪದಾಧಿಕಾರಿಗಳು ಪಾಲ್ಗೊಂಡಿದ್ದರು.

# ಕಾಂಗ್ರೆಸ್ ಗೆಲುವಲ್ಲ; ಬಿಜೆಪಿಯ ಗೆಲುವು: ಅರವಿಂದ ಬೆಲ್ಲದ್ ಮಾರ್ಮಿಕ ನುಡಿ

**ಧಾರವಾಡ, ನ. 25:** ರಾಜ್ಯದಲ್ಲಿ ನಡೆದ ಮೂರು ಕ್ಷೇತ್ರಗಳ ಉಪಚುನಾವಣೆಯ ಫಲಿತಾಂಶ ಇದು ಹೊರಬಿದ್ದಿದ್ದು, ಮೂರು ಕ್ಷೇತ್ರಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳು ಜಯ ಗಳಿಸಿದ್ದಾರೆ. ಎನ್‌ಡಿಎ ಅಭ್ಯರ್ಥಿಗಳಿಗೆ ಭಾರೀ ಹಿನ್ನಡೆಯಾಗಿದೆ.

ಚನ್ನಪಟ್ಟಣ ಹಾಗೂ ಶಿಂಗ್ಗಾವಿಯಲ್ಲಿ ಮಾಜಿ ಮುಖ್ಯಮಂತ್ರಿಗಳ ಮಕ್ಕಳೇ ಎನ್‌ಡಿಎ ಅಭ್ಯರ್ಥಿಗಳಾಗಿದ್ದರು. ಚುನಾವಣಾ ಪ್ರಚಾರವೂ ಭರ್ಜರಿಯಾಗಿ ನಡೆದಿತ್ತು ಹಾಗಾಗಿ ಈ ಎರಡೂ ಕ್ಷೇತ್ರಗಳಲ್ಲಿ ಎನ್‌ಡಿಎ ಗೆಲ್ಲಲ್ಲಿದೆ ಎನ್ನುವ ಲೆಕ್ಕಾಚಾರಗಳು ಜೋರಾಗಿತ್ತು. ಅದರಂತೆ ಎಕ್ಸಿಟ್ ಪೋಲ್‌ಗಳು ಕೂಡ ಎನ್‌ಡಿಎ ಎರಡು ಕ್ಷೇತ್ರದಲ್ಲಿ ಗೆಲುವು ಕಾಣುತ್ತದೆ ಎಂದು ಹೇಳಿದ್ದವು. ಆದರೆ ಇದೀಗ ಎಕ್ಸಿಟ್ ಪೋಲ್ ತಲೆಕೆಳಗಾಗಿವೆ. ಚನ್ನಪಟ್ಟಣದ ಗೆಲುವು ಕಾಂಗ್ರೆಸ್‌ನದ್ದಲ್ಲ, ನಮ್ಮ ಪಕ್ಷದವರದ್ದು ಬಿಜೆಪಿ ಸೋಲಿನ ವಿಚಾರವಾಗಿ ಧಾರವಾಡದಲ್ಲಿ ಮಾತನಾಡಿದ ವಿಪಕ್ಷ ಉಪನಾಯಕ ಅರವಿಂದ ಬೆಲ್ಲದ್ ಅವರು, ಚನ್ನಪಟ್ಟಣದಲ್ಲಿ ಯೋಗೀಶ್ವರ ಅವರು ಎರಡು ಸಲ ಸೋತಿದ್ದರು, ಹೀಗಾಗಿ ಅವರ ಮೇಲೆ ಜನರಿಗೆ ಈ ಬಾರಿ ಸಿಂಪತಿ ಇತ್ತು. ಚನ್ನಪಟ್ಟಣದಲ್ಲಿನ ಗೆಲುವು ಕಾಂಗ್ರೆಸ್ ಗೆಲುವು ಅಲ್ಲ, ಯೋಗೀಶ್ವರ ನಮ್ಮ ಪಕ್ಷದವರು.. ನಮ್ಮ ಪಕ್ಷದವರನ್ನು ಕರೆದುಕೊಂಡು ಹೋಗಿ ಗೆದ್ದಿದ್ದಾರೆ ಎಂದು ಹೇಳಿದರು.

**ಸಂಡೂರಲ್ಲಿ ಒಂದು ವೋಟ್‌ಗೆ 2500 ರೂ. ಕೊಟ್ಟಿದ್ದಾರೆ:** ಸಂಡೂರನಲ್ಲಿ ಬಿಜೆಪಿ ಗೆಲ್ಲಬೇಕಿತ್ತು. ಅಲ್ಲಿ ಒಂದೊಂದು ವೋಟ್‌ಗೆ 2500 ರೂ. ನೋಟು ಕೊಟ್ಟಿದ್ದಾರೆ ಆದರೂ ಕಾಂಗ್ರೆಸ್ ಲೀಡ್ ಕಡಿಮೆ ಆಗಿದೆ. ವಾಲ್ಮೀಕಿ ಹಗರಣದಲ್ಲಿ ಹಣ ಹೊಡೆದಿದ್ದು ರಿಫ್ಲೆಕ್ಟ್ ಆಗಿದೆ. ಸೋತರು ಅಲ್ಲಿ ಹೆಚ್ಚು ಮತ ಬಂದಿವೆ ಎಂದರು.

**ಇಂದಿನ ಫಲಿತಾಂಶ ರಾಜ್ಯ ಸರ್ಕಾರಕ್ಕೆ ಕೊಟ್ಟ ಸರ್ಟಿಫಿಕೇಟ್ ಅಲ್ಲ :** ಶಿಗ್ಗಾವಿಯಲ್ಲಿ ಭರತ್ ಬೊಮ್ಮಾಯಿ ಗೆಲ್ಲುತ್ತಾರೆಂಬ ವಿಶ್ವಾಸ ಇತ್ತು. ಪಕ್ಷ ಹೇಳಿದ್ದರಿಂದ ಭರತ ಬೊಮ್ಮಾಯಿ ಕೊನೆಗೆ ಅಭ್ಯರ್ಥಿಯಾಗಿದ್ದರು. ಪಕ್ಷದೊಳಗಿನ ಅಸಮಾಧಾನದಿಂದ ಸೋಲು ಆಗಿದೆಯಾ ಎನ್ನುವ ವಿಚಾರದ ಬಗ್ಗೆಯೂ ಪಕ್ಷದೊಳಗೆ ಚರ್ಚೆ ಮಾಡುತ್ತೇವೆ.

## ಅತಿಥಿ ಉಪನ್ಯಾಸಕರ ಮೇಲೆ ಅವಲಂಬನೆ

# ಕಾಲೇಜು ಶಿಕ್ಷಣದಲ್ಲಿ ಪ್ರಾಚಾರ್ಯ, ಉಪನ್ಯಾಸಕರ ಕೊರತೆ

**ರಾಯಚೂರು, ನ. 25 :** ಯಾವುದೇ ಪಕ್ಷದ ಸರ್ಕಾರವು ಅಧಿಕಾರದಲ್ಲಿದ್ದರೂ ಯಾವುದೇ ವಿದ್ಯಾರ್ಥಿಗಳು ಶಿಕ್ಷಣದಿಂದ ವಂಚಿತರಾಗಬಾರದು. ಶಿಕ್ಷಣಕ್ಕೆ ಪೂರಕ ಸೌಕರ್ಯಗಳನ್ನು ಕಲ್ಪಿಸುವ ನಿಟ್ಟಿನಲ್ಲಿ ಪ್ರತಿಯೊಂದು ಸರ್ಕಾರ ಹೇಳುವ ಮಾತು ಶಿಕ್ಷಣ ವ್ಯವಸ್ಥೆಗೆ ಬದ್ಧವಾಗಿದೆ ಎಂದು ಹೇಳುತ್ತವೆ.

ಆದರೆ, ರಾಯಚೂರು ಜಿಲ್ಲೆಯಲ್ಲಿನ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಾಚಾರ್ಯರಿಲ್ಲ. ಉಪನ್ಯಾಸಕ ಹುದ್ದೆಗಳ ಖಾಲಿ ಇದ್ದು, ಅತಿಥಿ ಉಪನ್ಯಾಸಕರ ಮೇಲೆ ಅವಲಂಬಿತವಾಗಿವೆ. ಜಿಲ್ಲೆಯಲ್ಲಿ 46 ಪದವಿ ಪೂರ್ವ ಕಾಲೇಜುಗಳಿದ್ದರೂ ನಾಲ್ವರು ಕಾಯಂ ಪ್ರಾಚಾರ್ಯರ ಹೊರತುಪಡಿಸಿದರೆ, ಉಳಿದಂತೆ ಪ್ರಾಚಾರ್ಯರ ಹುದ್ದೆಗಳಿಗೆ ಪ್ರಭಾರಿಗಳೇ ಹೆಚ್ಚು. ಜಿಲ್ಲೆಯಲ್ಲಿ ಸರ್ಕಾರಿ ಪದವಿಪೂರ್ವ-43, ಅನುದಾನಿತ ಪದವಿಪೂರ್ವ-8 ಹಾಗೂ 92 ಅನುದಾನರಹಿತ ಪದವಿ ಪೂರ್ವ ಕಾಲೇಜುಗಳನ್ನು ಹೊಂದಿದೆ. ಪ್ರಸಕ್ತ ಸಾಲಿನಲ್ಲಿ ಪದವಿ ಪೂರ್ವ ಪ್ರಥಯಮ ವರ್ಷಕ್ಕೆ 8,712 ವಿದ್ಯಾರ್ಥಿಗಳು, 10.922 ವಿದ್ಯಾರ್ಥಿನಿಯರು ಪ್ರವೇಶ ಪಡೆದುಕೊಂಡಿದ್ದಾರೆ. ಆದರೆ, ಸರ್ಕಾರಿ ಹಾಗೂ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಉಪನ್ಯಾಸಕರ ಕೊರತೆಯಿಂದ ಇರುವುದರಿಂದ ಖಾಸಗಿ ಕಾಲೇಜುಗಳಲ್ಲಿ ವಿದ್ಯಾರ್ಥಿಗಳು ಪ್ರವೇಶ ಪಡೆದುಕೊಳ್ಳಲಾಗಿದೆ ಎಂಬುವುದು ವಿದ್ಯಾರ್ಥಿಗಳು ಅಭಿಪ್ರಾಯ ವ್ಯಕ್ತಪಡಿಸುತ್ತಾರೆ.

ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಕಳೆದ ನಾಲ್ಕು ವರ್ಷಗಳ ಹಿಂದೆ ವಿವಿಧ ವಿಷಯಗಳ ಉಪನ್ಯಾಸಕರನ್ನು ನೇಮಕವನ್ನು ಸರ್ಕಾರ ಮಾಡಿತ್ತು. ಅದರಲ್ಲಿ ರಾಯಚೂರು ಜಿಲ್ಲೆಗೆ 10 ಜನ ಉಪನ್ಯಾಸಕರ ನೇಮಕಗೊಂಡಿತ್ತು. ಕೆಲ ಉಪನ್ಯಾಸಕರು ಪ್ರಾಚಾರ್ಯರ ಹುದ್ದೆಗೆ ಬಡ್ತಿ ಹೊಂದಿದ ಹಿನ್ನೆಲೆಯಲ್ಲಿ ಈಗಿರುವ ಹಿರಿಯ ಉಪನ್ಯಾಸಕರೇ ಪ್ರಭಾರಿ ಪ್ರಾಚಾರ್ಯರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

ಜಿಲ್ಲೆಯ ಸರಕಾರಿ ಮತ್ತು ಅನುದಾನಿತ ಪದವಿ ಪೂರ್ವಕಾಲೇಜುಗಳಲ್ಲಿ ವಿವಿಧ ಹುದ್ದೆಗಳು ಖಾಲಿ ಉಳಿದಿವೆ. ಜಿಲ್ಲೆಗೆ ಮಂಜೂರಾಗಿರುವ 42 ಪ್ರಾಚಾರ್ಯರ ಹುದ್ದೆಗಳಲ್ಲಿ 38 ಹುದ್ದೆಗಳ ಖಾಲಿ ಉಳಿದಿದ್ದು, ನಾಲ್ವರು ಪ್ರಾಚಾರ್ಯ ಕಾರ್ಯನಿರ್ವಹಿಸುತ್ತಿದ್ದಾರೆ. ಜಿಲ್ಲೆಯಾದ್ಯಂತ ಇರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ವಿವಿಧ ವಿಷಯಗಳ ಒಟ್ಟು ಮಂಜೂರಾತಿ 347 ಉಪನ್ಯಾಸಕರು, ಇದರಲ್ಲಿ 220 ಉಪನ್ಯಾಸಕರು ಕಾರ್ಯನಿರ್ವಹಿಸುತ್ತಿದ್ದಾರೆ. ಉಳಿದಂತೆ 127 ಉಪನ್ಯಾಸಕರ ಹುದ್ದೆಗಳ ಖಾಲಿ ಉಳಿದಿವೆ. ಸಿ ಹಾಗೂ ಡಿ ಸೇರಿ ಒಟ್ಟು ಮಂಜೂರಾದ ಹುದ್ದೆಗಳು 106 ಇದರಲ್ಲಿ 72 ಹುದ್ದೆಗಳ ಖಾಲಿ ಉಳಿದಿವೆ. 34 ಹುದ್ದೆಗಳಲ್ಲಿ ನೌಕರರ ಕಾರ್ಯನಿರ್ವಹಿಸುತ್ತಿದ್ದಾರೆ.

ಅತಿಥಿ ಉಪನ್ಯಾಸಕರೇ ಆಸರೆ : ಜಿಲ್ಲೆಯ ಸರ್ಕಾರಿ ಹಾಗೂ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ವಿವಿಧ ವಿಷಯಗಳ 109 ಅತಿಥಿ ಉಪನ್ಯಾಸಕರನ್ನು ನೇಮಕಗೊಳಿಸಲಾಗಿದೆ.

## ಲ್ಯಾಂಡ್ ಜಿಹಾದ್ ವಕ್ಫ್ ಕಾಯ್ದೆ ರದ್ದುಪಡಿಸಿ

# ಭಾರತದಲ್ಲಿ ಮತ್ತೊಂದು ಪಾಕಿಸ್ತಾನ ಸೃಷ್ಟಿ ಯತ್ನ: ಬಸನಗೌಡ ಯತ್ನಾಳ

**ಬೀದರ್, ನ. 25 :** ದೇಶ ಸ್ವತಂತ್ರವಾಗಿದೆ. ಸೆಕ್ಯೂಲರ್ ಎಂದು ಹೇಳುವಾಗ, ಮುಸ್ಲಿಂ ತುಷ್ಟೀಕರಣದ ವಕ್ಫ್ ಕಾಯ್ದೆ ಬೇಕೆ? ಇದು ಹಿಂದೂಗಳ ನ್ನು ಕೊಳ್ಳೆ ಹೊಡೆಯುವ ಲ್ಯಾಂಡ್ ಜಿಹಾದ್ ಆಗಿದೆ. ಸಂವಿಧಾನದಲ್ಲಿ ಇಲ್ಲದ ವಕ್ಫ್ ಬೇಕೇ? ಕಳೆದ ಹಲವು ವರ್ಷಗಳಿಂದ ದೇಶದ ದೇವಸ್ಥಾನ, ಮಠ, ಖಾಸಗಿ ಜಮೀನುಗಳು ಮತ್ತು ಪುರಾತನ ಸ್ಮಾರಕಗಳನ್ನೂ ವಕ್ಫ್ ಆಸ್ತಿ ಎಂದು ದಾಖಲೆಯಲ್ಲಿ ನಮೂದಿಸುವ ಮೂಲಕ ಮುಸ್ಲಿಮರಿಗೆ ಹಿಂದೂಗಳನ್ನು ಗುರಿಯಾಗಿಸಿಕೊಂಡು ಕೊಳ್ಳೆ ಹೊಡೆಯಲು ಅವಕಾಶ ಕಲ್ಪಿಸಲಾಗಿದೆ. ಇದೇ ರೀತಿ ಮುಂದು ವರೆದರೆ ಭಾರತದಲ್ಲಿ ಮತ್ತೊಂದು ಪಾಕಿಸ್ತಾನ ಸೃಷ್ಟಿಸುವ ಯತ್ನ ನಡೆಯುತ್ತಿದೆ. ಇದಕ್ಕೆ ನಾವು ಅವಕಾಶ ನೀಡುವದಿಲ್ಲ. ಜೀವಕೊಟ್ಟಾದರೂ ಹೋರಾಟ ಮಾಡಿ ವಕ್ಫ್ ಕಾಯ್ದೆ ರದ್ದುಪಡಿಸಲು ಹೋರಾಟ ಮಾಡುತ್ತೇವೆ. ಜನರಲ್ಲಿ ಜಾಗೃತಿ ಮೂಡಿಸುವ ಮೂಲಕ ಕೇಂದ್ರ ಸರ್ಕಾರದ ಮೇಲೆ ಒತ್ತಡ ಹೇರುತ್ತೇವೆ ಎಂದು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹೇಳಿದರು.



ವಕ್ಫ್ ವಿವಾದದ ಹಿನ್ನೆಲೆಯಲ್ಲಿ ವಿಜಯಪುರ ಶಾಸಕ ಬಸನಗೌಡ ಪಾಟೀಲ ಯತ್ನಾಳ ನೇತೃತ್ವದ ತಂಡ ಇಂದು ಜಿಲ್ಲೆಗೆ ಭೇಟಿ ನೀಡಿ, ವಕ್ಫ್ ವಿರೋಧ ಅಭಿಯಾನ ಆರಂಭಿಸಿತು. ಆದರೆ, ಬೀದರ ಜಿಲ್ಲೆಯ ನಾಲ್ವರು ಬಿಜೆಪಿಯ ಶಾಸಕರು, ಜಿಲ್ಲಾಧ್ಯಕ್ಷ ಸೋಮನಾಥ ಪಾಟೀಲ ಅವರು ಈ ತಂಡದ ಕಡೆಗೆ ಸುಳಿಯಲಿಲ್ಲ. ಬಿಜೆಪಿ ಕಲಬುರಗಿ ವಿಭಾಗೀಯ ಸಹ ಪ್ರಭಾರಿ ಈಶ್ವರ ಸಿಂಗ್ ಠಾಕೂರ್ ಹೊರತುಪಡಿಸಿ, ಬಿಜೆಪಿಯ ಯಾವುದೇ ಮುಖಂಡರು ಬಂದಿರಲಿಲ್ಲ. ಆದರೆ ಸಾವಿರಾರು ಸಂಖ್ಯೆಯಲ್ಲಿ ಜನರು ಮಾತ್ರ ಭಾಗವಹಿಸಿದ್ದು ವಿಶೇಷವಾಗಿತ್ತು.

ನಗರ ಹೊರವಲಯದ ನರಸಿಂಹ ಝರಣಿ ದೇವಸ್ಥಾನಕ್ಕೆ ಭೇಟಿ ನೀಡಿದ ಯತ್ನಾಳ ತಂಡದ ಮುಖಂಡರು ವಿಶೇಷ ಪೂಜೆ ನೆರವೇರಿಸಿದರು. ಇದಕ್ಕೂ ಮುನ್ನ ಗೋಶಾಲೆಯಲ್ಲಿ ಗೋವಿಗೆ ಪೂಜೆ ಮಾಡಿದರು. ಶಾಸಕರಾದ ಬಸನಗೌಡ ಪಾಟೀಲ ಯತ್ನಾಳ, ರಮೇಶ ಜಾರಕಿಹೊಳಿ, ಮಾಜಿ ಸಚಿವ ಅರವಿಂದ ಲಿಂಬಾವಳಿ, ಶಾಸಕ ಬಿ.ಪಿ. ಹರೀಶ್, ಮಾಜಿಶಾಸಕ ಕುಮಾರ ಬಂಗಾರಪ್ಪ, ಮಾಜಿ ಸಂಸದ ಜಿ.ಎಂ. ಸಿದ್ದೇಶ್ವರ, ಬಿಜೆಪಿ ಕಲಬುರಗಿ ವಿಭಾಗೀಯ ಸಹ ಪ್ರಭಾರಿ ಈಶ್ವರ ಸಿಂಗ್ ಠಾಕೂರ್ ಹಾಜರಿದ್ದರು.

ಮಾಜಿ ಸಚಿವರೂ ಆದ ಬಿಜೆಪಿ ಮುಖಂಡ ಅರವಿಂದ ಲಿಂಬಾವಳಿ ಪತ್ರಕರ್ತರೊಂದಿಗೆ ಮಾತನಾಡಿ, ವಕ್ಫ್ ವಿವಾದ ಬಗ್ಗೆ ಜನಜಾಗೃತಿ ಮೂಡಿಸುವ ಕೆಲಸ ಬೀದರ್ ಜಿಲ್ಲೆಯಿಂದ ಆರಂಭಿಸಿದ್ದೇವೆ. ಹಿಂದೂ, ಮುಸ್ಲಿಂ ಎಲ್ಲರ ಆಸ್ತಿಯಲ್ಲಿ ವಕ್ಫ್ ಆಸ್ತಿ ಎಂದು ದಾಖಲಿಸಿದ್ದಾರೆ. ವಾರ್ ರೂಂ ಮಾಡಿದ ನಂತರ ಸಾಕಷ್ಟು ಕರೆಗಳು ಬರುತ್ತಿವೆ. ವಕ್ಫ್ ವಿವಾದ ಗಮನಕ್ಕೆ ಬರುತ್ತಿದ್ದಂತೆ ಬಸನಗೌಡ ಪಾಟೀಲ ಯತ್ನಾಳ ಅವರು ವಿಜಯಪುರದಲ್ಲಿ ಹೋರಾಟ ನಡೆಸಿದರು. ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಸೇರಿದಂತೆ ಹಲವರು ಪಾಲ್ಗೊಂಡಿದ್ದರು. ಕೇಂದ್ರ ಸಂಸದೀಯ ಸಮಿತಿ ಕೂಡ ಭೇಟಿ ನೀಡಿ, ಮಾಹಿತಿ ಸಂಗ್ರಹಿಸಿ ಕಳಿಸಿಕೊಡುವಂತೆ ತಿಳಿಸಿತ್ತು. ಅವರ ಸೂಚನೆ ಮೇರೆಗೆ ಮಾಹಿತಿ ಸಂಗ್ರಹಿಸಿ, ಜನಜಾಗೃತಿ ಮೂಡಿಸಲು ನಿರ್ಧರಿಸಲಾಗಿದೆ. ಬೀದರ್ ತಾಲ್ಲೂಕಿನ ಚಟನಳ್ಳಿ, ಧರ್ಮಾಪೂರ ಗ್ರಾಮದ ರೈತರ ಆಸ್ತಿಯಲ್ಲಿ ವಕ್ಫ್ ಎಂದು ನಮೂದಾಗಿದೆ. ಅಲ್ಲಿಗೆ ಕೂಡ ಭೇಟಿ ನೀಡಿ ಮಾಹಿತಿ ಸಂಗ್ರಹಿಸುತ್ತೇವೆ. ಇದು ಧರ್ಮದ ಕೆಲಸ ಎಂದು ಹೇಳಿದರು.

ಬಸವಕಲ್ಯಾಣ ಶಾಸಕ ಶರಣು ಸಲಗರ ಅವರು, ಯತ್ನಾಳ ಅವರ ತಂಡಕ್ಕೆ ತಂದೆ, ತಾಯಿ ಇಲ್ಲ. ಅದು ಅನಾಥ ಎಂದು ಟೀಕಿಸಿದ್ದಾರಲ್ಲ ಎಂಬ ಪತ್ರಕರ್ತರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅರವಿಂದ ಲಿಂಬಾವಳಿ, ಯಾರ ತಂದೆ ಯಾರೆಂಬುದು ಗೊತ್ತಾಗುತ್ತೆ ಎಂದು ಖಾರವಾಗಿ ಪ್ರತಿಕ್ರಿಯಿಸಿದರು.

ಪಕ್ಷದ ಸಮ್ಮತಿ ಬಗ್ಗೆ ನಾನು ಮಾತನಾಡಲ್ಲ. ವಕ್ಫ್ ವಿವಾದ ದೊಡ್ಡ ಪಿಡುಗು. ಜನ ತೊಂದರೆಯಲ್ಲಿದ್ದಾರೆ. ಸಲಗರ ಅವರ ಭಾವನೆ ಗೌರವಿಸುತ್ತೇವೆ. ಯಾರ ತಂದೆ ತಾಯಿ ಯಾರೆಂಬುದು ಮುಂದೆ ಅವರಿಗೂ ಗೊತ್ತಾಗುತ್ತದೆ. ಅವರೂ ನಮ್ಮೊಂದಿಗೆ ಬರುವ ಕಾಲ ದೂರವಿಲ್ಲ. ಬಸವಣ್ಣನ ತತ್ವದಲ್ಲಿ ನಮಗೆ ನಂಬಿಕೆ ಇದೆ ಎಂದು ಪ್ರತಿಕ್ರಿಯಿಸಿದರು.

ಬಿಜೆಪಿ ಜಿಲ್ಲಾಧ್ಯಕ್ಷರ ದೂರವಿರುವ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು, ನಾನು ಪಕ್ಷದ ಚಿಹ್ನೆ ಬಳಸುತ್ತಿದ್ದೇನೆಯೇ? ಅವರು ಎಚ್ಚರಿಕೆಯಿಂದ ಮಾತನಾಡಬೇಕು. ಜನಜಾಗೃತಿಯಲ್ಲಿ ಎಲ್ಲರೂ ಭಾಗವಹಿಸಲಿ. ಎಲ್ಲ ಜಾತಿ ಜನಾಂಗ ಮತ್ತು ವಕ್ಫ್‌ನಿಂದ ತೊಂದರೆಗೊಳಗಾದ ಎಲ್ಲ ಪಕ್ಷದವರೂ ಭಾಗವಹಿಸಲಿ ಎಂದು ಹೇಳಿದರು.

# ಕರ್ನಾಟಕ ಸಂಘ ಕತಾರ್‌ನಿಂದ ಸಂಸ್ಥಾಪನಾ ದಿನಾಚರಣೆ: ರಜತ ವರ್ಷದ ಆಚರಣೆ ಪ್ರಾರಂಭ



**ಕತಾರ್,ನ.25:** ದೋಹಾದ ಭಾರತೀಯ ರಾಯಭಾರ ಕಚೇರಿಯ ಆಶ್ರಯದಲ್ಲಿ ಸಹವರ್ತಿ ಸಂಸ್ಥೆಯಾದ ಕರ್ನಾಟಕ ಸಂಘ ಕತಾರ್ ತನ್ನ "ಸ್ಥಾಪಕ ದಿನ'ವನ್ನು 2024ರ ನವೆಂಬರ್ 12 ರಂದು ಹೆಮ್ಮೆಯಿಂದ ಆಚರಿಸಿತು.

ಭಾರತೀಯ ಸಾಂಸ್ಕೃತಿಕ ಕೇಂದ್ರದ ಮುಂಬೈ ಸಭಾಂಗಣದಲ್ಲಿ ನಡೆದ ಈ ರ್ಯಕ್ರಮದಲ್ಲಿ ಪ್ರಸ್ತುತ ಮತ್ತು ಮಾಜಿ ನಿರ್ವಹಣಾ ಸಮಿತಿಯ ಸದಸ್ಯರು ಮತ್ತು ಸಂಘದ ಹಿರಿಯ ಸದಸ್ಯರು ಉಪಸ್ಥಿತರಿದ್ದರು. ಅಧ್ಯಕ್ಷ ರವಿ ಶೆಟ್ಟಿ, ಜ್ಯೋತಿರವಿ ಶೆಟ್ಟಿ, ಸಲಹಾ ಸಮಿತಿ ಅಧ್ಯಕ್ಷ ಮಹೇಶ್ ಗೌಡ, ಮಾಜಿ ಅಧ್ಯಕ್ಷ ಅರುಣ್ ಕುಮಾರ್, ವಿ.ಎಸ್.ನ್ನಂಗಿ, ದೀಪಕ್ ಶೆಟ್ಟಿ, ಮಧು ಎಚ್.ಕೆ., ಡಾ ಸಂಜಯ್.ಕುದರಿ, ಹಿರಿಯ ಸದಸ್ಯರು ಹಾಗೂ ಭಾರತೀಯ ಸಾಂಸ್ಕೃತಿಕ ಕೇಂದ್ರದ ಮಾಜಿ ಅಧ್ಯಕ್ಷರು ಮಿಲನ್ ಅರುಣ್ ಕಾರ್ಯಕ್ರಮವನ್ನು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಐಸಿಸಿ ಉಪಾಧ್ಯಕ್ಷ ಸುಬ್ರಹ್ಮಣ್ಯ ಹೆಬ್ಬಾಗಿಲು ಸಂಘದ ಹಿರಿಯ ಹಾಗೂ ಸಕ್ರಿಯ ಸದಸ್ಯ ಸತೀಶ್ ಬಿ.ಆರ್, ಹಾಲಿ ವ್ಯವಸ್ಥಾಪನಾ ಸಮಿತಿ ಸದಸ್ಯರು ಉಪಸ್ಥಿತರಿದ್ದರು.

ಅಧ್ಯಕ್ಷ ರವಿ ಶೆಟ್ಟಿಯ ತಮ್ಮ ಭಾಷಣದಲ್ಲಿ ಸಂಘವನ್ನು ಪ್ರಸ್ತುತ ಮಟ್ಟಕ್ಕೆ ಏರಿಸುವಲ್ಲಿ ಅವರ ಕೊಡುಗೆ ನೀಡಿದ ಮಾಜಿ ಅಧ್ಯಕ್ಷರು, ಸಮಿತಿ ಸದಸ್ಯರು, ಸಮರ್ಪಿತ ಸ್ವಯಂಸೇವಕರು ಮತ್ತು ಪ್ರಾಯೋಜಕರಿಗೆ ಹೃತ್ಪೂರ್ವಕ ಕೃತಜ್ಞತೆಗಳನ್ನು ವ್ಯಕ್ತಪಡಿಸಿದರು. ಈ ಪ್ರಾಯೋಜಕರಿಗೆ ಹೃತ್ಪೂರ್ವಕ ಕೃತಜ್ಞತೆಗಳನ್ನು ವ್ಯಕ್ತಪಡಿಸಿದರು.

ಈ ರಜತ ಮಹೋತ್ಸವ ವರ್ಷದಲ್ಲಿ ಸಂಘವನ್ನು ಮುನ್ನಡೆಸಲು ತಾವು ಮತ್ತು ತಮ್ಮ ತಂಡ ಅದೃಷ್ಟಶಾಲಿ ಎಂಬ ಭಾವನೆ ವ್ಯಕ್ತ ಪಡಿಸಿದರು. ಆಚರಣೆಯ ಭಾಗವಾಗಿ

ಸಂಘದ ಮಾಜಿ ಅಧ್ಯಕ್ಷರು ಎಚ್.ಕೆ.ಮಧು ಅವರು ಬರೆದ ರಜತ ಗೀತೆಯನ್ನು ಮಿಲನ್ ಅರುಣ್ ಅವರು ಲೈವ್ ಯುಟ್ಯೂಬ್ ಸ್ಟ್ರೀಮ್ ಮೂಲಕ ಅಧಿಕೃತವಾಗಿ ಬಿಡುಗಡೆ ಮಾಡಿದರು.

ಈ ಗೀತೆಯು ಪ್ರೇಕ್ಷಕರಿಂದ ಮತ್ತು ಯೂಟ್ಯೂಬ್ ನಲ್ಲಿ ವ್ಯಾಪಕ ಮೆಚ್ಚುಗೆ ಪಡೆಯಿತು. 2024 ರ ನವೆಂಬರ್ 15 ರಂದು ನಡೆಯಲಿರುವ ಕರ್ನಾಟಕ ರಾಜ್ಯೋತ್ಸವ ಆಚರಣೆಯ ಸಂದರ್ಭದಲ್ಲಿ ಸಮಿತಿಯು ಈ ಗೀತೆಯನ್ನು ಹಾಡಲಿದೆ.

ಬೆಳ್ಳಿ ಮಹೋತ್ಸವ ಲಾಂಛನವನ್ನು ಹೊಂದಿರುವ ಹೊಸ ಬ್ಯಾನರ್ ಅನ್ನು ಸಹ ಅನಾವರಣಗೊಳಿಸಲಾಯಿತು, ಇದು ಈ ಮೈಲಿಗಲ್ಲು ವರ್ಷದುದ್ದಕ್ಕೂ ಯೋಜಿಸಲಾದ ಆಚರಣೆಗಳನ್ನು ಸಂಕೇತಿಸುತ್ತದೆ.

ಮಾಜಿ ಅಧ್ಯಕ್ಷರು ಮತ್ತು ಹಿರಿಯ ಸದಸ್ಯರು ತಮ್ಮ ಅನುಭವಗಳನ್ನು ಮತ್ತು ಸಂಘದ ಪ್ರೀತಿಯ ನೆನಪುಗಳನ್ನು ಹಂಚಿಕೊಂಡರು, ವರ್ಷಗಳಲ್ಲಿ ಅದರ ಬೆಳವಣಿಗೆ ಮತ್ತು ಸಾಧನೆಗಳನ್ನು ಪ್ರತಿಬಿಂಬಿಸಿದರು.

ಪ್ರಧಾನ ಕಾರ್ಯದರ್ಶಿ ಕುಮಾರಸ್ವಾಮಿ ಅವರು ಈ ಕಾರ್ಯಕ್ರಮವನ್ನು ನಡೆಸಿಕೊಟ್ಟರು ಮತ್ತು ಸಿಹಿ ಮತ್ತು ಲಘು ಉಪಹಾರದೊಂದಿಗೆ ಕಾರ್ಯಕ್ರಮವನ್ನು ಮುಕ್ತಾಯಗೊಳಿಸಲಾಯಿತು. ಕರ್ನಾಟಕ ಸಂಘ ಕತಾರ್ ಕನ್ನಡ ಸಂಸ್ಕೃತಿ ಮತ್ತು ಪರಂಪರೆಯನ್ನು ಉತ್ತೇಜಿಸುವ ಮೂಲಕ, ಕತಾರ್‌ನಲ್ಲಿರುವ ಕರ್ನಾಟಕ ಸಮುದಾಯವನ್ನು ಒಂದುಗೂಡಿಸುವ ತನ್ನ ರಜತ ಪಥದಲ್ಲಿ ಹೆಮ್ಮೆಯಿಂದ ಮುಂದುವರಿಯುತ್ತಿದೆ.

ಸಂಘವು ನ.15ರಂದು ವಿಜೃಂಭಣೆಯಿಂದ ಜರುಗಿದ ಕರ್ನಾಟಕ ರಾಜ್ಯೋತ್ಸವ–ರಜತ ಸಂಭ್ರಮಕ್ಕೆ ನಿಷ್ಠೆ ಮತ್ತು ಶ್ರದ್ಧಾ ಭಾವದಿಂದ ವೇದಿಕೆಯನ್ನು ಸಿದ್ಧಪಡಿಸಿತು.

# ಹಿಂದೂಗಳ ಮೇಲಿನ ಹಿಂಸಾಚಾರ ಖಂಡಿಸಿ ಸಿಲಿಕಾನ್ ವ್ಯಾಲಿಯಲ್ಲಿ ಒಗ್ಗಟ್ಟಿನ ರ್‍ಯಾಲಿ




**ವಾಷಿಂಗ್ಟನ್,ನ.25:** ಕೆನಡಾ ಹಾಗೂ ಬಾಂಗ್ಲಾದೇಶದಲ್ಲಿ ಹಿಂದೂಗಳ ಮೇಲೆ ನಡೆಯುತ್ತಿರುವ ಹಿಂಸಾಚಾರವನ್ನು ಖಂಡಿಸಿ, ಸಿಲಿಕಾನ್ ವ್ಯಾಲಿಯಲ್ಲಿ ಭಾರತೀಯ ಅಮೆರಿಕನ್ನರು ಒಗಟ್ಟಿನ ರ್‍ಯಾಲಿ ನಡೆಸಿದರು.

ಖಾಲಿಸ್ತಾನಿ ಭಯೋತ್ಪಾದನೆಯನ್ನು ನಿಲ್ಲಿಸಿ, ಕೆನಡಾದಲ್ಲಿನ ಹಿಂದೂಗಳನ್ನು ರಕ್ಷಿಸಿ', 'ಇಸ್ಲಾಂ ಭಯೋತ್ಪಾದನೆಯನ್ನು ನಿಲ್ಲಿಸಿ, ಬಾಂಗ್ಲಾದೇಶದಲ್ಲಿನ ಹಿಂದೂಗಳನ್ನು ರಕ್ಷಿಸಿ' ಎಂಬ ಘೋಷಣೆಗಳು ಮಿಲ್ಪಿಟಾಸ್ ಸಿಟಿ ಹಾಲ್‌ನಲ್ಲಿ ನಡೆದ ಸಭೆಯಲ್ಲಿ ಮೊಳಗಿದವು. ಅಲ್ಪಸಂಖ್ಯಾತ ಹಿಂದೂಗಳ ಮೇಲೆ ವಿವಿಧೆಡೆ ನಡೆಯುತ್ತಿರುವ ದಾಳಿಯನ್ನು ಖಂಡಿಸಿದ ಪ್ರಮುಖ ನಾಯಕರು, ಕೆನಡಾ ಮತ್ತು ಬಾಂಗ್ಲಾದೇಶ ಸರ್ಕಾರಗಳು ತಮ್ಮ ರಾಷ್ಟ್ರದಲ್ಲಿರುವ ಹಿಂದೂ ಅಲ್ಪಸಂಖ್ಯಾತರನ್ನು ರಕ್ಷಿಸುವ ಜವಾಬ್ದಾರಿಯನ್ನು ಸಮರ್ಪಕವಾಗಿ ನಿರ್ವಹಿಸಬೇಕು ಎಂದು ಆಗ್ರಹಿಸಿದರು.

ಈ ಎರಡೂ ದೇಶದಲ್ಲಿ ನಡೆದಿರುವ ಮಾನವ ಹಕ್ಕುಗಳ ಉಲ್ಲಂಘನೆಯನ್ನು ಖಂಡಿಸುವಂತೆ ಅಮೆರಿಕದ ನಾಯಕರನ್ನು ಇದೇ ಸಂದರ್ಭದಲ್ಲಿ ಒತ್ತಾಯಿಸಿದರು.

ಬ್ಯಾಂಪ್ಟನ್‌ನಲ್ಲಿರುವ ಹಿಂದೂ ಸಭಾದ ದೇಗುಲದಲ್ಲಿನ ಪೂಜೆಯಲ್ಲಿ ಭಾಗಿಯಾಗಿದ್ದ ಹಿಂದೂಗಳ ಮೇಲೆ ಖಾಲಿಸ್ತಾನಿ ಉಗ್ರರು ಈಚೆಗೆ ನಡೆಸಿದ ದಾಳಿಯನ್ನು ಕೆನಡಾ ಸರ್ಕಾರವು ಸಮರ್ಪಕವಾಗಿ ನಿಭಾಯಿಸದಿರುವುದಕ್ಕೆ ಸಭೆಯಲ್ಲಿ ಭಾಗಿಯಾಗಿದ್ದವರು ಬೇಸರ ವ್ಯಕ್ತಪಡಿಸಿದರು ಎಂದು ಮಾಧ್ಯಮ ಪ್ರಕಟಣೆ ತಿಳಿಸಿದೆ.

# ಇಸ್ರೇಲ್ ಮೇಲೆ 250 ರಾಕೆಟ್ ದಾಳಿ ನಡೆಸಿದ ಹಿಜ್ಬುಲ್ಲಾ



**ಬೈರೂತ್,ನ.25:** ಇಸ್ರೇಲ್ ಮತ್ತು ಹಿಜ್ಬುಲ್ಲಾ ನಡುವೆ ಭಾರೀ ಗುಂಡಿನ ಕಾಳಗ ಮುಂದುವರೆದಿದ್ದು ಹೆಚ್ಚುಲ್ಲಾ ಪ್ರಭಾವಶಾಲಿಯಾಗಿದ್ದ ದಕ್ಷಿಣ ಬೈರೂತ್ ಮೇಲೆ ಇಸ್ರೇಲ್ ದಾಳಿ ನಡೆಸಿತ್ತು. ಇದರಿಂದ ರೊಚ್ಚಿಗೆದ್ದ ಇರಾನ್ ಬೆಂಬಲಿತ ಹೆಜ್ಬುಲ್ಲಾ 250ಕ್ಕೂ ಅಧಿಕ ರಾಕೆಟ್ ದಾಳಿ ನಡೆಸಿರುವುದಾಗಿ ಮಾಧ್ಯಮದ ವರದಿ ತಿಳಿಸಿದೆ. ಲೆಬನಾನ್ ನ ಬೈರೂತ್ ಮೇಲೆ ಇಸ್ರೇಲ್ ರಾಕೆಟ್ ದಾಳಿ ನಡೆಸಿದ ನಂತರ ಹಿಜ್ಬುಲ್ಲಾ ಈ ಪ್ರತೀಕಾರದ ದಾಳಿ ನಡೆಸಿರುವುದಾಗಿ ಹೇಳಿದೆ. ಹಿಜ್ಬುಲ್ಲಾ ರಾಕೆಟ್ ದಾಳಿಯನ್ನು ಇಸ್ರೇಲ್ ವೈಮಾನಿಕ ರಕ್ಷಣಾ ಪಡೆ ತಡೆಗಟ್ಟಿ ಹೊಡೆದುರುಳಿಸಿರುವುದಾಗಿ ವರದಿ ವಿವರಿಸಿದೆ. ಅಲ್ಲದೇ ಗ್ಲಿಲೋಟ್ ಸೇನಾ ಗುಪ್ತಚರ ಬೇಸ್ ಮೇಲೆ ಮಿಸ್ಟೆಲ್ ದಾಳಿ ನಡೆಸಿರುವುದಾಗಿ ತಿಳಿಸಿದೆ. ಎಎಫ್ ಪಿ ವರದಿ ಪ್ರಕಾರ, ಸೆಂಟ್ರಲ್ ಇಸ್ರೇಲ್ ನಲ್ಲಿ ಹಲವು ಮನೆಗಳಿಗೆ ಹಾನಿಯಾಗಿದ್ದು, ಕನಿಷ್ಠ ಏಳು ಮಂದಿ ಗಾಯಗೊಂಡಿರುವುದಾಗಿ ತಿಳಿಸಿದೆ. ಪ್ರಕಟನೆ ಬಿಡುಗಡೆಗೊಳಿಸಿರುವ ಹೆಬ್ಬುಲ್ಲಾ, ಮೊದಲ ಬಾರಿ ಇಸ್ರೇಲ್ ನ ನೌಕಾ ನೆಲೆ ಮೇಲೆ ಡ್ರೈನ್ ಬಳಸಿ ರಾಕೆಟ್ ದಾಳಿ ನಡೆಸಲಾಗಿದೆ ಎಂದು ತಿಳಿಸಿದೆ.

ಯುದ್ಧಾರಂಭದ ಬಳಿಕ ಇದೇ ಮೊದಲ ಬಾರಿಗೆ ಅಂದಾಜು ಹಿಜ್ಬುಲ್ಲಾ ಬಂಡುಕೋರರು 250 ರಾಕೆಟ್ ದಾಳಿ ನಡೆಸಿರುವುದಾಗಿ ಇಸ್ರೇಲ್ ಸೇನೆ ತಿಳಿಸಿದೆ. ಇದಕ್ಕೆ ಪ್ರತಿಯಾಗಿ ಇಸ್ರೇಲ್ ಕೂಡಾ ಹಿಜ್ಬುಲ್ಲಾ ಮೇಲೆ 300ಕ್ಕೂ ಅಧಿಕ ಮಿಸೈಲ್ ದಾಳಿ ನಡೆಸಿರುವುದಾಗಿ ವರದಿ ತಿಳಿಸಿದೆ. 2023ರ ಅಕ್ಟೋಬರ್ ನಿಂದ ಈವರೆಗೆ ಲೆಬನಾನ್ ನಲ್ಲಿ ಕನಿಷ್ಠ 3,754 ಮಂದಿ ದಾಳಿಯಲ್ಲಿ ಸಾವಿಗೀಡಾಗಿದ್ದಾರೆ. ಹಿಜ್ಬುಲ್ಲಾ ದಾಳಿಗೆ ಕನಿಷ್ಠ 82 ಇಸ್ರೇಲ್ ಸೈನಿಕರು ಹಾಗೂ 47 ನಾಗರಿಕರು ಕೊನೆಯುಸಿರೆಳೆದಿದ್ದಾರೆ ಎಂದು ಆರೋಗ್ಯ ಸಚಿವಾಲಯ ತಿಳಿಸಿದೆ.

# ಕಾರ್ಗೋ ವಿಮಾನ ಪತನ ಓರ್ವ ಸಾವು, ಇಬ್ಬರಿಗೆ ಗಾಯ



**ವಿಲ್ನಿಯುಸ್,ನ.25:** ಯುರೋಪ್‌ನ ಲಿಥುವೇನಿಯಾದ ವಿಲ್ನಿಯಸ್ ವಿಮಾನ ನಿಲ್ದಾಣದ ಬಳಿ ಆಉಾಐ ಕಾರ್ಗೋ ವಿಮಾನ ಪತನಗೊಂಡಿದ್ದು, ಓರ್ವ ಸಾವನ್ನಪ್ಪಿರುವುದಾಗಿ ವರದಿಯಾಗಿದೆ.

ಲಿಥುವೇನಿಯನ್ ವಿಮಾನ ನಿಲ್ದಾಣ ಪ್ರಾಧಿಕಾರವು ಪತನವಾದ ವಿಮಾನವು ಜರ್ಮನಿಯ ಲೀಪ್ ಜಿನ್ನಿಂದ ವಿಲ್ನಿಯಸ್ ವಿಮಾನ ನಿಲ್ದಾಣಕ್ಕೆ ಹಾರುತ್ತಿತ್ತು. ಈ ವೇಳೆ ವಿಲಿಯಸ್ ವಿಮಾನ ನಿಲ್ದಾಣದ ಸಮೀಪವಿರುವ ಎರಡು ಅಂತಸ್ತಿನ ಮನೆಗೆ ಅಪ್ಪಳಿಸಿತು ಎಂದು ತಿಳಿಸಿದೆ. ಘಟನೆ ನಡೆದ ಕೂಡಲೇ ಲಿಥುವೇನಿಯಾ ಅಗ್ನಿಶಾಮಕ ದಳದವರು ವಿಮಾನ ನಿಲ್ದಾಣಕ್ಕೆ ಆಗಮಿಸಿದ್ದಾರೆ. ಜೊತೆಗೆ ಪೊಲೀಸರು ಹಾಗೂ ಆಂಬುಲೆನ್ಸ್ ಕೂಡ ಸ್ಥಳಕ್ಕೆ ದೌಡಾಯಿಸಿದೆ. ಘಟನೆಯಲ್ಲಿ ಓರ್ವ ಸಾವನ್ನಪ್ಪಿದರೆ, ಇಬ್ಬರನ್ನು ಆಸ್ಪತ್ರೆಗೆ ಕರೆದುಕೊಂಡು ಹೋಗಲಾಗಿದೆ ಎಂಬುದಾಗಿ ವರದಿಯಾಗಿದೆ. ಅವಘಡದ ಬಗ್ಗೆ, ಜರ್ಮನಿಯ ಬಾನ್ನಲ್ಲಿ ಪ್ರಧಾನ ಕಚೇರಿಯನ್ನು ಹೊಂದಿರುವ DHL ಗ್ರೂಪ್ ಈ ಬಗ್ಗೆ ಯಾವುದೇ ಪ್ರತಿಕ್ರಿಯೆ ನೀಡಿಲ್ಲ.

# ಇಮ್ರಾನ್ ಬಿಡುಗಡೆಗೆ ಆಗ್ರಹಿಸಿ ಪ್ರತಿಭಟನೆ



**ಇಸ್ಲಾಮಾಬಾದ್,ನ.25:** ಪಾಕಿಸ್ತಾನದ ಮಾಜಿ ಪ್ರಧಾನಿ ಇಮ್ರಾನ್ ಖಾನ್ ಬಿಡುಗಡೆಗೆ ಆಗ್ರಹಿಸಿ, ಇಮ್ರಾನ್ ಅವರ ಬೆಂಬಲಿಗರು ಕೈಗೊಂಡಿರುವ ಪ್ರತಿಭಟನಾ ಮೆರವಣಿಗೆ ಸೋಮವಾರವೂ ಮುಂದುವರಿದಿದೆ. ಬೆಲಾರಸ್ನ ಉನ್ನತ ಮಟ್ಟದ ನಿಯೋಗವು ಇಸ್ಲಾಮಾಬಾದ್‌ಗೆ ರಾಜತಾಂತ್ರಿಕ ಭೇಟಿ ನೀಡಿದ್ದು ಪ್ರತಿಭಟನೆಯನ್ನು ಹತ್ತಿಕ್ಕಲು ಸರ್ಕಾರವು ನಿಷೇಧಾಜ್ಞೆ ಜಾರಿಗೊಳಿಸಿದೆ.

ಹೆಚ್ಚುವರಿ ಭದ್ರತಾ ಪಡೆಗಳು ಸ್ಥಳದಲ್ಲಿ ಬೀಡುಬಿಟ್ಟಿವೆ. ಮೊಬೈಲ್ ಮತ್ತು ಇಂಟರ್ನೆಟ್ ಸೇವೆಗಳನ್ನು ಆಯ್ದ ಪ್ರದೇಶಗಳಲ್ಲಿ ಸಂಪೂರ್ಣವಾಗಿ ತಡೆಹಿಡಿಯಲಾಗಿದೆ. ಇಸ್ಲಾಮಾಬಾದ್ನತ್ತ ಹೊರಟಿದ್ದ ಇಮ್ರಾನ್ ಖಾನ್ ಬೆಂಬಲಿಗರನ್ನು ಪೊಲೀಸರು ಪಂಜಾಬ್ನ ಹಾರೊ ಬಳಿ ಭಾನುವಾರ ತಡರಾತ್ರಿ ತಡೆದಿದ್ದರು. ಬಳಿಕ, ಮೆರವಣಿಗೆಯನ್ನು ಸೋಮವಾರ ಬೆಳಿಗ್ಗೆ ಪುನರಾರಂಭ ಮಾಡಿರುವ ಪ್ರತಿಭಟನಕಾರರು, ಇಸ್ಲಾಮಾಬಾದ್ನತ್ತ ವಯಣ ಬೆಳೆಸಿದ್ದಾರೆ.

ಇಸ್ಲಾಮಾಬಾದ್ ಪ್ರವೇಶಿಸದಂತೆ ಪೊಲೀಸರು ಲಾಹೋರ್ ಬಳಿ ಹೆದ್ದಾರಿಗಳಿಗೆ ಕಂಟೈನರ್‌ಗಳನ್ನು ಅಡ್ಡಲಾಗಿ ನಿಲ್ಲಿಸಿ. ರಸ್ತೆ ಬಂದ್ ಮಾಡಿದ್ದರು. ಆದರೆ, ಕ್ರೇನ್ನೊಂದಿಗೆ ಬಂದಿದ್ದ ಪ್ರತಿಭಟನಕಾರರು, ಕಂಟೈನರ್‌ಗಳನ್ನು ತೆರವುಗೊಳಿಸಿ ಮುನ್ನುಗ್ಗಿದ್ದಾರೆ. ಇಮ್ರಾನ್ ಖಾನ್ ಅವರ ಪತ್ನಿ ಬುಶ್ರಾ ಬೀಬಿ ಹಾಗೂ ಖೈಬರ್ ಪಂಖುಂಖ್ವಾ ಮುಖ್ಯಮಂತ್ರಿ ಅಲಿ ಅಮೀನ್ ಗಂಡಾಪುರ್ ನೇತೃತ್ವದಲ್ಲಿ ಪಿಟಿಐ ಪಕ್ಷದ ಕಾರ್ಯಕರ್ತರು ಪೇಶಾವರದಿಂದ ಇಸ್ಲಾಮಾಬಾದ್ವರೆಗೆ ಬಂದ್ ಮಾಡಿದ್ದರು.

# ಇಸ್ರೇಲ್ ನಾಯಕರಿಗೆ ಬಂಧನದ ವಾರಂಟ್ ಬದಲು ಮರಣದಂಡನೆ ವಿಧಿಸಿ: ಇರಾನ್ ನಾಯಕ ಖಮೇನಿ



**ದುಬೈ,ನ.25:** ಇಸ್ರೇಲ್ ನಾಯಕರಿಗೆ ಬಂಧನ ವಾರಂಟ್ಗಳನ್ನು ಹೊರಡಿಸುವ ಬದಲು ಮರಣದಂಡನೆ ವಿಧಿಸಬೇಕು ಎಂದು ಇರಾನ್ ನ ಸರ್ವೋಚ್ಚ ನಾಯಕ ಆಯತ್ ಉಲ್ಲಾ ಅಲಿ ಖಮೇನಿ ಹೇಳಿದ್ದಾರೆ.

ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಮತ್ತು ಮಾಜಿ ರಕ್ಷಣಾ ಸಚಿವ ಯೋವ್ ಗ್ಯಾಲಂಟ್ ಹಾಗೂ ಹಮಾಸ್ ಮುಖ್ಯಸ್ಥ ಮೊಹಮ್ಮದ್ ಡೀಫ್ ವಿರುದ್ಧ ಅಂತರರಾಷ್ಟ್ರೀಯ ಅಪರಾಧ ನ್ಯಾಯಾಲಯ (ಐಸಿಸಿ) ಈಚೆಗೆ ಬಂಧನದ ವಾರಂಟ್ ಜಾರಿಗೊಳಿಸಿತ್ತು ಈ ಕುರಿತು ಖಮೇನಿ ಪ್ರತಿಕ್ರಿಯಿಸಿದ್ದಾರೆ.

ಐಸಿಸಿಯ ಈ ಕ್ರಮವು ನೆತನ್ಯಾಹು ಅವರ ಸಂಚಾರಕ್ಕೆ ನಿರ್ಬಂಧ ವಿಧಿಸುತ್ತದೆ.

ನ್ಯಾಯಾಲಯದ 124 ಸದಸ್ಯ ರಾಷ್ಟ್ರಗಳು ತಮ್ಮ ವ್ಯಾಪ್ತಿಯಲ್ಲಿ ಅವರನ್ನು ಬಂಧಿಸಬಹುದಾಗಿದೆ. ಮಾನವೀಯತೆಯ ವಿರುದ್ಧದ ಅಪರಾಧ ಮತ್ತು 2023ರ ಅಕ್ಟೋಬರ್ 8ರಿಂದ ಅವರು ನಡೆಸಿರುವ ಯುದ್ಧಾಪರಾಧಗಳಿಗಾಗಿ ನೆತನ್ಯಾಹು ಮತ್ತು ಗ್ಯಾಲಂಟ್ ಅವರನ್ನು ಬಂಧಿಸಲು ವಾರಂಟ್ ಜಾರಿಗೊಳಿಸಲಾಗಿದೆ ಎಂದು ಐಸಿಸಿ ಪ್ರಕಟಣೆ ತಿಳಿಸಿತ್ತು. ಡೀಫ್ ವಿರುದ್ಧವೂ ಐಸಿಸಿ ವಾರಂಟ್ ಜಾರಿ ಮಾಡಿತ್ತು.

ದಕ್ಷಿಣ ಗಾಜಾದಲ್ಲಿ ಜುಲೈನಲ್ಲಿ ತಾನು ನಡೆಸಿದ ವೈಮಾನಿಕ ದಾಳಿಯಲ್ಲಿ ಡೀಫ ಮೃತಪಟ್ಟಿದ್ದಾರೆ ಎಂದು ಇಸ್ರೇಲ್ ಆಗಸ್ಟ್‌ನಲ್ಲಿ ಹೇಳಿತ್ತು. ಆದರೆ ಹಮಾಸ್ ಅದನ್ನು ನಿರಾಕರಿಸಿತ್ತು.


# ಹರಾಜು ಅಂತ್ಯ: 2ನೇ ದಿನ ಯಾರು ಎಷ್ಟಕ್ಕೆ ಮಾರಾಟ

2025ರ 18 ಆವೃತ್ತಿಯ ಐಪಿಎಲ್‌ಗೆ ಆಟಗಾರರ ಮೆಗಾ ಹರಾಜು ಪ್ರಕ್ರಿಯೆ ಸೌದಿ ಅರೇಬಿಯಾದ ಜೆನ್ನಾ ನಗರದಲ್ಲಿ ನಡೆಯುತ್ತಿದೆ. ಮೊದಲ ದಿನದ ಬಿಡ್ಡಿಂಗ್‌ನಲ್ಲಿ ಒಟ್ಟು 72 ಆಟಗಾರರು ಹರಾಜಾಗಿದ್ದಾರೆ. ರಿಷಭ್ ಪಂತ್ ಐಪಿಎಲ್ ಇತಿಹಾಸದಲ್ಲೇ ಅತಿ ಹೆಚ್ಚು ಬೆಲೆಗೆ ಬಿಕರಿಯಾಗಿದ್ದಾರೆ.




ಹರಾಜಿನ ಎರಡನೇ ದಿನದ ಲೈವ್ ಅಪ್ಡೇಟ್ನಾಗಿ ಲೈವ್ ವೀಕ್ಷಿಸಿ.

ಐಪಿಎಲ್ ಫೀವರ್ ಶುರುವಾಗಿದೆ. 2025ರ 18ನೇ ಆವೃತ್ತಿಯ ಐಪಿಎಲ್‌ಗೆ ಆಟಗಾರರ ಹರಾಜು ಪ್ರಕ್ರಿಯೆ ನಿನ್ನೆಯಿಂದ ಆರಂಭವಾಗಿದ್ದು, ಫ್ರಾಂಚೈಸಿಗಳು ಅಳೆದು ತೂಗಿ ಕೋಟಿ ಕೋಟಿ ರೂ. ಬೆಲೆಗೆ ಆಟಗಾರರನ್ನು ಖರೀದಿಸಿವೆ. ಹರಾಜು ಪ್ರಕ್ರಿಯೆಯ ಎರಡನೇ ದಿನವಾಗಿರುವ ಇಂದು ಕೂಡ ತಮ್ಮ ನೆಚ್ಚಿನ ಆಟಗಾರರು ಆಯಾ ತಂಡ ಸೇರಿದ್ದಾರೆ ನಿನ್ನೆಯ ಮೆಗಾ ಹರಾಜಿನಲ್ಲಿ ಐಪಿಎಲ್ ಇತಿಹಾಸದಲ್ಲೇ ಅತಿದೊಡ್ಡ ಮೊತ್ತಕ್ಕೆ ಸೇಲಾಗುವ ಮೂಲಕ ರಿಷಭ್ ಪಂತ್ ದಾಖಲೆ ಬರೆದಿದ್ದರು. ಇಂದು ಫ್ರಾಂಚೈಸಿಗಳು ಯಾವೆಲ್ಲಾ ಆಟಗಾರರ ಮೇಲೆ ದುಡ್ಡಿನ ಮಳೆ ಸುರಿಸಲಿದೆ ಎಂಬ ಕ್ಷಣ ಕ್ಷಣದ ಮಾಹಿತಿಗಾಗಿ ಲೈವ್ ನೋಡಿ.



ಇಟಲಿಯ ನೇಪಲ್ಸ್‌ನಲ್ಲಿ ನಪೋಲಿ ಮತ್ತು ರೋಮಾ ನಡುವಿನ ಸೀರಿ ೦ ಫುಟ್‌ಬಾಲ್ ಪಂದ್ಯದ ಸಂದರ್ಭದಲ್ಲಿ ನೆಪೋಲಿಯ ಸ್ಕಾಟ್ ಮೆಕ್ ಟಾಮೀನಾಯಿ ರೋಮಾದ ಬ್ರಿಯಾನ್ ಕ್ರಿಸ್ಟಾಂಟೆಯೊಂದಿಗೆ ಸ್ಪರ್ಧಿಸಿದರು.

# ವಿಶ್ವ ಚೆಸ್ ಚಾಂಪಿಯನ್‌ಷಿಪ್ ಫೈನಲ್ ಗುಕೇಶ್‌ಗೆ ಕೈಕೊಟ್ಟ ಪ್ರಯೋಗ, ಲಿರೆನ್‌ಗೆ ಜಯ




**ಸಿಂಗಪುರ,ನ.25:** ಮಧ್ಯಮಹಂತದ (ಮಿಡ್ಲ್ ಗೇಮ್) ಆಟವನ್ನು ಸಂಕೀರ್ಣಗೊಳಿಸಲು ಹೋಗಿದ್ದು, ಗ್ರಾಂಡ್‌ಮಾಸ್ಟರ್ ಡಿ.ಗುಕೇಶ್ ಅವರ ಪಾಲಿಗೆ ದುಬಾರಿಯಾಯಿತು. ಸೋಮವಾರ ನಡೆದ ವಿಶ್ವ ಚೆಸ್ ಚಾಂಪಿಯನ್‌ಷಿಪ್‌ನ ಫೈನಲ್‌ನ ಮೊದಲ ಆಟದಲ್ಲಿ ಚೀನಾದ ಡಿಂಗ್ ಲಿರೆನ್, ಭಾರತದ ಆಟಗಾರನ ಮೇಲೆ ಜಯಗಳಿಸಿದರು.

ಲಿರೆನ್ ಈ ಗೆಲುವಿನಿಂದ 14 ಆಟಗಳಿರುವ ಫೈನಲ್‌ನಲ್ಲಿ 1–0 ಮುನ್ನಡೆ ಪಡೆದರು. ಡಿಸೆಂಬರ್ 13ರವರೆಗೆ ಈ ಚಾಂಪಿಯನ್‌ಷಿಪ್ ನಡೆಯಲಿದೆ. ಇಬ್ಬರಲ್ಲಿ ಮೊದಲು 7.5 ಪಾಯಿಂಟ್ಸ್ ಗಳಿಸುವ ಆಟಗಾರ ವಿಶ್ವ ಚಾಂಪಿಯನ್ ಕಿರೀಟ ಧರಿಸಲಿದ್ದಾರೆ.

'ಆರಂಭದಲ್ಲಿ ಹೀಗೆ ಆಗುತ್ತದೆ. ಇದು ದೀರ್ಘ ಅವಧಿಯ ಫೈನಲ್. ನನ್ನ ಎದುರಾಳಿಯ ಫಾರ್ಮ್ ಬಗ್ಗೆ ನಾನೇನೂ ನಿರೀಕ್ಷೆ ಹೊಂದಿರಲಿಲ್ಲ. ಅವರು ಉತ್ತಮ ಆಟ ಆಡುವರೆಂದಷ್ಟೇ ಯೋಚಿಸಿದ್ದೆ. ನಮ್ಮ ಮುಂದೆ ದೀರ್ಘ ಹಾದಿಯಿದೆ' ಎಂದು 18 ವರ್ಷ ವಯಸ್ಸಿನ ಗುಕೇಶ್ ಆಟದ ನಂತರ ಪ್ರತಿಕ್ರಿಯಿಸಿದರು.

ಕಪ್ಪು ಕಾಯಿಗಳಲ್ಲಿ ಆಡಿ ಸಾಧಿಸಿದ ಗೆಲುವು, 32 ವರ್ಷ ವಯಸ್ಸಿನ ಲಿರೆನ್ಗೆ ಪೂರ್ಣ ಪಾಯಿಂಟ್ ಜೊತೆಗೆ ಹೆಚ್ಚಿನ ಮನೋಸ್ಥೈರ್ಯ ತಂದುಕೊಟ್ಟಿತು. ಈ ಚಾಂಪಿಯನ್‌ಶಿಪ್‌ನಲ್ಲಿ ಆಡಲು ಬರುವಾಗ ಅವರು ಅಂಥ ಫಾರ್ಮಿನಲ್ಲೇನೂ ಇರಲಿಲ್ಲ. ಸಾಲದ್ದಕ್ಕೆ ಈ ವರ್ಷ ಒಂದೂ ಶಾಸ್ತ್ರೀಯ (ದೀರ್ಘ ಅವಧಿಯ) ಆಟ ಗೆದ್ದಿರಲಿಲ್ಲ.

ಅತ್ಯಂತ ಕಿರಿಯ ಚಾಲೆಂಜರ್ ಎನಿಸಿರುವ ಗುಕೇಶ್ ರಾಜನೆದುರಿನ ಕಾಲಾಳನ್ನು ಮುನ್ನಡೆಸಿ ಆಟ ಆರಂಭಿಸಿದರು. ಇದು ಆಕ್ರಮಣದ ಇರಾದೆ ಸೂಚಿಸುವಂತಿತ್ತು. ಇದನ್ನು ತಡೆಯಲು ಲಿರೆನ್ ಅನುಸರಿಸಿದ್ದು ಫ್ರೆಂಚ್ ಡಿಫೆನ್ಸ್ ಮಾದರಿಯನ್ನು. ಗುಕೇಶ್ ಅನುಸರಿಸಿದ ಮೊದಲ ಕೆಲವು ನಡೆಗಳು, ವಿಶ್ವನಾಥನ್ ಆನಂದ್ ಅವರು ತಮ್ಮ ಮೊದಲ (2001ರ) ವಿಶ್ವಚಾಂಪಿಯನ್‌ಶಿಪ್ ಫೈನಲ್‌ನಲ್ಲಿ ಅಲೆಕ್ಸಿ ಶಿರೋವ್ ವಿರುದ್ಧ ಆಡಿದ ರೀತಿಯಲ್ಲೇ ಇದ್ದವು.

10ನೇ ನಡೆಯಲ್ಲಿ ಗುಕೇಶ್ ಸಿದ್ಧಸೂತ್ರ ಬದಲಿಸಿ ಹೊಸ (ಪಾನ್ ಜಿ4) ನಡೆಯನ್ನಿರಿಸಿದರು. 12ನೇ ನಡೆಯವರೆಗೆ ಗುಕೇಶ್ ಪರಿಸ್ಥಿತಿ ಉತ್ತಮವಾಗೇ ಇತ್ತು ಅವರು ಬೇಗ ಬೇಗ ನಡೆಗಳನ್ನಿರಿಸಿದರು. ಆದರೆ ನಿಧಾನವಾಗಿ ಲಿರೆನ್ ಕೂಡ ಆಕ್ರಮಣಕ್ಕೆ ತಂತ್ರ ಹೆಣೆದರು ಎಂಟು ನಡೆಗಳ ನಂತರ– ಅವರ 20 ಮತ್ತು 21ನೇ ನಡೆ ಅತ್ಯುತ್ತಮವೆನಿಸಿದವು ಈ ನಡೆಗಳು ಅವರಲ್ಲಿ ವಿಶ್ವಾಸ ಹೆಚ್ಚಿಸಿದವು.

ಈ ಹಂತದಲ್ಲಿ ಚೀನಾ ಆಟಗಾರ ಉತ್ತಮ ನಡೆಗಳನ್ನು ಇರಿಸತೊಡಗಿದರು. ಹೀಗಾಗಿ ಒತ್ತಡಕ್ಕೆ ಸಿಲುಕಿ ಗುಕೇಶ್ ಮಧ್ಯಮ ಹಂತದ ಆಟದಲ್ಲಿ ಎಡವಿ 42ನೇ ನಡೆಯಲ್ಲಿ ಆಟ ಬಿಟ್ಟುಕೊಟ್ಟರು. 'ನಾನು ದೀರ್ಘ ಕಾಲದಿಂದ ಒಂದೂ ದೀರ್ಘ ಅವಧಿಯ ಆಟ ಗೆದ್ದಿರಲಿಲ್ಲ. ಈಗ ಅದು ಸಾಧ್ಯವಾಗಿದೆ. ಆದರೆ ನ್ಯಾಯೋಚಿತವಾಗಿ ಹೇಳಬೇಕಾದರೆ ನಾನು ಅದೃಷ್ಟಶಾಲಿ. ಎರಡು ಬಾರಿ ತಂತ್ರ ರೂಪಿಸುವಲ್ಲಿ ನಾನು ತಪ್ಪು ಮಾಡಿದೆ' ಎಂದು ಲಿರೆನ್ ವಿಶ್ಲೇಷಿಸಿದರು.

'ಇದು ಮೊದಲ ಪಂದ್ಯವಾಗಿದ್ದರಿಂದ ಆತ ಸ್ವಲ್ಪ ನರ್ವಸ್ ಆಗಿರುವ ಸಾಧ್ಯತೆಯಿತ್ತು. ಹೀಗಾಗಿ ಎಂದಿನ ಶೈಲಿಯಲ್ಲಿ ಆಡದೇ, ದೀರ್ಘ ಕಾಲದ ಬಳಿಕ ಸ್ವಲ್ಪ ಬೇರೆ ರೀತಿಯ ಆಟ ಆಡಿದ್ರೆ. ಅದು ಫಲ ನೀಡಿತು' ಎಂದರು. ಕ್ರೀನ್‌ಸೈಡ್‌ನಲ್ಲಿ ಕಾಲಾಳನ್ನು ಕಳೆದುಕೊಂಡ ಬಳಿಕ ಗುಕೇಶ್ ಅವರಿಗೆ ತಮ್ಮಲ್ಲಿರುವ ಸಂಪನ್ಮೂಲಗಳನ್ನು ಸರಿಯಾಗಿ ಬಳಸಿಕೊಳ್ಳಲು ಆಗಲಿಲ್ಲ. 21 ಕೋಟಿ ಬಹುಮಾನದ ಫೈನಲ್‌ನ ಎರಡನೇ ಆಟ ಮಂಗಳವಾರ ನಡೆಯಲಿದ್ದು, ಲಿರೆನ್ ಬಿಳಿಕಾಯಿಗಳಲ್ಲಿ ಆಡಲಿದ್ದಾರೆ.

# ಸಯ್ಯದ್ ಮೋದಿ ಬ್ಯಾಡ್ಮಿಂಟನ್ ಟೂರ್ನಿ ಸಿಂಧುಗೆ ಅನ್ಮೋಲ್ ಸವಾಲು

**ಲಖನೌ,ನ.25:** ಭಾರತದ ತಾರೆಯರಾದ ಪಿ.ವಿ. ಸಿಂಧು ಮತ್ತು ಲಕ್ಷ್ಯ ಸೇನ್ ಅವರು ಮಂಗಳವಾರ ಇಲ್ಲಿ ಆರಂಭವಾಗುವ ಸಯ್ಯದ್ ಮೋದಿ ಇಂಟರ್‌ನ್ಯಾಷನಲ್ ಸೂಪರ್ 300 ಬ್ಯಾಡ್ಮಿಂಟನ್ ಟೂರ್ನಿಯಲ್ಲಿ ಭಾರತದ ಸವಾಲನ್ನು ಮುನ್ನಡೆಸುವ ಜೊತೆಗೆ ಪ್ರಶಸ್ತಿಯ ಬರ ನೀಗಿಸುವ ಛಲದಲ್ಲಿದ್ದಾರೆ.



ಕಳೆದ ವಾರ ಚೀನಾ ಮಾಸ್ಟರ್ಸ್ ಸೂಪರ್ 750 ಬ್ಯಾಡ್ಮಿಂಟನ್ ಟೂರ್ನಿಯಲ್ಲಿ ಸೆಮಿಫೈನಲ್ ತಲುಪಿದ್ದ ಸಾತ್ವಿಕ್ ಸಾಯಿರಾಜ್ ರಣಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಅವರೂ ಕಣಕ್ಕೆ ಇಳಿಯಲಿದ್ದು, ಪುರುಷರ ಡಬಲ್ಸ್‌ನಲ್ಲಿ ಪ್ರಶಸ್ತಿ ಗೆಲ್ಲುವ ನೆಚ್ಚಿನ ಆಟಗಾರರಾಗಿದ್ದಾರೆ.

ಪ್ರಸಕ್ತ ವರ್ಷ ಒಲಿಂಪಿಕ್ಸ್, ಫ್ರೆಂಚ್ ಓಪನ್ ಮತ್ತು ಆಲ್ ಇಂಗ್ಲೆಂಡ್ ಕ್ಲಬ್‌ನಲ್ಲಿ ಸೆಮಿಫೈನಲ್ ತಲುಪಿದ್ದ. 23 ವರ್ಷ ವಯಸ್ಸಿನ ಸೇನ್ ಅವರೂ ಪ್ರಶಸ್ತಿಯ ಬರವನ್ನು ಎದುರಿಸುತ್ತಿದ್ದಾರೆ. ಇಲ್ಲಿ ಅಗ್ರ ಶ್ರೇಯಾಂಕ ಹೊಂದಿರುವ ಅವರು ಪ್ರಶಸ್ತಿ ಜಯಿಸುವ ನೆಚ್ಚಿನ ಆಟಗಾರರಲ್ಲಿ ಒಬ್ಬರಾಗಿದ್ದು, ಅವರಿಗೆ ಎರಡನೇ ಶ್ರೇಯಾಂಕದ ಪ್ರಿಯಾಂಶು ರಾಜಾವತ್ ಪ್ರಬಲ ಸ್ಪರ್ಧಿಯಾಗಿದ್ದಾರೆ. ಸೇನ್ ಆರಂಭಿಕ ಸುತ್ತಿನಲ್ಲಿ ಕ್ವಾಲಿಫೈಯರ್ ಆಟಗಾರನನ್ನು ಎದುರಿಸುವರು.

ಮೂರನೇ ಶ್ರೇಯಾಂಕದ ಕಿರಣ್ ಜಾರ್ಜ್, 2023ರ ವಿಶ್ವ ಜೂನಿಯರ್ ಚಾಂಪಿಯನ್‌ಶಿಪ್ ಕಂಚಿನ ಪದಕ ವಿಜೇತ ಆಯುಷ್ ಶೆಟ್ಟಿ, ಒಡಿಶಾ ಮಾಸ್ಟರ್ಸ್ ವಿಜೇತ ಸತೀಶ್ ಕರುಣಾಕರನ್ ಮತ್ತು ರಾಷ್ಟ್ರೀಯ ಚಾಂಪಿಯನ್ ಚಿರಾಗ್ ಸೇನ್ ಸೇರಿದಂತೆ ಭಾರತದ ಹಲವು ಭರವಸೆಯ ಆಟಗಾರರು ಸ್ಪರ್ಧೆಯಲ್ಲಿದ್ದಾರೆ.

ಎರಡು ಬಾರಿಯ ಒಲಿಂಪಿಕ್ ಪದಕ ವಿಜೇತೆ 29 ವರ್ಷ ವಯಸ್ಸಿನ ತೆ ಇಲ್ಲಿ ಅಗ್ರ ಶ್ರೇಯಾಂಕ ಪಡೆದಿದ್ದು ಲಯ ಕಂಡುಕೊಳ್ಳುವ ವಿಶ್ವಾಸದಲ್ಲಿದ್ದಾರೆ. ಈ ವರ್ಷದ ಆರಂಭದಲ್ಲಿ ಮಲೇಷ್ಯಾ ಮಾಸ್ಟರ್ಸ್‌ನಲ್ಲಿ ಫೈನಲ್‌ಗೆ ತಲುಪಿದ್ದ ಅವರು ನಂತರ ಸತತ ವೈಫಲ್ಯ ಅನುಭವಿಸಿದ್ದಾರೆ. ಇಲ್ಲಿ ಮಹಿಳೆಯರ ಸಿಂಗಲ್ಸ್‌ಗೆ ಆರಂಭಿಕ ಸುತ್ತಿನ ಸ್ವದೇಶದ ಉದಯೋನ್ಮುಖ ಆಟಗಾರ್ತಿ ಅನ್ಮೋಲ್ ಖರ್ಬ್ ಅವರ ಸವಾಲನ್ನು ಎದುರಿಸಲಿದ್ದಾರೆ.

ಭಾರತದ ಯುವ ಆಟಗಾರ್ತಿಯರಾದ ಮಾಳವಿಕಾ ಬನ್ಸೋಡ್, ಆಕರ್ಷಿ ಕಶ್ಯಪ್. ಅನುಪಮಾ ಉಪಾಧ್ಯಾಯ, ರಕ್ಷಿತಾಶ್ರೀ ಸಂತೋಷ್ ರಾಮರಾ ಇಶಾರಾಣಿ, ಉನ್ನತಿ ಹೂಡಾ ಮೊದಲಾದವರು ಕಣದಲ್ಲಿದ್ದಾರೆ. ಡಬಲ್ಸ್‌ನಲ್ಲಿ ಅಶ್ವಿನಿ ಪೊನ್ನಪ್ಪ ತನೀಶಾ ಕ್ರಾಸ್ಟೊ, ಗಾಯತ್ರಿ ಗೋಪಿಚಂದ್– ಟ್ರೀಸಾ ಜೋಳಿ ಉತ್ತಮ ಪ್ರದರ್ಶನದ ವಿಶ್ವಾಸ ಹೊಂದಿದ್ದಾರೆ.